ಸಂಪುಟ: 04 ಸಂಚಿಕೆ: 89 ಪುಟಗಳು: 08 ಬುಧವಾರ 12 ಜೂನ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು

## ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾಗಿ ಕುಮಾರಸ್ವಾಮಿ ಅಧಿಕಾರ ಸ್ವೀಕಾರ

• **ಉದಯವಾಹಿನಿ, ನವದೆಹಲಿ**

ನಿನ್ನೆ ಮೋದಿ ಸಚಿವ ಸಂಪುಟದ ಸಚಿವರಿಗೆ ಖಾತೆ ಹಂಚಿಕೆ ಮಾಡಲಾಗಿತ್ತು. ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವಸ್ಥಾನವನ್ನು ಹೆಚ್.ಡಿ ಕುಮಾರಸ್ವಾಮಿಗೆ ನೀಡಲಾಗಿತ್ತು. ಇಂದು ಅವರು ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾಗಿ ಹೆಚ್.ಡಿ ಕುಮಾರಸ್ವಾಮಿ ಅಧಿಕಾರ ಸ್ವೀಕರಿಸಿದರು. ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವರಾಗಿ ಅಧಿಕಾರ ಸ್ವೀಕರಿಸುವ ಮುನ್ನ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಸಚಿವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದರು. ಈ ಬಳಿಕ ನವದೆಹಲಿಯ ಕಚೇರಿಯಲ್ಲಿ ಎಚ್.ಡಿ.ಕುಮಾರಸ್ವಾಮಿ ಅವರು ಉಕ್ಕು ಸಚಿವರಾಗಿ ಅಧಿಕಾರ ಸ್ವೀಕರಿಸಿದರು. ಇಂದು ಸಂಜೆ ಅವರು ಬೃಹತ್ ಕೈಗಾರಿಕೆಗಳ ಸಚಿವರಾಗಿ ಅಧಿಕಾರ ವಹಿಸಿಕೊಂಡರು.

## ಬಿಬಿಎಂಪಿ ವ್ಯಾಪ್ತಿಯ ಪ್ರತಿ ಮನೆಗೆ 100 ರೂ. ತ್ಯಾಜ್ಯ ಸೇವಾ ಶುಲ್ಕ

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಪ್ರತಿ ಮನೆಗೆ ತ್ಯಾಜ್ಯ ನಿರ್ವಹಣೆಗಾಗಿ ತಿಂಗಳಿಗೆ 100 ರೂಪಾಯಿ ಸೇವಾ ಶುಲ್ಕ ವಿಧಿಸಲು ಸರ್ಕಾರ ಮುಂದಾಗಿದ್ದು, ಮಾಜಿ ಸಚಿವ ಸುರೇಶ್ ಕುಮಾರ್ ಅವರು ಆಕ್ರೋಶ ಹೊರಹಾಕಿದ್ದಾರೆ. ಇದನ್ನು ಸರಳವಾಗಿ ಮತ್ತು ನೇರವಾಗಿ ಹೇಳುವುದಾದರೆ ಕಾಂಗ್ರೆಸ್ ಸರ್ಕಾರದ ಸೇಡಿನ ನಡೆಯಾಗಿದೆ. ಬೆಂಗಳೂರಿನ ಉತ್ತರ, ಕೇಂದ್ರ, ದಕ್ಷಿಣ, ಎರಡು ವಿಧಾನಸಭಾ ಕ್ಷೇತ್ರಗಳನ್ನು (ರಾಜರಾಜೇಶ್ವರಿನಗರ, ಬೆಂಗಳೂರು ದಕ್ಷಿಣ) ಒಳಗೊಂಡ ಬೆಂಗಳೂರು ಗ್ರಾಮಾಂತರ, ಒಂದು ವಿಧಾನಸಭಾ ಕ್ಷೇತ್ರನ್ನು (ಯಲಹಂಕ) ಒಳಗೊಂಡ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಪಕ್ಷಕ್ಕೆ ಮತದಾರರು ನೀಡಿರುವ ಭಾರಿ ವಿಜಯಕ್ಕೆ ಕಾಂಗ್ರೆಸ್ ಪಕ್ಷ ನೀಡುತ್ತಿರುವ ಸೇಡಿನ ಕೊಡುಗೆ ಇದು ಎಂದು ಫೇಸ್‌ಬುಕ್ ಮೂಲಕ ಸುರೇಶ್ ಕುಮಾರ್ ಕಿಡಿಕಾರಿದ್ದಾರೆ. ಅಂದಹಾಗೆ ಜೂನ್ 1ರಿಂದ ನಗರದ ತ್ಯಾಜ್ಯ ನಿರ್ವಹಣೆ ಜವಾಬ್ದಾರಿ ವಹಿಸಿಕೊಂಡಿರುವ ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತ ಕಂಪನಿ (ಬಿಎಸ್‌ಡಬ್ಲ್ಯೂಎಂಎಲ್), ಜೂನ್ ತಿಂಗಳಿನಿಂದಲೇ ಕಸ ಸಂಗ್ರಹಕ್ಕೆ ಸೇವಾ ಶುಲ್ಕ ವಿಧಿಸಲು ಅನುಮತಿ ನೀಡಬೇಕೆಂಬ ಪ್ರಸ್ತಾವನೆಯನ್ನು ಸರ್ಕಾರದ ಮುಂದಿಟ್ಟಿದ್ದು, ಇದಕ್ಕೆ ಸರ್ಕಾರವೂ ಸಹ ಒಪ್ಪಿಗೆ ಸೂಚಿಸಿದೆ ಎಂದು ಮೂಲಗಳು ತಿಳಿಸಿವೆ.

## ಅಂತರ್ಜಲ ವೃದ್ಧಿಗೆ ಕ್ರಮ ; 50 ಕೆರೆಗಳಿಗೆ ಸಂಸ್ಕರಿತ ನೀರು ಭರ್ತಿ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ನಗರದಲ್ಲಿ ಅಂತರ್ಜಲ ವೃದ್ಧಿಗೆ ಯೋಜನೆ ರೂಪಿಸಿರುವ ಬೆಂಗಳೂರು ಜಲಮಂಡಳಿ 50 ಕೆರೆಗಳಿಗೆ ಸಂಸ್ಕರಿತ ನೀರು ತುಂಬಿಸಲು ಯೋಜಿಸಿದೆ. ಜಲಮಂಡಳಿಯ ತ್ಯಾಜ್ಯ ನೀರು ಸಂಸ್ಕರಣೆ ಘಟಕಗಳಿಂದ 18 ಕೆರೆಗಳಿಗೆ ಸಂಸ್ಕರಿತ ನೀರನ್ನು ತುಂಬಿಸಲಾಗಿದೆ. ಈ ಸಂಖ್ಯೆಯನ್ನು ಇದೀಗ 50 ಕೆರೆಗಳಿಗೆ ನಿಗದಿಗೊಳಿಸಿ, ಯೋಜನೆ ರೂಪಿಸಲಾಗುತ್ತಿದೆ. ನಗರದಲ್ಲಿ ಈಗ ಮಳೆಯಾಗುತ್ತಿದ್ದು, ಕೆರೆಗಳು ನೈಸರ್ಗಿಕವಾಗಿ ತುಂಬುತ್ತಿವೆ. ಆದರೆ, ಎಲ್ಲಾ ಕಾಲದಲ್ಲೂ ಇದೇ ಪರಿಸ್ಥಿತಿ ಇರುವುದಿಲ್ಲ. ನಿಯಂತ್ರಿತ ಮಾದರಿಯಲ್ಲಿ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ ಎಂದು ಜಲಮಂಡಳಿ ಅಧ್ಯಕ್ಷ ಡಾ.ವಿ.ರಾಮ್ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

## ನೀಟ್ ಕೌನ್ಸೆಲಿಂಗ್ ಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಕಾರ

• **ಉದಯವಾಹಿನಿ, ಬೆಂಗಳೂರು**

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಪದವಿಪೂರ್ವ (ಯುಜಿ) ಪರೀಕ್ಷೆ 2024 ರಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಆರೋಪದ ಮೇಲೆ ವೈದ್ಯಕೀಯ ಕಾಲೇಜುಗಳಿಗೆ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಕೌನ್ಸೆಲಿಂಗ್ ಗೆ ತಡೆ ನೀಡಲು ಸುಪ್ರೀಂ ಕೋರ್ಟ್ ಮಂಗಳವಾರ ನಿರಾಕರಿಸಿದೆ. ನ್ಯಾಯಮೂರ್ತಿ ವಿಕ್ರಮ್ ನಾಥ್ ಮತ್ತು ನ್ಯಾಯಮೂರ್ತಿ ಅಹ್ಸಾನುದ್ದೀನ್ ಅಮಾನುಲ್ಲಾ ಅವರ ರಜಾಕಾಲದ ಪೀಠವು ಮೇ ತಿಂಗಳಲ್ಲಿ ನಡೆದ ಪರೀಕ್ಷೆಯನ್ನು ರದ್ದುಗೊಳಿಸುವಂತೆ ಮತ್ತು ಪ್ರಶ್ನೆ ಪತ್ರಿಕೆ ಸೋರಿಕೆಯ ಬಗ್ಗೆ ತನಿಖೆ ನಡೆಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ಬಗ್ಗೆ ನೋಟಿಸ್ ನೀಡಿದೆ.
ನ್ಯಾಯಾಲಯವು ಈ ವಿಷಯವನ್ನು ಜುಲೈ 8 ರಂದು ಪರಿಗಣನೆಗೆ ಪಟ್ಟಿ ಮಾಡಿತು ಮತ್ತು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯಿಂದ (ಎನ್‌ಟಿಎ) ಪ್ರತಿಕ್ರಿಯೆ ಕೋರಿತು.ನಾವು ಕೌನ್ಸೆಲಿಂಗ್ ನಿಲ್ಲಿಸುವುದಿಲ್ಲ, ನೀವು ಮತ್ತಷ್ಟು ವಾದಿಸಿದರೆ, ನಾವು ಇದನ್ನು ವಜಾಗೊಳಿಸುತ್ತೇವೆ'' ಎಂದು ನ್ಯಾಯಾಲಯ ಹೇಳಿದೆ. ಈ ವರ್ಷ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಇತರ ಅಕ್ರಮಗಳ ಆರೋಪದ ಮೇಲೆ ನೀಟ್-ಯುಜಿ 2024 ಅನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯನ್ನು ನ್ಯಾಯಾಲಯ ನಡೆಸಿತು.

ಸ್ಯಾಂಡಲ್‌ವುಡ್ ನಟ ದರ್ಶನ್ ಈಗ ಪೊಲೀಸರ ಅತಿಥಿ ಆಗಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಅವರನ್ನು ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಗಿದೆ. 6 ದಿನಗಳ ಕಾಲ ಕಸ್ಟಡಿಗೆ ನೀಡಲಾಗಿದೆ. ದರ್ಶನ್ ಗೆಳತಿ ಪವಿತ್ರಾ ಗೌಡ ಅವರನ್ನೂ ಪೊಲೀಸ್ ಕಸ್ಟಡಿಗೆ ಒಪ್ಪಿಸಲಾಗಿದೆ. ಚಿತ್ರರಂಗನ್ನು ಬೆಚ್ಚಿ ಬೀಳಿಸಿರುವ ಈ ಕೊಲೆ ಪ್ರಕರಣದಲ್ಲಿ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ. ಪವಿತ್ರಾ ಗೌಡಗೆ ಅಶ್ಲೀಲ ಸಂದೇಶ ಕಳಿಸಿದ್ದ ಎಂಬ ಕಾರಣಕ್ಕೆ ರೇಣುಕಾ ಸ್ವಾಮಿಯನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆಸಿಕೊಂಡಿದ್ದ ಕಿಡಿಗೇಡಿಗಳು ಕೊಲೆ ಮಾಡಿದ್ದಾರೆ. ಡಿ ಗ್ಯಾಂಗ್ ಮೇಲೆ ಆರೋಪ ಎದುರಾಗಿದೆ.

# ದಾಸ 6 ದಿನ ಪೊಲೀಸ್ ಕಸ್ಟಡಿಯಲ್ಲಿ ವಾಸ..!

■ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್
■ ಎರಡನೇ ಪತ್ನಿ ಪವಿತ್ರಾ ಗೌಡ ಸೇರಿ 13 ಮಂದಿಗೆ 6 ದಿನ ಪೊಲೀಸ್ ಕಸ್ಟಡಿ




• **ಉದಯವಾಹಿನಿ, ಬೆಂಗಳೂರು**

ರಾಜಕಾಲುವೆ ಬಳಿ ರೇಣುಕಾ ಸ್ವಾಮಿ ಶವ ಸಿಕ್ಕ ಬಳಿಕ ಪೊಲೀಸರು ತನಿಖೆ ಆರಂಭಿಸಿದರು. ಆಗ ದರ್ಶನ್ ಹೆಸರು ಹೊರಗೆ ಬಂದಿತ್ತು. ಕೂಡಲೇ ದರ್ಶನ್ ಅವರನ್ನು ಮೈಸೂರಿನಲ್ಲಿ ಪೊಲೀಸರು ಬಂಧಿಸಿದ್ದರು. ನಂತರ ಅವರನ್ನು ಬೆಂಗಳೂರಿಗೆ ಕರೆದುಕೊಂಡು ತನಿಖೆ ಮುಂದುವರಿಸಲಾಯಿತು. ಬಳಿಕ ಬೌರಿಂಗ್ ಆಸ್ಪತ್ರೆಯಲ್ಲಿ ದರ್ಶನ್, ಪವಿತ್ರಾ ಗೌಡ, ಕೆ. ಪವನ್ ಸೇರಿದಂತೆ ಎಲ್ಲಾ ಆರೋಪಿಗಳನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಯಿತು. ನಂತರ ಜಡ್ಜ್ ಮುಂದೆ ಹಾಜರುಪಡಿಸಲಾಯಿತು.





ಈ ಪ್ರಕರಣದಲ್ಲಿ ಪವಿತ್ರಾ ಗೌಡ ಎ1 ಆಗಿದ್ದಾರೆ. ನಟ ದರ್ಶನ್ ಎ2 ಆಗಿದ್ದಾರೆ. ಕೆ. ಪವನ್ ಎ3 ಆಗಿದ್ದಾನೆ. ರೇಣುಕಾ ಸ್ವಾಮಿ ಕೊಲೆಯಿಂದ ಕುಟುಂಬದವರಿಗೆ ಆಘಾತ ಆಗಿದೆ. ದರ್ಶನ್ ಮತ್ತು ಸಹಚರರಿಗೆ ಸೂಕ್ತ ಶಿಕ್ಷೆ ಆಗಬೇಕು ಎಂದು ಮೃತನ ಕುಟುಂಬದವರು ಒತ್ತಾಯಿಸಿದ್ದಾರೆ.

'ಎಲ್ಲೆಲ್ಲಿ ಹೊಡೆದಿದ್ದಾರೆ ಎಂಬ ಬಗ್ಗೆ ತನಿಖೆ ಆಗಬೇಕು. ವೆಪನ್ ಸೀಜ್ ಮಾಡಬೇಕು. ಪೊಲೀಸ್ ಕಸ್ಟಡಿ ಅಗತ್ಯವಿದೆ. ಆರೋಪಿಗಳನ್ನು ಪೊಲೀಸ್ ಕಸ್ಟಡಿಗೆ ನೀಡುವುದು ಅಗತ್ಯ' ಎಂದು ತನಿಖಾಧಿಕಾರಿ ವಾದ ಮಾಡಿದರು.

'ದರ್ಶನ್ ತಪ್ಪಿಸಿಕೊಂಡಿಲ್ಲ. ತನಿಖೆಗೆ ಸಹಕರಿಸಿದ್ದಾರೆ. ದರ್ಶನ್ ವಿರುದ್ಧ ಯಾವುದೇ ಆರೋಪವಿಲ್ಲ' ಎಂದು ದರ್ಶನ್ ಪರ ವಕೀಲರು ವಾದಿಸಿದರು. ಬೆಂಗಳೂರಿನ ಮ್ಯಾಜಿಸ್ಟ್ರೇಟ್ ಕೋರ್ಟ್‌ನಲ್ಲಿ ವಿಚಾರಣೆ ಮಾಡಲಾಯಿತು.

ನಿಮ್ಮನ್ನು ಎಷ್ಟು ಗಂಟೆಗೆ, ಎಲ್ಲಿ ಬಂಧಿಸಲಾಯಿತೆಂದು ಜಡ್ಜ್ ಪ್ರಶ್ನೆ ಕೇಳಿದರು. ಮಧ್ಯಾಹ್ನ 3 ಗಂಟೆಗೆ ಬಂಧಿಸಿದ್ದಾರೆಂದು ಪವಿತ್ರಾ ಗೌಡ ಹೇಳಿದರು. ತಮ್ಮನ್ನು ಮಧ್ಯಾಹ್ನ 2.30ಕ್ಕೆ ಪೊಲೀಸ್ ಠಾಣೆಯಲ್ಲಿ ಬಂಧಿಸಿದರು ಎಂದು ದರ್ಶನ್ ಉತ್ತರಿಸಿದರು. ಪೊಲೀಸರು ಯಾವುದೇ ತೊಂದರೆ ಕೊಟ್ಟಿಲ್ಲ ಎಂದು ಕೂಡ ಉತ್ತರಿಸಿದರು. ವಕೀಲರನ್ನು ನೇಮಿಸಿಕೊಳ್ಳುತ್ತೀರಾ ಎಂದು ಜಡ್ಜ್ ಕೇಳಿದ್ದಕ್ಕೆ ಹೌದು ಎಂದರು ದರ್ಶನ್.

ದರ್ಶನ್ ಎರಡನೇ ಪತ್ನಿ ಪವಿತ್ರಾ ಗೌಡಗೆ ಅಶ್ಲೀಲ ಮೆಸೇಜ್ ಮಾಡಿರುವ ಆರೋಪದ ಹಿನ್ನೆಲೆ ಜೂನ್ 8ರಂದು ಚಿತ್ರದುರ್ಗದಿಂದ ರೇಣುಕಾಸ್ವಾಮಿಯನ್ನು ಕಿಡ್ನಾಪ್ ಮಾಡಿ ತಂದು ಪಟ್ಟಣಗೆರೆ ಸಮೀಪದ ಶೆಡ್‌ನಲ್ಲಿಟ್ಟು ಚಿತ್ರಹಿಂಸೆ ನೀಡಿ ಕೊಲ್ಲಲಾಗಿತ್ತು. ಜೂನ್ 9ರಂದು ಮೃತದೇಹ ಸುಮನಹಳ್ಳಿ ಬ್ರಿಡ್ಜ್ ಬಳಿ ಪತ್ತೆಯಾಗಿತ್ತು. ತನಿಖೆ ನಡೆಸಿದಾಗ ಪೊಲೀಸರಿಗೆ ದರ್ಶನ್ ಮತ್ತು ಗ್ಯಾಂಗ್ ಪಾತ್ರವಿರುವ ಬಗ್ಗೆ ತಿಳಿದುಬಂದಿತ್ತು. ಜೂನ್ 10ರಂದು ಮೂವರ ಬಂಧನವಾಗಿತ್ತು.ಜೂನ್ 11 ರಂದು ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ.

### ಆರೋಪಿಗಳ ಪಟ್ಟಿ ಇಂತಿದೆ

- ಪವಿತ್ರಾಗೌಡ
- ದರ್ಶನ್
- ಪವನ್
- ವಿನಯ್
- ಪ್ರದೋಶ್
- ನಂದೀಶ್
- ದೀಪಕ್
- ಲಕ್ಷ್ಮಣ್
- ನಾಗರಾಜು
- ಕಾರ್ತಿಕ್
- ನಿಖಿಲ್
- ಕೇಶವಮೂರ್ತಿ
- ರಾಘವೇಂದ್ರ



ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಚಿತ್ರ ನಟ ದರ್ಶನ್ ಪಾತ್ರದ ಬಗ್ಗೆ ತನಿಖೆ ನಡೆಯುತ್ತಿದೆ. ಈ ಸಂದರ್ಭದಲ್ಲಿ ಎಲ್ಲಾವನ್ನೂ ಹೇಳಲು ಸಾಧ್ಯವಿಲ್ಲ. ಕೊಲೆ ಕೇಸ್‌ನಲ್ಲಿ ದರ್ಶನ್ ಅವರನ್ನು ಅರೆಸ್ಟ್ ಮಾಡಲಾಗಿದೆ. ಆರೋಪಿಗಳನ್ನು ವಿಚಾರಣೆ ಮಾಡುವಾಗ ದರ್ಶನ್ ಹೆಸರು ಬಂದಿದೆ ಅಂತ ಮಾಹಿತಿ ಇದೆ. ಅದರ ಮೇಲೆ ತನಿಖೆ ಆಗುವವರೆಗೂ ಕೂಡ ಏನು ಹೇಳಲು ಆಗುವುದಿಲ್ಲ.

-**ಡಾ. ಜಿ ಪರಮೇಶ್ವರ್** ಗೃಹ ಸಚಿವ



ನಟ ದರ್ಶನ್ ಬಂಧಿಸಿರುವುದು ನನಗೆ ಗೊತ್ತಿಲ್ಲ. ಅದರ ಬಗ್ಗೆ ನನಗೆ ಮಾಹಿತಿ ಇಲ್ಲ. ಗೃಹ ಸಚಿವರು ಇದ್ದಾರೆ. ಅವರು ಮಾತನಾಡುತ್ತಾರೆ.

-**ಡಿಕೆ ಶಿವಕುಮಾರ್** ಉಪ ಮುಖ್ಯಮಂತ್ರಿ



ಚಾಲೆಂಜಿಂಗ್ ಸ್ಟಾರ್ ದರ್ಶನ್‌ರಿಂದ ಕೊಲೆಯಾಗಿದ್ದಾರೆ ಎಂದು ಹೇಳಲಾದ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸಂತ್ರಸ್ತರಿಗೆ ನ್ಯಾಯ ಸಿಗಬೇಕು. ಸ್ಯಾಂಡಲ್‌ವುಡ್‌ನ ಸುದ್ದಿಗಳನ್ನು ಬಿತ್ತರಿಸುವ ಕರ್ನಾಟಕ ಬಾಕ್ಸ್ ಆಫೀಸ್‌ನ ಸಾಮಾಜಿಕ ಜಾಲತಾಣದಲ್ಲಿ ಐಪಿಸಿ 302ರ ಸೆಕ್ಷನ್ ಅಡಿ ನಟ ದರ್ಶನ್‌ಗೆ ಬಹುತೇಕ ಜೀವಾವಧಿ ಶಿಕ್ಷೆಯಾಗುವ ಸಾಧ್ಯತೆಯಿದೆ.

-**ರಮ್ಯಾ** ಸ್ಯಾಂಡಲ್‌ವುಡ್‌ನ ನಟಿ

### ಅರೆಸ್ಟ್ ಆಗಿರುವವರು ಯಾರು

ಚಿತ್ರದುರ್ಗದ ಮೂಲದ ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಮತ್ತು ಪವಿತ್ರಾಗೌಡ ಸೇರಿದಂತೆ 13 ಆರೋಪಿಗಳನ್ನು ಬಂಧಿಸಲಾಗಿದೆ. ನಟ ದರ್ಶನ್, ಪವಿತ್ರಾ ಗೌಡ, ವಿ ವಿನಯ್ (ಜಯಣ್ಣ ಫಾರ್ಮ್ ಹೌಸ್), ಆರ್ ನಾಗರಾಜು (ರಾಮಕೃಷ್ಣನಗರ, ಮೈಸೂರು), ಎಂ ಲಕ್ಷ್ಮಣ್ (ಆರ್‌ಪಿಸಿ ಲೇಔಟ್, ಬೆಂಗಳೂರು), ಎಸ್ ಪ್ರದೋಶ್ (ಗಿರಿನಗರ), ಕೆ ಪವನ್ (ಚನ್ನಪಟ್ಟಣ, ಆರ್ ಆರ್ ನಗರದಲ್ಲಿ ವಾಸ), ದೀಪಕ್ ಕುಮಾರ್ (ಆರ್‌ಆರ್ ನಗರ), ನಂದೀಶ್ (ಮಂಡ್ಯ, ಆರ್‌ಆರ್ ನಗರದಲ್ಲಿ ವಾಸ), ಕಾರ್ತಿಕ್, ನಿಖಿಲ್ ನಾಯಕ್ (ಗೊಟ್ಟಿಗೇರಿ), ಕೇಶವಮೂರ್ತಿ (ಗಿರಿನಗರ), ರಾಘವೇಂದ್ರ (ಚಿತ್ರದುರ್ಗ) ಇವರನ್ನು ಬಂಧಿಸಲಾಗಿದೆ.




### ಹತ್ತು ವರ್ಷಗಳ ನಿರಂತರ ಪಯಣ

ನಟಿ ಪವಿತ್ರಾಗೌಡ ಅವರು ದರ್ಶನ್ ಜೊತೆಗಿದ್ದ ಫೋಟೋ ಹಾಗೂ ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿ ಹತ್ತು ವರ್ಷಗಳ ನಿರಂತರ ಪಯಣ ಎಂದು ಹೇಳಿಕೊಂಡಿದ್ದರು. ಇದಕ್ಕೆ ಪ್ರತಿಯಾಗಿ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮಿ ಅವರು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು. ಇದು ಸಾಮಾಜಿಕ ಜಾಲತಾಣಗಳಲ್ಲಿ ಕಳೆದ ಎರಡು ತಿಂಗಳ ಹಿಂದೆ ಕಾವೇರಿದ ಚರ್ಚೆಗೂ ಕಾರಣವಾಗಿತ್ತು. ಈ ನಡುವೆ ರೇಣುಕಾಸ್ವಾಮಿ ಅವರು ಪವಿತ್ರಗೌಡರನ್ನು ನಿಂದಿಸಿದ್ದರು ಎಂದು ತಿಳಿದುಬಂದಿದೆ. ಪವಿತ್ರಾಗೌಡ ಅವರನ್ನು ಕೂಡ ಕರೆತರಲಾಗಿದ್ದು, ಆರ್.ಆರ್.ನಗರ ಠಾಣೆಯ ಪೊಲೀಸರು ವಿಚಾರಣೆ ಗೊಳಪಡಿಸಿ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ.

## ದಲಿತರ ಹಣ ವಾಪಸ್ ಮಾಡದಿದ್ದರೆ ಜನರ ಶಾಪ ತಟ್ಟಲಿದೆ

• **ಉದಯವಾಹಿನಿ, ಬೆಂಗಳೂರು**

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಮೊದಲ ಆರೋಪಿ. ಅವರು ರಾಜೀನಾಮೆ ನೀಡುವವರೆಗೂ ಬಿಜೆಪಿ ಹೋರಾಟ ಮುಂದುವರೆಸಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಈ ಹಗರಣದ ಹಿಂದೆ ಕೇವಲ ಸಚಿವರಾಗಿದ್ದ ಬಿ.ನಾಗೇಂದ್ರ ಅವರೊಬ್ಬರೇ ಇಲ್ಲ. ಇದರ ಹಿಂದೆ ದೊಡ್ಡ ನಾಯಕರೇ ಇದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗೊತ್ತಿದ್ದೇ ಈ ಹಗರಣ ನಡೆದಿದೆ ಎಂದು ಆಪಾದಿಸಿದರು. ಇದರ ಜೊತೆ ಇನ್ನಷ್ಟು ಸಚಿವರೂ ಸೇರಿದ್ದಾರೆ. ಆದ್ದರಿಂದ ಮುಖ್ಯಮಂತ್ರಿ ಕೂಡ ರಾಜೀನಾಮೆ ನೀಡಬೇಕು. ಸಿದ್ದರಾಮಯ್ಯ ಅವರಿಗೆ ಆರ್ಥಿಕತೆಯ ಬಗ್ಗೆ ಗೊತ್ತಿದೆಯೇ? ಇಲಾಖೆಯ ಮೇಲೆ ಅವರಿಗೆ ಹಿಡಿತವಿಲ್ಲವೇ? ಈ ಹಣ ಹೈದ್ರಾಬಾದ್‌ಗೆ ಹೋಗಿದ್ದು ತಿಳಿದರೂ ಬೇರೆಯವರ ವಿರುದ್ಧ ಕಠಿಣ ಕ್ರಮ ವಹಿಸಿಲ್ಲ. ದಲಿತರ ಹಣವನ್ನು ವಾಪಸ್ ಮಾಡದಿದ್ದರೆ ಜನರ ಶಾಪ ತಟ್ಟಲಿದೆ. ಈ ಅಕ್ರಮದಲ್ಲಿ ಮುಖ್ಯಮಂತ್ರಿ ಯೇ ಮೊದಲ ಆರೋಪಿಯಾಗಿದ್ದು, ಬಿಜೆಪಿಯ ಹೋರಾಟ ಮುಂದುವರಿ ಯಲಿದೆ ಎಂದು ತಿಳಿಸಿದರು.




## ದೇವೇಗೌಡರ ಆರೋಗ್ಯ ವಿಚಾರಿಸಿದ ನರೇಂದ್ರ ಮೋದಿ

• **ಉದಯವಾಹಿನಿ, ಬೆಂಗಳೂರು**

ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ ಅವರು ಅನಾರೋಗ್ಯ ಕಾರಣ ಪ್ರಧಾನಿ ನರೇಂದ್ರ ಮೋದಿ ಅವರ ಪ್ರಮಾಣವಚನ ಕಾರ್ಯಕ್ರಮದಲ್ಲಿ ಭಾಗಿಯಾಗಲು ಸಾಧ್ಯವಿಲ್ಲ ಎಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದರು. ಈ ಬೆನ್ನಲ್ಲೇ ಮೋದಿ ಅವರು ದೇವೇಗೌಡ ಅವರಿಗೆ ದೂರವಾಣಿ ಕರೆ ಮಾಡಿ ಆರೋಗ್ಯ ವಿಚಾರಿಸಿದರು. ಎಚ್.ಡಿ ದೇವೇಗೌಡ ಅವರು ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಕರೆ ಮಾಡಿ, ಹೊಸ ಸರ್ಕಾರದ ಬಗ್ಗೆ ತಮಗೆ ಇರುವ ಆಲೋಚನೆಗಳನ್ನು ನನ್ನೊಂದಿಗೆ ಹಂಚಿಕೊಂಡರು. ಹಾಗೆ ನನ್ನ ಆರೋಗ್ಯವನ್ನೂ ವಿಚಾರಿಸಿದರು ಎಂದು ಬರೆದುಕೊಂಡಿದ್ದಾರೆ. ಪ್ರಧಾನಿ ಕಾಳಜಿಗೆ ನಾನು ಆಭಾರಿ. ಅವರ ಈ ಕಾಳಜಿ ನನ್ನನ್ನು ಭಾವುಕರನ್ನಾಗಿಸಿತು. ದೇವರ ಆಶೀರ್ವಾದ ಸದಾ ಅವರ ಮೇಲೆ ಇರಲಿ. ಅವರು ಭಾರತವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿ ಎಂದು ದೇವೇಗೌಡ ಅವರು ಹಾರೈಸಿದ್ದಾರೆ.

ಪ್ರಧಾನಿ ಮೋದಿ ಅವರ ಪ್ರಮಾಣವಚನ ಕಾರ್ಯಕ್ರಮವನ್ನು ಇದೊಂದು ಐತಿಹಾಸಿಕ ಕ್ಷಣ. ನಾನು ಕೂಡ ಸಮಾರಂಭದಲ್ಲಿ ಹಾಜರಿರಬೇಕಿತ್ತು. ಅನಾರೋಗ್ಯದ ಕಾರಣದಿಂದ ಅದು ಸಾಧ್ಯವಾಗುತ್ತಿಲ್ಲ. ನಮ್ಮ ಪಕ್ಷವು ಎನ್‌ಡಿಎ ಮೈತ್ರಿಕೂಟವನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಎಲ್ಲಾರೊಂದಿಗೆ ಎಲ್ಲಾರ ವಿಕಾಸ ಎಂಬ ಘೋಷ ವಾಕ್ಯದಂತೆ ನಿಮ್ಮೊಂದಿಗೆ ಕೆಲಸ ಮಾಡುತ್ತೇವೆ ಎಂದು ದೇವೇಗೌಡ ಅವರು ಎಕ್ಸ್‌ನಲ್ಲಿ ತಿಳಿಸಿದ್ದರು.



# ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ

● ಗ್ಯಾರಂಟಿ ಯೋಜನೆಗಳನ್ನು ರಾಜಕೀಯ ಲಾಭಕ್ಕಾಗಿ ತಂದಿಲ್ಲ ● ಬಡವರು, ಮಧ್ಯಮ ವರ್ಗದವರಿಗೆ ಅನುಕೂಲಕ್ಕಾಗಿ ತಂದಿದ್ದೇವೆ


• **ಉದಯವಾಹಿನಿ, ಬೆಂಗಳೂರು**

ನಾವು ರಾಜಕೀಯ ಲಾಭ ಪಡೆಯುವುದಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ಜಾರಿಗೆ ತಂದಿಲ್ಲ. ಅವುಗಳನ್ನು ತಂದಿರೋದು ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಕಲ್ಪಿಸೋದಕ್ಕಾಗಿ ಆಗಿದೆ. ನಾವು ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ ಅಂತ ಸಿಎಂ ಸಿದ್ಧರಾಮಯ್ಯ ಮತ್ತೊಮ್ಮೆ ಸ್ಪಷ್ಟಪಡಿಸಿದ್ದಾರೆ.

ಇಂದು ಪತ್ರಿಕಾ ಪ್ರಕಟಣೆಯಲ್ಲಿ ಹೇಳಿಕೆ ಬಿಡುಗಡೆ ಮಾಡಿರುವಂತ ಅವರು, ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ಅವರು ಆಗಾಗ ತಮ್ಮ ಅಜ್ಞಾನದ ಪ್ರದರ್ಶನ ಮಾಡುತ್ತಾ ರಾಜ್ಯದ ಜನರಿಗೆ ಮನರಂಜನೆ ನೀಡುತ್ತಿರುತ್ತಾರೆ. ಗ್ಯಾರಂಟಿಗಳು ಕಾಂಗ್ರೆಸ್ ಪಕ್ಷಕ್ಕೆ ಮತ ತಂದು ಕೊಟ್ಟಿಲ್ಲ'' ಎನ್ನುವುದು ಅವರ ಇತ್ತೀಚಿನ ಸಂಶೋಧನೆ. ಅಶೋಕ್ ಅವರೇ, ನಿಮಗೆ ಮತ್ತು ನಿಮ್ಮ ಪಕ್ಷಕ್ಕೆ ಗ್ಯಾರಂಟಿ ಯೋಜನೆಗಳ ಬಗ್ಗೆ ಯಾಕೆ ಇಷ್ಟೊಂದು ಸಿಟ್ಟು? ಮತ್ಸರ? ಅದರ ಫಲಾನುಭವಿಗಳಾದ ಬಡವರು, ಮಹಿಳೆಯರು, ಯುವಜನರ ಬಗ್ಗೆ ಯಾಕೆ ನಿಮಗೆ ಇಷ್ಟೊಂದು ದ್ವೇಷ, ಅಸಹನೆ? ಎಂದು ಪ್ರಶ್ನಿಸಿದ್ದಾರೆ. ರಾಜ್ಯದ ಜನತೆ ಮಾತ್ರವಲ್ಲ ದೇಶದ ಜನತೆ ಕೂಡಾ ಸೋಲಿಸಿದ್ದು ಮೋದಿ ಗ್ಯಾರಂಟಿಗಳನ್ನೇ ಹೊರತು ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳನ್ನಲ್ಲ. ಅಶೋಕ್ ಅವರೇ, ಈಗಲಾದರೂ ಎಚ್ಚೆತ್ತುಕೊಂಡು ಸತ್ಯವನ್ನು ಎದುರಿಸಿ. ಕಳೆದ ಲೋಕಸಭಾ ಚುನಾವಣೆಗಿಂತ ಶೇಕಡಾ 13 ರಷ್ಟು ಹೆಚ್ಚು ಮತಗಳನ್ನು ರಾಜ್ಯದ ಮತದಾರರು ಈ ಬಾರಿ ನಮಗೆ ನೀಡಿದ್ದಾರೆ. ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಪಕ್ಷಗಳ ನಡುವಿನ ಮತಪ್ರಮಾಣದ ಅಂತರ ಕೇವಲ 0.63. ಈಗ ಹೇಳಿ ಗೆದ್ದವರು ಯಾರು? ಸೋತವರು ಯಾರು? ಎಂದು ಕೇಳಿದ್ದಾರೆ.

ನಮ್ಮ ಗೆಲುವಿನಿಂದ ನಾವು ತೃಪ್ತರಲ್ಲದೆ ಇದ್ದರೂ ರಾಜ್ಯದ ಜನ ಗೆಲ್ಲಿಸಿದ್ದು ನಮ್ಮನ್ನು, ಸೋಲಿಸಿದ್ದು ನಿಮ್ಮನ್ನು ಎನ್ನುವುದನ್ನು ಮರೆಯದಿರಿ. ಜೆಡಿಎಸ್ ಪಕ್ಷದ ಪಾದಕ್ಕೆ ಬಿದ್ದರೂ, 26 ಸ್ಥಾನಗಳಿಂದ 17 ಸ್ಥಾನಕ್ಕೆ ನಿಮ್ಮ ಪಕ್ಷ ಕುಸಿಯುವುದನ್ನು ತಪ್ಪಿಸಲು ಆಗಲಿಲ್ಲ. ಒಂದು ಸ್ಥಾನದಿಂದ ಒಂಬತ್ತು ಸ್ಥಾನಕ್ಕೆ ನಾವು ಏರುವುದನ್ನೂ ನಿಮಗೆ ತಪ್ಪಿಸಲಾಗಲಿಲ್ಲ. ಮೊದಲು ನಿಮ್ಮ ಸೋಲಿಗೆ ಆತ್ಮಾವಲೋಕನ ಮಾಡಿಕೊಳ್ಳಿ, ಆ ಮೇಲೆ ಕಾಂಗ್ರೆಸ್ ಪಕ್ಷದ ಚುನಾವಣಾ ಫಲಿತಾಂಶದ ವಿಶ್ಲೇಷಣೆ ನಡೆಸಿ ಎಂದಿದ್ದಾರೆ. ಕೇವಲ ರಾಜಕೀಯ ಲಾಭದ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ನಾವು ಜಾರಿಗೆ ತಂದಿಲ್ಲ, ಅದು ನಮ್ಮ ಬದ್ಧತೆ ಮತ್ತು ರಾಜ್ಯದ ಜನರ ಮೇಲಿನ ಕಾಳಜಿ. ಕೇಂದ್ರ ಸರ್ಕಾರದ ದುರಾಡಳಿತದಿಂದ ನೆಲ ಹಿಡಿದಿರುವ ಜನತೆಗೆ ನೆರವಾಗುವ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಕೇಂದ್ರದ ಸರ್ಕಾರಿ ಯಂತ್ರದ ದುರುಪಯೋಗ, ಮೋದಿ ನಾಮ ಬಲ, ಅಪಾರವಾದ ಸಂಪನ್ಮೂಲಗಳ ಹೊರತಾಗಿಯೂ ಜನತೆ ನಮಗೆ ಆಶೀರ್ವಾದ ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಗಳ ಜಾರಿಯಿಂದಾಗಿ ರಾಜ್ಯ ದಿವಾಳಿಯಾಗಬೇಕು ಎಂಬ ಆಸೆ ನಿಮಗಿದ್ದರೂ ಅದು ಈಡೇರುವುದಿಲ್ಲ. ಗ್ಯಾರಂಟಿ ಯೋಜನೆಗಳು ಮುಂದುವರಿಯುತ್ತದೆ ಮತ್ತು ರಾಜ್ಯದ ಆರ್ಥಿಕ ಪರಿಸ್ಥಿತಿಯೂ ಸುಭದ್ರವಾಗಿರುತ್ತದೆ. ಸಾಲ ಮಾಡಿ ಸಂಬಳ ಕೊಡುವ ದುಸ್ಥಿತಿಗೆ ನಮ್ಮ ಸರ್ಕಾರ ತಲುಪಿಲ್ಲ. ನಿಮಗೆ ಬರುವ ಸಂಬಳದಲ್ಲಿ ಏನಾದರೂ ಹೆಚ್ಚು ಕಡಿಮೆ ಆಗಿದ್ದರೆ ನನ್ನ ಗಮನಕ್ಕೆ ತನ್ನಿ, ಅದನ್ನು



ಡಿ.ಕೆ.ಸುರೇಶ್ ಅವರು ಸೋತಿದ್ದಾರೆ ಎನ್ನುವುದು ನಿಜ. ಆದರೆ ಬಳ್ಳಾರಿ, ಬೀದರ್, ಚಾಮರಾಜನಗರ, ಚಿಕ್ಕೋಡಿ, ದಾವಣಗೆರೆ, ಕಲ್ಬುರ್ಗಿ, ಮತ್ತು ರಾಯಚೂರುಗಳಲ್ಲಿ ಬಿಜೆಪಿ ಅಭ್ಯರ್ಥಿಗಳನ್ನೂ ನಮ್ಮ ಪಕ್ಷದ ಅಭ್ಯರ್ಥಿಗಳು ಸೋಲಿಸಿದ್ದಾರೆ. ಹುಬ್ಬಳ್ಳಿಯ ಅಮಾಯಕ ಹೆಣ್ಣೊಬ್ಬಳ ಹತ್ಯೆಯನ್ನು ನಿಮ್ಮ ಪಕ್ಷ ರಾಜಕೀಯ ಲಾಭಕ್ಕಾಗಿ ಬಳಸಿಕೊಂಡ ಕಾರಣಕ್ಕಾಗಿ ನಮಗೆ ಆ ಭಾಗದಲ್ಲಿ ಹಿನ್ನಡೆಯಾಯಿತು. ಇಲ್ಲದೆ ಇದ್ದರೆ ನಿಮ್ಮ ಪಕ್ಷ ಒಂದಂಕಿಗೆ ಇಳಿಯುತ್ತಿತ್ತು.

-**ಸಿದ್ದರಾಮಯ್ಯ,** ಮುಖ್ಯಮಂತ್ರಿ

### ದಲಿತರ ಬಗ್ಗೆ ಕಾಳಜಿಯನ್ನು ಕೇಂದ್ರ ಸಚಿವ ಸಂಪುಟವೇ ಸಾಕ್ಷಿ ನೀಡಿದೆ

ದಲಿತರ ಬಗೆಗಿನ ನಿಮ್ಮ ಕಾಳಜಿ ಎಷ್ಟೊಂದು ಹುಸಿಯಾಗಿದೆ ಎನ್ನುವುದಕ್ಕೆ ಕೇಂದ್ರ ಸಚಿವ ಸಂಪುಟವೇ ಸಾಕ್ಷಿ. ಈ ಸಂಪುಟದಲ್ಲಿ ರಾಜ್ಯದಿಂದ ಒಬ್ಬನೇ ಒಬ್ಬ ದಲಿತ ಇಲ್ಲವೆ ಹಿಂದುಳಿದ ಸಮುದಾಯದ ನಾಯಕನಿಗೆ ಅವಕಾಶ ನೀಡಿಲ್ಲ. ದೇಶದಲ್ಲಿಯೇ ಮೊದಲ ಬಾರಿ ಎಸ್ ಸಿಪಿ/ಟಿಎಸ್ ಪಿ ಕಾಯ್ದೆಯನ್ನು ಜಾರಿಗೊಳಿಸಿ, ಅವರ ಜನಸಂಖ್ಯೆಗೆ ಅನುಗುಣವಾಗಿ ಒಟ್ಟು ಸಂಪನ್ಮೂಲದ ಶೇಕಡಾ 25ರಷ್ಟನ್ನು ಮೀಸಲು ಇಟ್ಟವರು ನಾವು. ನಿಮಗೆ ದಮ್ಮು-ತಾಖತ್ ಇದ್ದರೆ ಈ ಕಾಯ್ದೆಯನ್ನು ರಾಷ್ಟ್ರಮಟ್ಟದಲ್ಲಿ ಜಾರಿಗೆ ತರಲು ಪ್ರಧಾನಿ ಮೋದಿಯವರಿಗೆ ತಿಳಿಸಿ. ಅದರ ನಂತರ ನಮ್ಮ ಬಗ್ಗೆ ಮಾತನಾಡಿ ಎಂದು ಎಚ್ಚರಿಸಿದ್ದಾರೆ.

**ಈ ದಿನದ ದರ** | ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,035/Gram(24ct) ₹6,700/Gram(22ct) | ಬೆಳ್ಳಿ: ₹90.50/Gram

## ಸಿದ್ಧಸೂಕ್ತಿ



ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಹಂತೆಯೊಳಾತ್ಮಾಧ್ಯಾಸಂ ಮಾಡಿ

ನಿಜಗುಣರ ಪರಮಾರ್ಥ ಗೀತೆಯ ಮಾತು. ಜೀವನು ಎಲ್ಲವನ್ನು ಅರಿಯುವವನು. ಆದಾಗ್ಯೂ ತನ್ನ ತಾನು ಮರೆತಿದ್ದರಿಂದ, ತಾನಲ್ಲದ್ದನ್ನು ತಾನೆಂದು ತಪ್ಪಾಗಿ ತಿಳಿದಿದ್ದಾನೆ. ಈ ತಪ್ಪು ತಿಳುವಳಿಕೆ ಅಧ್ಯಾಸ.

ಕಾಯ್ದ ಕಬ್ಬಿಣದ ಗಂಡನ್ನು ಮುಟ್ಟಿ ಕಬ್ಬಿಣ ಸುಡುವುದು, ತೂಗಿ ನೋಡಿ ಬೆಂಕಿಯ ಗುಂಡು ಭಾರ ಎನ್ನುವುದು ಅಧ್ಯಾಸ. ಏಕೆಂದರೆ ಸುಡುವುದು ಬೆಂಕಿ, ಭಾರವಾದದ್ದು ಕಬ್ಬಿಣ. ಅತಸ್ಮಿನ್ ತದ್ಬುದ್ಧಿರಧ್ಯಾಸಃ = ಅದು ಅಲ್ಲದ್ದರಲ್ಲಿ ಅದು ಎಂಬ ತಿಳಿವಳಿಕೆ ಅಧ್ಯಾಸ = ತಪ್ಪು ತಿಳುವಳಿಕೆ. ಇದು ನಾಲ್ಕು ವಿಧ. ನಾನು ನಾನು ಎಂದು ತಾನು ಅಹಂಕಾರಪಡುವುದರಿಂದ ಅಹಂಕಾರದಲ್ಲಿ ತಾನೆಂಬ ಅಧ್ಯಾಸ. ದೇಹವನ್ನು ತಾನೆಂದು ತಿಳಿಯುವುದು ದೇಹದಲ್ಲಿನ ಅಧ್ಯಾಸ. ನಾನು ನೋಡುತ್ತೇನೆ ಮಾಡುತ್ತೇನೆ ಕೇಳುತ್ತೇನೆ ಮುಂತಾದುದಾಗಿ ಇಂದ್ರಿಯಗಳು ತಾನೆಂದು ವ್ಯವಹರಿಸುವುದು ಇಂದ್ರಿಯ = ಕರಣಗಳಲ್ಲಿನ ಅಧ್ಯಾಸ. ನಾನು ತಿಳಿಯುತ್ತೇನೆ, ನನಗೆ ಗೊತ್ತು ಇತ್ಯಾದಿಯಾಗಿ ಬುದ್ಧಿ ತಾನೆಂದು ವ್ಯವಹರಿಸುವುದರಿಂದ ಬುದ್ಧಿಯಲ್ಲಿನ ಅಧ್ಯಾಸ. ಮೂಲತಃ ಆತ್ಮನು ಸಕಲ ವ್ಯಾಪಿಯಾಗಿದ್ದು ದೇಹಗತ ಅಹಂಕಾರ ದೇಹ ಇಂದ್ರಿಯ ಬುದ್ಧಿ ಇವು ಅಲ್ಪ ವ್ಯಾಪ್ತಿಯನ್ನು ಹೊಂದಿದ್ದು ಅಲ್ಪವ್ಯಾಪ್ತನೇ ತಾನೆಂದು ತಿಳಿಯುವುದು ಅಧ್ಯಾಸವೆನಿಸುವುದು. ಬದಲಾಗಿ ಅಹಂಕಾರ ದೇಹ ಇಂದ್ರಿಯ ಬುದ್ಧಿ ಇವು ತನ್ನ ಏಕಾಂಶಗಳೆಂದು ತಿಳಿದಲ್ಲಿ ತಪ್ಪಿಲ್ಲ.

# ಕೊಲೆ ಆರೋಪ ಸ್ಯಾಂಡಲ್‌ವುಡ್ ನಟ ದರ್ಶನ್ ಬಂಧನ

■ ಪವಿತ್ರ ಗೌಡ ಅವರಿಗೆ ಅಶ್ಲೀಲವಾಗಿ ಮೆಸೇಜ್ ■ ಪೊಲೀಸರು ನಟ ದರ್ಶನ್ ಸೇರಿ ಹತ್ತು ಮಂದಿ ಬಂಧನ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣ




ಕೊಲೆ ಪ್ರಕರಣವೊಂದರಲ್ಲಿ ಮೈಸೂರಲ್ಲಿ ಕಾಮಾಕ್ಷಿಪಾಳ್ಯ ಪೊಲೀಸರು ಮಂಗಳವಾರ ಸ್ಯಾಂಡಲ್‌ವುಡ್ ನಟ ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರನ್ನು ಬಂಧಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಅವರನ್ನು ಬಂಧಿಸಲಾಗಿದೆ.

ಈ ಹಿಂದೆ ಪವಿತ್ರಾ ಗೌಡ ಅವರನ್ನು ಮದುವೆ ಆಗಿದ್ದಾರೆ ಎಂಬ ಸುದ್ದಿ ಹರಿದಾಡಿತ್ತು. ನಟ ದರ್ಶನ್ ಮತ್ತು ಪವಿತ್ರಾ ಗೌಡ ಅವರ ಫೋಟೋಗಳು ಹರಿದಾಡಿದ್ದವು. ಈ ಪವಿತ್ರಾ ಗೌಡಗೆ ಕೆಟ್ಟದಾಗಿ ಮೆಸೆಜ್ ಮಾಡಿದ್ದ ಸ್ವಾಮಿ ಎನ್ನಲಾಗಿದೆ. ಈ ಸ್ವಾಮಿ ಚಿತ್ರದುರ್ಗ ಮೂಲದವನು ಎನ್ನಲಾಗಿದೆ. ಆತನ ಕೊಲೆ ಪ್ರಕರಣದಲ್ಲಿ ಕಾಟೇರಾ ದರ್ಶನ್ ಬಂಧನವಾಗಿದೆ. ಪವಿತ್ರ ಗೌಡ ಅವರಿಗೆ ಅಶ್ಲೀಲವಾಗಿ ಮೆಸೆಜ್ ಮಾಡಿದ್ದ ಎನ್ನಲಾಗುತ್ತಿರುವ ರೇಣುಕಸ್ವಾಮಿ ಅವರನ್ನು ಬೆಂಗಳೂರಿಗೆ ಕರೆಯಿಸಲಾಗಿದೆ. ಜೂನ್ 8ರಂದು ಆತನನ್ನು ಶೆಡ್‌ನಲ್ಲಿ ಇರಿಸಿ ಕೊಲೆ ಮಾಡಲಾಗಿದೆ. ಜೂನ್ 09 ರಂದು ಕೊಲೆ ಮಾಡಲಾಗಿದೆ. ಕೊಲೆ ಮಾಡಿದ ಆರೋಪಿಗಳು ತಾವು ಕೊಲೆ ಮಾಡಿದ್ದಾಗಿ, ನಟ ದರ್ಶನ್ ಅವರ ಸೂಚನೆ ಮೇರೆಗೆ ಕೊಲೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರೆ. ಕೊಲೆ ಪ್ರಕರಣ ವಿಚಾರವಾಗಿ ಇಂದು ಪೊಲೀಸರು ಮೈಸೂರಿನ ದರ್ಶನ್ ಫಾರ್ಮ್ ಹೌಸ್‌ನಲ್ಲಿ ಬಂಧಿಸಲಾಗಿದೆ.

ಕೊಲೆ ಪ್ರಕರಣ ವಿಚಾರವಾಗಿ ಕಾಮಾಕ್ಷಿಪಾಳ್ಯ ಪೊಲೀಸರು ನಟ ದರ್ಶನ್ ಸೇರಿ ಹತ್ತು ಮಂದಿಯನ್ನು ಬಂಧಿಸಲಾಗಿದೆ. ಕೊಲೆಗಾರರ ತಾವು ನಟ ದರ್ಶನ್ ಅವರ ಸೂಚನೆ ಮೇರೆಗೆ ಕೊಲೆ ಮಾಡಿದ್ದಾಗಿ ಒಪ್ಪಿಕೊಂಡಿದ್ದಾರೆ. ಮೊದಲು ಮೂರು ಜನ ಪೊಲೀಸರಿಗೆ ಸರೆಂಡರ್ ಆಗಿದ್ದರು. ನಂತರ ಅವರನ್ನು ವಿಚಾರಣೆ ಮಾಡಿದ ಬಳಿಕ ಇದರಲ್ಲಿ ನಟ ದರ್ಶನ್ ಪಾತ್ರ ಇದೆ ಎಂಬುದು ಗೊತ್ತಾಗಿದೆ. ಕಾಮಾಕ್ಷಿಪಾಳ್ಯದ ಶೆಡ್ ನಲ್ಲಿಟ್ಟು ರೇಣುಕಾ ಸ್ವಾಮಿಯನ್ನು ಥಳಿಸಲಾಗಿದೆ. ಮನ ಬಂದಂತೆ ಹಲ್ಲೆ ಮಾಡಲಾಗಿದ್ದು. ಈ ವೇಳೆ ಹಲ್ಲೆಕೋರರ ಜೊತೆಗೆ ನಟ ದರ್ಶನ್ ಸಹ ಇದ್ದರು ಎಂಬ ಮಾಹಿತಿಯನ್ನು ಪೊಲೀಸರು ಕಲೆ ಹಾಕಿದ್ದಾರೆ. ಕೊಲೆ ಮಾಡಿ ನಂತರ ಕಾಮಾಕ್ಷಿ ಪಾಳ್ಯದ ಮೋರಿಯಲ್ಲಿ ರೇಣುಕಾಸ್ವಾಮಿ ಮೃತದೇಹ ಬೀಡಾಡಲಾಗಿತ್ತು. ಪೊಲೀಸರಿಗೆ ವಿಷಯ ಗೊತ್ತಾಗಿದೆ ಎಂಬ ಸುಳಿವು ಸಿಗುತ್ತಿದ್ದಂತೆ ಮೈಸೂರಿನ ಫಾರ್ಮ್‌ಹೌಸಿನಲ್ಲಿ ಕಾಮಾಕ್ಷಿಪಾಳ್ಯದ ಪೊಲೀಸರು ಬಂಧಿಸಿದ್ದಾರೆ. ಇದೀಗ ಅವರನ್ನು ಬೆಂಗಳೂರಿನತ್ತ ಕರೆತರಲಾಗುತ್ತಿದೆ.

ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆಯಾದ ಬಳಿಕ ಮೃತದೇಹ ಪತ್ತೆ ಆಗಿದೆ. ಇದು ಕೊಲೆ ಎಂಬ ಶಂಕೆ ವ್ಯಕ್ತವಾಗುತ್ತಿದ್ದಂತೆ ಪೊಲೀಸರ ಮಾಹಿತಿ ಮೇರೆಗೆ ಕುಟುಂಬಸ್ಥರು ಬೆಂಗಳೂರಿಗೆ ಬಂದಿದ್ದಾರೆ. ಬೆಂಗಳೂರಿನಲ್ಲಿ ದೂರು ದಾಖಲಾಗಿದೆ. ಸದ್ಯ ಕೊಲೆ ಆರೋಪಿಗಳಾದ ನಟ ದರ್ಶನ್ ಸೇರಿ ಹತ್ತು ಮಂದಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ರಾಜಕಾಲುವೆಯಲ್ಲಿ ಸಿಕ್ಕ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಮೊದಲು ಮೂವರ ಬಂಧನವಾಗಿದೆ. ಈ ಮೂವರು ಒಂದಕ್ಕೊಂದು ಸಂಬಂಧ ಇಲ್ಲದಂತೆ ಹೇಳಿಕೆ ಕೊಟ್ಟಿದ್ದಾರೆ. ಬಳಿಕ ಪ್ರತ್ಯೇಕವಾಗಿ ತೀವ್ರ ವಿಚಾರಣೆ ಬಳಿಕ ನಟ ದರ್ಶನ್ ಪಾತ್ರದ ಬಗ್ಗೆ ಬಾಯಿ ಬಿಟ್ಟಿದ್ದಾರೆ. ಆರಂಭದಲ್ಲಿ ಕೊಲೆಗಾರರ ಹಿನ್ನೆಲೆ, ಮೃತರ ಹಿನ್ನೆಲೆ ನೋಡಿದಾಗ ಇವರು ಸುಖಾ ಸುಮ್ಮನೆ ನಟ ದರ್ಶನ್ ಹೆಸರು ಹೇಳುತ್ತಿದ್ದಾರೆ ಎಂದು ಅನ್ನಿಸಿದೆ. ಬಳಿಕ ಸತ್ಯ ತಿಳಿದಿದ್ದು, ಹಿರಿಯ ಪೊಲೀಸರ ಜತೆ ಕಾಮಾಕ್ಷಿಪಾಳ್ಯ ಪೊಲೀಸರು ಚರ್ಚಿಸಿ ದರ್ಶನ್ ಬಂಧಿಸಲು ಸಜ್ಜಾದರು. ಅದರಂತೆ ಮಂಗಳವಾರ ಬಂಧಿಸಿ ಮೈಸೂರಿನ ಅನ್ನಪೂರ್ಣೇಶ್ವರಿ ಠಾಣೆಯಲ್ಲಿ ಬೆಳಗ್ಗೆಯಿಮದ ವಿಚಾರಣೆ ನಡೆಸುತ್ತಿದ್ದಾರೆ.

> ಮೃತ ರೇಣುಕಾಸ್ವಾಮಿ ಕೊಲೆ ಪತ್ನಿ ಮೂರು ತಿಂಗಳ ಗರ್ಭಿಣಿ ಎಂಬ ಮಾಹಿತಿ ಲಭ್ಯವಾಗಿದೆ. ಇಂತಹ ಸಂದರ್ಭದಲ್ಲಿ ಆವರ ಪತಿ ನಟ ದರ್ಶನ್ ಸೂಚನೆ ಮೇರೆಗೆ ಕೊಲೆ ಆಗಿದ್ದಾರೆ. ಸದ್ಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಮೃತ ರೇಣುಕಾಸ್ವಾಮಿ ಅಪೋಲೋ ಮೆಡಿಕಲ್‌ನಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

> ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಬಂಧನವಾಗಿದ್ದು, ಮೈಸೂರಿನಲ್ಲಿ ಪೊಲೀಸರು ವಿಚಾರಣೆ ನಡೆಸಿದ್ದಾರೆ. ಪೊಲೀಸರ ಮುಂದೆ ದರ್ಶನ್ ಮಾತನಾಡಿದ್ದು, ನಾನು ಕೊಲೆ ಇವರಿಗೆ ಹೇಳಿಲ್ಲ. ಬದಲಾಗಿ ರೇಣುಕಾಸ್ವಾಮಿಯನ್ನು ಬೆದರಿಸುವಂತೆ ಮಾತ್ರ ಹೇಳಿದ್ದೆ ಎಂದು ಪೊಲೀಸರಿಗೆ ನಟ ದರ್ಶನ್ ತಿಳಿಸಿದ್ದಾರೆ.

## ಜೈವಿಕ ಉದ್ಯಾನದಿಂದ ಪ್ರಾಣಿ ಆರೈಕೆ, ನಿರ್ವಹಣೆ ಕುರಿತು 10 ತಿಂಗಳ ಡಿಪ್ಲೊಮಾ ಕೋರ್ಸ್

• ಉದಯವಾಹಿನಿ, ಬೆಂಗಳೂರು

ವನ್ಯಜೀವಿ ಸಂರಕ್ಷಣೆಯಲ್ಲಿ ಹೆಚ್ಚುತ್ತಿರುವ ಜನರ ಆಸಕ್ತಿಯನ್ನು ಬಳಸಿಕೊಳ್ಳಲು ಅರಣ್ಯ, ಪರಿಸರ ಮತ್ತು ಪರಿಸರ ಇಲಾಖೆಯು ನಿರ್ಧರಿಸಿದೆ. ಹೀಗಾಗಿ, ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ (ಬಿಬಿಪಿ) ಪ್ರಾಣಿಗಳ ಆರೈಕೆ ಮತ್ತು ನಿರ್ವಹಣೆಯ ಕುರಿತಾದ ಡಿಪ್ಲೊಮಾ ಕೋರ್ಸ್ ನೀಡುವ ಪ್ರಸ್ತಾವನೆಯನ್ನು ಇಲಾಖೆಯು ಪರಿಶೀಲಿಸುತ್ತಿದೆ. ಡಿಪ್ಲೊಮಾ ವಿದ್ಯಾರ್ಹತೆ ಹೊಂದಿದವರು ಉದ್ಯೋಗಕ್ಕೆ ಅರ್ಹರಾಗುತ್ತಾರೆ ಎಂದು ಹೇಳಿದ ಖಂಡ್ರೆ, ಕೋರ್ಸ್ ಪೂರ್ಣಗೊಳಿಸಿದವರಿಗೆ ಉದ್ಯೋಗ ಸಿಗುವಂತೆ ಪಠ್ಯಕ್ರಮ ಮತ್ತು ಪ್ರಾಯೋಗಿಕ ಪಾಠಗಳನ್ನು ರೂಪಿಸಬೇಕು, ವಿವಿಧ ಅಂಶಗಳನ್ನು ಪರಿಶೀಲಿಸಿ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು. ಮುಂದಿನ ಸಭೆಯಲ್ಲಿ ವರದಿ ಸಲ್ಲಿಸುವಂತೆ ಹೇಳಿದರು.

## ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಬಂಪರ್ ಗಿಫ್ಟ್

• ಉದಯವಾಹಿನಿ, ಬೆಂಗಳೂರು




ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ರಾಜ್ಯ ಸರ್ಕಾರ ಬಂಪರ್ ಗಿಫ್ಟ್ ನೀಡಿದ್ದು, 'OTS' ಜಾರಿ ಮಾಡಿದೆ.ಈ ಬಗ್ಗೆ ಮಾಹಿತಿ ನೀಡಿದ ಡಿಸಿಎಂ ಡಿಕೆ ಶಿವಕುಮಾರ್ ಆಸ್ತಿ ತೆರಿಗೆಯು ಬಿಬಿಎಂಪಿಯ ಆದಾಯದ ಪ್ರಾಥಮಿಕ ಮೂಲವಾಗಿದ್ದು, ಇದು ನಮ್ಮ ನಗರದ ಕಾರ್ಯಾಚರಣೆಯನ್ನು ನೇರವಾಗಿ ಸಮರ್ಥಿಸುತ್ತದೆ.

ಸುಮಾರು 4 ಲಕ್ಷ ನಾಗರಿಕರು ರೂ.1000 ಕೋಟಿಗಳಷ್ಟು ಆಸ್ತಿತೆರಿಗೆಯನ್ನು ಪಾವತಿಸದಿರುವುದು ನಮ್ಮ ಗಮನಕ್ಕೆ ಬಂದಿದೆ.ಇದಕ್ಕಾಗಿ ಕರ್ನಾಟಕ ಸರ್ಕಾರದ ಐತಿಹಾಸಿಕ ನಿರ್ಣಯ ತೆಗೆದುಕೊಂಡು ಒಂದು ಬಾರಿ ಪರಿಹಾರ ಯೋಜನೆಯನ್ನು 'OTS' ಪರಿಚಯಿಸಿದೆ. ಇದರ ಅಡಿಯಲ್ಲಿ ಆಸ್ತಿ ತೆರಿಗೆಯ ಬಾಕಿಯ ಮೇಲೆ ಪಾವತಿಸಬೇಕಾದ ಬಡ್ಡಿಯನ್ನು ಸಂಪೂರ್ಣ ವಾಗಿ ಮನ್ನಾ ಮಾಡಲಾಗಿದೆ ಮತ್ತು ದಂಡವನ್ನು ಅರ್ಧಕ್ಕೆ ಇಳಿಸಲಾಗಿದೆ.

ಈ ಸುವರ್ಣಾವಕಾಶವು 31ನೇ ಜುಲೈ 2024 ರಂದು ಕೊನೆಗೊಳ್ಳಲಿದೆ. ಜೀವಮಾನದಲ್ಲಿ ಒಮ್ಮೆ ಮಾತ್ರ ಈ ಯೋಜನೆಯ ಅವಕಾಶ ವಿದ್ದು, ಇದರ ವಿಸ್ತರಣೆ ಇರುವುದಿಲ್ಲ. ಇಲ್ಲಿಯವರೆಗೆ 4 ಲಕ್ಷ ಆಸ್ತಿವಾರಸುದಾರರ ಪೈಕಿ ಸುಮಾರು 50000 ಜನರು ಮಾತ್ರ ಈ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ. ಈ ಅವಕಾಶವನ್ನು ಬಳಸಿಕೊಂಡು ನಿಮ್ಮ ಸ್ವತ್ತಿನ ಬಾಕಿ ಆಸ್ತಿತೆರಿಗೆಯನ್ನು ಪಾವತಿಸಬೇಕೆಂದು ಕೋರುತ್ತೇನೆ. ಬಿಬಿಎಂಪಿ ಕಾಯ್ದೆಯಲ್ಲಿ ಆಸ್ತಿತೆರಿಗೆ ಬಾಕಿ ವಸೂಲಾತಿಗೆ ಅವಕಾಶವಿದೆ. ಆದಾಗ್ಯೂ, ಒಟಿಎಸ್ ನಾಗರಿಕರಿಗೆ ಸಹಾಯ ಮಾಡಲು ನಮ್ಮ ಸರ್ಕಾರ ಮತ್ತು ಬಿಬಿಎಂಪಿಯೂ ಜೊತೆಯಾಗಿ ಕಾರ್ಯನಿರ್ವಹಿಸಲಿದೆ ಎಂದರು.

## ಕಾನೂನು ಹೋರಾಟಕ್ಕೆ ಮುಂದಾದ್ರಾ ನಟಿ ಸಪ್ತಮಿ ಗೌಡ!

• ಉದಯವಾಹಿನಿ, ಬೆಂಗಳೂರು




ಅನೈತಿಕ ಸಂಬಂಧಗಳ ಆರೋಪ

ಸ್ಯಾಂಡಲ್‌ವುಡ್ ನಟ ಯುವ ರಾಜ್‌ಕುಮಾರ್ ಅವರು ತಮ್ಮ ಪತ್ನಿ ಶ್ರೀದೇವಿ ಅವರಿಗೆ ವಿಚ್ಛೇದನ ನೀಡಲು ಮುಂದಾಗಿದ್ದಾರೆ. ಈ ಕುರಿತಾಗಿ ಕೋರ್ಟ್‌ಗೆ ಅರ್ಜಿ ಕೂಡಾ ಸಲ್ಲಿಕೆ ಮಾಡಿದ್ದಾರೆ. ಆದರೆ ಕಾಂತಾರ ಕ್ವೀನ್ ಸಪ್ತಮಿ ಗೌಡ ಜತೆ ಯುವ ರಾಜ್‌ಕುಮಾರ್ ಸಂಬಂಧ ಇದೆ ಎಂದು ಪತ್ನಿ ಶ್ರೀದೇವಿ ಆರೋಪ ಮಾಡಿದ್ದರು.

ಇದೀಗ ಶ್ರೀದೇವಿ ವಿರುದ್ಧ ತಿರುಗಿ ಬಿದ್ದಿರುವ ಸಪ್ತಮಿ ಗೌಡ ಕುಟುಂಬಸ್ಥರು ಮಾನಹಾನಿ ಕೇಸ್ ದಾಖಲಿಸಲು ಮುಂದಾಗಿದ್ದಾರೆ.

ನಟ ಯುವ ರಾಜ್‌ಕುಮಾರ್ ಅವರು ಪತ್ನಿ ಶ್ರೀದೇವಿ ಭೈರಪ್ಪ ಅವರಿಗೆ ಡಿವೋರ್ಸ್ ನೋಟಿಸ್ ನೀಡಿದ ಬಳಿಕ ಇಬ್ಬರ ನಡುವಿನ ಆರೋಪ- ಪ್ರತ್ಯಾರೋಪಗಳು ಜಾಸ್ತಿಯಾಗಿವೆ. ಅದರಲ್ಲೂ, ಅನೈತಿಕ ಸಂಬಂಧಗಳ ಆರೋಪಗಳು ಇನ್ನೂ ಹೆಚ್ಚಾಗಿವೆ. ಶ್ರೀದೇವಿ ಭೈರಪ್ಪ ಅವರು ರಾಧಯ್ಯ ಎಂಬ ವ್ಯಕ್ತಿ ಜತೆ ಅನೈತಿಕ ಸಂಬಂಧ ಹೊಂದಿದ್ದಾರೆ' ಎಂಬುದಾಗಿ ಯುವ ರಾಜ್‌ಕುಮಾರ್ ಪರ ವಕೀಲ ಸಿರಿಲ್ ಪ್ರಸಾದ್ ಸುದ್ದಿಗೋಷ್ಠಿ ನಡೆಸಿ ಆರೋಪಿಸಿದ್ದಾರೆ. ಇನ್ನು, ನಟನ ಲೀಗಲ್ ನೋಟಿಸ್‌ಗೆ ಉತ್ತರಿಸಿದ ಶ್ರೀದೇವಿ ಭೈರಪ್ಪ, 'ಯುವ ರಾಜ್‌ಕುಮಾರ್ ನಟಿ ಸಪ್ತಮಿ ಗೌಡ ಜತೆ ಸಂಬಂಧ ಹೊಂದಿದ್ದಾರೆ' ಎಂಬುದಾಗಿ ಆರೋಪಿಸಿದ್ದಾರೆ.

ಆ ಮೂಲಕ ಡಿವೋರ್ಸ್ ಪ್ರಕರಣವೀಗ ಪರಸ್ಪರ ಕೆಸರೆರಚಾಟಕ್ಕೆ ಕಾರಣವಾಗಿದೆ. ಯುವ ರಾಜ್‌ಕುಮಾರ್ ಪರ ವಕೀಲ ನೀಡಿದ ನೋಟೀಸ್‌ಗೆ ತಿರುಗೇಟು ನೀಡಿದ ಶ್ರೀದೇವಿ, ಯುವ ರಾಜಕುಮಾರ್ ಹಾಗೂ ಸಪ್ತಮಿ ಗೌಡ ರೂಮ್‌ನಲ್ಲಿ ಇದ್ದರು ಎಂದು ಉಲ್ಲೇಖಿಸಿದ್ದರು ಎನ್ನಲಾಗಿದೆ.

> ಹೀಗಾಗಿ ಶ್ರೀದೇವಿ ವಿರುದ್ಧ ಮಾನಹಾನಿ ಕೇಸ್ ದಾಖಲಿಸುವ ಬಗ್ಗೆ ಸಪ್ತಮಿ ಗೌಡ ಕುಟುಂಬಸ್ಥರು ನಿರ್ಧರಿಸಿದ್ದಾರೆ ಎನ್ನಲಾಗಿದೆ. ಈ ಕುರಿತು ಸಪ್ತಮಿ ಗೌಡ ತಂದೆ ಎಸ್‌ಕೆ ಉಮೇಶ್ ಖಾಸಗಿವಾಹಿನಿಗೆ ಮಾಹಿತಿ ನೀಡಿದ್ದಾರೆ.

## ಇನ್ಮುಂದೆ ಬೆಳಗ್ಗೆ 5ರಿಂದ ರಾತ್ರಿ 10ರ ವರೆಗೆ ಪಾರ್ಕ್‌ಗಳು ಓಪನ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ಇನ್ಮುಂದೆ ಬೆಳಗ್ಗೆ 5ರಿಂದ ರಾತ್ರಿ 10ರ ವರೆಗೆ ಪಾರ್ಕಗಳು ಓಪನ್ ಆಗಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.ಈ ಬಗ್ಗೆ ಮಾಹಿತಿ ನೀಡಿದ ಡಿಸಿಎಂ ಡಿಕೆ ಶಿವಕುಮಾರ್ ಈ ಮೊದಲು ಬೆಳಗ್ಗೆ 5ರಿಂದ ಬೆಳಗ್ಗೆ 10ರ ತನಕ ಪಾರ್ಕಗಳನ್ನು ಓಪನ್ ಮಾಡಲಾಗುತ್ತಿತ್ತು, ಇನ್ಮುಂದೆ ಬೆಳಗ್ಗೆ 5ರಿಂದ ರಾತ್ರಿ 10ರ ವರೆಗೆ ಪಾರ್ಕಗಳು ಓಪನ್ ಆಗಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಆದರೆ ಲಾಲ್ ಬಾಗ್, ಕಬ್ಬನ್ ಪಾರ್ಕ್ ಸೇರಿದಂತೆ ತೋಟಗಾರಿಕೆ ವ್ಯಾಪ್ತಿಯಲ್ಲಿ ಇರುವ ಪಾರ್ಕಗಳಿಗೆ ಈ ಅವಧಿ ವಿಸ್ತರಣೆ ಅನ್ವಯ ಆಗುವುದಿಲ್ಲ ಎಂದರು. ಪಾರ್ಕಗಳಲ್ಲಿ ಸಿಸಿಟಿವಿ ಕ್ಯಾಮೆರಾ ಹಾಕಿದ್ದೇನೆ, ಸಾರ್ವಜನಿಕರಿಗೆ ಎಲ್ಲಾ ರೀತಿಯ ಸುರಕ್ಷಿತ ಕ್ರಮ ಕೈಗೊಳ್ಳುತ್ತೇವೆ ಎಂದು ಮಾಹಿತಿ ನೀಡಿದರು.

## ಬೆಂಗಳೂರಿಗರ ಗಮನಕ್ಕೆ ಆಸ್ತಿ ತೆರಿಗೆ ಪಾವತಿಗೆ ಜು.31 ಕೊನೆಯ ದಿನ

• ಉದಯವಾಹಿನಿ, ಬೆಂಗಳೂರು

ಆಸ್ತಿ ತೆರಿಗೆಯು ಬಿಬಿಎಂಪಿಯ ಆದಾಯದ ಪ್ರಾಥಮಿಕ ಮೂಲವಾಗಿದ್ದು, ಇದು ನಮ್ಮ ನಗರದ ಕಾರ್ಯಾಚರಣೆಯನ್ನು ನೇರವಾಗಿ ಸಮರ್ಥಿಸುತ್ತದೆ. ಸುಮಾರು 4 ಲಕ್ಷ ನಾಗರಿಕರು ರೂ.1000 ಕೋಟಿಗಳಷ್ಟು ಆಸ್ತಿತೆರಿಗೆಯನ್ನು ಪಾವತಿಸದಿರುವುದು ನಮ್ಮ ಗಮನಕ್ಕೆ ಬಂದಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಇಂದು ಮಾತನಾಡಿದ ಡಿಸಿಎಂ ಡಿಕೆ ಶಿವಕುಮಾರ್ ಇದಕ್ಕಾಗಿ ಕರ್ನಾಟಕ ಸರ್ಕಾರದ ಐತಿಹಾಸಿಕ ನಿರ್ಣಯ ತೆಗೆದುಕೊಂಡು ಒಂದು ಬಾರಿ ಪರಿಹಾರ ಯೋಜನೆಯನ್ನು ಪರಿಚಯಿಸಿದೆ. ಇದರ ಅಡಿಯಲ್ಲಿ ಆಸ್ತಿ ತೆರಿಗೆಯ ಬಾಕಿಯ ಮೇಲೆ ಪಾವತಿಸಬೇಕಾದ ಬಡ್ಡಿಯನ್ನು ಸಂಪೂರ್ಣವಾಗಿ ಮನ್ನಾ ಮಾಡಲಾಗಿದೆ ಮತ್ತು ದಂಡವನ್ನು ಅರ್ಧಕ್ಕೆ ಇಳಿಸಲಾಗಿದೆ.

ಈ ಸುವರ್ಣಾವಕಾಶವು 31ನೇ ಜುಲೈ 2024 ರಂದು ಕೊನೆಗೊಳ್ಳಲಿದೆ. ಜೀವಮಾನದಲ್ಲಿ ಒಮ್ಮೆ ಮಾತ್ರ ಈ ಯೋಜನೆಯ ಅವಕಾಶವಿದ್ದು, ಇದರ ವಿಸ್ತರಣೆ ಇರುವುದಿಲ್ಲ. ಇಲ್ಲಿಯವರೆಗೆ 4 ಲಕ್ಷ ಆಸ್ತಿವಾರಸುದಾರರ ಪೈಕಿ ಸುಮಾರು 50000 ಜನರು ಮಾತ್ರ ಈ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ.

ಈ ಅವಕಾಶವನ್ನು ಬಳಸಿಕೊಂಡು ನಿಮ್ಮ ಸ್ವತ್ತಿನ ಬಾಕಿ ಆಸ್ತಿತೆರಿಗೆಯನ್ನು ಪಾವತಿಸಬೇಕೆಂದು ಕೋರುತ್ತೇನೆ.

> ನಾಗರಿಕರು https://bbmptax.karnataka.gov.in ಮೂಲಕ ಆನ್ಲೈನ್ ನಲ್ಲಿ ಆಸ್ತಿತೆರಿಗೆಯನ್ನು ಸುಲಭವಾಗಿ ಪಾವತಿಸಬಹುದು. ಒಟಿಎಸ್ ಪ್ರಕಾರ ಆಸ್ತಿ ತೆರಿಗೆ ಬಾಕಿಗಳನ್ನು ಈಗಾಗಲೇ ಕಡಿಮೆ ಮಾಡಲಾಗಿದ್ದು, ಆಗಸ್ಟ್ 1, 2024 ರಿಂದ ಹೆಚ್ಚಾಗಲಿದೆ. ನಮ್ಮ ಬೆಂಗಳೂರು ನಗರದ ಅಭಿವೃದ್ಧಿಗಾಗಿ ಸಮಸ್ತ ನಾಗರಿಕರು ಕೈ ಜೋಡಿಸಬೇಕೆಂದು ಮನವಿ ಮಾಡುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.



> ಕರ್ನಾಟಕ ಸರ್ಕಾರವು ಬೆಂಗಳೂರು ನಗರದಲ್ಲಿ (1) ನಾಗರಿಕ ಸ್ವಯಂ ಘೋಷಣೆ ಆಧಾರಿತ ತಾತ್ಕಾಲಿಕ ಆಸ್ತಿ ತೆರಿಗೆ ಸಂಖ್ಯೆ (2) ನಾಗರಿಕ ಸ್ನೇಹಿ ಸಹಾಯ ಅಪ್ಲಿಕೇಶನ್ (3) ನಮ್ಮ ಲೇಕ್ ಮೊಬೈಲ್ ಅಪ್ಲಿಕೇಶನ್ (4) ನಮ್ಮ ಪಾರ್ಕ್ ಮೊಬೈಲ್ನಂತಹ ನಾಗರಿಕ ಸ್ನೇಹಿ ಸೇರಿದಂತೆ ಹಲವು ಹೊಸದಾದ ಉಪಕ್ರಮಗಳನ್ನು ಪರಿಚಯಿಸಿದೆ. ಈ ರೀತಿಯ ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೆ ತರಲು ನಾವು ಬದ್ಧರಾಗಿದ್ದೇವೆ.

ಬಿಬಿಎಂಪಿ ಕಾಯ್ದೆಯಲ್ಲಿ ಆಸ್ತಿತೆರಿಗೆ ಬಾಕಿ ವಸೂಲಾತಿಗೆ ಅವಕಾಶವಿದೆ. ಆದಾಗ್ಯೂ, ಒಟಿಎಸ್ ನಾಗರಿಕರಿಗೆ ಸಹಾಯ ಮಾಡಲು ನಮ್ಮ ಸರ್ಕಾರ ಮತ್ತು ಬಿಬಿಎಂಪಿಯೂ ಜೊತೆಯಾಗಿ ಕಾರ್ಯನಿರ್ವಹಿಸಲಿದೆ.

## ನಮ್ಮ ಮೆಟ್ರೊ ಹಳಿಗೆ ಹಾರಿ ಆತ್ಮಹತ್ಯೆಗೆ ಯತ್ನ ಯುವಕನನ್ನು ರಕ್ಷಿಸಿದ ಮೆಟ್ರೋ ಸಿಬ್ಬಂದಿ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ನಿಲ್ದಾಣಗಳಲ್ಲಿ ಸಾಕಷ್ಟು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದರೂ ಸಾರ್ವಜನಿಕರು ರೈಲ್ವೇ ಹಳಿಗಳ ಮೇಲೆ ಹಾರುವ ಪ್ರಕರಣಗಳು ಕಡಿಮೆಯಾಗಿಲ್ಲ. ಬಹುತೇಕ ಮೆಟ್ರೊ ನಿಲ್ದಾಣಗಳಲ್ಲಿ ಹಳಿಗಳ ಮೇಲೆ ಹಾರಲು ಸಾಧ್ಯವಾಗದಂತೆ ನಿರ್ಬಂಧ ಹೇರಲಾಗಿದೆ. ಆದರೆ ರಾತ್ರಿ ಹೊಸಹಳ್ಳಿ ಮೆಟ್ರೊ ನಿಲ್ದಾಣದಲ್ಲಿ ಯುವಕನೊಬ್ಬ ಮೆಟ್ರೋ ರೈಲಿನ ಅಡಿಗೆ ಹಾರಿ ಆತ್ಮ ಹತ್ಯೆ ಮಾಡಿಕೊಳ್ಳಲು ಪ್ರಯತ್ನ ನಡೆಸಿದ್ದಾನೆ.




ಆದರೆ ಬಿಎಂಆರ್‌ಸಿಎಲ್ ಸಿಬ್ಬಂದಿಯ ಸಮಯ ಪ್ರಜ್ಞೆಯಿಂದಾಗಿ ಆ ಯುವಕ ಪ್ರಾಣಾಪಾಯದಿಂದ ಪಾರಾಗಿದ್ದಾನೆ. ಈ ಯುವಕ ರಾತ್ರಿ 8.56ಕ್ಕೆ ರೈಲು ಬರುತ್ತಿರುವುದನ್ನು ಕಂಡು ಆತ್ಮಹತ್ಯೆ ಮಾಡಿಕೊಳ್ಳಲು ಹಾರಿದ್ದ.

ಆದರೆ ರೈಲಿನ ಕೋಚ್‌ಗೆ ತಾಗಿ ಪಕ್ಕಕ್ಕೆ ಬಿದ್ದಿದ್ದ. ಕೂಡಲೇ ಬಿಎಂಆರ್‌ಸಿಎಲ್ ಸಿಬ್ಬಂದಿ ಆತನನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದರು. ಇದರಿಂದ ರೈಲು ಸಂಚಾರವನ್ನು ಸ್ಥಗಿತಗೊಳಿಸಲಾಗಿತ್ತು ಮತ್ತು ವಿದ್ಯುತ್ ಸರಬರಾಜು ನಿಲ್ಲಿಸಲಾಗಿತ್ತು. ಮೆಜೆಸ್ಟಿಕ್ ನ ನಾಡಪ್ರಭು ಕೆಂಪೇಗೌಡ ಮೆಟ್ರೊ ನಿಲ್ದಾಣದಿಂದ ಮೈಸೂರು ರಸ್ತೆವರೆಗೆ ಮೆಟ್ರೊ ಸಂಚಾರದಲ್ಲಿ ವ್ಯತ್ಯಯ ಉಂಟಾಗಿತ್ತು. ಮೆಟ್ರೊ ರೈಲುಗಳು ಸ್ಥಗಿತಗೊಂಡಿದ್ದರಿಂದ ಪ್ರಯಾಣಿಕರು ತೊಂದರೆ ಅನುಭವಿಸಬೇಕಾಯಿತು. ಕೊನೆಗೆ ರಾತ್ರಿ 9.30ರಿಂದ ರೈಲು ಸಂಚಾರ ಎಂದಿನಂತೆ ಆರಂಭಗೊಂಡಿತು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಜೂ. 29ರಂದು ನಿವೃತ್ತ ನ್ಯಾ.ಚಂದ್ರಶೇಖರಯ್ಯಗೆ ಅಭಿನಂದನೆ


• ಉದಯವಾಹಿನಿ, ಬೆಂಗಳೂರು

ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಇದೇ ಜೂ. 29ರಂದು ಶನಿವಾರ ಸಂಜೆ 5.30ಕ್ಕೆ ನಗರದ ಅರಮನೆ ರಸ್ತೆಯಲ್ಲಿರುವ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಕೇಂದ್ರ ಕಚೇರಿಯ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಕರ್ನಾಟಕ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಚಂದ್ರಶೇಖರಯ್ಯ ಅವರಿಗೆ ಜೀವಮಾನ ಸಾಧನೆಯ ಅಭಿನಂದನಾ ಸಮಾರಂಭ ಹಾಗೂ ಮಣ್ಣಿನ ಮಕ್ಕಳ ಹೆಮ್ಮೆಯ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ, ಜಗದ್ಗುರು ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಕರ್ನಾಟಕ ಹೈಕೋರ್ಟ್ ನ್ಯಾ. ಟಿ. ಜಿ. ಶಿವಶಂಕರೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಕಂದಾಯ ಸಚಿವ ಕೃಷ್ಣಬೈರೇಗೌಡ, ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ರಾಜಸ್ಥಾನ ಐಜಿಪಿ ರಾಘವೇಂದ್ರ ಸುಹಾಸ್, ಮೈಸೂರಿನ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಸಜೀತ್ ವಿ.ಜೆ., ಡಾ.ಎನ್.ಎಸ್. ನಾಗೇಶ್ ಪಾಲ್ಗೊಳ್ಳುವರು. ವಿಶೇಷ ಅತಿಥಿಗಳಾಗಿ ಐಎಎಸ್ ಅಧಿಕಾರಿಗಳಾದ ಪ್ರದೀಪ್ ಪ್ರಭಾಕರ್, ಮಂಜುಶ್ರೀ ಎನ್. ಅವರು ಭಾಗವಹಿಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದ ಗೌಡ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸುವರು. ಇದೇ ವೇಳೆ ಯುಪಿಎಸ್‌ಸಿ ಪರೀಕ್ಷೆಯಲ್ಲಿ ತೇರ್ಗಡೆಯಾದ ನಾಗೇಂದ್ರ ಬಾಬು, ಶಶಾಂತ್ ಎನ್.ಎಂ., ಸುಮಾ ಎಚ್.ಕೆ., ನವ್ಯ ಕೆ., ಚಂದನ್ ಬಿ.ಎಸ್., ಡಾ. ವಿವೇಕ್, ಲೇಖನ್ ಎಂ., ರಕ್ಷಿತ್ ಕೆ. ಗೌಡ, ರಾಹುಲ್ ಗೌಡ ಅವರಿಗೆ ಸನ್ಮಾನ ಸಮಾರಂಭ ಏರ್ಪಡಿಸಲಾಗಿದೆ ಎಂದು ಒಕ್ಕಲಿಗ ಯುವ ಬ್ರಿಗೇಡ್ ಎನ್.ಆರ್.ಐ ಒಕ್ಕಲಿಗರ ಬ್ರಿಗೇಡ್‌ನ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ ತಿಳಿಸಿದ್ದಾರೆ.

## 10 ದಿನಗಳಲ್ಲಿ ರಾಜ್ಯದಲ್ಲಿ 80%ರಷ್ಟು ಅಧಿಕ ಮಳೆ

• ಉದಯವಾಹಿನಿ, ಬೆಂಗಳೂರು




ಈ ಬಾರಿ ರಾಜ್ಯ ಎಂದು ಕಂಡರಿಯದ ಬೇಸಿಗೆಯನ್ನು ಅನುಭವಿಸಿದೆ. ಸದ್ಯ ರಾಜ್ಯದಲ್ಲಿ ಮುಂಗಾರು ಪ್ರಾರಂಭದ ನಂತರ ಎಲ್ಲೆಡೆ ಮಳೆ ಸುರಿಯುತತಿದೆ. ರಾಜಧಾನಿಯಲ್ಲಿ ದಿನವೂ ಉತ್ತಮ ಮಳೆಯಾಗುತ್ತಿದೆ. ಮುಂಗಾರು ಆರಂಭವಾಗಿ ವಾಡಿಕೆಗಿಂತ ಕೇವಲ 10 ದಿನಗಳಲ್ಲಿ 80% ಹೆಚ್ಚುವರಿ ಮಳೆಯನ್ನು ದಾಖಲಿಸಿದೆ.

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂಗಾರಿನಲ್ಲಿ ಸಾಮಾನ್ಯ ಮಳೆ 47.6 ಮಿಲಿ ಮೀಟರ್. ಆದರೆ, ಜೂನ್ 1 ರಿಂದ ರಾಜ್ಯದಲ್ಲಿ 85.6 ಮಿಮೀ ಮಳೆಯಾಗಿದೆ. ದಕ್ಷಿಣ ಕನ್ನಡ, ಚಿಕ್ಕಮಗಳೂರು ಮತ್ತು ಕೊಡಗು ಹೊರತುಪಡಿಸಿ ಎಲ್ಲಾ ಜಿಲ್ಲೆಗಳಲ್ಲಿ ಹೆಚ್ಚಿನ ಮಳೆ ದಾಖಲಾಗಿದೆ.

ದಕ್ಷಿಣ ಕನ್ನಡದಲ್ಲಿ 26%, 3% ಚಿಕ್ಕಮಗಳೂರಿನಲ್ಲಿ ಮತ್ತು ಕೊಡಗಿನಲ್ಲಿ 30% ನಷ್ಟು ಮಳೆ ಕೊರತೆ ದಾಖಲಿಸಿದೆ. ಭಾರತೀಯ ಹವಾಮಾನ ಇಲಾಖೆಯ ಮಾಹಿತಿ ಪ್ರಕಾರ ಕರಾವಳಿ ಕರ್ನಾಟಕದಲ್ಲಿ ಶೇ.25ರಷ್ಟು ಅಧಿಕ ಮಳೆ ದಾಖಲಾಗಿದೆ. 155.6 ಮಿಮೀ ವಾಡಿಕೆ ಮಳೆಗೆ ವಿರುದ್ಧವಾಗಿ, ಈ ಪ್ರದೇಶದಲ್ಲಿ 192.4 ಮಿಮೀ ಮಳೆಯಾಗಿದೆ. ಉತ್ತರ ಒಳನಾಡಿನಲ್ಲಿ 140% ಅಧಿಕ ಮಳೆ ದಾಖಲಾಗಿದೆ. ಸಾಮಾನ್ಯ 33 ಮಿಮೀ ದಾಖಲಾಗುತ್ತಿದ್ದ ಪ್ರದೇಶದಲ್ಲಿ 79.3 ಮಿಮೀ ಮಳೆಯಾಗಿದೆ.

ದಕ್ಷಿಣ ಒಳನಾಡಿನಲ್ಲಿ 82% ಅಧಿಕ ಮಳೆ ದಾಖಲಾಗಿದೆ. ಸಾಮಾನ್ಯ 38.5 ಮಿಮೀ ಮಳೆಯಾಗುತ್ತಿದ್ದ ಪ್ರದೇಶದಲ್ಲಿ 70.2 ಮಿಮೀ ಮಳೆಯಾಗಿದೆ. ವಿಜಯಪುರದಲ್ಲಿ ಗರಿಷ್ಠ 329%, ಬೆಂಗಳೂರು ಗ್ರಾಮಾಂತರದಲ್ಲಿ 272% ಅಧಿಕ ಮಳೆ ದಾಖಲಾಗಿದೆ. ರಾಮನಗರ ಮತ್ತು ವಿಜಯನಗರದಲ್ಲಿ ಶೇ.222ರಷ್ಟು ಅಧಿಕ ಮಳೆ ದಾಖಲಾಗಿದೆ.

## ದರ್ಶನ್‌ಗೆ ಮರಣದಂಡನೆ ಶಿಕ್ಷೆಯಾಗಲಿ! ನಟಿ ರಮ್ಯಾ ಟ್ವೀಟ್

• ಉದಯವಾಹಿನಿ, ಬೆಂಗಳೂರು



ಕೊಲೆ ಪ್ರಕರಣದಲ್ಲಿ ಪೊಲೀಸರ ವಶದಲ್ಲಿರುವ ನಟ ದರ್ಶನ್‌ಗೆ ಮರಣದಂಡನೆಯಾಗಲಿ ಎಂಬ ಆಶಯವನ್ನು ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ವ್ಯಕ್ತಪಡಿಸಿದ್ದಾರೆ! ಕೊಲೆ ಪ್ರಕರಣದ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ರಮ್ಯಾ, ಐಪಿಸಿ ಸೆಕ್ಷನ್ 302ರನ್ನು ಉಲ್ಲೇಖಿಸಿ ಅದರ ಅನ್ವಯ ದರ್ಶನ್‌ಗೆ ಕಠಿಣ ಶಿಕ್ಷೆಯಾಗಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.ಕೊಲೆಯಾಗಿರುವ ವ್ಯಕ್ತಿಯ ಪರವಾಗಿ ನಿಂತಿರುವ ರಮ್ಯಾ, ದರ್ಶನ್‌ಗೆ ಇಂಡಿಯನ್ ಪಿನಲ್ ಕೋಡ್ 302ರ ಪ್ರಕಾರ ಯಾವ ಪ್ರಕಾರಣದ ಶಿಕ್ಷೆಯಾಗುತ್ತದೆ ಎಂಬ ಬಗ್ಗೆ ಟ್ವೀಟ್ ಮಾಡಿದ್ದಾರೆ. ಈ ಸೆಕ್ಷನ್ 302ರಲ್ಲಿ ಕೊಲೆ ಆರೋಪ ಸಾಬೀತಾದರೆ ಅವರಿಗೆ ಮರಣದಂಡನೆ ಅಥವಾ ಜೀವಾವಧಿ ಶಿಕ್ಷೆ ವಿಧಿಸಲಾಗುತ್ತದೆ ಎಂಬ ಮಾಹಿತಿ ಇರುವ ಪೋಸ್ಟ್ ಅನ್ನು ರಮ್ಯಾ ರೀಟ್ವೀಟ್ ಮಾಡಿದ್ದಾರೆ.

ಸೆಕ್ಷನ್ 302ರ ಅಡಿಯಲ್ಲಿ ನಟ ದರ್ಶನ್‌ಗೆ ಜೀವಾವಧಿ ಶಿಕ್ಷೆ ಅಥವಾ ಶಿಕ್ಷೆಯಾಗಬೇಕು. ಬೇರೆ ಯಾವುದೇ ಹಣದ ಪ್ರಭಾವ ಮತ್ತು ಭಾರತೀಯ ಕಾನೂನು ವ್ಯವಸ್ಥೆಯನ್ನು ಅಣಕಿಸುವಂತಾಗಬಾರದು. ಸಂತ್ರಸ್ತರ ಕುಟುಂಬಕ್ಕೆ ನ್ಯಾಯ ಸಿಗಬೇಕು ಎಂಬ ಟ್ವೀಟ್ ಅನ್ನು ರಮ್ಯಾ ಮರು ಪೋಸ್ಟ್ ಮಾಡಿದ್ದಾರೆ.

ರಮ್ಯಾ ಈ ಹಿಂದೆಯೂ ಸ್ಟಾರ್ ನಟರ ನಡವಳಿಕೆಯ ಬಗ್ಗೆ ಆಕ್ಷೇಪ ಎತ್ತಿದ್ದರು. ಹಿಂದೆ ದರ್ಶನ್‌ಗೆ ಚಪ್ಪಲಿ ಎಸೆತ ಪ್ರಕರಣ ನಡೆದಾಗ ಸ್ಪಂದಿಸಿದ್ದ ಅವರು, ಅಭಿಮಾನಿಗಳು ಹಾಗೂ ನಟರಿಗೆ ಬುದ್ಧಿ ಹೇಳಬೇಕಾಗಿದೆ ಎಂದು ಹೇಳಿದ್ದರು.

# ಸಮಯಕ್ಕೆ ಬರಲಿ ಬಸ್, ಅರ್ಧದಲ್ಲೇ ನಿಲ್ಲದೇ ಇರಲಿ

■ ಯಾವುದೇ ಸಮಸ್ಯೆ ಇಲ್ಲದೆ ತರಗತಿಗೆ ತೆರಳಲು ಸೂಕ್ತ ಬಸ್ ವ್ಯವಸ್ಥೆ ಮಾಡಬೇಕೆಂದು ವಿದ್ಯಾರ್ಥಿಗಳು ಒತ್ತಾಯ

• ಉದಯವಾಹಿನಿ, ಬೆಂಗಳೂರು




ಶಾಲೆ- ಕಾಲೇಜುಗಳು ಆರಂಭ

ಇಡೀ ವರ್ಷ ಶಾಲಾ-ಕಾಲೇಜು ವಿದ್ಯಾರ್ಥಿಗಳು ತರಗತಿಗೆ ಹೋಗಲು ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ಇಲ್ಲದೆ ಹಾಗೂ ಇರುವ ಬಸ್‌ಗಳು ಮಾರ್ಗ ಮಧ್ಯದಲ್ಲೇ ಕೆಟ್ಟು ನಿಲ್ಲುತ್ತಿದ್ದವು. ಇದರ ವಿರುದ್ಧ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಬಸ್ ತಡೆದು ಹಲವಾರು ಬಾರಿ ಪ್ರತಿಭಟನೆ ನಡೆಸಿದ್ದರು. ಈಗ ಶಾಲೆ-ಕಾಲೇಜುಗಳು ಆರಂಭವಾಗಿದೆ. ಈ ಬಾರಿಯಾದರೂ ಯಾವುದೇ ಸಮಸ್ಯೆ ಇಲ್ಲದೆ ತರಗತಿಗೆ ತೆರಳಲು ಸೂಕ್ತ ಬಸ್ ವ್ಯವಸ್ಥೆ ಮಾಡಬೇಕೆಂದು ವಿದ್ಯಾರ್ಥಿಗಳು ಒತ್ತಾಯಿಸಿದ್ದಾರೆ.

ತಾಲ್ಲೂಕಿನ ವಿವಿಧ ಹಳ್ಳಿ, ನಗರದಿಂದ ಉನ್ನತ ಶಿಕ್ಷಣಕ್ಕೆ ಬೆಂಗಳೂರಿನ ಕಾಲೇಜುಗಳಿಗೆ ಹೋಗಲು ಬೆಳಗ್ಗೆ ಬಸ್ ಸರಿಯಾದ ಸಮಯಕ್ಕೆ ಬರುತ್ತಿರಲಿಲ್ಲ. ಬರುವ ಒಂದೆರಡು ಬಸ್ ಜನರಿಂದ ತುಂಬಿರುತ್ತಿತು. ಇದರಿಂದ ಬೇಸತ್ತಿದ್ದ ವಿದ್ಯಾರ್ಥಿಗಳು ಸಾರಿಗೆ ವ್ಯವಸ್ಥೆ ಸಿಡಿದಿದ್ದರು. ಬಸ್‌ಗಳನ್ನು ತಡೆದು, ಬಸ್ ನಿಲ್ದಾಣ ಮತ್ತು ಡಿಪೊದಲ್ಲಿದಲ್ಲಿ ಪ್ರತಿಭಟನೆ ನಡೆಸಿದ್ದರು.

ಇದರ ಫಲವಾಗಿ ಸಂದರ್ಭದಲ್ಲಿ ಶಾಸಕರು ಹಾಗೂ ಕೆಎಸ್‌ಆರ್‌ಟಿಸಿ ಜಿಲ್ಲಾಧಿಕಾರಿ ಬಸ್ ನಿಲ್ದಾಣದಲ್ಲೇ ವಿದ್ಯಾರ್ಥಿಗಳೊಂದಿಗೆ ಸಭೆ ನಡೆಸಿದ್ದರು. ಅದರೂ ಕೆಎಸ್‌ಆರ್‌ಟಿಸಿ ಬಸ್ ಸಂಚಾರಿ ವ್ಯವಸ್ಥೆ ಮಾತ್ರ ಇಡೀ ವರ್ಷ ಸರಿದಾರಿಗೆ ಬರಲೇ ಇಲ್ಲ. 2024-25ನೇ ಸಾಲಿನ ಶೈಕ್ಷಣಿಕ ವರ್ಷ ಈಗಷ್ಟೆ ಪ್ರಾರಂಭವಾಗಿದ್ದು, ಶಾ-ಕಾಲೇಜುಗಳಲ್ಲಿ ತರಗತಿ ನಡೆಯುತ್ತಿವೆ.

ಈ ಸಾಲಿನ ಶೈಕ್ಷಣಿಕ ವರ್ಷದಲ್ಲಾದರೂ ವಿದ್ಯಾರ್ಥಿಗಳು ಸುಗಮವಾಗಿ ಶಾಲೆ-ಕಾಲೇಜಿಗೆ ಹೋಗಿ ಬರುವಂತಾಗಲಿದೆಯೆ ಎನ್ನುವ ಪ್ರಶ್ನೆ ಪೋಷಕರು ಹಾಗೂ ವಿದ್ಯಾರ್ಥಿಗಳನ್ನು ಕಾಡುತ್ತಿದೆ. ಸಾಸಲು ಹೋಬಳಿ ಹಾಗೂ ತೂಬಗೆರೆ ಹೋಬಳಿಯಲ್ಲಿ ಬಸ್ ಸಮಸ್ಯೆ ಹೆಚ್ಚಾಗಿದೆ. ತಾಲ್ಲೂಕು ಕೇಂದ್ರದಿಂದ ಸುಮಾರು 28 ಕಿ.ಮೀ ದೂರದ ಸಾಸಲು ಹೋಬಳಿಯಲ್ಲಿ ಪ್ರೌಢ ಶಾಲೆ ನಂತರ ಶಿಕ್ಷಣ ಮುಂದುವರೆಸಲು ಯಾವುದೇ ರೀತಿಯ ಶೈಕ್ಷಣಿಕ ಸಂಸ್ಥೆಗಳು ಇಲ್ಲ. ಹೆಚ್ಚಿನ ಶಿಕ್ಷಣ ಪಡೆಯಲು ನಗರಕ್ಕೆ ಬರಬೇಕು ಅಥವಾ ಬೇರೆ ಕಡೆ ಹೋಗುವುದು ಅನಿವಾರ್ಯ. ತೂಬಗೆರೆ ಹೋಬಳಿ ಕೇಂದ್ರದಲ್ಲಾದರೂ ಸರ್ಕಾರಿ ಪದವಿ ಪೂರ್ವ ಕಾಲೇಜು ಇದೆ. ಆದರೆ ಸಾಸಲು ಹೋಬಳಿಯ ವಿದ್ಯಾರ್ಥಿಗಳಿಗೆ ಈ ಸೌಲಭ್ಯ ಇಲ್ಲ. ಹೀಗಾಗಿ ಇವರೆಲ್ಲ ಸರ್ಕಾರಿ ಬಸ್‌ನ್ನೆ ಅವಲಂಭಿಸಿದ್ದಾರೆ.

ಸಾಸಲು ಹೋಬಳಿಯಲ್ಲಿ ಖಾಸಗಿ ಬಸ್‌ಗಳ ಸಂಚಾರವು ವಿರಳ. ಕಾಲೇಜುಗಳಿಗೆ ಬರುವ ವಿದ್ಯಾರ್ಥಿಗಳು ಬಸ್ ಇಲ್ಲದೆ ಹೋದರೆ ದುಬಾರಿ ಹಣ ತೆತ್ತು ಆಟೊದಲ್ಲಿ ಬರಬೇಕು. ಇಲ್ಲವೆ ಕಾಲೇಜು ಶಿಕ್ಷಣ ನಿಲ್ಲಿಸಬೇಕು, ಬೇರೆ ಮಾರ್ಗವೇ ಇಲ್ಲ. 2020ರ ಕೋವಿಡ್ ಲಾಕ್‌ಡೌನ್‌ಗೂ ಹಿಂದೆ ಬಸ್ ಸೌಲಭ್ಯಗಳ ಸಮಸ್ಯೆ ಅಷ್ಟಾಗಿ ಇರಲಿಲ್ಲ. ಆದರೆ ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ಸಾಸಲು ಹಾಗೂ ತೂಬಗೆರೆ ಹೋಬಳಿಯ ವಿವಿಧ ಗ್ರಾಮಗಳ ಮೂಲಕ ಸಂಚರಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರ ರದ್ದಾದ ನಂತರ ಬಹುತೇಕ ಮಾರ್ಗಗಳಲ್ಲಿ ಬಸ್‌ಗಳ ಸಂಚಾರ ಪುನಾರಂಭವಾಗಿಯೇ ಇಲ್ಲ ಎನ್ನುತ್ತಾರೆ ಸ್ಥಳೀಯರು.

> ಶಾಲಾ-ಕಾಲೇಜು ಸಮಯಕ್ಕೆ ಹೋದಾಣಿಕೆ ಆಗುವಂತೆ ಬೆಳಿಗ್ಗೆ ಮತ್ತು ಸಂಜೆ ವೇಳೆ ಬಸ್ ಸೌಲಭ್ಯ ಅತ್ಯಗತ್ಯ ಇರುವ ಮಾರ್ಗಳೆಂದರೆ ತಾಲ್ಲೂಕು ಕೇಂದ್ರದ ಗಡಿ ಭಾಗದ ಸಾಸಲು ಹೋಬಳಿಯ ಮಂಚೇನಹಳ್ಳಿ ಶ್ರೀರಾಮನಹಳ್ಳಿಆರೂಢಿ ಅಮಲಗುಂಟೆ ಹೊಸಕೋಟೆ ಗುಂಡಮಗೆರೆ ತೂಬಗೆರೆ ಹೋಬಳಿಯ ಲಗುಮೇನಹಳ್ಳಿ ಸಾಧುಮಠ ಎಸ್.ನಾಗೇನಹಳ್ಳಿ ಮೇಳೆಕೋಟೆ ದೊಡ್ಡಬೆಳವಂಗಲ ಹೋಬಳಿಯ ಕನಕೇನಹಳ್ಳಿ ಕಾಡತಿಪ್ಪೂರು ಭಕ್ತರಹಳ್ಳಿ ಕಾಮನ ಅಗ್ರಹಾರ ಮಧುರೆ ಹೋಬಳಿ ಹೊನ್ನಾವಾರ ಪುರುಷನಹಳ್ಳಿ ರಾಮದೇವನಹಳ್ಳಿ ಕುಕ್ಕನಹಳ್ಳಿ ಕಾಡನೂರು.ಇಲ್ಲಿ ಬಸ್ ಜರೂರಾಗಿಬೇಕು -ರಶ್ಮಿತಾ

> ಬಸ್ ಇಲ್ಲದ ಸಮಯದಲ್ಲಿ ಗಂಡುಮಕ್ಕಳು ಆಟೊಗಳಲ್ಲಿ ಬರುತ್ತಾರೆ. ಆದರೆ ಹೆಣ್ಣು ಮಕ್ಕಳು ಆಟೊಗಳಲ್ಲಿ ಒಬ್ಬರ ಮೇಲೆ ಒಬ್ಬರು ಕುಳಿತುಕೊಂಡು ಬರುವುದು ಕಷ್ಟ. ಬಸ್ ವಿಳಂಬವಾದ ಬಹುತೇಕ ಸಮಯದಲ್ಲಿ ಮೊದಲ ತರಗತಿಗಳಿಗೆ ತಪ್ಪಿಸಿಕೊಳ್ಳೂವುದು ಅನಿವಾರ್ಯವಾಗಿತ್ತು. ಈ ವರ್ಷದ ಕಾಲೇಜು ದಿಗಳಲ್ಲಾದರು ಮೊದಲ ತರಗತಿಯ ಪಾಠ ಕೇಳುವಂತಾಗಬೇಕು.
> -ರಶ್ಮಿತಾ ಕೊನೆಘಟ್ಟ ಕಾಲೇಜು ವಿದ್ಯಾರ್ಥಿನಿ

# ಕೆಡಿಪಿ ಪ್ರಗತಿ ಪರಿಶೀಲನೆ ಕಾರ್ಯ ಕಡೆಗಣನೆ?

## • ಸಂಬಂಧಿಸಿದ ಅಧಿಕಾರಿಗಳ ನಿಷ್ಕಾಳಜಿ, ಸಚಿವರು ಸೇರಿದಂತೆ ಜನಪ್ರತಿನಿಧಿಗಳ ಇಚ್ಛಾಶಕ್ತಿಯ ಕೊರತೆ

• **ಉದಯವಾಹಿನಿ ಮೈಸೂರು**

ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ (ಕೆಡಿಪಿ)ಗಳ ಪ್ರಗತಿ ಪರಿಶೀಲನಾ ಕಾರ್ಯ ಜಿಲ್ಲೆಯಲ್ಲಿ ನಿಯಮಿತವಾಗಿ ನಡೆದಿಲ್ಲ. ಈ ಪರಿಣಾಮ, ಅಧಿಕಾರಿಗಳಿಗೆ ಚುರುಕು ಮುಟ್ಟಿಸಿ ಯೋಜನೆಗಳ ಅನುಷ್ಠಾನಕ್ಕೆ ವೇಗ ನೀಡುವ ಕಾರ್ಯಕ್ಕೆ ಹಿನ್ನಡೆಯಾಗಿದೆ.

ಸಂಬಂಧಿಸಿದ ಅಧಿಕಾರಿಗಳ ನಿಷ್ಕಾಳಜಿ, ಸಚಿವರು ಸೇರಿದಂತೆ ಜನಪ್ರತಿನಿಧಿಗಳ ಇಚ್ಛಾಶಕ್ತಿಯ ಕೊರತೆ ಹಾಗೂ ಚುನಾಯಿತ ಜನಪ್ರತಿನಿಧಿಗಳು ಚುನಾವಣಾ ರಾಜಕೀಯಕ್ಕೆ ಹೆಚ್ಚಿನ ಆದ್ಯತೆ ನೀಡಿದ ಕಾರಣದಿಂದಾಗಿ ಪ್ರಗತಿ ಪರಿಶೀಲನೆ ಕಾರ್ಯ ಕಡೆಗಣನೆಗೆ ಒಳಗಾಗಿದೆ' ಎಂದು ಹೇಳಲಾಗುತ್ತಿದೆ.

ಕೆಡಿಪಿ ಸಭೆಯನ್ನು ಪ್ರತಿ ಮೂರು ತಿಂಗಳಿಗೊಮ್ಮೆ ನಡೆಸಬೇಕು, ಇಲಾಖಾವಾರು ಪ್ರಗತಿ ಪರಿಶೀಲನೆ ಆಗಬೇಕು ಎನ್ನುವುದು ನಿಯಮ. ಸರ್ಕಾರಿ ಇಲಾಖೆಗಳ ಜಿಲ್ಲಾ ಮಟ್ಟದ ಅಥವಾ ಸಂಬಂಧಿಸಿದ ಅಧಿಕಾರಿ ಗಳನ್ನು ಕರೆದು, ಅಭಿವೃದ್ಧಿ ಕಾರ್ಯಕ್ರಮಗಳ ಸ್ಥಿತಿ ಗತಿ ಏನಾಗಿದೆ, ಅನುದಾನ ಬಂದಿದೆಯೇ ಇಲ್ಲವೇ, ನೀಡಿದ ಹಣ ಖರ್ಚಾಗಿದೆಯೇ, ಬಳಕೆ ಆಗದಿರಲು ಕಾರಣವೇನು, ಯೋಜನೆಗಳ ಅನುಷ್ಠಾನಕ್ಕೆ ಎದುರಾಗಿರುವ ಸಮಸ್ಯೆಗಳೇನು ಎಂಬುದನ್ನು ತಿಳಿದುಕೊಳ್ಳುವ ಉದ್ದೇಶದಿಂದ ಸಭೆಯನ್ನು ನಡೆಸಲಾಗುತ್ತದೆ. ಶಾಸಕರು, ವಿಧಾನ ಪರಿಷತ್ ಸದಸ್ಯರು ಮೊದಲಾದ ಜನಪ್ರತಿನಿಧಿಗಳು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ವೇದಿಕೆಯೂ ಹೌದು. ಇದಕ್ಕೆ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸಲಾಗಿದೆ. ಕಾಂಗ್ರೆಸ್ ಸರ್ಕಾರ ರಚನೆಯಾದ ನಂತರ, ಹೋದ ವರ್ಷದ ಜೂನ್ 12ರಂದು ಸರ್ಕಾರಿ ಅತಿಥಿ ಗೃಹದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿದ್ದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅವರು, ಕೆಡಿಪಿ ಸಭೆಯನ್ನು ನಿಯಮಿತವಾಗಿ ನಡೆಸದೇ ಇದ್ದಿದ್ದಕ್ಕೆ ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ. ಗಾಯತ್ರಿ ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು.

ಲೋಕಸಭೆ ಚುನಾವಣೆ ಮಾದರಿ ನೀತಿ ಸಂಹಿತೆ ಜಾರಿಯಾದ ಕಾರಣದಿಂದಲೂ, ಸಚಿವರು ಸಭೆ ನಡೆಸಲಾಗಲಿಲ್ಲ. ಇಡೀ ಆಡಳಿತ ವ್ಯವಸ್ಥೆ ಚುನಾವಣಾ ಕಾರ್ಯಕ್ಕೇ ಹೆಚ್ಚಿನ ಆದ್ಯತೆ ನೀಡಿತ್ತು. ಜೂನ್ 6ರಂದು ಮಾದರಿ ನೀತಿಸಂಹಿತೆ ತೆರವಾಗಿದೆ. ಇನ್ನಾದರೂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಮತ್ತು ಸಾರ್ವಜನಿಕರ ಅಹವಾಲುಗಳನ್ನು ಆಲಿಸಲು ಆದ್ಯತೆ ನೀಡಬೇಕು. ಆಡಳಿತಕ್ಕೆ ಚುರುಕು ಮುಟ್ಟಿಸಬೇಕು' ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ. ನಿಮ್ಮ ನಡವಳಿಕೆಯಲ್ಲಿ ಸುಧಾರಣೆ ಕಾಣದಿದ್ದರೆ ನೀವ್ಯಾರೂ ಇಲ್ಲಿರುವುದಿಲ್ಲ. ವರ್ಗಾವಣೆ ಮಾಡಿದರೆ ಕೆಓಟಿಗೆ ಹೋಗುತ್ತೇವೆ ಎಂದರೆ ಅಂಥವರಿಗೆ ಹೇಗೆ ಪಾಠ ಕಲಿಸಬೇಕು ಎಂಬುದೂ ನನಗೆ ಗೊತ್ತಿದೆ. ಕನಿಷ್ಠ ಮೂರು ತಿಂಗಳಿಗೊಮ್ಮೆ ಜನಸಂಪರ್ಕ ಸಭೆ ನಡೆಸಿ ಜನರ ಸಮಸ್ಯೆ ಆಲಿಸಿ ಪರಿಹಾರ ಕಲ್ಪಿಸಬೇಕು' ಎಂದು ತಾಕೀತು ಮಾಡಿದ್ದರು. ಇದು ಕೂಡ ಅನುಷ್ಠಾನಕ್ಕೆ ಬಂದಿಲ್ಲ.

### ಅಭಿವೃದ್ಧಿಯ ಮೇಲೆ ಗ್ರಹಣ

**ಅದಾಗಿ 10 ತಿಂಗಳಾದರೂ ಶಾಸಕರು ಸೇರಿದಂತೆ ಎಲ್ಲಾ ಜನಪ್ರತಿನಿಧಿಗಳನ್ನೂ ಕರೆದು ಪ್ರಗತಿ ಪರಿಶೀಲಿಸುವ ಕೆಲಸವೇ ಆಗಿಲ್ಲ, ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಚುರುಕು ಮುಟ್ಟಿಸುವ ಹಾಗೂ ಸಮಸ್ಯೆಗಳಿದ್ದರೆ ಪರಿಹರಿಸುವ ನಿಟ್ಟಿನಲ್ಲಿ ಪ್ರಯತ್ನ ಆಗಿಲ್ಲ. ಕೆಡಿಪಿ ಸಭೆ ನಿಯಮಿತವಾಗಿ ನಡೆಯದೇ ಅಭಿವೃದ್ಧಿಯ ಮೇಲೆ ಗ್ರಹಣ ಬಡಿದಂತಾಗಿದೆ ಎಂಬುದು ಸಾರ್ವಜನಿಕರ ಅಸಮಾಧಾನವಾಗಿದೆ.**



**ಜಿಲ್ಲಾ ಮಟ್ಟದ ಕೆಡಿಪಿ ಸಭೆಯನ್ನು ನಿಯಮಿತವಾಗಿ ನಡೆಸಿದರೆ ಹಲವು ಸಮಸ್ಯೆಗಳು ಬಗೆಹರಿಯುತ್ತವೆ. ಆ ನಿಟ್ಟಿನಲ್ಲಿ ಗಮನಹರಿಸಬೇಕು.**
**-ಜಿ.ಟಿ. ದೇವೇಗೌಡ,** ಶಾಸಕ

**ರಾಜ್ಯ ಸರ್ಕಾರದಿಂದ ಅನುದಾನವನ್ನೇ ಕೊಡುತ್ತಿಲ್ಲ. ಹೀಗಾಗಿ ಅಭಿವೃದ್ಧಿ ಕಾರ್ಯಕ್ರಮಗಳೇ ಆಗುತ್ತಿಲ್ಲ. ಅನುದಾನವನ್ನೂ ಒದಗಿಸಬೇಕು. ಕೆಡಿಪಿ ಸಭೆಯನ್ನು ನಿಯಮಿತವಾಗಿ ನಡೆಸಬೇಕು.6 ತಿಂಗಳ ನಂತರ ನಡೆಸುವೆ ಎಂದಿದ್ದ ಸಿಎಂ**
**- ಟಿ.ಎಸ್. ಶ್ರೀವತ್ಸ,** ಶಾಸಕಜಿಲ್ಲಾ ಉಸ್ತುವಾರಿ ಸಚಿವರು

### ಅಧಿಕಾರಿಗಳು ಸ್ಪಂದಿಸುವುದಿಲ್ಲ

**ಹೋದ ವರ್ಷ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಡೆಸಿದ್ದ ಕೆಡಿಪಿ ಸಭೆಯಲ್ಲಿ ಕೆಲವು ವಿಷಯಗಳನ್ನು ಪ್ರಸ್ತಾಪಿಸಿದ್ದೆ. ಆ ಪೈಕಿ ಲಲಿತಾದ್ರಿಪುರ ಆಶ್ರಯ ಯೋಜನೆಯ ಸಮಸ್ಯೆ ಬಗೆಹರಿಯಿತು. ಮೂರು ತಿಂಗಳಿಗೊಮ್ಮೆ ಸಭೆ ನಡೆದರೆ ನಮ್ಮ ಸಮಸ್ಯೆಗಳು ಬಹಗೆಹರಿಯುತ್ತವೆ. ಇಲ್ಲದಿದ್ದರೆ ಅಧಿಕಾರಿಗಳು ಸ್ಪಂದಿಸುವುದಿಲ್ಲ. ಅನೇಕ ಸಮಸ್ಯೆಗಳು ಹಾಗೆಯೇ ಉಳಿದಿವೆ' ಎಂದು ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಪ್ರತಿಕ್ರಿಯಿಸಿದರು.**

---

## ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ: ಬೈಲಾಂಜನೇಯ

• **ಉದಯವಾಹಿನಿ, ಶಿಡ್ಲಘಟ್ಟ**

ವ್ಯಕ್ತಿಯ ಜೀವನ ಶೈಲಿಯನ್ನು ಸುಧಾರಿಸಿ, ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಣ ಬಹುಮುಖ್ಯ ಪಾತ್ರ ವಹಿಸುತ್ತದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ಕೊಡುವ ಜವಾಬ್ದಾರಿ ಸರ್ಕಾರದಾಗಿರುತ್ತದೆ ಎಂದು ಎಂದು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬೈಲಾಂಜನೇಯ ಹೇಳಿದರು.

ಶಿಡ್ಲಘಟ್ಟ ತಾಲ್ಲೂಕು ಅಂಕತಟ್ಟಿ ಗೇಟ್ ಬಳಿ ಆಕ್ಸ್‌ಫರ್ಡ್ ಶಾಲೆಯ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು ಕೆಲವೊಮ್ಮೆ ಗ್ರಾಮೀಣ ಭಾಗಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಸಂಘ ಸಂಸ್ಥೆಗಳು ಹಾಗೂ ಟ್ರಸ್ಟ್‌ಗಳು ಮುಂದೆ ಬರುತ್ತವೆ, ಶಾಲೆಗಳು ನಿರ್ಮಿಸುವುದು ಸುಲಭದ ಮಾತಲ್ಲ.

ಮಕ್ಕಳಿಗೆ ಬೇಕಾಗುವ ಮೂಲ ಭೂತ ಸೌಕರ್ಯಗಳನ್ನು ಒದಗಿಸಿ ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಲು ಆಕ್ಸ್‌ಫರ್ಡ್ ಶಾಲೆ ಮುಂದಾಗಿರುವುದು ಶ್ಲಾಘನೀಯ ಎಂದರು. ಶಾಲೆಗಳಿಗೆ ಪೋಷಕರು ತಮ್ಮ ಮಕ್ಕಳನ್ನು ಕಳಿಸುವುದರ ಜೊತೆಗೆ ಜವಾಬ್ದಾರಿಯು ಸಹ ಬಹಳಷ್ಟಿರುತ್ತದೆ. ಅವರು ಕಾಲಕ್ಕೆ ಕಾಲಕ್ಕೆ ಆಡಳಿತ ಮಂಡಳಿ ಹಾಗೂ ಶಿಕ್ಷಕರ ಜೊತೆ ಸಂಪರ್ಕದಲ್ಲಿದ್ದು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗಬೇಕು ಎಂದರು. ತಂದೆ ತಾಯಿಗಳು ಮಕ್ಕಳಿಗೆ ಆಸ್ತಿ ಮಾಡುವ ಬದಲು ಉತ್ತಮ ಶಿಕ್ಷಣವನ್ನ ನೀಡಿ ದೇಶದ ಸತ್ಪ್ರಜೆಗಳಾಗಿ ಮಾಡುವುದು ಅವರ ಕರ್ತವ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸಿಪಿ ನರೇಂದ್ರ, ಕುಮಾರ್ ತಾಲ್ಲೂಕು ಖಾಸಗಿ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ ಅಧ್ಯಕ್ಷ ವಿಸ್ಡಂ ನಾಗರಾಜ್, ಸಮಾಜ ಸೇವಕ ಬಿದರಹಳ್ಳಿ ನಾಗರಾಜ್, ಆಕ್ಸ್‌ಫರ್ಡ್ ಶಾಲೆಯ ಮುಖ್ಯಸ್ಥ ಕೆಪಿ ಪ್ರಕಾಶ್, ವಿನುತಾ ಪ್ರಕಾಶ್, ಮುಖ್ಯ ಶಿಕ್ಷಕಿ ಮೇರಿಸೆಲ್ವಿ, ಶಿಕ್ಷಕಿಯರಾದ ಅನುಪಮಾ, ರಶ್ಮಿ ಹಾಗೂ ಲಲಿತ ಸೇರಿದಂತೆ ಪೋಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಗ್ರಾಮೀಣ ಭಾಗದ ಈ ಶಾಲೆಯಲ್ಲಿ ಬೋಧನಾ ಶುಲ್ಕ ಕಡಿಮೆಯಾಗಿದ್ದು ಗ್ರಾಮೀಣ ಭಾಗದ ಪ್ರತಿಯೊಬ್ಬರೂ ಆಂಗ್ಲ ಮಾಧ್ಯಮದ ಗುಣಮಟ್ಟದ ಶಿಕ್ಷಣವನ್ನ ಪಡೆಯಬಹುದು. ಆಡಳಿತ ಮಂಡಳಿಯವರು ಹಾಗೂ ಶಿಕ್ಷಕರು ಪಠ್ಯದ ಜೊತೆ ಪಠ್ಯೇತರ ಚಟುವಟಿಕೆಗಳಿಗೆ ಒತ್ತು ನೀಡಬೇಕು** **-ಎಸ್. ರಘುನಾಥ ರೆಡ್ಡಿ** ನಿವೃತ್ತ ಉಪನಿರ್ದೇಶಕ

---

## ಜಿಲ್ಲೆಯಲ್ಲಿ ಬಿಜೆಪಿ ಸಂಸದರೂ ಇಲ್ಲ, ಶಾಸಕರೂ ಇಲ್ಲ

• **ಉದಯವಾಹಿನಿ, ಕೋಲಾರ**

ಮೈತ್ರಿ ಧರ್ಮ ಪಾಲನೆಗಾಗಿ ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಕೋಲಾರ ಮೀಸಲು ಕ್ಷೇತ್ರದ ಟಿಕೆಟ್ ಅನ್ನು ಜೆಡಿಎಸ್‌ಗಾಗಿ ತ್ಯಾಗ ಮಾಡಿದ್ದ ಬಿಜೆಪಿಗೆ ಈಗ ಕೋಲಾರ ಜಿಲ್ಲೆಯಲ್ಲಿ ಪ್ರಾತಿನಿಧ್ಯವೇ ಇಲ್ಲದೆ ಅಸ್ತಿತ್ವ ಕಳೆದುಕೊಳ್ಳುವ ಭಯ ಮೂಡಲಾರಂಭಿಸಿದೆ.ಇಡೀ ಜಿಲ್ಲೆಯಲ್ಲಿ ಈಗ ಬಿಜೆಪಿಯ ಒಬ್ಬ ಶಾಸಕನೂ ಇಲ್ಲ, ಸಂಸದರೂ ಇಲ್ಲ. ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ ಸದಸ್ಯರಾಗಿದ್ದ ಜಿಲ್ಲೆಯ ವೈ.ಎ. ನಾರಾಯಣಸ್ವಾಮಿ ಕೂಡ ಈ ಬಾರಿ ಸೋಲು ಕಂಡಿದ್ದಾರೆ. 2028ರ ವಿಧಾನಸಭೆ ಚುನಾವಣೆ ನಡೆಯುವವರೆಗೆ ಜಿಲ್ಲೆಯಲ್ಲಿ ಇದೇ ಪರಿಸ್ಥಿತಿ ಇರಲಿದೆ.

ಸಹಜವಾಗಿಯೇ ಈ ಕ್ಷೇತ್ರದಲ್ಲಿ ತಮ್ಮ ಅಸ್ತಿತ್ವಕ್ಕೆ ಧಕ್ಕೆ ಆಗಬಹುದೆಂಬ ಚಿಂತೆ ಸ್ಥಳೀಯ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರನ್ನು ಕಾಡುತ್ತಿದೆ. ಪಕ್ಷ ಸಂಘಟನೆ ಹೇಗೆ, ಮುಂದಾಳತ್ವ ವಹಿಸುವವರು ಯಾರು, ಕಾರ್ಯಕರ್ತರ ನೋವು ಕೇಳುವವರಾರು ಎಂಬ ಆತಂಕ ಹಲವರಲ್ಲಿ ಮನೆ ಮಾಡಿದೆ.

ಈ ಬಾರಿ ಕೋಲಾರ ಲೋಕಸಭೆ ಕ್ಷೇತ್ರದಲ್ಲಿ ಮೈತ್ರಿ ಬಲದಿಂದ ಎಂ.ಮಲ್ಲೇಶ್ ಬಾಬು ಗೆದ್ದಿದ್ದಾರೆ. ಆದರೆ, ಅವರು ವಾಸ್ತವವಾಗಿ ಜೆಡಿಎಸ್ ಸಂಸದ. ಸಹಜವಾಗಿ ಅದು ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರಿಗೆ ಹೆಚ್ಚು ಖುಷಿ ತಂದಿದೆ. ಪಕ್ಷ ಸಂಘಟನೆ ಪುಷ್ಟಿ ನೀಡಿದೆ. ಗೆಲುವಿನಲ್ಲಿ ಒಂದು ಭಾಗವಾಗಿದ್ದರೂ ಪಕ್ಷ ಸಂಘಟನೆ ವಿಚಾರದಲ್ಲಿ ಅದೇ ಮಾತನ್ನು ಬಿಜೆಪಿಗೆ ಹೇಳಲಾಗದು.



ಉದಯವಾಹಿನಿ ಚಿತ್ರ

**ಅಸ್ತಿತ್ವ ಕಳೆದುಕೊಳ್ಳುವ ಭಯ**

---

## ಮೂಲಸೌಕರ್ಯ ಒದಗಿಸುವುದು ಮೊದಲ ಆದ್ಯತೆ

• **ಉದಯವಾಹಿನಿ, ಕೊರಟಗೆರೆ**

ಗ್ರಾಮೀಣ ಭಾಗದ ಹೆಣ್ಣು ಮಕ್ಕಳಿಗೆ ಮೂಲಸೌಕರ್ಯಗಳನ್ನು ಒದಗಿಸುವುದು ಮೊದಲ ಆದ್ಯತೆಯಾಗಿದೆ. ಹೆಣ್ಣು ಮಕ್ಕಳು ವಿದ್ಯಾವಂತರಾಗಿ, ಆರೋಗ್ಯವಂತರಾಗಿ ಮೌಢ್ಯ ರಹಿತ ಸಮಾಜದಲ್ಲಿ ಸಂತೋಷದಿಂದ ಬದುಕಬೇಕು ಎಂಬುದೇ ಆಯೋಗದ ಆಶಯವಾಗಿದೆ. ಎಂದು ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ತಿಳಿಸಿದರು.

ತಾಲ್ಲೂಕಿನ ತೋವಿನಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಿಸಾಡಿಹಟ್ಟಿ ಗ್ರಾಮದಲ್ಲಿ ಸೋಮವಾರ ಮೌಢ್ಯಾಚರಣೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮಹಿಳೆಯರಿಗೆ ಕುಡಿಯುವ ನೀರು ಮತ್ತು ಶೌಚಾಲಯ ಅತಿ ಮುಖ್ಯ. ಶುದ್ಧ ಕುಡಿಯುವ ನೀರು ಮತ್ತು ಸ್ವಚ್ಛ ಶೌಚಾಲಯದ ವ್ಯವಸ್ಥೆಯಿದ್ದಲ್ಲಿ ಗ್ರಾಮೀಣ ಭಾಗದ ಮಹಿಳೆಯರು ನೆಮ್ಮದಿಯಿಂದ ಇರಲು ಸಾಧ್ಯ ಎಂದು ಹೇಳಿದರು.

ರಾಜ್ಯ ಸರ್ಕಾರವು ಬಾಣಂತಿ ಮತ್ತು ಮಗುವಿಗಾಗಿ, ಕೃಷ್ಣ ಕುಟೀರ ನಿರ್ಮಿಸಿದ್ದು .ಈ ಕುಟೀರದಲ್ಲಿ ಬಾಣಂತಿಯರಿಗೆ ಅಗತ್ಯವಾದ ಬಿಸಿನೀರು, ಶುದ್ಧ ಕುಡಿಯುವ ನೀರು ಮತ್ತು ಇತರೆ ಮೂಲ ಸೌಕರ್ಯಗಳು ಹೆಚ್ಚು ಹೆಚ್ಚು ದೊರೆಯಬೇಕು, ಈ ವಿಷಯವನ್ನು ತಾವು ಸರ್ಕಾರದ ಗಮನಕ್ಕೆ ತರುವುದಾಗಿ ಅವರು ತಿಳಿಸಿದರು.



ಉದಯವಾಹಿನಿ ಚಿತ್ರ

---

## ಕ್ರೀಡೆಗಳಿಂದ ಮಾನಸಿಕ ಮತ್ತು ದೈಹಿಕ ಸಧೃಡತೆ ಸಾಧ್ಯ : ರುದ್ರೇಶಮೂರ್ತಿ

• **ಉದಯವಾಹಿನಿ, ಶಿಡ್ಲಘಟ್ಟ**

ನಿಯಮಿತವಾದ ಕ್ರೀಡೆ, ಧ್ಯಾನ, ಯೋಗಾಭ್ಯಾಸದಿಂದ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು, ವಿದ್ಯಾರ್ಥಿಗಳು ಪಾಠದ ಜೊತೆಗೆ ಸಹಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಯೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಮುಖ್ಯಶಿಕ್ಷಕ ಎಚ್.ಎಸ್.ರುದ್ರೇಶಮೂರ್ತಿ ತಿಳಿಸಿದರು.

ತಾಲ್ಲೂಕಿನ ಸುಗಟೂರು ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜೆ.ವೆಂಕಟಾಪುರ ಗ್ರಾಮಪಂಚಾಯಿತಿ ವತಿಯಿಂದ ಅಂತರಾಷ್ಟ್ರೀಯ ಆಟದ ದಿನದ ಅಂಗವಾಗಿ ಮಕ್ಕಳಿಗಾಗಿ ಹಮ್ಮಿಕೊಂಡಿದ್ದ ವಿವಿಧ ಕ್ರೀಡಾ ಚಟುವಟಿಕೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗ್ರಾಮಪಂಚಾಯಿತಿ ಕಾರ್ಯದರ್ಶಿ ವೆಂಕಟರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಸಾಮಾಜಿಕ ಜಾಲ ತಾಣಗಳ ಪ್ರಭಾವ, ಮೊಬೈಲ್‌ಫೋನ್‌ಗಳ ಚಟಗಳಿಗೆ ಬೀಳುವುದರಿಂದ ಗ್ರಾಮೀಣ ಕ್ರೀಡೆಗಳನ್ನು ಮರೆಯುತ್ತಿದ್ದಾರೆ. ಸಾಮಾಜಿಕ ಜಾಲತಾಣ ಹಾಗೂ ಮೊಬೈಲ್‌ಗೆ ನೀಡುವ ಸಮಯವನ್ನು ಸದ್ಬಳಕೆ, ಸರ್ವತೋಮುಖ ಪ್ರಗತಿಗಾಗಿ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು. ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪೋಷಕರ ಮೇಲಿದೆ. ಕಲೆ, ಸಂಗೀತ, ಕ್ರೀಡೆಗಳಂತಹ ಕ್ಷೇತ್ರಗಳಲ್ಲಿ ಹೆಚ್ಚು ಸಾಧನೆ ಮಾಡಲು ಅವಕಾಶಗಳಿದ್ದು ಅವುಗಳನ್ನು ಬಳಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳಿಗಾಗಿ ಕಬಡ್ಡಿ, ಕ್ರಿಕೆಟ್, ಖೋಖೋ, ಸಂಗೀತಕುರ್ಚಿ, ಕಪ್ಪೆಓಟ, ನಿಂಬೆಹಣ್ಣು ಸ್ಪೂನ್ ಮತ್ತಿತರ ಆಟಗಳನ್ನು ಆಡಿಸಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಕ ಟಿ.ಎಂ. ಮಧು, ಎ.ಬಿ.ನಾಗರಾಜ, ಬಿ.ನಾಗರಾಜು, ಶಿಕ್ಷಕಿ ತಾಜೂನ್ ಮತ್ತಿತರರು ಇದ್ದರು.



ಉದಯವಾಹಿನಿ ಚಿತ್ರ

**ವಿದ್ಯಾರ್ಥಿ ದಿಸೆಯಲ್ಲಿ ಆಟಗಳು ಮಹತ್ವಪೂರ್ಣ ಪಾತ್ರ ವಹಿಸಲಿದ್ದು, ಸ್ವಯಂ ಮೌಲ್ಯ, ಆತ್ಮವಿಶ್ವಾಸ, ಸಾಮಾಜಿಕ ಸಾಮರಸ್ಯ, ಮಾನಸಿಕ ಶಿಸ್ತು, ಲಿಂಗಸಮಾನತೆಯಂತಹ ಮೌಲ್ಯಗಳೊಂದಿಗೆ ಸ್ಪರ್ಧಾಕೌಶಲಗಳನ್ನು ಬೆಳೆಸಿಕೊಳ್ಳಲು ಸಹಾಯಕ ವಾಗಲಿವೆ. ಗ್ರಾಮೀಣ ಕ್ರೀಡೆಗಳಲ್ಲಿ ಮಕ್ಕಳು ಹೆಚ್ಚೆಚ್ಚು ತೊಡಗಿಸಿಕೊಳ್ಳಬೇಕು -ರುದ್ರೇಶಮೂರ್ತಿ**

---

## ಹಿರಿಯ ಸ್ವಾಮೀಜಿ ಕೊಂದ ಆರೋಪಿ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನ

• **ಉದಯವಾಹಿನಿ, ಮೈಸೂರು**

ಮೈಸೂರಿನ ಸಿದ್ದಾರ್ಥನಗರದಲ್ಲಿ ಅನ್ನದಾನೇಶ್ವರ ಮಠದ ಶ್ರೀ ಶಿವಾನಂದ ಸ್ವಾಮೀಜಿ ಅವರ ಆಪ್ತ ಸಹಾಯಕನಿಂದಲೇ ಬರ್ಬರವಾಗಿ ಕೊಂದು ಹಾಕಿದ್ದ. ಕೊಲೆ ಪ್ರಕರಣದಲ್ಲಿ ಬಂಧಿಯಾಗಿರುವ ಆರೋಪಿ ರವಿ ಸೋಮವಾರ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ. ಅಸ್ವಸ್ಥಗೊಂಡಿದ್ದ ಆರೋಪಿ ರವಿಯನ್ನು ಪೊಲೀಸರು ಕೆಆರ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಕುಡಿತದ ಚಟಕ್ಕೆ ಒಳಗಾಗಿದ್ದ ರವಿಗೆ ಶಿವಾನಂದ ಸ್ವಾಮೀಜಿ ಬುದ್ಧಿವಾದ ಹೇಳಿದ್ದರು. ಸ್ವಾಮೀಜಿ ಕುಡಿಯಲು ಹಣ ನೀಡಲಿಲ್ಲ ಎಂಬ ಕಾರಣಕ್ಕೆ ರವಿ ಕೊಲೆ ಮಾಡಿದ್ದ ಎನ್ನಲಾಗಿದೆ. ಸದ್ಯ ಆರೋಪಿ ರವಿ ಗುಣಮುಖನಾದ ಬಳಿಕ ಪೊಲೀಸರು ತನಿಖೆಯನ್ನು ಮುಂದುವರಿಸಲಿದ್ದಾರೆ.

ನಿನ್ನೆ ಸೋಮವಾರ (ಜೂ.10) ಮೈಸೂರಿನಲ್ಲಿ ಹಿರಿಯ ಸ್ವಾಮೀಜಿಯೊಬ್ಬರ ಬರ್ಬರ ಕೊಲೆಯಾಗಿತ್ತು. ಮೈಸೂರಿನ ಸಿದ್ದಾರ್ಥನಗರದಲ್ಲಿರುವ ಅನ್ನದಾನೇಶ್ವರ ಮಠದ ಶಿವಾನಂದ (90) ಸ್ವಾಮೀಜಿ ಕೊಲೆಯಾದವರು. ಶಿವಾನಂದ ಸ್ವಾಮೀಜಿ ಅವರ ಸಹಾಯಕನಾಗಿದ್ದ ಭದ್ರತಾ ಸಿಬ್ಬಂದಿಯಿಂದಲೇ ಕೊಲೆ ನಡೆದಿತ್ತು.

ರವಿ (60) ಎಂಬಾತನಿಂದ ಈ ಕೃತ್ಯ ನಡೆದಿತ್ತು. ಶಿವಾನಂದ ಸ್ವಾಮೀಜಿಯನ್ನು ಮಾರಕಾಸ್ತ್ರದಿಂದ ಚುಚ್ಚಿ ಕೊಲೆ ಮಾಡಲಾಗಿತ್ತು. ವಿಷಯ ತಿಳಿಯುತ್ತಿದ್ದಂತೆ ಸ್ಥಳಕ್ಕೆ ನಜರ್‌ಬಾದ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಮಂಚದ ಮೇಲೆ ಮಲಗಿದ್ದಲ್ಲೇ ಶಿವಾನಂದ ಸ್ವಾಮೀಜಿಗೆ ಮಾರಕಾಸ್ತ್ರದಿಂದ ಕೊಚ್ಚಿ ಕೊಲೆ ಮಾಡಲಾಗಿತ್ತು.



ಉದಯವಾಹಿನಿ ಚಿತ್ರ

**ಕುಡಿತದ ಚಟಕ್ಕೆ ಒಳಗಾಗಿದ್ದ ರವಿ**

---

## ಕಲುಷಿತ ನೀರು ಸೇವನೆ: 54 ಜನ ಅಸ್ವಸ್ಥ

• **ಉದಯವಾಹಿನಿ, ಮಧುಗಿರಿ**

ತಾಲ್ಲೂಕಿನ ಚಿನ್ನೇನಹಳ್ಳಿ ಗ್ರಾಮದಲ್ಲಿ ಸೋಮವಾರ ರಾತ್ರಿ ಕಲುಷಿತ ನೀರು ಸೇವಿಸಿ 54 ಮಂದಿ ವಾಂತಿ ಮತ್ತು ಬೇಧಿಯಿಂದ ಅಸ್ವಸ್ಥರಾಗಿದ್ದಾರೆ. ಚಿನ್ನೇನಹಳ್ಳಿಯ ಓವರ್ ಹೆಡ್ ಟ್ಯಾಂಕ್ ಮತ್ತು ಶುದ್ಧ ನೀರಿನ ಘಟಕದ ನೀರು ಸೇವಿಸಿ ಅಸ್ವಸ್ಥರಾಗಿದ್ದಾರೆ.

ಅವರನ್ನು ತಕ್ಷಣಕ್ಕೆ ಮಿಡಿಗೇಶಿ ಪ್ರಾಥಮಿಕ ಆರೋಗ್ಯ ಕೇಂದ್ರ, ಮಧುಗಿರಿ ಸಾರ್ವಜನಿಕ ಆಸ್ಪತ್ರೆ , ಜಿಲ್ಲಾ ಆಸ್ಪತ್ರೆಗೆ ಸೇರಿಸಲಾಗಿದೆ. ಎಲ್ಲರ ಆರೋಗ್ಯ ಸ್ಥಿರವಾಗಿದೆ ಎಂದು ತಿಳಿದು ಬಂದಿದೆ. ಶುದ್ಧ ನೀರಿನ ಘಟಕ ಮತ್ತು ಓವರ್ ಹೆಡ್ ಟ್ಯಾಂಕ್ ನೀರನ್ನು ಜಿಲ್ಲಾ ಪರೀಕ್ಷೆ ಕೇಂದ್ರಕ್ಕೆ ಕಳುಹಿಸಲಾಗಿದೆ. 24 ಗಂಟೆ ನಂತರ ವರದಿ ಬರಲಿದೆ' ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಶ್ರೀನಿವಾಸ್ ತಿಳಿಸಿದರು. ಚಿನ್ನೇನಹಳ್ಳಿ ಗ್ರಾಮಕ್ಕೆ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಎಲ್ಲರಿಗೆ ಸೂಕ್ತ ಚಿಕಿತ್ಸೆ ನೀಡಬೇಕು. ಓವರ್ ಹೆಡ್‌ಟ್ಯಾಂಕರ್ ಮತ್ತು ಗ್ರಾಮದ ಚರಂಡಿಗಳನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವಂತೆ ತಿಳಿಸಲಾಗಿತ್ತು. ಅಧಿಕಾರಿಗಳು ಯಾವುದೇ ಕ್ರಮಕೈಗೊಂಡಿಲ್ಲ. ಮುಂದೆ ಇಂತಹ ಘಟನೆ ನಡೆಯದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.



ಉದಯವಾಹಿನಿ ಚಿತ್ರ

---

# ಮದ್ಯವ್ಯಸನಿಗಳ ಪಾಲಿಗೆ ಸ್ವರ್ಗ ಸರ್ಕಾರಿ ಕಟ್ಟಡ

## ಸ್ಥಳೀಯ ಶಾಸಕರು ಮತ್ತು ಸಂಬಂಧಿಸಿದ ಇಲಾಖೆ ಇತ್ತ ಗಮನ ಹರಿಸಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕು: ಗಿರೀಶ್

• **ಉದಯವಾಹಿನಿ ಸೋಮವಾರಪೇಟೆ**

ಪಟ್ಟಣಕ್ಕೆ ಹೊಂದಿಕೊಂಡಂ ತಿರುವ ಚೌಡ್ಲು ಗ್ರಾಮದಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಅಧೀನದಲ್ಲಿರುವ ಕಟ್ಟಡವೊಂದು ಹಾಳು ಸುರಿಯುತ್ತಿದ್ದು, ಪುಂಡ ಪೋಕರಿಗಳ ತಾಣವಾಗಿದೆ. ಇಲ್ಲಿ ಈ ಹಿಂದೆ ತರಗತಿಗಳು ನಡೆಯುತ್ತಿದ್ದವು. ಅಂಬೇಡ್ಕರ್ ವಸತಿ ಶಾಲೆಯೂ ಇತ್ತು.

ಜೊತೆಗೆ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯೂ ಕಾರ್ಯನಿರ್ವಹಿಸುತ್ತಿತ್ತು. ಇವೆಲ್ಲವೂ ತಮ್ಮ ತಮ್ಮ ಸ್ವಂತ ಕಟ್ಟಡಗಳಿಗೆ ಸ್ಥಳಾಂತರವಾದ ಬಳಿಕ ಈ ಕಟ್ಟಡ ಮದ್ಯವ್ಯಸನಿಗಳ ಪಾಲಿಗೆ ಸ್ವರ್ಗದಂತಾಗಿದೆ.

ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಆವರಣಕ್ಕೆ ಹೊಂದಿಕೊಂಡಂತಿರುವ ಈ ಕಟ್ಟಡದಲ್ಲಿ ಈ ಹಿಂದೆ ಇದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯನ್ನು ಸ್ಥಳದ ಕೊರತೆಯಿಂದಾಗಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ಕಟ್ಟಡಕ್ಕೆ ಸ್ಥಳಾಂತರಿಸಲಾಯಿತು.

2023-24ನೇ ಸಾಲಿನ ಶೈಕ್ಷಣಿಕ ಸಾಲಿನಲ್ಲಿ ತೋಳೂರು ಶೆಟ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಪಳ್ಳಿ ಗ್ರಾಮದಲ್ಲಿ ಸ್ವಂತ ಕಟ್ಟಡ ಪೂರ್ಣಗೊಂಡ ಬಳಿಕ ಅಂಬೇಡ್ಕರ್ ವಸತಿ ಶಾಲೆಯನ್ನೂ ಇಲ್ಲಿಂದ ಸ್ಥಳಾಂತರಿಸಲಾಯಿತು ಈಗ ಸಾಕಷ್ಟು ದೊಡ್ಡದಾಗಿರುವ ಈ ಕಟ್ಟಡ ಬಳಕೆಯಾಗದೇ ಉಳಿದಿದೆ.

ಈಗ ಇದು ಪುಂಡ ಪೋಕರಿಗಳ ಅವಸಸ್ಥಾನವಾಗಿ ಮಾರ್ಪಟ್ಟಿದೆ. ಸಂಜೆ ಮದ್ಯವ್ಯಸನಿಗಳು, ಧೂಮಪಾನ, ಮದ್ಯಪಾನ ಸೇರಿದಂತೆ ಇನ್ನಿತರ ಚಟುವಟಿಕೆಗಳಿಗೆ ಬಳಕೆಯಾಗುತ್ತಿದೆ. ಕೊಠಡಿಗಳ ಒಳಗೆ ಎಲ್ಲೆಂದರಲ್ಲಿ ಕಾಣಸಿಗುವ ಮದ್ಯದ ಖಾಲಿ ಬಾಟಲಿಗಳು, ಇಸ್ಪೀಟಿನ ಎಲೆಗಳು, ಬೀಡಿ, ಸಿಗರೇಟು ತುಂಡುಗಳ ರಾಶಿಯೇ ಇದಕ್ಕೆ ಸಾಕ್ಷಿ ಎನಿಸಿದೆ. ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಬಳಕೆಯಾಗುತ್ತಿದ್ದ ಶೌಚಾಲಯ ಗಬ್ಬೆದ್ದು ನಾರುತ್ತಿದೆ. ಯಾವುದೇ ಕೊಠಡಿಗಳಿಗೆ ಮತ್ತು ಗೇಟಿಗೆ ಬೀಗ ಹಾಕದಿರುವುದು ವ್ಯಸನಿಗಳಿಗೆ ವರದಾನವಾಗಿದೆ.

ಇಲ್ಲಿ ಸುಸ್ಸಜ್ಜಿತ ಕೊಠಡಿಗಳು ಸಾಕಷ್ಟು ಇವೆ. ಇದನ್ನು ಯಾವುದಾದರೂ, ಇಲಾಖೆಗಳಿಗೆ ಅಥವಾ ಶಿಕ್ಷಣಕ್ಕೆ ಸಂಬಂಧಿಸಿದ ಕಚೇರಿಗಳ ಬಳಕೆಗೆ ಉಪಯೋಗಿ ಸಿಕೊಳ್ಳಬಹುದಾಗಿತ್ತು. ಆದರೆ, ಇಲಾಖೆಗಳು ಹೆಚ್ಚಿನ ಬಾಡಿಗೆ ನೀಡಿ ಖಾಸಗಿ ಕಟ್ಟಡಗಳಲ್ಲಿ ಇಂದಿಗೂ ಕೆಲಸ ಮಾಡುತ್ತಿರುವುದನ್ನು ಕಾಣಬಹುದು. ಇದರಿಂದಾಗಿ ಬ್ರಿಟೀಷರ ಕಾಲದ ಪೂರ್ತಿ ಕಟ್ಟಡ ಶಿಥಿಲಾವಸ್ಥೆಗೆ ತಲುಪುತ್ತಿದೆ.

ಕೂಡಲೇ ಸಂಬಧಿಸಿದವರು ಈ ಕಟ್ಟಡದ ಉಪಯೋಗವನ್ನು ಮಾಡಿಕೊಳ್ಳಬೇಕೆಂದು ಪ್ರಗತಿಪರ ಕೃಷಿಕ ಕೆ.ಪಿ. ಪ್ರವೀಣ್ ಒತ್ತಾಯಿಸಿದರು.

ಈ ಕಟ್ಟಡದ ಸಮೀಪದ ಇರುವ ಪದವಿಪೂರ್ವ ಕಾಲೇಜಿನ ಆಟದ ಮೈದಾನಕ್ಕೆ ಆಸ್ಟ್ರೋ ಟರ್ಫ್ ಹಾಕಿರುವುದರಿಂದ, ಇಲ್ಲಿನ ಕೊಠಡಿಗಳಲ್ಲಿ ಹಾಕಿ ತರಬೇತಿ ಶಾಲೆಗಳನ್ನು ಸರ್ಕಾರ ಪ್ರಾರಂಭಿಸಲು ಅವಕಾಶ ಇದೆ. ಇದರಿಂದ ಕ್ರೀಡಾ ಜಿಲ್ಲೆ ಕೊಡಗಿನಲ್ಲಿ ಕ್ರೀಡಾಪಟುಗಳಿಗೆ ಉತ್ತೇಜನ ಸಿಗಲಿದೆ. ಸ್ಥಳೀಯ ಶಾಸಕರು ಮತ್ತು ಸಂಬಂಧಿಸಿದ ಇಲಾಖೆ ಇತ್ತ ಗಮನ ಹರಿಸಿ ಸೂಕ್ತ ಕ್ರಮ ತೆಗೆದುಕೊಳ್ಳಬೇಕು' ಎಂದು ಕ್ರೀಡಾಭಿಮಾನಿ ಗಿರೀಶ್ ಹೇಳಿದರು.

ಸೋಮವಾರಪೇಟೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ ನಡೆಸುತ್ತಿದ್ದ ಕಟ್ಟಡದಲ್ಲಿ ಮದ್ಯವ್ಯಸನಿಗಳು ಹಾಗೂ ಪುಂಡ ಪೋಕರಿಗಳ ಬಳಕೆಯಿಂದ ತ್ಯಾಜ್ಯ ತುಂಬಿರುವುದು.

ಸೋಮವಾರಪೇಟೆಯಲ್ಲಿ ಅಂಬೇಡ್ಕರ್ ವಸತಿ ಶಾಲೆ ನಡೆಯುತ್ತಿದ್ದ ಕಟ್ಟಡದಲ್ಲಿ ಎಲ್ಲೆಂದರಲ್ಲಿ ತ್ಯಾಜ್ಯ ಬಿದ್ದಿರುವುದು.

ಸೋಮವಾರಪೇಟೆಯಲ್ಲಿ ಅಂಬೇಡ್ಕರ್ ವಸತಿ ಶಾಲೆ ನಡೆಯುತ್ತಿದ್ದ ಕಟ್ಟಡದಲ್ಲಿದ್ದ ಸುಸ್ಸಜ್ಜಿತ ಶೌಚಾಲಯ ಪುಂಡ ಪೋಕರಿಗಳ ಹಾವಳಿಯಿಂದ ಹಾಳಾಗುತ್ತಿರುವುದು. ಚಂದ್ರಕಾಂತ್ ಡಿಡಿಪಿಐ ಅಂದು ವಿದ್ಯಾರ್ಥಿಗಳು ಪಾಠ ಕಲಿಯುತ್ತಿದ್ದ ಕಟ್ಟಡ ಇಂದು ಮದ್ಯವ್ಯಸನಿಗಳ ಮೋಜಿನ ತಾಣ ಕಟ್ಟಡದ ಸಮರ್ಪಕ ಬಳಕೆಗೆ ಒತ್ತಾಯ.

**ಇಲ್ಲಿ ಕೊಠಡಿಗಳೊಂದಿಗೆ ಸಾಕಷ್ಟು ಸ್ಥಳಾವಕಾಶ ಇರುವುದರಿಂದ ಖಾಸಗಿ ಕಟ್ಟಡದಲ್ಲಿರುವ ನಾಲ್ಕಾರು ಇಲಾಖೆಗಳನ್ನು ಇಲ್ಲಿ ಪ್ರಾರಂಭಿಸಲು ಅವಕಾಶ ಇದೆ. ಇದರಿಂದ ಸರ್ಕಾರಕ್ಕೆ ಬಾಡಿಗೆ ಹಣ ಉಳಿಯುವುದು. ಕಟ್ಟಡವನ್ನು ಉಳಿಸಿಕೊಳ್ಳಲು ಸಾಧ್ಯ. ಮೊದಲು ಇಲ್ಲಿನ ಕೊಠಡಿಗಳ ಬಾಗಿಲುಗಳಿಗೆ ಬೀಗ ಹಾಕುವ ಮೂಲಕ ಜನರ ದುರ್ಬಳಕೆ ಮಾಡುವುದನ್ನು ತಪ್ಪಿಸಬೇಕಿದೆ. ಕೂಡಲೇ ಸಂಬಂಧಿಸಿದವರು ಇತ್ತ ಗಮನ ಹರಿಸಬೇಕೆಕು**
**- ಸತೀಶ್,** ಪಟ್ಟಣದ ನಿವಾಸಿ



ಉದಯವಾಹಿನಿ ಚಿತ್ರ

### ಇಲಾಖೆಗಳು ವಿಫಲ

**ಪಟ್ಟಣ ಸೇರಿದಂತೆ ಗ್ರಾಮೀಣ ಭಾಗಗಳಲ್ಲಿ ಹಲವು ಸರ್ಕಾರಿ ಕಚೇರಿಗಳು ಬಾಡಿಗೆ ಆದಾರದಲ್ಲಿ ಖಾಸಗಿ ಕಟ್ಟಡಗಳಲ್ಲಿ ಕೆಲಸ ಮಾಡುತ್ತಿರುವುದು ಇಂದಿಗೂ ಕಂಡು ಬರುತ್ತದೆ. ಆದರೆ, ಸರ್ಕಾರದ ಇರುವ ಕಟ್ಟಡಗಳನ್ನೇ ಸರಿಯಾಗಿ ಬಳಸಿಕೊಳ್ಳಲು ಕೆಲವು ಇಲಾಖೆಗಳು ವಿಫಲವಾಗಿವೆ.**

**ಪುಂಡ ಪೋಕರಿಗಳ ಅವಸಸ್ಥಾನ**

**ಈ ಕಟ್ಟಡದಲ್ಲಿ ಯಾವುದೇ ಅನೈತಿಕ ಚಟುವಟಿಕೆಗಳು ನಡೆಯದಂತೆ ಕ್ರಮ ವಹಿಸಲಾಗುವುದು. ಈ ಕುರಿತು ಸೂಚನೆ ನೀಡಲಾಗಿದೆ.**
**-ಎಂ.ಚಂದ್ರಕಾಂತ್,** ಡಿಡಿಪಿಐ

---



## ಮಿನಿ ನ್ಯೂಸ್

### ವೇಗ ಪಡೆಯದ ಅಭಿವೃದ್ಧಿ

• **ಉದಯವಾಹಿನಿ, ಚಿಂತಾಮಣಿ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಪೂರ್ಣಗೊಂಡಿದೆ. ಕ್ಷೇತ್ರದ ಶಾಸಕ ಡಾ.ಎಂ.ಸಿ.ಸುಧಾಕರ್ ಜಿಲ್ಲಾ ಉಸ್ತುವಾರಿ ಸಚಿವರು. ಹಿಂದೆ ಎರಡು ಬಾರಿ ಶಾಸಕರಾಗಿದ್ದಾಗ ಹಲವು ಅಭಿವೃದ್ಧಿ ಕಾಮಗಾರಿಗಳಿಗೆ ಮುನ್ನುಡಿ ಬರೆದು ಅಭಿವೃದ್ಧಿಗೆ ಒತ್ತು ನೀಡಿದ್ದರು. ಈ ಬಾರಿ ಕ್ಷೇತ್ರದ ಜನರು ಭಾರಿ ನಿರೀಕ್ಷೆ ಇಟ್ಟುಕೊಂಡಿದ್ದಾರೆ.

ಕ್ಷೇತ್ರದಲ್ಲಿ ಹಿಂದೆ ಶಾಸಕರಾಗಿದ್ದ ಕಾಲದಲ್ಲಿ ರೂಪಿಸಿದ್ದ ಯೋಜನೆಗಳು ನನೆಗುದಿಗೆ ಬಿದ್ದಿವೆ. ಒಂದು ವರ್ಷದಲ್ಲಿ ಯಾವುದೇ ಅಭಿವೃದ್ಧಿ ಯೋಜನೆಗೆ ಅನುದಾನ ಬಿಡುಗಡೆ ಆಗಿಲ್ಲ ಎನ್ನುತ್ತಾರೆ ಸ್ಥಳೀಯರು.

ಶಾಸಕರಾಗಿ ಆಯ್ಕೆಯಾದ ಕೂಡಲೇ ನನೆಗುದಿಗೆ ಬಿದ್ದಿರುವ ಅನೇಕ ಕಾಮಗಾರಿ ಮತ್ತು ನೂತನವಾಗಿ ಜಾರಿಗೊಳಿಸಲಿರುವ ಯೋಜನೆಗಳಿಗೆ ನೀಲನಕ್ಷೆ ಮತ್ತು ಅಂದಾಜು ವೆಚ್ಚದ ಪಟ್ಟಿ ತಯಾರು ಮಾಡಿಸಿದ್ದರು. ಬಹಿರಂಗವಾಗಿ ಯೋಜನೆಗಳ ವಿವರ ಪ್ರಕಟಿಸಿದ್ದರಿಂದ ಸಾರ್ವಜನಿಕರಲ್ಲಿ ಮತ್ತಷ್ಟು ನಿರೀಕ್ಷೆ ಗರಿಗೆದರಿದೆ.

### ದಸರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದ ಆನೆ ಅಶ್ವತ್ಥಾಮ ಸಾವು

• **ಉದಯವಾಹಿನಿ ಮೈಸೂರು**



ಎರಡು ಬಾರಿ ದಸರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದ 38 ವರ್ಷದ 'ಅಶ್ವತ್ಥಾಮ' ಆನೆಯು ಸೋಲಾರ್ ಬೇಲಿಯ ವಿದ್ಯುತ್ ಪ್ರವಹಿಸಿ ಜೂ. 11ರ ಮಂಗಳವಾರ ಮೃತಪಟ್ಟಿದೆ.

ಹುಣಸೂರು- ಪಿರಿಯಾಪಟ್ಟಣ ತಾಲ್ಲೂಕಿನ ಗಡಿ ಭಾಗದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಭೀಮನಕಟ್ಟೆ ಆನೆ ಶಿಬಿರದ ಅಶ್ವತ್ಥಾಮ ಮೇವು ಅರಸಿ ಕಾಡಿಗೆ ತೆರಳಿದ್ದ ವೇಳೆ ಈ ಘಟನೆ ನಡೆದಿದೆ. ಸೋಲಾರ್ ಬೇಲಿ ಮೇಲೆ ವಿದ್ಯುತ್ ತಂತಿಯು ಬಿದ್ದಿದ್ದರಿಂದ ವಿದ್ಯುತ್ ಆಘಾತದಿಂದ ಅಶ್ವತ್ಥಾಮ ಮೃತಪಟ್ಟಿದೆ ಎಂದು ಮೂಲಗಳು ತಿಳಿಸಿದ್ದರೆ, ಇಲಾಖೆ ಮೂಲಗಳು ಅನಾರೋಗ್ಯದಿಂದ ಮೃತಪಟ್ಟಿದೆ ಎಂದು ಹೇಳಿವೆ. 2017ರಲ್ಲಿ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನಲ್ಲಿ ಅಶ್ವತ್ಥಾಮನನ್ನು ಸೆರೆ ಹಿಡಿಯಲಾಗಿತ್ತು. ಶಾಂತ ಹಾಗೂ ಗಾಂಭೀರ್ಯ ಸ್ವಭಾವಕ್ಕೆ ಹೆಸರಾಗಿದ್ದ ಅದನ್ನು ನಾಲ್ಕು ವರ್ಷದಲ್ಲಿಯೇ 2021ರ ದಸರೆಗೆ ಕರೆತರಲಾಗಿತ್ತು. ಅದಕ್ಕೆ ನಡಿಗೆ ತಾಲೀಮು ಸೇರಿದಂತೆ ವಿವಿಧ ತಾಲೀಮನ್ನು ನೀಡಲಾಗಿತ್ತು. 2022ರ ದಸರೆಯಲ್ಲಿ ಪಾಲ್ಗೊಂಡು ಗಮನ ಸೆಳೆದಿತ್ತು. ಜಂಬೂಸವಾರಿ ಮೆರವಣಿಗೆಯಲ್ಲಿ ಭಾಗವಹಿಸಿರಲಿಲ್ಲ.

### ಲೋಕಸಭೆ ಫಲಿತಾಂಶ ಹಿನ್ನೆಲೆ ಡಿಕೆ ಸುರೇಶ್ ಪರ ಬೆಟ್ಟಿಂಗ್ ಆಡಿದ್ದ ವ್ಯಕ್ತಿ ನೇಣಿಗೆ ಶರಣು

• **ಉದಯವಾಹಿನಿ ರಾಮನಗರ**



ಈ ಭಾರಿ ಲೋಕಸಭಾ ಚುನಾವಣೆಯಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರ ಸದ್ದು ಮಾಡಿದೆ. ಏಕೆಂದ್ರೆ ಪ್ರಭಾವಿ ನಾಯಕ ಡಿಕೆ ಶಿವಕುಮಾರ್ ಅವರ ಸಹೋದರ ಡಿಕೆ ಸುರೇಶ್ ಎದುರು ಓರ್ವ ಖ್ಯಾತ ಹೃದ್ರೋಗ ವೈದ್ಯ ಸ್ಪರ್ಧೆ ಮಾಡಿದ್ದರು. ಹೀಗಾಗಿ ಭಾರೀ ಜಿದ್ದಾಜಿದ್ದಿಯಿಂದ ಕೂಡಿತ್ತು. ಬೆಂಗಳೂರು ಗ್ರಾಮಾಂತರ ಲೋಕಸಭೆ ಫಲಿತಾಂಶ ಬೆಟ್ಟಿಂಗ್ ಕಟ್ಟಿ 50 ಲಕ್ಷಕ್ಕೂ ಹೆಚ್ಚು ಹಣ ಕಳೆದುಕೊಂಡ ಹಿನ್ನಲೆ ಓರ್ವ ವ್ಯಕ್ತಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ರಾಮನಗರ ತಾಲ್ಲೂಕಿನ ಬಿಡದಿ ಬಳಿ ಕೆಂಚನಗುಪ್ಪೆಯಲ್ಲಿ ಘಟನೆ ನಡೆದಿದೆ. ಡಿ.ಕೆ.ಸುರೇಶ್ ಪರವಾಗಿ 50 ಲಕ್ಷಕ್ಕೂ ಹೆಚ್ಚು ರೂ. ಬೆಟ್ಟಿಂಗ್ ಕಟ್ಟಿ ಶಿವರಾಜ್ ಸೋತಿದ್ದ. ಕೆಂಚನಗುಪ್ಪೆ ಶಿವರಾಜ್ (40) ಮೃತ ವ್ಯಕ್ತಿ. ಡಿ.ಕೆ.ಸುರೇಶ್ ಪರವಾಗಿ 50 ಲಕ್ಷಕ್ಕೂ ಹೆಚ್ಚು ರೂ. ಬೆಟ್ಟಿಂಗ್ ಕಟ್ಟಿ ಶಿವರಾಜ್ ಸೋತಿದ್ದ. ಆದರೆ ಲಕ್ಷಾಂತರ ಹಣ ಕೊಡಲಾಗದೇ ಬೆಳಗಿನ ಜಾವ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಿಡದಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

### ಬೋನಿಗೆ ಬಿದ್ದ ಚಿರತೆ: ನಿಟ್ಟುಸಿರು ಬಿಟ್ಟ ರೈತರು

• **ಉದಯವಾಹಿನಿ ಗುಂಡ್ಲುಪೇಟೆ**

ಅರಣ್ಯ ಇಲಾಖೆ ಇರಿಸಿದ್ದ ಬೋನ್ ಗೆ ಚಿರತೆಯೊಂದು ಸೆರೆಯಾಗಿರುವ ಘಟನೆ ತಾಲ್ಲೂಕಿನ ವಡೆಯನಪುರ ಗ್ರಾಮದ ಹೊರ ವಲಯದ ರೈತರೊಬ್ಬರ ಜಮೀನಿನಲ್ಲಿ ನಡೆದಿದೆ. ತಾಲ್ಲೂಕಿನ ವಡೆಯನಪುರ, ಬೊಮ್ಮಲಾಪುರ, ಕೊಡಸೋಗೆ ಸುತ್ತಮುತ್ತಲ ಗ್ರಾಮಗಳ ಜಮೀನಿನಲ್ಲಿ ಕಳೆದ ಕೆಲವು ತಿಂಗಳುಗಳಿಂದ ಉಪಟಳ ನೀಡಿ, ಜಾನುವಾರುಗಳ ಮೇಲೆ ದಾಳಿ ಕೊಂದು ಹೊತ್ತೊಯ್ಯುತ್ತಿತ್ತು.

ಇದರಿಂದ ಭಯ ಭೀತರಾಗಿದ್ದ ರೈತರು ಚಿರತೆ ಸೆರೆ ಹಿಡುವಂತೆ ಒತ್ತಾಯಿಸಿದ್ದರು. ರೈತರ ಆಕ್ರೋಶದ ಹಿನ್ನಲೆ ಹೆಜ್ಜೆ ಗುರುತು ಹಾಗು ಚಲನವಲನಗಳ ಆಧಾರ ಮೇಲೆ ವಡೆಯನ ಪುರ ಗ್ರಾಮದ ಗಿರೀಶ್ ಎಂಬುವರ ಜಮೀನಿನಲ್ಲಿ ಬೋನ್ ಇರಿಸಿ ಬಲಿಪ್ರಾಣಿ ಕಟ್ಟಿದ್ದರು. ಇದೀಗ ಆ ಬೋನಿಗೆ ಭಾನುವಾರ ತಡ ರಾತ್ರಿ ಚಿರತೆ ಬಿದ್ದಿದೆ.

ಸೋಮವಾರ ಬೆಳಗ್ಗೆ 10 ಗಂಟೆ ಸುಮಾರಿನಲ್ಲಿ ಜಮೀನಿಗೆ ಹೋಗುತ್ತಿದ್ದ ರೈತರೊಬ್ಬರು ಬೋನ್ ಬಾಗಿಲು ಮುಚ್ಚಿದ್ದ ಕಾರಣ ಹತ್ತಿರ ಹೋಗಿ ನೋಡಿದಾಗ ಚಿರತೆ ಸೆರೆಯಾಗಿರುವ ವಿಷಯ ತಿಳಿದು ಬಂದಿದೆ. ನಂತರ ಅರಣ್ಯ ಇಲಾಖೆಗೆ ಮಾಹಿತಿ ನೀಡಿದ ಮೇರೆಗೆ ಆಗಮಿಸಿದ ಅರಣ್ಯಾಧಿಕಾರಿಗಳು ಚಿರತೆಯಿಂದ ಜಮೀನಿನಿಂದ ಸ್ಥಳಾಂತರಿಸಿದ್ದಾರೆ. ಬೋನಿಗೆ ಬಿದ್ದ ಚಿರತೆಯನ್ನು ಅರಣ್ಯ ಸಂರಕ್ಷಣಾಧಿಕಾರಿ ಆದೇಶ ಮೇರೆಗೆ ಬಂಡೀಪುರ ಅಭಯಾರಣ್ಯದ ಮೂಲೆಹೊಳೆ ಕಾಡಿನಲ್ಲಿ ಬಿಡಲಾಗಿದೆ ಎಂದು ಅರಣ್ಯಾಧಿಕಾರಿಗಳು ಮಾಹಿತಿ ನೀಡಿದರು.

**ನಿಟ್ಟುಸಿರು ಬಿಟ್ಟ ರೈತರು**

**ವಡೆಯನಪುರ, ಬೊಮ್ಮಲಾಪುರ, ಕೊಡಸೋಗೆ ಸುತ್ತಮುತ್ತಲು ಚಿರತೆ ಹಾವಳಿ ಹೆಚ್ಚಾಗಿತ್ತು. ಚಿರತೆ ದಾಳಿಗೆ ಜಾನುವಾರುಗಳು ಬಲಿಯಾಗಿದ್ದವು. ಇದರಿಂದ ಜಮೀನಿಗೆ ಹೋಗುವಾಗ, ತೋಟದ ಮನೆಗಳಲ್ಲಿ ವಾಸಿಸುವರಿಗೆ ಚಿರತೆ ಕಾಣಿಸಿಕೊಳ್ಳುತ್ತಿತ್ತು. ಮಳೆ ಸಂದರ್ಭದಲ್ಲಿ ಜಮೀನುಗಳಲ್ಲಿ ಚಿರತೆ ಹೆಜ್ಜೆ ಗುರುತುಗಳು ಮೂಡಿರುತ್ತಿದ್ದವು. ಇದರಿಂದ ಭಯಭೀತರಾಗಿದ್ದ ರೈತರು ಚಿರತೆ ಬೋನಿಗೆ ಬಿದ್ದಿರುವ ಹಿನ್ನಲೆ ನಿಟ್ಟುಸಿರು ಬಿಡುವಂತಾಗಿದೆ.**



ಉದಯವಾಹಿನಿ ಚಿತ್ರ

ಅಂತರಾಳದಿಂದ..
EDITORIAL

# ಮೋದಿ ಮೂರನೇ ಅವಧಿ

## 'ಸಹಮತ'ವೇ ಮುನ್ನಡೆಗೆ ಸೂತ್ರ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಕೇಂದ್ರದ ನೂತನ ಸಚಿವ ಸಂಪುಟದ ಸದಸ್ಯರು ಪ್ರಮಾಣವಚನ ಸ್ವೀಕರಿಸುವುದರೊಂದಿಗೆ, ತಿಂಗಳುಗಳ ಕಾಲ ನಡೆದ ಲೋಕಸಭಾ ಚುನಾವಣಾ ಪ್ರಕ್ರಿಯೆಯು ಅಂತ್ಯ ಕಂಡಿದೆ. ಸತತ ಮೂರನೆಯ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿರುವ ಮೋದಿ ಅವರು ಈ ಬಾರಿ ಮೈತ್ರಿ ಸರ್ಕಾರದ ಮುಖ್ಯಸ್ಥರಾಗಿದ್ದಾರೆ. ಅವರ ಸಂಪುಟದಲ್ಲಿ 71 ಸದಸ್ಯರು ಇದ್ದಾರೆ. ಹಿಂದಿನ ಸಂಪುಟದಲ್ಲಿ ಇದ್ದ ಹಿರಿಯರ ಪೈಕಿ ಬಹುತೇಕರನ್ನು ಮೋದಿ ಅವರು ಈ ಬಾರಿಯೂ ಉಳಿಸಿಕೊಂಡಿದ್ದಾರೆ. ಜೊತೆಯಲ್ಲೇ. ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟದ (ಎನ್‌ಡಿಎ) ಸದಸ್ಯ ಪಕ್ಷಗಳಿಗೆ ಸ್ಥಾನ ಕಲ್ಪಿಸಿದ್ದಾರೆ.

ಹೀಗಾಗಿ, ಹೊಸದಾಗಿ ರಚನೆಯಾಗಿರುವ ಸರ್ಕಾರವು ಹಳೆಯದರ ಮುಂದುವರಿಕೆಯನ್ನೂ ಹೊಸ ಬದಲಾವಣೆಯನ್ನೂ ಸೂಚಿಸುವಂತಿದೆ. ಇದು ಇನ್ನಷ್ಟು ವಿಶಾಲವಾದ ಭಾರತವನ್ನು ಪ್ರತಿನಿಧಿಸುವುದಷ್ಟೇ ಅಲ್ಲದೆ, ಬಿಜೆಪಿಯ ರಾಜಕೀಯ ನಿಲುವುಗಳಿಗಿಂತ ಭಿನ್ನವಾದ ನಿಲುವುಗಳನ್ನು ಹೊಂದಿರುವವರಿಗೆ ಇಲ್ಲಿ ಈಗ ಧ್ವನಿ ಇದೆ. ಹೀಗಿದ್ದರೂ ಸಂಪುಟದಲ್ಲಿನ ಪ್ರಾತಿನಿಧ್ಯವನ್ನು ಗಮನಿಸಿದಾಗ ಬಿಜೆಪಿಯ ಪ್ರಾಬಲ್ಯವು ಎದ್ದುಕಾಣುವಂತಿದೆ. ಸರ್ಕಾರದ ಉಳಿವಿಗೆ ಈಗ ಮಿತ್ರಪಕ್ಷಗಳ ನೆರವು ಅತ್ಯಗತ್ಯವಾಗಿದ್ದರೂ ಮಿತ್ರಪಕ್ಷಗಳಿಗೆ ಸಂಪುಟದಲ್ಲಿ 11 ಸ್ಥಾನಗಳು ಮಾತ್ರ ಸಿಕ್ಕಿವೆ. ಪ್ರಮುಖ ಖಾತೆಗಳ ಪೈಕಿ ಹೆಚ್ಚಿನವು ಬಿಜೆಪಿ ಬಳಿಯೇ ಇವೆ.


ಉದಯವಾಹಿನಿ ಚಿತ್ರ

**ಈಗ ಮೋದಿ ಅವರು ಪರಿಸ್ಥಿತಿಯನ್ನು ಅರಿತಿರುವಂತೆ ಕಾಣುತ್ತಿದೆ. ಎನ್‌ಡಿಎ ಮೈತ್ರಿಕೂಟವು ಒಂದು ಸಾವಯವ ಹಾಗೂ ಯಶಸ್ವಿ ಒಕ್ಕೂಟ, ಸರ್ಕಾರವನ್ನು ನಡೆಸಲು ಬಹುಮತ ಬೇಕಿದೆ. ದೇಶವನ್ನು ಮುನ್ನಡೆಸಲು ಸಹಮತ ಬೇಕಿದೆ ಎಂದು ಅವರು ಹೇಳಿದ್ದಾರೆ. ಅಲ್ಲದೆ, ಅವರು ಇನ್ನೂ ಎರಡು ಪ್ರಮುಖ ಅಂಶಗಳನ್ನು ಹೇಳಿದ್ದಾರೆ. ಪ್ರಾದೇಶಿಕ ಹಾಗೂ ರಾಷ್ಟ್ರೀಯ ಆಕಾಂಕ್ಷೆಗಳಿಗೆ ಕಿವಿಗೊಡುವ ಸಹಕಾರಿ ಒಕ್ಕೂಟ ವ್ಯವಸ್ಥೆಯ ಅಗತ್ಯವನ್ನು ಹೇಳಿದ್ದಾರೆ.**

ಬೇರೆ ಬೇರೆ ರಾಜ್ಯಗಳ ಕೆಲವು ಹಿರಿಯ ಬಿಜೆಪಿ ನಾಯಕರು ಕೂಡ ಸಂಪುಟ ಸೇರಿದ್ದಾರೆ. ಹೀಗಿದ್ದರೂ ಸರ್ಕಾರವು ಈ ಬಾರಿ ಭಿನ್ನವಾಗಿ ಇರಲಿದೆ. ಏಕೆಂದರೆ ಅದರ ನೀತಿಗಳು, ಅದು ರೂಪಿಸುವ ಕಾರ್ಯಕ್ರಮಗಳು ಹಿಂದಿನ ಅವಧಿಯ ನೀತಿಗಳು, ಕಾರ್ಯಕ್ರಮಗಳಿಗಿಂತ ಭಿನ್ನವಾಗಿ ಇರಲಿವೆ. ಭಿನ್ನದೃಷ್ಟಿಕೋನಗಳನ್ನು ಹಾಗೂ ಹಿತಾಸಕ್ತಿಗಳನ್ನು ಹೊಂದಿರುವ ಪಕ್ಷಗಳು ಸರ್ಕಾರದ ಭಾಗವಾಗಿವೆ ಎಂಬುದೊಂದೇ ಇದಕ್ಕೆ ಕಾರಣವಲ್ಲ. ಚುನಾವಣೆಯ ಮೂಲಕ ಮತದಾರರು ನೀಡಿರುವ ಸಂದೇಶಕ್ಕೆ ಕಿವಿಗೊಡುವ ಕೆಲಸವನ್ನು, ಆ ಸಂದೇಶದಿಂದ ಪಾಠ ಕಲಿಯುವ ಕೆಲಸವನ್ನು ಪ್ರಧಾನಿ ಮೋದಿ ಮತ್ತು ಅವರ ಪಕ್ಷವು ಮಾಡಬೇಕಿದೆ. ಪ್ರಧಾನಿಯವರು ಮೈತ್ರಿಕೂಟ ಸರ್ಕಾರವನ್ನು ಮುನ್ನಡೆಸಬೇಕಿದೆ. ಬಿಜೆಪಿಯು ಎರಡು ದಶಕಗಳ ಹಿಂದೆ ತಾನೇ ಪಾಲಿಸುತ್ತಿದ್ದ ರಾಜಕೀಯ ಸೂತ್ರಗಳನ್ನ ಮರಳಿ ದೃಷ್ಟಿಹಾಯಿಸಬೇಕಿದೆ. ಮೋದಿ ಅವರು ಈವರೆಗೆ ಬಿಜೆಪಿಗೆ ಬಹುಮತ ಇರುವ ತಮ್ಮ ಸಂಪೂರ್ಣ ನಿಯಂತ್ರಣಕ್ಕೆ ಒಳಪಟ್ಟ ಸರ್ಕಾರವನ್ನು ಮಾತ್ರ ಮುನ್ನಡೆಸಿದ್ದಾರೆ. ಅವರು ಆಡಿರುವ ಇನ್ನೊಂದು ಮಾತು. ವಿರೋಧ ಪಕ್ಷಗಳು ಸರ್ಕಾರವನ್ನು ವಿರೋಧಿಸುತ್ತವೆಯೇ ವಿನಾ ದೇಶವನ್ನು ಅಲ್ಲ ಎಂಬುದು. ಇವು ಬಹಳ ಮುಖ್ಯವಾದ ಸಂಗತಿಗಳು, ಇವೇ ಆಲೋಚನೆಗಳು ಮೋದಿ ಅವರನ್ನು ಮುನ್ನಡೆಸಬೇಕು. ಈಗ ರಚನೆ ಆಗಿರುವ ಸರ್ಕಾರವು ದೇಶದ ಹಲವು ಪ್ರದೇಶಗಳನ್ನು ಪ್ರತಿನಿಧಿಸುತ್ತಿದೆ. ಏಕೆಂದರೆ ಎನ್‌ಡಿಎ ಮೈತ್ರಿಕೂಟವು ದೇಶದ ಎಲ್ಲೆಡೆಯ ಪ್ರತಿನಿಧಿಗಳನ್ನು ಹೊಂದಿದೆ. ಸರ್ಕಾರದಲ್ಲಿ ಬೇರೆ ಬೇರೆ ಸಮುದಾಯಗಳು, ಜಾತಿಗಳು ಸಾಮಾಜಿಕ ಗುಂಪುಗಳು ಪ್ರಾತಿನಿಧ್ಯ ಪಡೆದಿವೆ. ಹೀಗಿದ್ದರೂ ಸಂಪುಟದಲ್ಲಿ ಮುಸ್ಲಿಮರಿಗೆ ಪ್ರಾತಿನಿಧ್ಯ ಇಲ್ಲ ಎಂಬುದು ಗಮನಾರ್ಹ, ಕ್ರೈಸ್ತ ಸಮುದಾಯಕ್ಕೆ ಸಾಂಕೇತಿಕವಾಗಿ ಪ್ರಾತಿನಿಧ್ಯ ಕಲ್ಪಿಸಲಾಗಿದೆ. ದೇಶದ ಒಟ್ಟು ಜನಸಂಖ್ಯೆಯಲ್ಲಿ ಶೇ 14ರಷ್ಟು ಇರುವ ಸಮುದಾಯವೊಂದಕ್ಕೆ ಪ್ರಾತಿನಿಧ್ಯ ನಿರಾಕರಿಸುವುದು ಸರಿಯಲ್ಲ. ಪ್ರಧಾನಿ ಸೇರಿ 72 ಮಂದಿ ಸಚಿವರ ಪೈಕಿ ಮಹಿಳೆಯರ ಸಂಖ್ಯೆ ಏಳು ಮಾತ್ರ. ಇದು ಸಂಪುಟದ ಗಾತ್ರದ ಶೇ10ರಷ್ಟು ಕೂಡ ಅಲ್ಲ. ರಾಜಕೀಯ ಸರ್ಕಾರದ ವಿವಿಧ ಹಂತಗಳಲ್ಲಿ ಮಹಿಳೆಯರ ಪ್ರಾತಿನಿಧ್ಯವನ್ನು ಹೆಚ್ಚಿಸಲಾಗುವುದು ಎಂದು ಈ ಹಿಂದೆ ನೀಡಿದ್ದ ಹೇಳಿಕೆಗಳಿಗೆ ಇದು ಅನುಗುಣವಾಗಿ ಇಲ್ಲ.

# ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜೂನ್ 13, ಗುರುವಾರ ಸಂಜೆ 7-30ಕ್ಕೆ ವಿದುಷಿ ಪುಷ್ಪಲತಾ ಮಂಜುನಾಥ್ ಅವರ ನಿರ್ದೇಶನದಲ್ಲಿ ಶ್ರೀ ನಾಟ್ಯಂ ಕಲಾ ಕೇಂದ್ರದ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ.




• ಹಿಂದಿನ ಸಂಚಿಕೆಯಿಂದ

ಮೈಕೈಕಾಲುಗಳೆಲ್ಲ ಉರಿಯುತ್ತಿದ್ದುದರಿಂದ ಸ್ವಲ್ಪಹೊತ್ತು ತಣ್ಣಗಾಗಲೆಂದು ನೀರಿನಲ್ಲಿ ಮುಳುಗಿರುವನು. ಸೋದರರೂ, ಸ್ನೇಹಿತರೂ ಎಲ್ಲಾ ಸತ್ತು, ಯುದ್ಧದಲ್ಲಿ ಪಾಂಡವರೇ ಗೆದ್ದಮೇಲೆ ಬದುಕಿದ್ದು ಏನು ಪ್ರಯೋಜನ? ಸಂಜಯ, ನನಗಿನ್ನು ಬದುಕಿ ಉಳಿಯುವ ಆಸೆಯಿಲ್ಲವೆಂದು ತಂದೆಗೆ ಹೇಳಿ ನನ್ನ ನಮಸ್ಕಾರಗಳನ್ನೂ ತಿಳಿಸಿಬಿಡು. ನಾನಿನ್ನು ಅವನನ್ನು ನೋಡುವುದಿಲ್ಲ. ನನ್ನಿಂದಾಗಿ ಉಂಟಾಗಿರುವ ದುಃಖಕ್ಕಾಗಿ ಕ್ಷಮೆಬೇಡುತ್ತಿರುವೆನೆಂದು ತಿಳಿಸಿ. ಅವನಿಗೆ ನನ್ನನ್ನು ಕಂಡರೆ ಬಹಳ ಪ್ರೀತಿ; ಅವನು ನನ್ನನ್ನು ಕ್ಷಮಿಸುವನು. ಅಮ್ಮ ಗಾಂಧಾರಿಗೆ ಅವಳಂತಹ ಮಹಾನ್ ವ್ಯಕ್ತಿಗೆ ಮಗನಾಗಲು ನಾನು ಯೋಗ್ಯನಲ್ಲವೆಂದು ತಿಳಿಸು. ಯಾರಿಗೂ ಎಂದೂ ತಲೆಬಾಗದ ಈ ದುರ್ಯೋಧನನು ಅವಳ ಪಾದಗಳಿಗೆ ನಮಸ್ಕರಿಸುತ್ತಿರುವನೆಂದು ಅವಳಿಗೆ ತಿಳಿಸು. ಮುಂದಿನ ಎಲ್ಲಾ ಜನ್ಮಗಳಲ್ಲೂ ಅವಳೇ ನನ್ನ ತಾಯಿಯಾಗಿರಲಿ ಎಂಬುದೇ ನನ್ನ ಅಪೇಕ್ಷೆ ಎಂದು ತಿಳಿಸು. ಈಗ ಹೋಗು ಸಂಜಯ, ಬೇರೆ ಯಾರಾದರೂ ನೋಡುವ ಮೊದಲೇ ನಾನು ನೀರನ್ನು ಪ್ರವೇಶಿಸಬೇಕು ಎಂದು ಗದೆಯನ್ನು ಹಿಡಿದುಕೊಂಡೇ ಆ ದ್ವೈಪಾಯನವೆಂಬ ಸರೋವರದಲ್ಲಿ ಜಲಸ್ತಂಭನ ವಿದ್ಯೆಯಿಂದ ಮುಳುಗಿದನು.

ಅಲ್ಲಿಂದ ಹೊರಟ ಸಂಜಯನಿಗೆ ಹಾದಿಯಲ್ಲಿ ಅಶ್ವತ್ಥಾಮ ಕೃಪ ಕೃತವರ್ಮರು ಸಿಕ್ಕಿದರು. ''ಸಂಜಯ, ಭಾಗ್ಯವಶದಿಂದ ನೀನಿನ್ನೂ ಬದುಕಿರುವೆ. ರಾಜನನ್ನು ಎಲ್ಲದರೂ ನೋಡಿದೆಯ ಅವನು ಬದುಕಿದ್ದಾನೋ ಸತ್ತಿದ್ದಾನೋ ತಿಳಿಯದಾಗಿದೆ ಎನ್ನಲು, ಸಂಜಯನು ದುರ್ಯೋಧನನ ಸರೋವರಪ್ರವೇಶವನ್ನು ಅವರಿಗೆ ತಿಳಿಸಿದನು. ಇದನ್ನು ಕೇಳಿ ಅಶ್ವತ್ಥಾಮನಿಗೆ ಬಹಳ ದುಃಖವಾಯಿತು. ''ಅಯ್ಯೋ ದುರ್ದೈವವೆ, ನಾವು ಮೂರು ಜನ ಇನ್ನೂ ಬದುಕಿ ಉಳಿದಿರುವುದು ಅವನಿಗೆ ತಿಳಿಯದೆಂದು ಕಾಣತ್ತದೆ. ನಾವು ನಾಲ್ವರೂ ಸೇರಿ ಪಾಂಡವರನ್ನು ಜಯಿಸಬಹುದಾಗಿದ್ದಿತು ಎನ್ನುವಷ್ಟರಲ್ಲಿ ಪಾಂಡವರು ದುರ್ಯೋಧನನಿಗಾಗಿ ಎಲ್ಲಾ ಕಡೆಯೂ ಹುಡುಕಿ ಹಿಂದಿರುಗುತ್ತಿರುವುದು ಕಾಣಿಸಿತು. ಪಾಂಡವರ ಪಾಳೆಯದಲ್ಲಿ ಆನಂದೋದ್ರೇಕ ಹೇಳತೀರದು. ಹದಿನೆಂಟು ದಿನಗಳಲ್ಲಿ ಕೌರವ ವೀರರನ್ನೆಲ್ಲ ಕೊಂದು ಯುದ್ಧದಲ್ಲಿ ವಿಜಯವನ್ನು ತಮ್ಮದಾಗಿಸಿಕೊಂಡಿದ್ದರು. ಯುಧಿಷ್ಠಿರನೇ ಈಗ ಜನನಾಯಕ. ದುರ್ಯೋಧನನು ಎಲ್ಲಿಯೂ ಕಾಣಿಸುತ್ತಿಲ್ಲವೆಂದು ಗೊತ್ತಾಗಲು ಸ್ವಲ್ಪಕಾಲ ತಗುಲಿತು. ಎಲ್ಲಾ ಕಡೆ ಹುಡುಕಿದರೂ ಎಲ್ಲಿಯೂ ಸಿಕ್ಕಲಿಲ್ಲ. ಗದೆಯ ಸಮೇತವಾಗಿ ತಪ್ಪಿಸಿಕೊಂಡಿರುವ ಅವನನ್ನು ಕಂಡುಹಿಡಿಯಲು ಗೂಢಚಾರರನ್ನು ಎಲ್ಲಾ ದಿಕ್ಕುಗಳಿಗೂ ಅಟ್ಟಿದರು. ಅವನ ಕುದುರೆ ಸತ್ತುಬಿದ್ದ ಮೇಲೆ ಅವನು ಎಲ್ಲಿ ಹೋದನೆಂದು ತಿಳಿಯದಿದ್ದುದು ತೀರ ಅನಿರೀಕ್ಷಿತವಾಗಿದ್ದಿತು. ಅವನೇನೂ ಓಡಿಹೋಗುವ ಹೇಡಿಯಲ್ಲ. ಕುರುಕ್ಷೇತ್ರದ ಅಕ್ಕಪಕ್ಕದಲ್ಲೆಲ್ಲಾ ಹುಡುಕಿಯಾಯಿತು; ಅವನ ಸುಳಿವಿಲ್ಲ. ಇನ್ನೇನು ಸಂಜೆಯಾಗುತ್ತಿದೆ. ಉದ್ದೇಶ ನೆರವೇರದೆ ಪಾಳೆಯಕ್ಕೆ ಹಿಂದಿರುಗಬೇಕಲ್ಲ. ಏನು ಮಾಡುವುದು?

**ಮುಂದುವರಿಯುವುದು...**

# ಡಾಕ್ಟರ್ ಮುಂದಿವೆ ಅಭಿವೃದ್ಧಿ: ರಾಜಕೀಯದ ಸವಾಲು


• ಉದಯವಾಹಿನಿ, ರಾಮನಗರ

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ನೂತನ ಸಂಸದ ಡಾ. ಸಿ.ಎನ್. ಮಂಜುನಾಥ್ ಅವರ ಮುಂದೆ ಅಭಿವೃದ್ಧಿ ಮತ್ತು ರಾಜಕೀಯಕ್ಕೆ ಸಂಬಂಧಿಸಿದ ಹಲವು ಸವಾಲುಗಳಿವೆ. ಕ್ಷೇತ್ರವನ್ನು ಮೂರು ಸಲ ಪ್ರತಿನಿಧಿಸಿರುವ ಪ್ರಬಲ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ವಿರುದ್ಧ ದಾಖಲೆಯ ಗೆಲುವು ಪಡೆದಿರುವ ಡಾಕ್ಟರ್ ಹಾದಿ ಸುಗಮವಾಗೇನು ಇಲ್ಲ.

ರಾಜ್ಯದಲ್ಲಿಕಾಂಗ್ರೆಸ್‌ನೇತೃತ್ವದ ಸರ್ಕಾರವಿರುವುದರಿಂದ, ಬಿಜೆಪಿಯಿಂದ ಗೆದ್ದಿರುವ ಮಂಜುನಾಥ್ ಅವರಿಗೆ ನಿರೀಕ್ಷಿತ ಸಹಕಾರ ಸಿಗದಿರಬಹುದು ಎಂಬ ಮಾತುಗಳಿವೆ. ಆದರೆ, ಕೇಂದ್ರದಲ್ಲಿ ಅವರದ್ದೇ ಸರ್ಕಾರವಿರುವುದರಿಂದ ಕೇಂದ್ರ ಸರ್ಕಾರದ ಯೋಜನೆಗಳನ್ನು ತಂದು ಅಭಿವೃದ್ಧಿ ಕೆಲಸಗಳನ್ನು ಮಾಡಲು ಅವಕಾಶಗಳಿವೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಹೋದರರನ್ನು ಸೋಲಿಸಿ ಮಂಜುನಾಥ್ ಅವರಿಗೆ ಜಯದ ಮಾಲೆ ಹಾಕಿರುವ ಜನ ಸಹ ಅವರಿಂದ ಹೆಚ್ಚಿನ ಅಭಿವೃದ್ಧಿಯ ನಿರೀಕ್ಷೆಯಲ್ಲಿದ್ದಾರೆ.

'ಮಂಜುನಾಥ್ ಗೆದ್ದರೆ ಕೇಂದ್ರದಲ್ಲಿ ಸಚಿವರಾಗಲಿದ್ದಾರೆ' ಎಂಬ ಮಾತುಗಳು ಚುನಾವಣಾ ಪ್ರಚಾರದುದ್ದಕ್ಕೂ ಕೇಳಿ ಬರುತ್ತಿದ್ದವು. ಆದರೆ, ಬದಲಾದ ಪರಿಸ್ಥಿತಿಯಲ್ಲಿ ಮಂಜುನಾಥ್ ಅವರಿಗೆ ಸಚಿವ ಸ್ಥಾನ ಕೈ ತಪ್ಪಿದೆ. ಆದರೆ, ಅವರ ಬಾಮೈದ ಮಂಡ್ಯದಿಂದ ಗೆದ್ದಿರುವ ಜೆಡಿಎಸ್ ನಾಯಕರೂ ಆದ ಎಚ್.ಡಿ. ಕುಮಾರಸ್ವಾಮಿ ಅವರು, ಕೇಂದ್ರದ ಮೋದಿ ಸರ್ಕಾರದಲ್ಲಿ ಉಕ್ಕು, ಬೃಹತ್ ಕೈಗಾರಿಕಾ ಸಚಿವರಾಗಿದ್ದಾರೆ. ಎಚ್‌ಡಿಕೆ ಸಚಿವರಾಗಿರುವುದು, ಮಂಜುನಾಥ್ ಅವರಿಗೂ ಒಂದು ರೀತಿಯಲ್ಲಿ ಬಲ ತಂದು ಕೊಟ್ಟಿದೆ. ಕೈಗಾರಿಕಾಭಿವೃದ್ಧಿಗೆ ಸಂಬಂಧಿಸಿದ ಕೇಂದ್ರ ಮಟ್ಟದ ಯೋಜನೆಗಳನ್ನು ಎಚ್‌ಡಿಕೆ ಮೂಲಕ ಕ್ಷೇತ್ರ ತರಲು ಅವಕಾಶ ಸಿಕ್ಕಿದೆ. ಅದರ ಸದುಪಯೋಗಪಡಿಸಿಕೊಂಡು, ಸ್ಥಳೀಯ ರಾಜಕಾರಣವನ್ನು ಎದುರಿಸಿ ಕ್ಷೇತ್ರದ ಅಭಿವೃದ್ಧಿಗೆ ಹೇಗೆ ಮುನ್ನುಡಿ ಬರೆಯುತ್ತಾರೆಂದು ಕಾದು ನೋಡಬೇಕಿದೆ.

**ಮಂಜುನಾಥ್ ಅವರು ಜಯದೇವ ಆಸ್ಪತ್ರೆ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದವರು. ವೈದ್ಯಕೀಯ ಕ್ಷೇತ್ರದಲ್ಲಿ ದೊಡ್ಡ ಸಾಧನೆ ಮಾಡಿದವರು. ಸಂಸದರಾಗಿರುವ ಅವರಿಂದ ಹೆಚ್ಚಿನ ನಿರೀಕ್ಷೆ ಇದೆ. ಕ್ಷೇತ್ರದಲ್ಲಿ ಓಡಾಡಿ ಜನರ ಕಷ್ಟ-ಸುಖ ಆಲಿಸಬೇಕು. ಅವರ ಪ್ರತಿ ಕಾರ್ಯವೈಖರಿಯನ್ನು ಡಿ.ಕೆ ಸಹೋದರರು ಸೇರಿದಂತೆ, ಕ್ಷೇತ್ರದಲ್ಲಿರುವ ಕಾಂಗ್ರೆಸ್‌ಶಾಸಕರು ಗಮನಿಸುತ್ತಲೇ ಇರುತ್ತಾರೆ. ಹಾಗಾಗಿ, ಪ್ರಗತಿ ಪರಿಶೀಲನೆ ಸಭೆ ಸೇರಿದಂತೆ ಸಭೆ-ಸಮಾರಂಭಗಳಲ್ಲಿ ಭಾಗವಹಿಸುತ್ತಾ ತಮ್ಮನ್ನು ಗೆಲ್ಲಿಸಿದ ಜನರ ಜೊತೆಗಿರಬೇಕು. ಇಲ್ಲದಿದ್ದರೆ, ಇದೇ ಜನ ಮುಂದಿನ ಚುನಾವಣೆಯಲ್ಲಿ ಮಂಜುನಾಥ್ ಅವರಿಗೂ ಪಾಠ ಕಲಿಸುವುದರಲ್ಲಿ ಎರಡು ಮಾತಿಲ್ಲ' ಎಂದು ವ್ಯಾಪಾರಿ ರುದ್ರೇಶ್ ಹೇಳಿದರು.**




**ಬಡವರಿಗೆ ನಿವೇಶನ ಹಂಚಿಕೆಗೆ ಕ್ರಮ**

**ಚುನಾವಣೆಯಲ್ಲಿ ಸೋಲು-ಗೆಲುವು ಸಹಜ. ಆದರೆ, ಕ್ಷೇತ್ರದಲ್ಲಿ ಮೂರು ಸಲ ಗೆದ್ದು 10 ವರ್ಷ 8 ತಿಂಗಳು ಸಂಸದರಾಗಿದ್ದ ಸುರೇಶ್ ಅವರು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಆ ವಿಷಯವನ್ನು ಅಲ್ಲಗಳೆಯುವಂತಿಲ್ಲ. ನರೇಗಾದಡಿ ದೇಶದಲ್ಲೇ ಅತಿ ಹೆಚ್ಚು ಕಾಮಗಾರಿಗಳು ಜಿಲ್ಲೆಯಲ್ಲಿ ನಡೆದಿವೆ. ಕುಡಿಯುವ ನೀರಿನ ಯೋಜನೆ, ವಸತಿ ಯೋಜನೆ, ಕೆರೆ ಮತ್ತು ಕಟ್ಟೆಗೆ ನೀರು ಹರಿಸುವುದು, ಬಡವರಿಗೆ ನಿವೇಶನ ಹಂಚಿಕೆಗೆ ಕ್ರಮ ಸೇರಿದಂತೆ ಹಲವು ಕೆಲಸಗಳನ್ನು ಮಾಡಿದ್ದಾರೆ. ಇಷ್ಟೆಲ್ಲ ಕೆಲಸ ಮಾಡಿದರೂ ಮತದಾರರು ಸುರೇಶ್ ಅವರನ್ನು ಸೋಲಿಸಿ ಇವರನ್ನು ಗೆಲ್ಲಿಸಿದ್ದಾರೆಂದರೆ, ಅವರಿಗಿಂತ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಜನ ನಿರೀಕ್ಷಿಸುತ್ತಿದ್ದಾರೆ ಎಂದರ್ಥವಲ್ಲವೆ' ಎಂದು ಈ ಸಲ ಮಂಜುನಾಥ್ ಬೆಂಬಲಿಸಿದ ಸ್ಥಳೀಯ ನಿವಾಸಿ ಗೋವಿಂದರಾಜು ಅಭಿಪ್ರಾಯ ಹಂಚಿಕೊಂಡರು.**

# ಕಿತ್ತೂರು ಕರ್ನಾಟಕಕ್ಕೆ ವಿಶೇಷ ಸ್ಥಾನಮಾನ ದೊರಕಲು ಶ್ರಮಿಸಲಿ

• ಉದಯವಾಹಿನಿ, ಬೆಂಗಳೂರು



ರಾಜ್ಯದಿಂದ ನೂತನ ಕೇಂದ್ರ ಸಚಿವರಾಗಿ ಎಚ್.ಡಿ ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ, ನಿರ್ಮಲಾ ಸೀತಾರಾಮನ್, ರಾಜ್ಯ ಖಾತೆ ಸಚಿವರಾಗಿ ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಅವರು ಪ್ರಮಾಣ ವಚನ ಸ್ವೀಕರಿಸಿದ್ದು, ಅಭಿನಂದನಾರ್ಹರು ಆದರೆ ಕಲ್ಯಾಣ ಕರ್ನಾಟಕ ಮಾದರಿ ಅಡಿಯಲ್ಲಿ ಆರು ಹಿಂದುಳಿದ ಜಿಲ್ಲೆಗಳಿಗೆ ಅನ್ವಯಿಸುವಂತೆ ಪ್ರತ್ಯೇಕ ಅಭಿವೃದ್ಧಿ ಮಂಡಳಿ, ಶಿಕ್ಷಣ ಮತ್ತು ಸರಕಾರಿ ಉದ್ಯೋಗದಲ್ಲಿ ಸ್ಥಳೀಯ ಮೀಸಲಾತಿಯನ್ನು ವಿಶೇಷ ಸ್ಥಾನಮಾನ ಕಲ್ಪಿಸುತ್ತದೆ.

ಕಲ್ಯಾಣ ಕರ್ನಾಟಕ ಮಾದರಿ ವಿಶೇಷ ಸ್ಥಾನಮಾನವು ಕಿತ್ತೂರು ಕರ್ನಾಟಕದ ಧಾರವಾಡ, ಗದಗ, ಹಾವೇರಿ, ಬಾಗಲಕೋಟೆ, ಬೆಳಗಾವಿ, ವಿಜಯಪುರ ಮತ್ತು ಉತ್ತರ ಕನ್ನಡ ಏಳು ಹಿಂದುಳಿದ ಜಿಲ್ಲೆಗಳಿಗೆ ವಿಶೇಷ ಸ್ಥಾನಮಾನ ಕಲ್ಪಿಸುವುದು ಅಗತ್ಯವಿದೆ. ಕಿತ್ತೂರು ಕರ್ನಾಟಕ ಭಾಗ ಈ ಹಿಂದೆ ಮುಂಬೈ ಕರ್ನಾಟಕ ಎಂದು ಗುರುತಿಸಿಕೊಂಡಿತು.

ಕಿತ್ತೂರು ಕರ್ನಾಟಕದ ಏಳು ಜಿಲ್ಲೆಯ ಎಷ್ಟೋ ಗ್ರಾಮಗಳಲ್ಲಿ ಮೂಲಭೂತ ಸೌಕರ್ಯ ಕೊರತೆಯಿಂದ ನರಳಿತಿವೆ, ಗ್ರಾಮ ಸಂಪರ್ಕಿಸಲು ಸರಿಯಾದ ರಸ್ತೆಗಳಿಲ್ಲ. ಅಲ್ಲದೇ ಸ್ಥಳೀಯರು ಶಿಕ್ಷಣ ಮತ್ತು ಸರಕಾರಿ ಉದ್ಯೋಗ ಪಡೆಯಲು ಉದ್ಯೋಗಾವಕಾಶಿಗಳು ಹರಸಾಹಸ ಪಡಬೇಕಿದೆ ಆದ್ದರಿಂದ ಕರ್ನಾಟಕ ರಾಜ್ಯದಿಂದ ಕೇಂದ್ರ, ರಾಜ್ಯ ಖಾತೆ ಸಚಿವರಾದ ಎಚ್.ಡಿ ಕುಮಾರಸ್ವಾಮಿ, ಪ್ರಲ್ಹಾದ್ ಜೋಶಿ, ನಿರ್ಮಲಾ ಸೀತಾರಾಮನ್, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಸೇರಿದಂತೆ ಕಿತ್ತೂರು ಕರ್ನಾಟಕ ಭಾಗದ ಸಂಸದರು, ಶಾಸಕರು, ಅಧಿಕಾರಿಗಳು ಮುತುವರ್ಜಿವಹಿಸಿ ಕಿತ್ತೂರು ಕರ್ನಾಟಕಕ್ಕೆ ಕಲ್ಯಾಣ ಕರ್ನಾಟಕ ಮಾದರಿ ವಿಶೇಷ ಸ್ಥಾನಮಾನ ನೀಡುವಂತೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ.

ಕಿತ್ತೂರು ಕರ್ನಾಟಕಕ್ಕೂ ವಿಶೇಷ ಸ್ಥಾನಮಾನ ಕಲ್ಪಿಸುವತ್ತ ಕೇಂದ್ರ ಸಚಿವರು ಚಿತ್ತ ಹರಿಸಬೇಕಿದೆ.

# ಮತ್ತಷ್ಟು ಹಸಿರಾಗಿಸಲು ಬ್ಲೂ ಗ್ರೀನ್ ಊರು ಅಭಿಯಾನ ಆರಂಭ

• ಉದಯವಾಹಿನಿ, ಬೆಂಗಳೂರು

ನಮ್ಮ ನಗರವನ್ನು ಹಸಿರಾಗಿಡಲು ಬ್ಲೂ ಗ್ರೀನ್ ಊರು ಎಂಬ ಅಭಿಯಾನ ಆರಂಭಿಸಿದ್ದು, ಹೆಚ್ಚಿನ ಮರಗಳನ್ನು ನೆಡಲು ಸಿದ್ಧತೆ ಮಾಡಲಾಗಿದೆ ಎಂಬುದಾಗಿ ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದರು.

ಇಂದು ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದಂತ ಅವರು, ಇದರ ಜತೆಗೆ ಕ್ಲೈಮೆಟ್ ಆಕ್ಷನ್ ಸೆಲ್ ಕೂಡ ರಚಿಸಲಾಗಿದ್ದು, ಇದರಲ್ಲಿ ಬಿಡಬ್ಲ್ಯುಎಸ್‌ಎಸ್ ಬಿ, ಬೆಸ್ಕಾಂ, ಬಿಎಂಟಿಸಿ, ಬಿಟಿಪಿ, ಬಿಎಂಆರ್ ಸಿಎಲ್, ಡೆಲ್ಟ್, ಘನತ್ಯಾಜ್ಯ ನಿರ್ವಹಣೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅರಣ್ಯ, ಕೈಗಾರಿಕೆ, ಗಣಿಗಾರಿಗೆ ಸೇರಿದಂತೆ ಎಲ್ಲಾ ಇಲಾಖೆಗಳನ್ನು ಒಳಗೊಳ್ಳಲಾಗಿದೆ.

ಇನ್ನು ಕಳೆದ ವರ್ಷ ಹಸಿರು ರಕ್ಷಕ ಕಾರ್ಯಕ್ರಮ ಅನಾವರಣ ಮಾಡಿದ್ದೆವು. ಶಾಲಾ ಮಕ್ಕಳು ತಮ್ಮ ಪ್ರದೇಶದಲ್ಲಿ ಗಿಡ ನೆಟ್ಟು ಅವುಗಳನ್ನು ಅವರೇ ಬೆಳೆಸುವ ಕಾರ್ಯಕ್ರಮ ಇದಾಗಿತ್ತು. ಈಗಾಗಲೇ 250 ಶಾಲೆಗಳ ಟಸಹಯೋಗದಲ್ಲಿ 52 ಸಾವಿರ ಗಿಡಗಳನ್ನು ನೆಡಲಾಗಿದೆ. ಈ ಪೈಕಿ ಶೇ. 80 ರಷ್ಟು ಗಿಡಗಳು ಉಳಿದುಕೊಂಡಿವೆ. 20 % ಗೆ ಬದಲಿ ಗಿಡ ನೆಡಲಾಗುವುದು.

ಶಾಲೆಗಳು ಪಾಲಿಕೆ ಜತೆ ಒಡಂಬಡಿಕೆ ಮಾಡಿಕೊಂಡಿದ್ದು, ಈ ಗಿಡಗಳು ಆರೋಗ್ಯಕರವಾಗಿ ಬೆಳೆಯುತ್ತಿವೆಯೇ ಎಂದು ಪರಿಶೀಲಿಸಲು ಮೊಬೈಲ್ ಅಪ್ಲಿಕೇಷನ್ ಸಿದ್ಧಪಡಿಸಲಾಗಿದೆ. ಈ ಕಾರ್ಯಕ್ರಮದ ಭಾಗವಾಗಿ ಈ ವರ್ಷ ಹೆಚ್ಚಿನ ಶಾಲೆಗಳನ್ನು ಸೇರಿಸಿಕೊಂಡು 2 ಲಕ್ಷ ಗಿಡಗಳನ್ನು ನೆಡುವ ಗುರಿ ಹೊಂದಲಾಗಿದೆ. ಮೂರ್ನಾಲ್ಕು ಗಿಡ ನೆಟ್ಟು ಅವುಗಳನ್ನು ಬೆಳೆಸಿ ಹಸಿರು ಕಾಪಾಡಲು ನೆರವಾಗಿ ಎಂದು ಎಲ್ಲಾ ಶಿಕ್ಷಣ ಸಂಸ್ಥೆ ಮುಖ್ಯಸ್ಥರು, ಅಧ್ಯಾಪಕರು, ಮಕ್ಕಳಿಗೆ ಮನವಿ ಮಾಡುತ್ತೇನೆ. ಬಿಬಿಎಂಪಿ ವತಿಯಿಂದ ವಲಯವಾರು ಮರಗಣತಿ ಮಾಡಲು ಟೆಂಡರ್ ಕರೆಯಲಾಗಿದೆ. ಬೊಮ್ಮನಹಳ್ಳಿ ವಲಯದ ವಿದ್ಯಾಪೀಠ, ಕತ್ತರಿಗುಪ್ಪೆ ವಾರ್ಡ್ ಗಳಲ್ಲಿ ಈಗಾಗಲೇ 94 ಸಾವಿರ ಮರಗಳ ಸರಿಯಾದ ಬೆಳವಣಿಗೆಗೆ ಕ್ರಮ ಕೈಗೊಳ್ಳಲಾಗಿದೆ.

ಇನ್ನು ಮೆಪಥಾನ್ ಕಾರ್ಯಕ್ರಮದ ಮೂಲಕ ಎಲ್ಲೆಲ್ಲಿ ಗಿಡ ನೆಡಲು ಅವಕಾಶವಿದೆ ಎಂದು ಸ್ಥಳ ಗುರುತಿಸಲು ಮುಂದಾಗಿದ್ದೇವೆ. ಬೊಮ್ಮನಹಳ್ಳಿ ವಲಯದಲ್ಲಿ ಈ ಪ್ರಾಯೋಗಿಕ ಪ್ರಕ್ರಿಯೆ ನಡೆದಿದ್ದು, ಸಾರ್ವಜನಿಕರು ಕೂಡ ಈ ವಿಚಾರದಲ್ಲಿ ನೆರವಾಗಬಹುದು.



**ಇನ್ನು ನಗರದಲ್ಲಿ ಅಂತರ್ಜಲ ನೀರಿನ ಮಟ್ಟ ಕುಸಿಯುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿರುವ ಬಾವಿಗಳ ರಕ್ಷಣೆಗೆ ಪಾಲಿಕೆ ಮುಂದಾಗಿದೆ. ಇನ್ನು ನಗರದಲ್ಲಿ ಎಲ್ಲೆಲ್ಲಿ ತೆರೆದ ಬಾವಿಗಳಿವೆ ಅವುಗಳ ಮಾಹಿತಿ ಪಡೆದು ಅವುಗಳನ್ನು ಅಭಿವೃದ್ಧಿಪಡಿಸಲಾಗುವುದು. ನಗರದಲ್ಲಿ 7 ಸಾವಿರ ಕೊಳವೆ ಬಾವಿಗಳು ಬತ್ತಿದ್ದವು. ಇವುಗಳ ಪುನಶ್ಚೇತನಕ್ಕಾಗಿ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ನಿರ್ಧರಿಸಿದ್ದೇವೆ.**

**ಡಿಸಿಎಂ ಡಿ.ಕೆ ಶಿವಕುಮಾರ್**

# ಎತ್ತಿನಹೊಳೆ ಯೋಜನೆ ಶಿರಾ ತಾಲ್ಲೂಕಿಗೆ 0.514 ಟಿಎಂಸಿ ಕುಡಿಯುವ ನೀರು ಹಂಚಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಎತ್ತಿನಹೊಳೆ ಯೋಜನೆಯಡಿ ಶಿರಾ ತಾಲ್ಲೂಕಿಗೆ ಕುಡಿಯುವ ನೀರಿಗಾಗಿ 0.514 ಟಿಎಂಸಿ ನೀರನ್ನು ಹಂಚಿಕೆ ಮಾಡಲಾಗಿದೆ.

ಈ ನೀರನ್ನು ಶಿರಾ ತಾಲ್ಲೂಕಿನ 200 ಕೆರೆಗಳಿಗೆ ತುಂಬಿಸುವ ಯೋಜನೆ ಕುರಿತು ಇಂದು ವಿಧಾನಸೌಧದಲ್ಲಿ ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ ಜಯಚಂದ್ರ ಅವರ ಕಚೇರಿಯಲ್ಲಿ ಸಭೆ ನಡೆಯಿತು .

ಜಲ ಸಂಪನ್ಮೂಲ ಇಲಾಖೆ, ಗ್ರಾಮೀಣಾಭಿವೃದ್ಧಿ ಹಾಗು ಪಂಚಾಯತ್ ರಾಜ್ ಮತ್ತು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಈ ಸಂದ ರ್ಭದಲ್ಲಿ ಮಾತನಾಡಿದ ಟಿ.ಬಿ ಜಯಚಂದ್ರ ಅವರು ಹೇಮಾವತಿ ನದಿಯಿಂದ ಶಿರಾ ತಾಲ್ಲೂಕಿಗೆ ಕುಡಿಯುವ ನೀರಿಗಾಗಿ ಯೋಜನೆಯನ್ನು ರೂಪಿಸಿದ್ದು ನೀರು ಸರಬರಾಜು ಆಗುತ್ತಿದೆ. ಹೀಗಾಗಿ ಎತ್ತಿನಹೊಳೆ ಯೋಜನೆಯಲ್ಲಿ ಶಿರಾ ತಾಲ್ಲೂಕಿಗೆ ಹಂಚಿಕೆಯಾಗಿರುವ ನೀರನ್ನು ಕೆರೆಗಳಿಗೆ ತುಂಬಿಸಬೇಕು.

ವಿಶ್ವಸಂಸ್ಥೆ ಮಾನದಂಡಗಳ ಪ್ರಕಾರ ಅಂತ ರ್ಜಲ ಅಭಿವೃದ್ಧಿ ಪಡಿಸಬೇಕು. ಈ ನಿಟ್ಟಿನಲ್ಲಿ ಶಿರಾ ತಾಲ್ಲೂಕಿನ ಕೆರೆಗಳಿಗೆ ಎತ್ತಿನಹೊಳೆ ಯೋಜನೆಯಲ್ಲಿ ನೀರು ತುಂಬಿಸಲು ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಸಮನ್ವಯ ಸಮಿತಿ ಸಭೆಯಲ್ಲಿ ಅನುಮತಿ ಪಡೆಯಬೇಕೆಂದು ಟಿ.ಬಿ ಜಯಚಂದ್ರ ಅವರು ಸೂಚಿಸಿದರು. ಇದಕ್ಕೆ ಒಪ್ಪಿದ ಅಧಿಕಾರಿಗಳು ಮುಂದಿನ ಎತ್ತಿನಹೊಳೆ ಸಮನ್ವಯ ಸಮಿತಿ ಸಭೆಯಲ್ಲಿ ಅಗತ್ಯ ಮಾರ್ಪಾಡುಗಳನ್ನು ಮಾಡಿ ವಿಸ್ತೃತ ಯೋಜನಾ ವರದಿಯನ್ನು ಮಂಡಿಸಿ ಅನುಮತಿ ಪಡೆಯುವುದಾಗಿ ತಿಳಿಸಿದರು.

ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ತಾಂತ್ರಿಕ ಸಲಹೆಗಾರರಾಗದ ಕೆ .ಜೈಪ್ರಕಾಶ್ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಮಂಡಳಿ ವ್ಯವಸ್ಥಾಪಕ ನಿರ್ದೇಶಕರಾದ ಸಣ್ಣ ಚಿತ್ತಯ್ಯ , ಸಣ್ಣ ನೀರಾವರಿ ಇಲಾಖೆಯ ಕಾರ್ಯದರ್ಶಿ ಯತೀಶ್ ಚಂದ್ರನ್ ಎತ್ತಿನ ಹೊಳೆ ಯೋಜನಾ ವಲಯದ ಮುಖ್ಯ ಇಂಜಿನಿಯರ್‌ಎಂ ವರದಯ್ಯ,ಗ್ರಾಮೀಣ ಕುಡಿಯುವ ನೀರು ಸರಬ ರಾಜು ಮುಖ್ಯ ಇಂಜಿನಿಯರ್ ಎಜಾಜ್ ಹಾಗೂ ಇಂಜಿನಿಯರ್ ಗಳಾದ ಆನಂದ್ ಕುಮಾರ್, ಎಚ್.ಎಸ್ ನಾಗಭೂಷಣ್ಟಿ .ಬಿ ಜಯಚಂದ್ರ ಅವರ ನೀರಾವರಿ ಸಲಹೆಗಾರರಾದ ಈಶ್ವರಯ್ಯ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಭಾಗ ವಹಿಸಿದ್ದರು.

**ನೀರನ್ನು ಸಮರ್ಪಕವಾಗಿ ಒದಗಿಸಿ**

**ಇದೇ ವೇಳೆ ಶಿರಾ ವಿಧಾನಸಭಾ ಕ್ಷೇತ್ರದ ಎಲ್ಲಾ ಹಳ್ಳಿಗಳಿಗೆ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ ಕುಡಿಯುವ ನೀರನ್ನು ಸಮರ್ಪಕ ವಾಗಿ ಒದಗಿಸಬೇಕು. ಯಾವ ಹಳ್ಳಿಗಳಿಗೆ ತೊಂದರೆಯಾಗುತ್ತಿದೆ ಎಂಬುದನ್ನು ಪರಿಶೀಲಿಸಿ ಸಮರ್ಪಕವಾಗಿ ಕುಡಿಯುವ ನೀರನ್ನು ಒದಗಿಸಬೇಕು ಯಾವುದೇ ದೂರುಗಳು ಬರದಂತೆ ಅಗತ್ಯ ಕ್ರಮ ಕೈಗೊಳ್ಳಿ ಎಂದು ಇದೇ ವೇಳೆ ಜಯಚಂದ್ರ ಅವರು ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ ಅಧಿಕಾರಿಗಳಿಗೆ ತಿಳಿಸಿದರು.**

# ಕಲಾವಿದೆದ್ವಯರ ಸುಮನೋಹರ ನರ್ತನ



**ವೈ.ಕೆ. ಸಂಧ್ಯಾ ಶರ್ಮ**

• ಉದಯವಾಹಿನಿ, ವಿಶೇಷ

ಅಂದು ರವೀಂದ್ರ ಕಲಾಕ್ಷೇತ್ರದ ವೇದಿಕೆಯ ಮೇಲೆ ಪುಟ್ಟ ಎರಡು ಹರಿಣಗಳು ರಂಗದ ತುಂಬಾ ಲವಲವಿಕೆಯಿಂದ ಕುಣಿದಾಡುತ್ತಿದ್ದ ದೃಶ್ಯ ಆಪ್ಯಾಯಮಾನವಾಗಿತ್ತು. ಆ ಜೋಡಿ ಮಿನುಗು ನೃತ್ಯ ನಕ್ಷತ್ರಗಳೇ ಕು. ಭವ್ಯಶ್ರೀ ರಾಮಬಾಣಂ ಮತ್ತು ಎ. ಲಾಸ್ಯ. ಇವರು, ಅಂತರರಾಷ್ಟ್ರೀಯ ಖ್ಯಾತಿ ಪಡೆದ ನೃತ್ಯ ಗುರು ಕೋಲಾರ ರಮೇಶ್ ಅವರ ಶಿಸ್ತುಬದ್ಧ ಗರಡಿಯಲ್ಲಿ ರೂಹು ತಳೆದ ಈ ಉದಯೋನ್ಮುಖ ಕಲಾಶಿಲ್ಪಗಳು. ತಮ್ಮ ರಂಗಪ್ರವೇಶದಲ್ಲಿ ಈ ಯಮಳರು ಹಸನ್ಮುಖದಿಂದ , ಅಂಗಶುದ್ಧವಾದ, ಸ್ಫುಟವಾದ ಹಸ್ತಮುದ್ರಿಕೆಗಳ ನರ್ತನ ವಿಲಾಸವನ್ನು ಪಾದರಸದ ವೇಗದಲ್ಲಿ ಪ್ರದರ್ಶಿಸಿದ್ದು ತುಂಬಿದ ಸಭೆಯ ಕಲಾರಸಿಕರ ಮೆಚ್ಚುಗೆಯ ಕರತಾಡನವನ್ನು ಪಡೆದಿತ್ತು.

ಪ್ರಸ್ತುತಿಯ ಮೊದಲಿನಿಂದ ಕಡೆಯವರೆಗೂ ಅದಮ್ಯ ಉತ್ಸಾಹ-ಕುಗ್ಗದ ಚೈತನ್ಯದಿಂದ 'ಮಾರ್ಗಂ' ಪದ್ಧತಿಯ ಎಲ್ಲಾ ಕೃತಿಗಳನ್ನೂ ಬಹು ಅಚ್ಚುಕಟ್ಟಾಗಿ ಅರ್ಪಿಸಿದ್ದು ಈ ಕಲಾವಿದೆಯರ ವೈಶಿಷ್ಟ್ಯ. 'ಪುಷ್ಪಾಂಜಲಿ' ಯಿಂದ 'ತಿಲ್ಲಾನ'ದವರೆಗೂ ಭವ್ಯಶ್ರೀ ಮತ್ತು ಲಾಸ್ಯ ಕಣ್ಮನ ಸೆಳೆಯುವಂತೆ ವಿವಿಧ ವಿನ್ಯಾಸದ ನೃತ್ತ ಮಾಲೆಯನ್ನು, ಮನಮೋಹಕ ಆಂಗಿಕಾಭಿನಯವನ್ನು ಅಭಿವ್ಯಕ್ತಿಸಿದ್ದು ಅವರ ವಯಸ್ಸಿಗೆ ಮೀರಿದ ಪ್ರತಿಭಾ ಪ್ರಕಾಶವಾಗಿತ್ತೆಂದರೆ ಅತಿಶಯೋಕ್ತಿಯಲ್ಲ. ಪ್ರಸ್ತುತಿಯ ಪ್ರಧಾನ ಭಾಗ 'ವರ್ಣ' ( ಶ್ರೀ ಮಧುರೈ ಎನ್. ಕೃಷ್ಣನ್ ರಚನೆ) ದೈವೀಕ ಆಯಾಮದಲ್ಲಿ ಮಿಂಚಿತು. ಅನ್ನಮಾಚಾರ್ಯರ ಎರಡು ಕೀರ್ತನೆಗಳು ಅನನ್ಯವಾಗಿದ್ದವು. 'ಶಬ್ದಂ' ಮತ್ತು 'ಪದಂ' ಆಯ್ಕೆಗಳು ಚೆಂದವಾಗಿದ್ದು ಅವುಗಳನ್ನು ಕಲಾವಿದೆಯರು ರಮ್ಯವಾಗಿ ಪ್ರಸ್ತುತಪಡಿಸಿದರು. ಕಲಾವಿದೆಯರಿಗೆ ಸ್ಫೂರ್ತಿಯಾಗಿ ಗುರು ರಮೇಶ್ ಅವರ ತುಂಬು ಕಂಠದ ನಿಖರವಾಗಿದ್ದ ನಟುವಾಂಗದ ತರಂಗಗಳು ಕಿವಿಯಲ್ಲಿ ಮೊರೆದವು. ಭರವಸೆ ಮೂಡಿಸಿದ ಕಲಾವಿದೆಯರ ದೈವೀಕ ಆಯಾಮದ ನೃತ್ಯ ನೈವೇದ್ಯ ಸಾರ್ಥಕತೆ ಪಡೆದು ಪ್ರೇಕ್ಷಕರ ಮನಮುಟ್ಟಿದವು.ನೃತ್ಯ ಸೊಗಸನ್ನು ಮೆರೆದ ವಾದ್ಯಗೋಷ್ಠಿ- ಮೃದಂಗ- ಪೃಥ್ವೀಕೃಷ್ಣ, ಕೊಳಲು- ಸ್ಕಂಧ ಕುಮಾರ್, ಪಿಟೀಲು ಶಶಾಂಕ್ , ರಿದಂ ಪ್ಯಾಡ್- ಅರುಣ್ ಕುಮಾರ್ ಸ್ತುತ್ಯಾರ್ಹವಾಗಿದ್ದು, ಶ್ರೀಮತಿ ಜಯಶ್ರೀ ಅಜಯ್ ಕುಮಾರ್ ಅವರ ಭಾವಪೂರ್ಣ ಗಾಯನ ಮೆಚ್ಚಾಯ್ತು. ಗುರು ಕೋಲಾರ್ ರಮೇಶ್ ನೃತ್ಯ ಸಂಯೋಜನೆಗಳು ಸುಂದರವಾಗಿದ್ದು, ನಟುವಾಂಗ ವಿಶೇಷತೆಯನ್ನು ಪಡೆದಿತ್ತು. ಈ ಸಮಾರಂಭದಲ್ಲಿ ಅನೇಕ ಗಣ್ಯರು ಭಾಗವಹಿಸಿದ್ದು ಅಧ್ಯಕ್ಷತೆಯನ್ನು ಶ್ರೀ ಸಿ.ಎಂ. ನಾಗರಾಜ್- ಅಧ್ಯಕ್ಷರು ದೆಹಲಿ ಕರ್ನಾಟಕ ಸಂಘ -ನವದೆಹಲಿ ಅವರು ವಹಿಸಿದ್ದರು.

# ಮೋದಿ ಸಂಪುಟದಲ್ಲಿ ಕೈ ತಪ್ಪಿದ ಕೃಷಿ ಖಾತೆ

## ನಿರಾಸೆಗೊಂಡ ಕುಮಾರಸ್ವಾಮಿ ಹೇಳಿದ್ದೇನು?

■ ರಾಜ್ಯದಲ್ಲಿ ಬಿಜೆಪಿ, ಜೆಡಿಎಸ್ ಮೈತ್ರಿಯಾಗಿ ಚುನಾವಣೆಯನ್ನ ಎದುರಿಸಿತ್ತು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಸಚಿವ ಸಂಪುಟದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷರಾದ ಎಚ್‌ಡಿ ಕುಮಾರಸ್ವಾಮಿ ಅವರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ಸಿಕ್ಕಿದ್ದು, ಕೃಷಿ ಖಾತೆ ಮಿಸ್ ಆಗಿದೆ. ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಅವರಿಗೆ ಕೃಷಿ ಖಾತೆ ಕೈ ತಪ್ಪಿದ ಹಿನ್ನೆಲೆ ತೀವ್ರ ನಿರಾಸೆಯುಂಟಾಗಿದೆ ಎನ್ನಲಾಗಿದೆ.

ಲೋಕಸಭಾ ಚುಣಾವಣೆ ಹಿನ್ನೆಲೆ ರಾಜ್ಯದಲ್ಲಿ ಆಡಳಿತರೂಢ ಕಾಂಗ್ರೆಸ್‌ಗೆ ಠಕ್ಕರ್ ಕೊಡುವ ನಿಟ್ಟಿನಲ್ಲಿ ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾಗಿ ಚುನಾವಣೆಯನ್ನ ಎದುರಿಸಿತ್ತು. ಬಿಜೆಪಿ 17 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ರೆ, ಜೆಡಿಎಸ್ ಎರಡು ಕ್ಷೇತ್ರದಲ್ಲಿ ಗೆಲುವು ಸಾಧಿಸಿತ್ತು. ಮಂಡ್ಯ ಕ್ಷೇತ್ರದಿಂದ ಗೆಲುವು ಕಂಡ ಕುಮಾರಸ್ವಾಮಿ ಅವರಿಗೆ ಮೋದಿ ಸಂಪುಟದಲ್ಲಿ ಕ್ಯಾಬಿನೆಟ್ ದರ್ಜೆ ಸಚಿವ ಸ್ಥಾನ ಸಿಕ್ಕಿದೆ.

ಕೃಷಿ ಖಾತೆ ಬಯಸಿದ್ದ ಕುಮಾರಸ್ವಾಮಿ ಅವರಿಗೆ ಉಕ್ಕು ಮತ್ತು ಬೃಹತ್ ಕೈಗಾರಿಕೆ ಖಾತೆ ನೀಡಲಾಗಿದೆ. ಇನ್ನು ಖಾತೆ ಹಂಚಿಕೆ ಬಳಿಕ ಮೊದಲ ಮಂಡ್ಯ ಸಂಸದರಾದ ಹೆಚ್ ಡಿ ಕುಮಾರಸ್ವಾಮಿ ಅವರು ಮಾತನಾಡಿ, ಸಚಿವ ಸಂಪುಟ ಸಭೆಯಲ್ಲಿ ಖಾತೆ ಹಂಚಿಕೆ ಮಾಡಿದ್ದು, ಕೃಷಿ ಖಾತೆ ನಿರೀಕ್ಷೆ ಇತ್ತು, ಆದರೆ ಮೋದಿ ತೀರ್ಮಾನ ಮಾಡಿದ್ದಾರೆ. ದೇಶದ ಅಭಿವೃದ್ಧಿಗೆ ಪೂರಕವಾಗಿ ನಿರೀಕ್ಷೆ ಮಾಡಿ ಖಾತೆ ನೀಡಿದ್ದಾರೆ. ಕನ್ನಡಿಗರ ಪರವಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು.

ದೇಶದ ಪ್ರಗತಿಗೆ ಕೆಲಸ ಮಾಡಬೇಕಿದೆ. ಎಲ್ಲವನ್ನು ಗಮನಿಸಿ ಇಲಾಖೆಯನ್ನು ಮೋದಿ ಕೊಟ್ಟಿದ್ದಾರೆ. ಪ್ರಮಾಣಿಕವಾಗಿ ಕ್ಷಣ ವ್ಯರ್ಥ ಮಾಡದೆ ಕೆಲಸ ಮಾಡುತ್ತೇನೆ. ರೂಟ್ ಮ್ಯಾಪ್ ಸಿದ್ದಮಾಡಿ ಕೆಲಸ ಮಾಡುತ್ತೇನೆ. ನನ್ನ ಜೀವನದಲ್ಲಿ ಅತಿ ದೊಡ್ಡ ಸವಾಲು. ಕರ್ನಾಟಕದಲ್ಲಿ ಹಲವಾರು ಸಮಸ್ಯೆಗಳು ಇವೆ. ಅವುಗಳನ್ನು ಈಗ ಚರ್ಚೆ ಮಾಡುವುದಿಲ್ಲ, ನನ್ನದೆ ಕಲ್ಪನೆಯಲ್ಲಿ ಕೆಲಸ ಮಾಡಲು ಪ್ರಮಾಣಿಕೆ ಪ್ರಯತ್ನ ಮಾಡುತ್ತೇನೆ ಎಂದು ಕುಮಾರಸ್ವಾಮಿ ಹೇಳಿದರು.

**ದೇಶದ ನಿರುದ್ಯೋಗ ಸಮಸ್ಯೆ**

**ನನ್ನ ವಿಚಾರದಲ್ಲಿ ವಿಶೇಷವಾದ ನಂಬಿಕೆ ಇಟ್ಟು ಖಾತೆ ನೀಡಿದ್ದಾರೆ. ನನ್ನ ಮೇಲೆ ಸವಾಲಿದೆ. ದೇಶದ ನಿರುದ್ಯೋಗ ಸಮಸ್ಯೆ ನಿವಾರಣೆ ಮಾಡಲು ಕೆಲಸ ಮಾಡಬೇಕಿದೆ. ಕರ್ನಾಟಕಕ್ಕೆ ಅಂತ ಮಾತ್ರ ಹೇಳಲ್ಲ. ದೇಶಾದ್ಯಂತ ಸುತ್ತಾಡಿ ಬದಲಾವಣೆ ತರಲು ಬಯಸಿದ್ದೇನೆ ಎಂದ ಅವರು, ಪ್ರಹ್ಲಾದ್ ಜೋಷಿಯವರಿಗೆ ಆಹಾರ ಖಾತೆ ಕೊಟ್ಟಿದ್ದಾರೆ. ಶೋಭಾ ಅವರಿಗೂ ಉತ್ತಮ ಖಾತೆ ಸಿಕ್ಕಿದೆ ಎಂದು ಹೇಳಿದರು.**

**ನನ್ನದೆ ಕಲ್ಪನೆಯಲ್ಲಿ ಕೆಲಸ ಮಾಡಲು ಪ್ರಮಾಣಿಕೆ ಪ್ರಯತ್ನ**

**ಇನ್ನೂ ರಾಜ್ಯದಲ್ಲಿ ಜೆಡಿಎಸ್ ಪಕ್ಷ ಏಳು ಬೀಳುಗಳನ್ನು ಕಂಡಿದೆ. ದೇವೇಗೌಡರನ್ನು ಇಂದು ಸ್ಮರಿಸುತ್ತೇನೆ. ದೇವೇಗೌಡರ ರಾಜಕೀಯ ಮುಗಿದೇ ಹೋಯ್ತು ಎನ್ನುವಾಗ ಮತ್ತೆ ಪುಟಿದೇದ್ದಿದ್ದಾರೆ. ಕುಮಾರಸ್ವಾಮಿ ಮುಗಿದು ಹೋದ ಎನ್ನುವಾಗಲೇ ಯಾವುದೋ ಶಕ್ತಿ ಕಾಪಾಡಿದೆ. ಈ ಪಕ್ಷವನ್ನು ಯಾವುದೋ ಶಕ್ತಿ ಮೇಲೆತ್ತಿದೆ ಎಂದು ಕುಮಾರಸ್ವಾಮಿ ಹೇಳಿದರು.**

# ಮದ್ಯ ಮಾರಾಟಗಾರರ ವಿರುದ್ಧ ಗ್ರಾಮಸ್ಥರ ಆಗ್ರಹ

## ಮದ್ಯ ಮಾರಾಟ ಬಂದ್ ಮಾಡುವಂತೆ ಗ್ರಾಮಸ್ಥರಿಂದ ಸಾಮೂಹಿಕ ಹೋರಾಟ, ಒಟ್ಟಾಗಿ ಸಂಚರಿಸಿ ಜನಜಾಗೃತಿ

**• ಉದಯವಾಹಿನಿ, ಮುದ್ದೇಬಿಹಾಳ**

ಸಾರಾಯಿ, ಮದ್ಯ ಮಾರಾಟ ಬಂದ್ ಮಾಡುವಂತೆ ಆಗ್ರಹಿಸಿ ಅಂದಾಜು 500ಕ್ಕೂ ಹೆಚ್ಚು ಗ್ರಾಮಸ್ಥರು ಸಾಮೂಹಿಕ ನಾಯಕತ್ವದಲ್ಲಿ ವಿಜಯಪುರ ಜಿಲ್ಲೆ,ಮುದ್ದೇಬಿಹಾಳ ತಾಲ್ಲೂಕಿನ ಆಲೂರ, ಕೆಸಾಪುರ ಗ್ರಾಮಗಳಲ್ಲಿ ಒಟ್ಟಾಗಿ ಸಂಚರಿಸಿ ಜನಜಾಗೃತಿ ಮೂಡಿಸಿ ಎಚ್ಚರಿಕೆ ನೀಡಿದ ಘಟನೆ ನಡೆದಿದೆ. ಎರಡೂ ಗ್ರಾಮಗಳ ಮಕ್ಕಳು, ಮಹಿಳೆಯರು, ಯುವಕರು, ಹಿರಿಯರು, ವಿವಿಧ ರಾಜಕೀಯ ಪಕ್ಷಗಳ ಸ್ಥಳೀಯ ಮುಖಂಡರು ಸೇರಿ ಹಲವರನ್ನೊಳಗೊಂಡಿದ್ದ ತಂಡವು ಕಾಲ್ನಡಿಗೆಯಲ್ಲೇ ಎಲ್ಲೆಲ್ಲಿ ಮದ್ಯ ಮಾರಾಟ ಮಾಡಲಾಗುತ್ತಿದೆಯೋ ಅಂಥ ಸ್ಥಳಗಳಿಗೆಲ್ಲ ತೆರಳಿ ಇನ್ನು ಮುಂದೆ ಯಾವುದೇ ಕಾರಣಕ್ಕೂ ಮದ್ಯ, ಸಾರಾಯಿ ಮಾರಾಟ ಮಾಡುವಂತಿಲ್ಲ ಎಂದು ಕಟ್ಟಪ್ಪಣೆ ವಿಧಿಸಿದರು.

ಆಲೂರ, ಕೆಸಾಪುರ ಗ್ರಾಮಗಳ ನಡುವಿನ ಅಂತರ ಒಂದು ಕಿಲೋ ಮೀಟರ್ ಇದೆ. ಹೆಚ್ಚು ಕಡಿಮೆ ಎರಡೂ ಗ್ರಾಮಗಳು ಸೇರಿದಂತಿವೆ. ಬಹಳ ಹಿಂದಿನಿಂದಲೂ ಇಲ್ಲಿನ ಕೆಲವು ಹೊಟೇಲ್, ಪಾನ್‌ಶಾಪ್, ಕೂಲ್‌ಡ್ರಿಂಕ್ಸ್, ಕಿರಾಣಿ ಅಂಗಡಿ ಮಾತ್ರವಲ್ಲದೆ ಕೆಲ ಮನೆಗಳಲ್ಲೂ ರಾಜಾರೋಷವಾಗಿ ಸಾರಾಯಿ, ಮದ್ಯದ ಮಾರಾಟ ಯಥೇಚ್ಛವಾಗಿ ನಡೆಯುತ್ತಿತ್ತು. ಮದ್ಯದ ಚಟಕ್ಕೆ ಹಲವರು ಬಲಿಯಾಗಿ ಕುಟುಂಬಗಳು ಸಾಕಷ್ಟು ತೊಂದರೆಗೆ ಸಿಲುಕಿದ್ದವು. ಹಗಲೆಲ್ಲ ಕುಡುಕರು ತೊಂದರೆ ಕೊಡುವುದು ಹೆಚ್ಚಾಗಿತ್ತು. ಕುಡಿತಕ್ಕೆ ಕೆಲವರು ಮನೆ ಮಠ ಕಳೆದುಕೊಂಡಿದ್ದರು. ಮತ್ತೇ ಕೆಲವರು ಪ್ರಾಣವನ್ನೂ ಕಳೆದುಕೊಂಡಿದ್ದರು.




> ಅನೇಕ ಬಾರಿ ಅಕ್ರಮ ನಡೆಸುವವರಿಗೆ ತಿಳಿಹೇಳಿದರೂ ಮಾರಾಟ ಕೈಬಿಟ್ಟಿರಲಿಲ್ಲ. ಇದರಿಂದ ಒಟ್ಟಾಗಿ ಎರಡೂ ಗ್ರಾಮದ ಪ್ರಜ್ಞಾವಂತರು ಈ ದಿಟ್ಟ ಕ್ರಮ ಕೈಕೊಂಡು ರಾಜ್ಯದಲ್ಲೇ ಮಾದರಿ ನಿಲುವು ತಳೆದ ಗ್ರಾಮಸ್ಥರು ಎನ್ನಿಸಿಕೊಂಡಿದ್ದಾರೆ.

ಎಲ್ಲರೂ ಗುಂಪಾಗಿ ಸಾರಾಯಿ, ಮದ್ಯ ಮಾರುವ ಅಂಗಡಿಗಳ ಮುಂದೆ ಧರಣಿ ಹೂಡಿ ಧಿಕ್ಕಾರ ಧಿಕ್ಕಾರ ಸಾರಾಯಿ ಮಾರುವವರಿಗೆ ಧಿಕ್ಕಾರ ಎಂದು ಜೋರಾಗಿ ಕೂಗಿ ಅಕ್ರಮ ಮಾರಾಟಗಾರರಿಗೆ ಬಹಿರಂಗವಾಗಿಯೆ ಅವಮಾನಿಸಿ ಛೀ ಬಿಡಿಸಿದರು. ಅಕ್ರಮ ನಡೆಸುವ ಅಂಗಡಿಕಾರರಿಗೆ ಗಡುವು ನೀಡಿದರು.

ಕೆಲ ಅಂಗಡಿಕಾರರು ಈಗಾಗಲೇ ಮಾಲನ್ನು ಸ್ಟಾಕ್ ಇಟ್ಟಿದ್ದು ಲಾಸ್ ಆಗುತ್ತದೆ ಎಂದು ಪ್ರತಿರೋಧಿಸಿದಾಗ ಅಂಥವರಿಗೆ ಅವರಲ್ಲಿರುವ ಸ್ಟಾಕ್ ಮುಗಿಯುವತನಕ ಮಾರುವಂತೆ ತಿಳಿಸಿ ಹೊಸದಾಗಿ ಮಾಲು ತರಿಸಬಾರದು ಎಂದು ಫರ್ಮಾನು ಹೊರಡಿಸಿ ಅಂಥವರ ಬಾಯಿ ಬಂದ್ ಮಾಡಿದರು.

ರಸ್ತೆಯ, ವಾರ್ಡ, ಓಣಿ ತುಂಬೆಲ್ಲ ಜನರ ಗದ್ದಲ, ಧಿಕ್ಕಾರದ ಕೂಗು ಕೇಳಿ ಮನೆಯಿಂದ ಹೊರಬಂದ ಅನೇಕ ಮರ್ಯಾದಸ್ಥರು ಕೊನೆಗೂ ನಮ್ಮೂರಿನಲ್ಲಿ ಸಾರಾಯಿ, ಮದ್ಯ ಮಾರಾಟ ಮುಕ್ತವಾಗುವ ಕಾಲ ಬಂತಲ್ಲ ಎಂದು ಸಂಭ್ರಮಿಸಿ ತಂಡದೊಂದಿಗೆ ತಾವೂ ಜೊತೆಗೂಡಿ ಹೆಜ್ಜೆ ಹಾಕಿದ್ದು ವಿಶೇಷವಾಗಿತ್ತು.

ಯುವಕ ಪ್ರಶಾಂತ ಪಾಟೀಲ ಅವರು ಗ್ರಾಮಸ್ಥರ ಒಗ್ಗಟ್ಟಿನ ಈ ಕ್ರಮವನ್ನು ತಮ್ಮ ಮೊಬೈಲ್ ಕ್ಯಾಮರಾದಲ್ಲಿ ಸೆರೆ ಹಿಡಿದು ದಾಖಲೀಕರಣ ಇಟ್ಟುಕೊಂಡರು. ಗ್ರಾಮಲೆಕ್ಕಾಧಿಕಾರಿ, ಗ್ರಾಪಂ ಪಿಡಿಒನಿಂದ ಹಿಡಿದು ತಹಶೀಲ್ದಾರ್, ಪಿಎಸ್ಐ, ಸಿಪಿಐ, ಡಿಸಿ, ಎಸ್ಪಿ, ಅಬಕಾರಿ ಪೊಲೀಸ್ ಅಧಿಕಾರಿಗಳ ಸೇರಿ ಹಲವರಿಗೆ ಗ್ರಾಮಸ್ಥರ ಒಕ್ಕಟ್ಟಿನ ಸಂದೇಶ, ತೀರ್ಮಾನ ಇರುವ ಫೂಟೇಜ್ ಕಳುಹಿಸಿ ಅಕ್ರಮ ತಡೆಯಲು ಕಾನೂನಾತ್ಮಕ ಸಹಕಾರ ನೀಡುವಂತೆ ಕೋರಿದ್ದು ಒಂದು ಹೆಜ್ಜೆ ಮುಂದೆ ಇಟ್ಟಂತಾಗಿತ್ತು.

ವೈ.ಬಿ.ತಳವಾರ ಮಾಸ್ತರ, ಗದ್ದೆಪ್ಪ ಬೋಯೇರ, ಸಂಗನಗೌಡ ಪಾಟೀಲ, ಜಿ.ಜಿ.ಗೌಡರ, ಬಾಲಪ್ಪ ತಳವಾರ, ಸುರೇಶ ಭೈರವಾಡಗಿ, ದ್ಯಾವಣ್ಣ ಕಪನೂರ, ಶ್ರೀನಿವಾಸ ಗೌಂಡಿ, ದ್ಯಾಮಣ್ಣ ಇಂಗಳಗಿ, ಅಂಬ್ರೇಶ ಸಂಗಮ, ಸಂಗಮೇಶ ಹಡಪದ, ಕಂಠೆಪ್ಪ ಭೋಯೇರ, ಸಂಗಪ್ಪ ಸಾತಿಹಾಳ, ಈರಮ್ಮ ಉಪ್ಪಿನಕಾಯಿ, ಗಿರಿಯಪ್ಪ ಪೂಜಾರಿ, ಅಯ್ಯಮ್ಮ ಹಿರೇಕುರುಬರ, ಗದ್ದೆಪ್ಪ ಮಾದರ, ತಿಪ್ಪವ್ವ ಮಾದರ, ಹುಲಗವ್ವ ಮಾದರ, ಶೇಖರಗೌಡ ಗೌಡರ, ಪ್ರಶಾಂತ ಪಾಟೀಲ ಸೇರಿ ಹಲವು ಪ್ರಮುಖರು ತಂಡದ ನೇತೃತ್ವ ವಹಿಸಿದ್ದರು.

ವಿಕಲಚೇತನರು ಕೂಡ ಕೋಲು ಹಿಡಿದು ಜನಜಾಗೃತಿಯಲ್ಲಿ ಪಾಲ್ಗೊಂಡು ಗಮನ ಸೆಳೆದರು.

### ಪ್ರಮುಖ ಸ್ಥಳಗಳಿಗೆ ಮುತ್ತಿಗೆ ಹಾಕಿ ಬಿಸಿ ಮುಟ್ಟಿಸುವ ತೀರ್ಮಾನ

ಅಬಕಾರಿ ಮತ್ತು ಪೊಲೀಸ್ ಅಧಿಕಾರಿಗಳು ಸೇರಿ ಹಲವರಿಗೆ ಎರಡೂ ಗ್ರಾಮಸ್ಥರು ಒಗ್ಗಟ್ಟಿನಿಂದ ಕೈಕೊಂಡಿರುವ ತೀರ್ಮಾನ ತಿಳಿಸಿಕೊಟ್ಟು ಇನ್ನು ಮುಂದೆ ಗ್ರಾಮದಲ್ಲಿ ಅಕ್ರಮವಾಗಿ ಮದ್ಯ, ಸಾರಾಯಿ ಮಾರಾಟ ಮಾಡಲು ಪ್ರೋತ್ಸಾಹಿಸುವುದು, ಸಹಕಾರ ನೀಡುವುದು ಗೊತ್ತಾದರೆ ಈ ಜನಜಾಗೃತಿಯನ್ನು ಹೋರಾಟವಾಗಿ ರೂಪಿಸಿ ತಹಶೀಲ್ದಾರ್ ಕಚೇರಿ, ಅಬಕಾರಿ ನಿರೀಕ್ಷಕರ ಕಚೇರಿ, ಪೊಲೀಸ್ ಠಾಣೆ ಮತ್ತಿತರ ಪ್ರಮುಖ ಸ್ಥಳಗಳಿಗೆ ಮುತ್ತಿಗೆ ಹಾಕಿ ಬಿಸಿ ಮುಟ್ಟಿಸುವ ತೀರ್ಮಾನವನ್ನೂ ಪ್ರಮುಖರು ಕೈಕೊಂಡರು.

---

# ಆರ್ಟಿಕಲ್ 371(ಜೆ) ಸಮರ್ಪಕ ಜಾರಿಗೆ ಒತ್ತಾಯ

**• ಉದಯವಾಹಿನಿ, ಸಿಂಧನೂರು**

ಕಲ್ಯಾಣ ಕರ್ನಾಟಕ ಭಾಗದ ಆರ್ಟಿಕಲ್ 371(ಜೆ) ಮೀಸಲಾತಿ ನಿಯಮಗಳು ಸರಿಪಡಿಸಿ ಸಮರ್ಪಕ ಅನುಷ್ಠಾನದ ಹಕ್ಕೊತ್ತಾಯಕ್ಕಾಗಿ ಆಗ್ರಹಿಸಿ 371(ಜೆ) ಹೋರಾಟ ಸಮಿತಿ ನೇತೃತ್ವದಲ್ಲಿ ಇಂದು ವಿವಿಧ ಸಂಘ ಸಂಸ್ಥೆಗಳ ಹಾಗೂ ಖಾಸಗಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಜನಪ್ರತಿನಿಧಿಗಳು ಸೇರಿ ನಗರದ ಪಾಟೀಲ್ ಶಿಕ್ಷಣ ಸಂಸ್ಥೆಯಿಂದ ರಸ್ತೆಯಲ್ಲಿ ಮೆರವಣಿಗೆ ಮೂಲಕ ಸಂಚರಿಸಿ ತಹಶೀಲ್ದಾರ್ ಕಚೇರಿ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಈ ಪ್ರತಿಭಟನೆಯ ಉದ್ದೇಶಿಸಿ ಮಾತನಾಡಿದ ಕಲ್ಯಾಣ ಕರ್ನಾಟಕ ಅನುಚ್ಛೇದ 371(ಜೆ) ಸಮಿತಿ ಸಂಚಾಲಕರಾದ ಮಾಜಿ ಸಂಸದ ಕೆ ವಿರೂಪಾಕ್ಷಪ್ಪ ಕಲ್ಯಾಣ ರಾಜ್ಯಕ್ಕೆ ಆರ್ಟಿಕಲ್ 371 (ಜೆ) ಅಡಿಯಲ್ಲಿ ಸಮರ್ಪಕ ಅನುಷ್ಠಾನದಲ್ಲಿ ಸಾಕಷ್ಟುಗೊಂದಲಗಳು ಉಂಟು ಮಾಡಿ ಈ ಭಾಗಕ್ಕೆ ಉದ್ಯೋಗದಲ್ಲಿ, ಶಿಕ್ಷಣದಲ್ಲಿ, ಮೀಸಲಾತಿಯಲ್ಲಿ, ಸಮಗ್ರ ಅಭಿವೃದ್ಧಿಯಲ್ಲಿ ಅನ್ಯಾಯವಾಗುತ್ತಿದೆ. ಹಾಗಗಿ ಈ ಅನ್ಯಾಯವನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಬೇಕು. ಆದರಿಂದ ಎಲ್ಲಾ ಸಂಘ ಸಂಸ್ಥೆಗಳ ಮತ್ತು ವಿದ್ಯಾರ್ಥಿ ತಂದೆ ತಾಯಿಗಳು ನಮ್ಮ ಮಕ್ಕಳು ಭವಿಷ್ಯಕ್ಕಾಗಿ ಹೋರಾಡೋಣ.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ವಿಶೇಷ ಯೋಜನೆ ಜಾರಿಗೆ ತಂದು ಮಂಡಳಿಯ ರಚಿಸುವಂತೆ ಮಾನ್ಯ ರಾಜ್ಯಪಾಲರಿಗೆ, ಮುಖ್ಯಮಂತ್ರಿಗಳಿಗೆ ಆಗ್ರಹಿಸಿದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ, ಉತ್ತಮ ಅಂಕಗಳನ್ನು ಪಡೆದಿರುವವರನ್ನು ಪರಿಗಣಿಸಿ ಎಂದು ಹೇಳುವುದರ ಮೂಲಕ 17 17 ಸಮರ್ಪಕ ಬೇಡಿಕೆಗಳನ್ನು ಈಡೇ ರಿಸುವಂತೆ ತಾಲ್ಲೂಕು ತಹಶೀಲ್ದಾರ್ ಮೂಲಕ ಗೌರವಾನ್ವಿತ ರಾಜ್ಯಪಾಲರ, ಸಿಎಂಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.




**ಸಿಂಧನೂರಿಲ್ಲಿ ಬೃಹತ್ ಪ್ರತಿಭಟನೆ**

> ದೇವರು ವರ ಕೊಟ್ಟರೂ ಪೂಜಾರಿ ಕೊಡಲಿಲ್ಲ. ಎಂದು ನಮ್ಮ ಭಾಗವನ್ನು ವಕ್ರದೃಷ್ಟಿಯಿಂದ ನೋಡಿ ಬೇಡಿ ನಾವೇನು ಪ್ರತ್ಯೇಕ ರಾಜ್ಯದವರೇನಲ್ಲ....? ಎಂದು ರಾಜ್ಯ ಸರ್ಕಾರ ಉತ್ತರಿಸಲಿ
> – ವೆಂಕಟರಾವ್ ನಾಡಗೌಡ

### ಹೊಟ್ಟೆ ಕಿಚ್ಚು ಯಾಕೆ

ದಕ್ಷಿಣ ಕರ್ನಾಟಕ ಭಾಗದವರು ನಮ್ಮ ಕಲ್ಯಾಣ ಕರ್ನಾಟಕ ಭಾಗದವರು ಮೇಲೆ ಹೊಟ್ಟೆ ಕಿಚ್ಚು ಯಾಕೆ ಎಂಬುದು ಪ್ರಶ್ನೆ. ನಮ್ಮಲ್ಲಿ ಕಾಡುತ್ತಿದೆ. ಎಂದು ಕ.ಕ ಹೋರಾಟ ಸಮಿತಿಯ ಸಂಚಾಲಕ ರಜಾದ್ ಉಸ್ತಾಕ್ ಅವರು ಸಂವಿಧಾನದ ಅಡಿಯಲ್ಲಿ ಆರ್ಟಿಕಲ್ 371(ಜೆ) ಜಾರಿಯಾಗಿ ಸುಮಾರು ದಶಕಗಳ ಕಳೆದರೂ ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಇದಕ್ಕೆ ಕಾರಣ ಮಾನ್ಯ ಮುಖ್ಯಮಂತ್ರಿಗಳು ಈ ಕಲಾಂ ಕುರಿತು ಜನಪ್ರತಿನಿಧಿಗಳ ಜೊತೆಗೆ ಸಭೆ ಮಾಡದೇ ಇರುವುದೇ ಈ 371(ಜೆ) ಅಡಿಯಲ್ಲಿ ಗೊಂದಲಗಳು ಸೃಷ್ಟಿಯಾಗುವುದಕ್ಕೆ ಕಾರಣ

---

# ಮೋದಿ ಅಲೆಗಿಂತ ಬಿಜೆಪಿ ಅಲೆ ಹೆಚ್ಚಿತು

**• ಉದಯವಾಹಿನಿ, ಹಾವೇರಿ**

ಹಾವೇರಿ ಕ್ಷೇತ್ರದಲ್ಲಿ ದೊಡ್ಡ ಪ್ರಮಾಣದ ಆಶೀರ್ವಾದವನ್ನು ಕೈ ನಾಯಕರು ಕೊಡಿಸಿದ್ದಾರೆ. ಎಲ್ಲಾ ಮುಖಂಡರು, ಕಾರ್ಯಕರ್ತರು ಒಗ್ಗಟ್ಟಾಗಿ ಆಶೀರ್ವಾದ ಕೊಡಿಸಿದ್ದಾರೆ. ಚುನಾವಣೆಯಲ್ಲಿ ಸೋಲು ಗೆಲುವು ಸಹಜ, ಮತ ನೀಡಿದ ಎಲ್ಲರಿಗೂ ಧನ್ಯವಾದಗಳು ಎಂದು ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕರ್ತರ ಜೊತೆ ಸಾಮಾನ್ಯ ಕಾರ್ಯಕರ್ತನಾಗಿ ಜೊತೆ ಇರುತ್ತೇನೆ. ಚುನಾವಣೆಯಲ್ಲಿ ರಣತಂತ್ರಗಳು ನಡೆಯುತ್ತವೆ.

ಹೊಂದಾಣಿಕೆ ರಾಜಕಾರಣ ಇಲ್ಲಿ ನಡೆದಿಲ್ಲ. ಹೊಂದಾಣಿಕೆ ರಾಜಕಾರಣ ನಡೆದಿದ್ದರೆ ನನಗೆ 6 ಲಕ್ಷ 60 ಸಾವಿರ ಮತಗಳು ಬರುತ್ತಿರಲಿಲ್ಲ. ನಗರ ಪ್ರದೇಶದಲ್ಲಿ ಬಿಜೆಪಿಗೆ ಹೆಚ್ಚಿನ ಲೀಡ್ ಸಿಕ್ಕಿದೆ ಎಂದರು.

ಗದಗನಲ್ಲಿ 16 ಸಾವಿರ ಅಂತರವಾಗಿದೆ, ಇದನ್ನ ಎಲ್ಲಿಯೂ ಮುರಿಯಲು ಸಾಧ್ಯವಾಗಿಲ್ಲ. ಹಿಂದಿನ ಚುನಾವಣೆಯಲ್ಲಿಯೂ ಗದಗದಲ್ಲಿ ಕಡಿಮೆ ಮತಗಳು ಬಂದಿತ್ತು. ನಮ್ಮ ಸೋಲು ದೊಡ್ಡದಲ್ಲ, ಅಂತರ ಕಡಿಮೆಯಿದೆ.

ಶಹರದ ಟ್ರೆಂಡ್ ನಿಂದ ಸೋಲಾಗಿದೆ. ಶಹರದಲ್ಲಿ ಮೋದಿ ಅಲೆಗಿಂತ ಜನರ ಬಿಜೆಪಿ ಅಲೆಯಿತ್ತು ಎಂದು ಗಡ್ಡದೇವರಮಠ ಹೇಳೀದರು.



> ಶಿಗ್ಗಾವಿ ಬೈ ಎಲೆಕ್ಷನ್‌ನಲ್ಲಿ ಸ್ಪರ್ಧೆ ವಿಚಾರಕ್ಕೆ ಮಾತನಾಡಿ, ಶಿಗ್ಗಾವಿ ಕ್ಷೇತ್ರಕ್ಕೆ ನನ್ನ ಹೆಸರು ಚರ್ಚೆಯಾಗುತ್ತಿರುವುದು ಮಾಧ್ಯಮಗಳ ಮೂಲಕ ತಿಳಿದುಕೊಂಡಿದ್ದೇನೆ. ನಾನು ಶಿಗ್ಗಾವಿ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಲ್ಲ. ಶಿಗ್ಗಾವಿಯಲ್ಲಿ ಸಾಕಷ್ಟು ಆಕಾಂಕ್ಷಿಗಳಿದ್ದಾರೆ. ಅರ್ಹ ಅಭ್ಯರ್ಥಿಗಳು ಶಿಗ್ಗಾವಿ ಭಾಗದಲ್ಲಿದ್ದಾರೆ. ಸೋತಾಗಲು ಸಹ ಲೋಕಸಭಾ ಚುನಾವಣೆಯಲ್ಲಿ ಶಿಗ್ಗಾವಿ ಲೀಡರ್‌ಗಳು ಕಾಂಗ್ರೆಸ್‌ಗೆ ಲೀಡ್ ತಂದುಕೊಟ್ಟಿದ್ದಾರೆ
> – ಆನಂದಸ್ವಾಮಿ ಗಡ್ಡದೇವರಮಠ
> ಕಾಂಗ್ರೆಸ್ ಪರಾಜಿತ ಅಭ್ಯರ್ಥಿ

---

# 70 ಕೋಟಿ ವೆಚ್ಚದ ಕಿಂಡಿ ಅಣೆಕಟ್ಟು ಲೋಕಾರ್ಪಣೆಗೆ ಸಿದ್ಧ

**• ಉದಯವಾಹಿನಿ, ಹೆಬ್ರಿ**

ತಾಲ್ಲೂಕಿನ ಕೃಷಿಕರಿಗೆ ನೆರವಾಗುವಂತೆ ಚಾರ ಜವಾಹರ್ ನವೋದಯ ವಿದ್ಯಾಲಯದ ಬಳಿ ಸೀತಾನದಿಗೆ ಪಶ್ಚಿಮವಾಹಿನಿ ಯೋಜನೆಯಲ್ಲಿ ಸಣ್ಣ ನೀರಾವರಿ ಇಲಾಖೆ ವತಿಯಿಂದ 70 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಸೇತುವೆ ಸಹಿತ ಕಿಂಡಿ ಅಣೆಕಟ್ಟೆ ಲೋಕಾರ್ಪಣೆಗೆ ಸಿದ್ಧವಾಗಿದೆ.

ಹೆಚ್ಚಿನ ಸಂಖ್ಯೆಯ ರೈತರು ಈ ಅಣೆಕಟ್ಟೆಯ ಪ್ರಯೋಜನ ಪಡೆಯಲಿದ್ದಾರೆ. ಅಂತರ್ಜಲ ವೃದ್ಧಿ, ಕೃಷಿಕರ ತೋಟಗಳಿಗೆ ನೀರಿನ ವ್ಯವಸ್ಥೆ, ಬಾವಿಯಲ್ಲಿ ನೀರಿನ ಮಟ್ಟ ಹೆಚ್ಚಾಗುವಿಕೆ, ಕುಡಿಯುವ ನೀರಿನ ಪೂರೈಕೆಗೆ ಇದರಿಂದ ಉಪಯೋಗವಾಗಲಿದೆ. ಹಳೆಯ ಶಿಥಿಲಗೊಂಡ ಸೇತುವೆಯನ್ನು ಒಡೆಯಲು ಸುಮಾರು ಎರಡು ತಿಂಗಳು ಶ್ರಮಿಸಲಾಗಿದೆ. ಕಾಮಗಾರಿ ಆರಂಭವಾದ ಒಂದೇ ವರ್ಷದಲ್ಲಿ ಅತ್ಯಂತ ಸುಸಜ್ಜಿತ, ವ್ಯವಸ್ಥಿತ ಕಾಮಗಾರಿ ನಡೆದಿದೆ.





**ವಾಹನ ಸಂಚಾರಕ್ಕೆ ಮುಕ್ತ:** ಸೇತುವೆ ಸಹಿತ ಕಿಂಡಿ ಅಣೆಕಟ್ಟೆ ನಿರ್ಮಾಣವಾಗುತ್ತಿರುವುದರಿಂದ ಹೆಬ್ರಿ ಹಾಗೂ ಕುಂದಾಪುರ ಸಂಪರ್ಕಿಸುವ ವಾಹನ ಸವಾರರು ಚಾರ ಬಸದಿ ರಸ್ತೆ ಸುತ್ತು ಬಳಸಿ ಹೋಗುತ್ತಿದ್ದರು. ಮಳೆಗಾಲದಲ್ಲಿ ಆಗಾಗ ರಸ್ತೆ ಸಮಸ್ಯೆ ಕಾಡುತ್ತಿತ್ತು.

ಅತಿ ಕಿರಿದಾದ ರಸ್ತೆ ಇರುವುದರಿಂದ ಬಹಳಷ್ಟು ಸಮಸ್ಯೆ ಒಂದು ವರ್ಷದಿಂದ ಉಂಟಾಗಿದೆ. ಸೇತುವೆ ಲೋಕಾರ್ಪಣೆಯ ನಂತರ ಬಹು ಹತ್ತಿರದಿಂದ ಉತ್ತಮ ರಸ್ತೆಯ ವ್ಯವಸ್ಥೆಯೊಂದಿಗೆ ಸವಾರರು ತಲುಪಬಹುದು.

---

# ಬರದ ಕಹಿ ಮರೆತು ಬಿತ್ತನೆಗೆ ಸನ್ನದ್ಧರಾದ ರೈತ

**• ಉದಯವಾಹಿನಿ, ಜಗಳೂರು**




ಪ್ರಸಕ್ತ ಮುಂಗಾರಿನಲ್ಲಿ ತಾಲ್ಲೂಕಿನ ವಿವಿಧೆಡೆ ಉತ್ತಮ ಮಳೆ ಸುರಿಯುತ್ತಿದ್ದು, ಬಿತ್ತನೆ ಕಾರ್ಯ ಬಿರುಸಿನಿಂದ ನಡೆಯುತ್ತಿದೆ. ಕಸಬಾ, ಸೊಕ್ಕೆ ಹಾಗೂ ಬಿಳಿಚೋಡು ವ್ಯಾಪ್ತಿಯಲ್ಲಿ ಹಲವು ದಿನಗಳಿಂದ ನಿರಂತರವಾಗಿ ಮಳೆ ಬೀಳುತ್ತಿದೆ. ಕಳೆದ ವರ್ಷ ತೀವ್ರ ಬರಗಾಲದಿಂದ ಬೆಳೆ ನಾಶವಾಗಿ ತೀವ್ರ ನಷ್ಟ ಅನುಭವಿಸಿರುವ ರೈತರು ಪ್ರಸಕ್ತ ಮುಂಗಾರಿನಲ್ಲಿ ಉತ್ಸಾಹದಿಂದ ಬಿತ್ತನೆ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ.

ಜನವರಿಯಿಂದ ಜೂನ್ 9ರವರೆಗೆ 122 ಮಿ.ಮೀ. ವಾಡಿಕೆ ಮಳೆ ಬದಲಿಗೆ, 187 ಮಿ. ಮೀ. ಮಳೆಯಾಗಿದ್ದು, ಎಲ್ಲೆಡೆ ಬಿತ್ತನೆಗೆ ಭೂಮಿ ಹದಗೊಂಡಿದೆ. ಉತ್ತಮ ಮಳೆಯಿಂದ ರೈತಾಪಿ ಸಮುದಾಯದಲ್ಲಿ ಸಾಕಷ್ಟು ನಿರೀಕ್ಷೆಗಳು ಗರಿಗೆದರಿದ್ದು, ಹಿಂದಿನ ವರ್ಷದ ಬರಗಾಲದ ಕಹಿಯನ್ನು ಮರೆತು ಬಿತ್ತನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ತಾಲ್ಲೂಕಿನಲ್ಲಿ ಮುಂಗಾರು ಹಂಗಾಮಿಗೆ 54,000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯ ಗುರಿ ಹೊಂದಲಾಗಿದ್ದು, ಅಗತ್ಯ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಸಲಾಗಿದೆ.

900 ಕ್ವಿಂಟಲ್ ಮೆಕ್ಕೆಜೋಳ ಹಾಗೂ ಸೋಯಾಬಿನ್, ತೊಗರಿ ಸೇರಿ ಈಗಾಗಲೇ 1,200 ಕ್ವಿಂಟಲ್ ಬಿತ್ತನೆ ಬೀಜ ತರಿಸಿ ಇಡಲಾಗಿದೆ. 2,300 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ, ತೊಗರಿ ಬಿತ್ತನೆ ಕಾರ್ಯ ಮುಗಿದಿದೆ' ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಮಿಥುನ್ ಕಿಮಾವತ್ ಮಾಹಿತಿ ನೀಡಿದರು.

> ಕಸಬಾ, ಹೊಸಕೆರೆ ಹಾಗೂ ಬಿಳಿಚೋಡು ರೈತ ಸಂಪರ್ಕ ಕೇಂದ್ರಗಳು ಮತ್ತು ಸೊಕ್ಕೆ, ಅಣಬೂರು, ಬಿದರಕೆರೆಯ ರೈತ ಉತ್ಪಾದಕ ಕಂಪನಿಗಳು ಮತ್ತು ಕೆಚ್ಚೇನಹಳ್ಳಿ, ಬಸವನಕೋಟೆ ಮತ್ತು ಹಾಲೇಕಲ್ಲು ಮುಂತಾದ ಸಹಕಾರ ಸಂಘಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ದಾಸ್ತಾನು ಇದ್ದು, ರೈತರು ಸಮೀಪದ ಕೇಂದ್ರಗಳಿಗೆ ತೆರಳಿ ಬೀಜ, ಗೊಬ್ಬರ ಪಡೆಯಬಹುದಾಗಿದೆ' ಎಂದು ತಿಳಿಸಿದ್ದಾರೆ.

---

# ತುಂಬಿತು ಸಂತೇಗುಡ್ಡ ಕೆರೆ; ಗ್ರಾಮಸ್ಥರಲ್ಲಿ ಸಂತಸ

**• ಉದಯವಾಹಿನಿ, ಮೊಳಕಾಲ್ಮುರು**

ಕಣ್ಣು ಹಾಯಿಸಿದಷ್ಟು ದೂರ ಕಂಗೊಳಿಸುವ ಹಸಿರು.. ರಸ್ತೆಬದಿಯ ಜಮೀನುಗಳಲ್ಲಿ ನಿಂತಿರುವ ನೀರು... ತಂಪಾದ ಗಾಳಿ, ಗುಡ್ಡಗಳ ನಡುವೆ ನೀರಿನ ಜುಳು ಜುಳು ಶಬ್ದ.

ಇದು ತಾಲ್ಲೂಕಿನ ಸಂತೇಗುಡ್ಡ, ಜಾಗೀರ ಬುಡ್ಡೇನಹಳ್ಳಿ, ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಣಸಿಗುತ್ತಿರುವ ಚಿತ್ರಣ. ತಿಂಗಳ ಹಿಂದಷ್ಟೇ ಬಿರುಬಿಸಿಲಿನಿಂದ ಕಂಗೆಟ್ಟಿದ್ದ ಇಲ್ಲಿನ ಜನರು ಕುಡಿಯುವ ನೀರು, ಜಾನುವಾರು ಮೇವಿಗಾಗಿ ಪರಿತಪಿಸುತ್ತಿದ್ದರು. ಆದರೆ 15 ದಿನಗಳ ಹಿಂದೆ ಬಿದ್ದಿರುವ ಮಳೆಗೆ ಇಡೀ ಚಿತ್ರಣವೇ ಬದಲಾಗಿದೆ. ಅಪರೂಪಕ್ಕೆ ತುಂಬುತ್ತಿದ್ದ ಸಂತೇಗುಡ್ಡ ಕೆರೆ ತುಂಬಿ ಕೋಡಿ ಹರಿಯುತ್ತಿದೆ. ಜಾಗೀರಬುಡ್ಡೇನಹಳ್ಳಿಯ ಬೃಹತ್ ಪಕ್ಕುರ್ತಿ ಕೆರೆ ತುಂಬಲು ಒಂದು ಅಡಿ ಬಾಕಿ ಉಳಿದಿದೆ. ಅರಣ್ಯದಲ್ಲಿನ ಚೆಕ್ ಡ್ಯಾಂಗಳು ತುಂಬಿಕೊಂಡಿವೆ.




ಇಂದಿರಾಗಾಂಧಿ ಪ್ರಿಯದರ್ಶಿನಿ ಪ್ರಶಸ್ತಿ ಪಡೆದಿರುವ ಬಾಂಡ್ರಾವಿ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿರುವ ವೈವಿಧ್ಯಮಯ ಮರಗಳು 2 ವರ್ಷಗಳಿಂದ ಮಳೆ ಇಲ್ಲದೇ ಒಣಗುತ್ತಿದ್ದವು. ಈಗ ಬಿದ್ದಿರುವ ಮಳೆಯಿಂದ ಮತ್ತೆ ಕಂಗೊಳಿಸುತ್ತಿವೆ. ಆದರೆ ಇಲ್ಲಿ ಇನ್ನೂ ಹೆಚ್ಚಿನ ಸಸಿಗಳನ್ನು ನೆಡುವ ಅಗತ್ಯದ ಜತೆಗೆ ಮರ ಕಡಿಯದಂತೆ ಕ್ರಮ ಕೈಗೊಳ್ಳಬೇಕಿದೆ ಎಂಬುದು ಪರಿಸರ ಪ್ರೇಮಿಗಳ ಮನವಿ.

> ಮುಂಗಾರು ಆರಂಭದಲ್ಲೇ ಇಷ್ಟೊಂದು ಪ್ರಮಾಣದಲ್ಲಿ ಮಳೆ ಬಂದಿರುವುದು ಖುಷಿ ಕೊಟ್ಟಿದೆ. ಹೊಲಗಳ ಸಿದ್ಧತೆ ಕಾರ್ಯ ಚುರುಕುಗೊಂಡಿದೆ. ಜಾನುವಾರುಗಳಿಗೆ ಮೇವು, ನೀರಿನ ವ್ಯವಸ್ಥೆಯಾಗಿರುವುದು ನೆಮ್ಮದಿ ತಂದಿದೆ. ವರ್ಷ ಪೂರ್ತಿ ಮಳೆ ಬಂದರೂ ತುಂಬದ ನಮ್ಮೂರ ಕೆರೆ ಒಂದೇ ಮಳೆಗೆ ತುಂಬಿರುವುದು ಅಚ್ಚರಿ ಮೂಡಿಸಿದೆ' ಎಂದು ಸಂತೇಗುಡ್ಡದ ಹನುಮಯ್ಯ ಖುಷಿಯಿಂದ ಹೇಳಿದರು.

---

# ತರಕಾರಿ ಸಸಿ ಖರೀದಿಸಲು ಮುಂದಾದ ರೈತರು

**• ಉದಯವಾಹಿನಿ, ಹೊಸದುರ್ಗ**

ಕಳೆದ ಒಂದು ತಿಂಗಳಿನಿಂದ ತಾಲ್ಲೂಕಿನಾದ್ಯಂತ ಹದ ಮಳೆಯಾಗುತ್ತಿದೆ. ಬರ ಹಾಗೂ ನೀರಿನ ಕೊರತೆಯಿಂದ ಕೃಷಿ ಸಹವಾಸ ಬೇಡ ಎನ್ನುತ್ತಿದ್ದ ರೈತರ ಮೊಗದಲ್ಲಿ ವರುಣದೇವ ಮಂದಹಾಸ ತಂದಿದ್ದಾನೆ. ತಾಲ್ಲೂಕಿನ ನರ್ಸರಿಗಳಲ್ಲಿ ತರಕಾರಿ ಸಸಿಗಳ ಖರೀದಿ ಜೋರಾಗಿ ನಡೆಯುತ್ತಿದೆ.

ಪ್ರಸ್ತುತ ತರಕಾರಿಗಳ ದರ ಅಧಿಕವಾಗಿದೆ. ಹೀಗಾಗಿ ಹೆಚ್ಚು ಆದಾಯ ಪಡೆಯುವ ಉದ್ದೇಶದಿಂದ ರೈತರು ತರಕಾರಿ ಬೆಳೆಯಲು ಮುಂದಾಗಿದ್ದಾರೆ. ಟೊಮೆಟೊ, ಮೆಣಸಿನಕಾಯಿ, ಬದನೆ, ಎಲೆಕೋಸಿನ ಸಸಿಗಳಿಗೆ ಬೇಡಿಕೆ ಹೆಚ್ಚಾಗಿದೆ. ಸಸಿಗಳ ಜೊತೆ ಹಾಗಲಕಾಯಿ, ಹಿರೇಕಾಯಿ, ಬೀನ್ಸ್ ಬಿತ್ತನೆ ಬೀಜಗಳ ಖರೀದಿಯೂ ಅಧಿಕವಾಗಿದೆ.

ಕ್ಯಾಪ್ಸಿಕಂ 7, ಮೆಣಸಿನಕಾಯಿ 1, ಟೊಮೆಟೊ 1, ಬದನೆ 60 ಪೈಸೆ, ಎಲೆ ಕೋಸು ಹಾಗೂ ಹೂಕೋಸು ತಲಾ 50 ಪೈಸೆ, ಚೆಂಡು ಹೂ ಸಸಿಗಳನ್ನು 2–4ಕ್ಕೆ ಮಾರಾಟ ಮಾಡಲಾಗುತ್ತಿದೆ. ತಳಿಗಳ ಆಧಾರದ ಮೇಲೆ ಬೆಲೆಯಲ್ಲಿ ವ್ಯತ್ಯಾಸವಾಗುತ್ತದೆ.




ಕಳೆದ ಬಾರಿ ಅಧಿಕ ಬಿಸಿಲು ಹಾಗೂ ಬರಗಾಲದಿಂದ ಸಸಿ ಮಾರಾಟ ಅಷ್ಟಾಗಿ ಇರಲಿಲ್ಲ. ಈ ಬಾರಿ ಬರಗಾಲ ಹಾಗೂ ನೀರಿನ ಕೊರತೆ ಇದ್ದರೂ ಸಸಿಗಳನ್ನು ಬೆಳೆಸಲಾಗಿದೆ. ಈಗ ಹದ ಮಳೆಯಾಗಿದ್ದು, ತರಕಾರಿ ಸಸಿಗಳ ಮಾರಾಟ ಜೋರಾಗಿ ನಡೆಯುತ್ತಿದೆ' ಎಂದು ಬೀಸನಹಳ್ಳಿ ಜೆ.ಪಿ.ಡಿ ಫಾರಂನ ಜಗದೀಶ್ ಎಸ್. ಹೇಳಿದ್ದಾರೆ.

---

# ಆಡಳಿತ ಮಂಡಳಿಯೇ ಇಲ್ಲದ ಕಡಬ ಪಟ್ಟಣ ಪಂಚಾಯತ್!

## ಆರಂಭದಿಂದಲೂ ಅಧಿಕಾರಿಗಳ ಪಾರುಪತ್ಯದಲ್ಲೇ ಇರುವ ಇಲ್ಲಿನ ಸಮಸ್ಯೆಗಳನ್ನು ಕೇಳುವವರೇ ಇಲ್ಲದಂತಾಗಿದೆ

**• ಉದಯವಾಹಿನಿ, ಕಡಬ**

ಕಡಬ ಹಾಗೂ ಕೋಡಿಂಬಾಳ ಗ್ರಾಮಗಳನ್ನೊಳಗೊಂಡ ಕಡಬ ಗ್ರಾಮ ಪಂಚಾಯತ್ ಪಟ್ಟಣ ಪಂಚಾಯತ್ ಆಗಿ ಮೇಲ್ದರ್ಜೇಗೇರಿ ನಾಲ್ಕು ವರ್ಷಗಳು ಸಂದರೂ ಇಲ್ಲಿಗೆ ಆಡಳಿತ ಮಂಡಳಿ ಚುನಾವಣೆಯೇ ನಡೆದಿಲ್ಲ. ಆರಂಭದಿಂದಲೂ ಅಧಿಕಾರಿಗಳ ಪಾರು ಪತ್ಯದಲ್ಲೇ ಇರುವ ಇಲ್ಲಿನ ಸಮಸ್ಯೆಗಳನ್ನು ಕೇಳುವವರೇ ಇಲ್ಲದಂತಾಗಿದೆ.

ಕಡಬ ತಾಲ್ಲೂಕು ಕೇಂದ್ರವಾಗಿ ರೂಪುಗೊಂಡ ಬಳಿಕ ತಾಲ್ಲೂಕು ಕೇಂದ್ರವಾಗಿರುವ ಕಡಬ ಪಟ್ಟಣ ಗ್ರಾಮ ಪಂಚಾಯತ್‌ನಿಂದ ಸಹಜವಾಗಿ ಜನಸಂಖ್ಯೆ ಆಧಾರದಲ್ಲಿ ಪ. ಪಂ.ಆಗಿ ಮೇಲ್ದರ್ಜೆಗೇರಿದೆ.

ಹಿಂದೆ ಗ್ರಾಮ ಪಂಚಾಯತ್ ಕಾರ್ಯನಿರ್ವಹಿಸುತ್ತಿದ್ದ ಕಟ್ಟಡದಲ್ಲಿಯೇ ಪಟ್ಟಣ ಪಂಚಾಯತ್ ಕಾರ್ಯನಿರ್ವಹಿಸುತ್ತಿದ್ದು, ಹಿಂದೆ ಗ್ರಾ. ಪಂ.ನಲ್ಲಿ ಸಿಬಂದಿಯಾಗಿದ್ದವರೇ ಪಟ್ಟಣ ಪಂಚಾಯತ್ ಸಿಬಂದಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.ಗ್ರಾ. ಪಂ.ನಿಂದ ಪ. ಪಂ.ಗೆ ಮೇಲ್ದರ್ಜೇಗೇರಿದಾಗ ಒಂದೆರಡು ವರ್ಷ ಕಡತಗಳನ್ನು ತಯಾರಿಸಿ ಕಂಪ್ಯೂಟರ್‌ಗೆ ಅಪ್‌ಲೋಡ್ ಮಾಡುವುದೇ ಕೆಲಸವಾಯಿತು. ಪ್ರಾರಂಭದಲ್ಲಿ ಪ್ರಭಾರ ಮುಖ್ಯಾಧಿಕಾರಿ ಕಾರ್ಯನಿರ್ವಹಿಸಿದರೆ ಬಳಿಕ ಮುಖ್ಯಾಧಿಕಾರಿ ಹುದ್ದೆ ಭರ್ತಿ ಮಾಡಲಾಯಿತು. ಆಡಳಿತಾಧಿಕಾರಿಯಾಗಿ ತಹಶೀಲ್ದಾರ್ ಕಾರ್ಯ ನಿರ್ವಹಿಸುತ್ತಿದ್ದಾರೆ.

ಮುಖ್ಯಾಧಿಕಾರಿ ಹುದ್ದೆ ಮಾತ್ರ ಭರ್ತಿಯಾಗಿದ್ದು, ಆರೋಗ್ಯ ನಿರೀಕ್ಷಕರು, ಎಂಜಿನಿಯರ್ ಹುದ್ದೆಗಳು ಪ್ರಭಾರವಾಗಿ ಕಾರ್ಯನಿರ್ವಹಿಸುತ್ತಿದೆ. ಒಟ್ಟು 40 ಹುದ್ದೆಗಳಿದ್ದು ಆ ಪೈಕಿ 33 ಹುದ್ದೆಗಳು ಖಾಲಿ ಇವೆ. ಪೌರ ಕಾರ್ಮಿಕರನ್ನು ನೇರ ಪಾವತಿಯಲ್ಲಿ ನೇಮಕ ಮಾಡಿಕೊಳ್ಳಲಾಗಿದೆ.

ಕೆಲವು ಸಿಬಂದಿಯನ್ನು ಹೊರ ಗುತ್ತಿಗೆಯಾಧಾರಲ್ಲಿ ನೇಮಕ ಮಾಡಿಕೊಳ್ಳಲಾಗಿದೆ. ಎಂಜಿನಿಯರ್, ಆರೋಗ್ಯ ನಿರೀಕ್ಷಕರು ವಾರದಲ್ಲಿ ಒಂದು ದಿನ ಮಾತ್ರ ಕಡಬದಲ್ಲಿ ಲಭ್ಯವಿರುತ್ತಾರೆ. ಅವರು ಯಾವ ದಿನ ಲಭ್ಯರಿರುತ್ತಾರೆ ಎನ್ನುವ ಮಾಹಿತಿಯೂ ಸ್ಪಷ್ಟವಿಲ್ಲ. ಅದರಿಂದಾಗಿ ಜನ ಸಾಮಾನ್ಯರಿಗೆ ತೀವ್ರ ತೊಂದರೆಯಾಗುತ್ತಿದೆ.

ವ್ಯಾಪಾರ ಪರವಾನಿಗೆಯಿಂದ ಹಿಡಿದು ವಿವಿಧ ಕೆಲಸ ಕಾರ್ಯಗಳಿಗೆ ದಿನ ನಿತ್ಯ ಹಲವಾರು ಗ್ರಾಮಸ್ಥರು ಪಂ.ಗೆ ಭೇಟಿ ನೀಡುತ್ತಿದ್ದು, ಇಲ್ಲಿ ಕೆಲಸಗಳಿಗಾಗಿ ಪದೇ ಪದೇ ಅಲೆದಾಡಬೇಕಿದೆ ಎನ್ನುವುದು ಬಹುತೇಕ ಗ್ರಾಮಸ್ಥರ ಆರೋಪ. ಬಹುತೇಕ ಸಂದರ್ಭಗಳಲ್ಲಿ ಇಲ್ಲಿ ಕೊಟ್ಟ ಅರ್ಜಿಗಳು, ದಾಖಲೆಗಳು ನಾಪತ್ತೆಯಾಗುತ್ತವೆ. ತಿಂಗಳು ಗಟ್ಟಳೆ ಅದನ್ನು ಹುಡುಕಿ ಕೊನೆಗೆ ಹೊಸ ಅರ್ಜಿ, ದಾಖಲೆ ಕೊಡುವ ಪರಿಸ್ಥಿತಿ ಎದುರಾದ ಹಲವು ಉದಾಹರಣೆಗಳು ಇಲ್ಲಿವೆ. ಇಲ್ಲಿನ ಕೆಲವು ಸಿಬಂದಿ ಕಚೇರಿಗೆ ಬರುವ ಜನರ ಜತೆ ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎನ್ನುವ ದೂರುಗಳೂ ಇವೆ.

ಪಟ್ಟಣ ಪಂಚಾಯತ್ ನಿಂದ ಹಲವಾರು ಅಭಿವೃದ್ಧಿ ಕಾರ್ಯಗಳು ಈಗಾಗಲೇ ನಡೆದಿವೆ. ಆದರೆ ಅನುದಾನಗಳು ಸಮರ್ಪಕವಾಗಿ ಬಳಕೆಯಾಗಿಲ್ಲ ಎನ್ನುವ ಆರೋಪ ಬಲವಾಗಿ ಕೇಳಿ ಬರುತ್ತಿದೆ. ಅದಕ್ಕೆ ಪೂರಕ ಎಂಬಂತೆ ಕೆಲವು ದಿನಗಳ ಹಿಂದೆ ಕಡಬಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಯವರು ನಗರೋತ್ಥಾನ ಯೋಜನೆಯ ಕಾಮಗಾರಿ ಪರಿಶೀಲಿಸಿ ಎಂಜಿನಿಯರ್ ಹಾಗೂ ಅಧಿಕಾರಿಗಳನ್ನು ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡಿದ್ದರು.




> ಕಡಬ ಪಟ್ಟಣ ಪಂಚಾಯತ್ ವ್ಯಾಪ್ತಿಯ ವಾರ್ಡ್ ವಿಂಗಡಣೆ ಇತ್ಯಾದಿ ಕೆಲಸಗಳು ಈಗಾಲೇ ಪೂರ್ತಿಗೊಂಡಿದೆ. ಅಗತ್ಯ ಸಿಬಂದಿ ನೇಮಕ ಮತ್ತು ಶೀಘ್ರ ಇಲ್ಲಿ ಚುನಾವಣೆ ನಡೆಸಿ ಜನರಿಗೆ ಅನುಕೂಲವಾಗುವಂತೆ ಆಡಳಿತ ಮಂಡಳಿಗೆ ಜನಪ್ರತಿನಿಧಿಗಳನ್ನು ಆರಿಸಲು ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ನಗರಾಭಿವೃದ್ಧಿ ಸಚಿವರಲ್ಲಿ ಮನವಿ ಮಾಡಲಾಗುವುದು.
> –ಭಾಗೀರಥಿ ಮುರುಳ್ಯ, ಶಾಸಕ

ಕಳಾರ, ಕೋಡಿಬೈಲು, ಪನ್ಯ, ಬೆದ್ರಾಜೆ, ಮಾಲೇಶ್ವರ, ಕಡಬ, ಪಣೆಮಜಲು, ಪಿಜಕಳ, ಮೂರಾಜೆ, ದೊಡ್ಡಕೊಪ್ಪ, ಕೋಡಿಂಬಾಳ, ಮಜ್ಜಾರು, ಪುಳಿಕುಕ್ಕು ಎಂದು 13 ವಾರ್ಡುಗಳನ್ನಾಗಿ ಪಟ್ಟಣ ಪಂಚಾಯತ್ ವ್ಯಾಪ್ತಿಯನ್ನು ವಿಂಗಡಣೆ ಮಾಡಲಾಗಿದೆ. 2011ರ ಜನಗಣತಿ ಪ್ರಕಾರ ಎರಡು ಗ್ರಾಮಗಳಲ್ಲಿ 10500 ಜನಸಂಖ್ಯೆ ಇದೆ.

---

# ಮಿನಿ ನ್ಯೂಸ್

## ಹೆದ್ದಾರಿ ಬದಿಯಲ್ಲಿ ಹುಲ್ಲು ನಾಟಿ ಮಾಡುವ ವಿನೂತನ ಪ್ರಯೋಗ

**• ಉದಯವಾಹಿನಿ, ಬಂಟ್ವಾಳ**

ಬಹುಭಾರದ ವಾಹನಗಳು ಸಾಗುವ ರಾಷ್ಟ್ರೀಯ ಹೆದ್ದಾರಿಗಳ ಬದಿ ಜರಿಯದಂತೆ ಮತ್ತು ಧಾರಣ ಸಾಮರ್ಥ್ಯವನ್ನು ಕಾಪಿಟ್ಟುಕೊಳ್ಳುವ ಉದ್ದೇಶದಿಂದ ಹೆದ್ದಾರಿ ಬದಿಯಲ್ಲಿ ಹುಲ್ಲು ನಾಟಿ ಮಾಡುವ ವಿನೂತನ ಪ್ರಯೋಗವೊಂದು ಬಂಟ್ವಾಳದಲ್ಲಿ ನಡೆಯುತ್ತಿದೆ! ಬಿ.ಸಿ.ರೋಡು–ಅಡ್ಡಹೊಳೆ ಹೆದ್ದಾರಿಯ ಬಿ.ಸಿ.ರೋಡು –ಪೆರಿಯ ಶಾಂತಿ ಮಧ್ಯೆ 48.50 ಕಿ.ಮೀ. ಭಾಗವನ್ನು ಕೆಎನ್‌ಆರ್ ಕಂಪೆನಿ ಅಭಿವೃದ್ಧಿಪಡಿಸುತ್ತಿದೆ. ಈ ಮಧ್ಯೆ, ಅಧಿಕ ಪ್ರಮಾಣದ ಮಣ್ಣು ತುಂಬಿಸಿರುವ 20 ಕಡೆಗಳಲ್ಲಿ ಈ ರೀತಿ ಹುಲ್ಲು ಬೆಳೆಸಲುಸ್ಥಳ ಗುರುತಿಸಿದ್ದು, ಪಾಣೆ ಮಂಗಳೂರು ಭಾಗದಲ್ಲಿ ಅದರ ಕೆಲಸವೂ ಆರಂಭಗೊಂಡಿದೆ. ಕರಾವಳಿ ಭಾಗದಲ್ಲಿ ಇಂತಹ ಪ್ರಯೋಗ ಇದೇ ಮೊದಲು.

ಹುಲ್ಲು ಬೆಳೆಸುವ ಗುತ್ತಿಗೆಯನ್ನು ತಮಿಳುನಾಡು ಮೂಲದ ಸಂಸ್ಥೆಗೆ ವಹಿಸಲಾಗಿದ್ದು, ಕಾರ್ಮಿಕರು ಬಿ.ಸಿ.ರೋಡು ಸರ್ಕಲ್‌ನಿಂದ ಮುಂದಕ್ಕೆ ಪಾಣೆಮಂಗಳೂರು ಭಾಗಕ್ಕೆ ಕಾಂಕ್ರೀಟ್ ಕಾಮಗಾರಿ ಪೂರ್ಣಗೊಂಡಲ್ಲಿ ತೆಂಗಿನ ನಾರಿನ ಮ್ಯಾಟ್‌ಗಳನ್ನು ಜೋಡಿಸಿ ಹುಲ್ಲು ನೆಡುತ್ತಿದ್ದಾರೆ. ಅಲ್ಲಿ ವಾಹನಗಳು ರಸ್ತೆಯಿಂದ ಕೆಳಕ್ಕೆ ಜಾರದಂತೆತಡೆಯಲು ಮೆಟಲ್ ಬೀಮ್ ಹೆವಿ ಗಾರ್ಡ್‌ಗಳನ್ನೂ ಅಳವಡಿಸಲಾಗಿದೆ.

## ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರಿಗೆ ಬಸ್‌ಗಳನ್ನ ನಿಲ್ಲಿಸಿ ಪ್ರತಿಭಟನೆ

**• ಉದಯವಾಹಿನಿ, ಕುಳಗೇರಿ ಕ್ರಾಸ್**

ಇಲ್ಲಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುವ ಸಾರಿಗೆ ಬಸ್ ಪ್ರಾಥಮಿಕ ಆರೋಗ್ಯ ಕೇಂದ್ರ ಬಳಿ ನಿಲ್ಲಿಸುತ್ತಿಲ್ಲ ಎಂದು ಖಾನಾಪೂರ ಎಸ್‌ಕೆ ಗ್ರಾಮ ಸೇರಿದಂತೆ ಸುತ್ತ ಗ್ರಾಮಸ್ಥರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರಿಗೆ ಬಸ್‌ಗಳನ್ನ ನಿಲ್ಲಿಸಿ ದಿಢೀರ್ ಪ್ರತಿಭಟನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಪಂ ಸದಸ್ಯ ಶೇಖಪ್ಪ ಪವಾಡಿನಾಯ್ಕರ್ ನಮ್ಮ ಗ್ರಾಮಸ್ಥರು ಬಸ್ ನಿಲುಗಡೆಗಾಗಿ ಸುಮಾರು ನಾಲ್ಕೈದು ವರ್ಷಗಳಿಂದ ಹೋರಾಡುತ್ತಿದ್ದಾರೆ. ಬಸ್ ನಿಲ್ಲಿಸುವಂತೆ ಸಾರಿಗೆ ಅಧಿಕಾರಿಗಳು ಆದೇಶ ಮಾಡಿದ್ದಾರೆ ಆದರೂ ಬಸ್ ಚಾಲಕರು ಪ್ರಯಾಣಿಕರ ಜೊತೆ ಸಹಕರಿಸದೆ ಬಸ್ ನಿಲ್ಲಿಸದೇ ತೆರಳುತ್ತಿದ್ದಾರೆ. ಈ ಕುರಿತು ಸಾಕಷ್ಟು ಬಾರಿ ಮನವಿ ಮಾಡಿಕೊಂಡಿದ್ದೇವೆ ಆದರೂ ಏನೂ ಪ್ರಯೋಜನವಾಗಿಲ್ಲ ಎಂದು ಆರೋಪಗಳ ಸುರಿಮಳೆ ಸುರಿಸಿದರು.

ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಸ್ಥಳೀಯ ಪೊಲೀಸರು ಮನವೊಲಿಕೆಗೆ ಎಷ್ಟೇ ಪ್ರಯತ್ನಿಸಿದರೂ ಒಪ್ಪದ ಗ್ರಾಮಸ್ಥರು ಬಸ್ ನಿಲ್ಲಿಸುವವರೆಗೂ ನಮ್ಮ ಪ್ರತಿಭಟನೆ ಕೈಬಿಡುವುದಿಲ್ಲ ಎಂದು ಪಟ್ಟು ಹಿಡಿದರು. ದಿಢೀರ್ ಪ್ರತಿಭಟನೆ ಕೈಗೊಂಡಿದ್ದರಿಂದ ನೂರಾರು ವಾಹನಗಳು ಹೆದ್ದಾರಿಯಲ್ಲಿ ಸಾಲುಗಟ್ಟಿ ನಿಲ್ಲತೊಡಗಿದವು ಪ್ರಯಾಣಿಕರು ತೊಂದರೆ ಅನುಭವಿಸಿದರು. ವಿಕೋಪಕ್ಕೆ ಹೋಗುವುದನ್ನ ಗಮನಿಸಿದ ಪೊಲೀಸರು ಮೇಲಾಧಿಕಾರಿಗಳ ಗಮನಕ್ಕೆ ತಂದರು.

## ಸೋಲಿನ ಹೊಣೆ ನನ್ನದು ಸಚಿವ ಮಧು ಬಂಗಾರಪ್ಪ

**• ಉದಯವಾಹಿನಿ, ಶಿವಮೊಗ್ಗ**

ಕೇಂದ್ರದಲ್ಲಿ ಬಿಜೆಪಿ ಗೆದ್ದಿರಬಹುದು. ಆದರೆ ಆಂತರಿಕವಾಗಿ ಸೋತಿದೆ. ಕ್ಷೇತ್ರದಲ್ಲಿ ಗೀತಾ ಶಿವರಾಜಕುಮಾರ್ ಸೋಲಿನ ಹೊಣೆ ನನ್ನದು. ಆದರೆ ಇಲ್ಲಿ ಗೀತಕ್ಕ 5.30 ಲಕ್ಷ ಮತ ಪಡೆದು ಕ್ಷೇತ್ರದ ಜನರ ಹೃದಯ ಗೆದ್ದಿದ್ದಾರೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಲೋಕಸಭಾ ಚುನಾವಣೆಯಲ್ಲಿ ಶ್ರಮಿಸಿದ ಚುನಾಯಿತ ಪ್ರತಿನಿಧಿಗಳು, ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳಿಗೆ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರ ಆಯ್ಕೆಗೆ ಬೆಲೆ ಕೊಡಬೇಕು. ಈ ಸೋಲು ಮುಂದಿನ ಬದಲಾವಣೆಗೆ ಸ್ಫೂರ್ತಿ ಆಗಲಿದೆ ಎಂದರು.

## ತಹಶೀಲ್ದಾರ ಕಚೇರಿ ಆವರಣದಲ್ಲೇ ನೇಣಿಗೆ ಶರಣಾದ ಪೊಲೀಸ್

**• ಉದಯವಾಹಿನಿ, ಬೈಲಹೊಂಗಲ**

ಬೆಳಗಾವಿ ಜಿಲ್ಲೆಯ ಪೊಲೀಸ್ ಪೇದೆ ಕುಡಿದ ಮತ್ತಿನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಬೈಲಹೊಂಗಲ ಪಟ್ಟಣದ ತಹಶೀಲ್ದಾರ ಕಚೇರಿ ಆವರಣದ ಸಭಾಭವನ ಪಕ್ಕದ ಮರಕ್ಕೆ ಪೊಲೀಸ್ ಪೇದೆ ಕುಡಿದ ಅಮಲಿನಲ್ಲಿ ನೇಣು ಬಿಗಿದುಕೊಂಡು ಮಂಗಳವಾರ ಆತ್ಮಹತ್ಯೆಗೆ ಶರಣಾಗಿದ್ದಾರೆ. ಮುರಕಿಬಾಂವಿ ಗ್ರಾಮದ ಬಸನಗೌಡ ಈರಪ್ಪ ಗೌಡರ (40) ಆತ್ಮಹತ್ಯೆ ಮಾಡಿಕೊಂಡ ಪೇದೆ. ಇವರು ಬೈಲಹೊಂಗಲ ತಾಲ್ಲೂಕಿನ ದೊಡವಾಡ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಚುನಾವಣೆ ಕರ್ತವ್ಯ ಮುಗಿದ ಮೇಲೆ ರಜೆ ಪಡೆದಿದ್ದರು. ಜೀವನದಲ್ಲಿ ಜಿಗುಪ್ಸೆ ಹೊಂದಿ ಕುಡಿದ ಮತ್ತಿನಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ.

## ಪರಿಸರ ಪ್ರೇಮಿ ಪೊಲೀಸ್ ಅಧಿಕಾರಿ

**• ಉದಯವಾಹಿನಿ, ರೋಣ**

ಕೊಲೆ, ಕಳವು ಇತ್ಯಾದಿ ಅಪರಾಧ ಪ್ರಕರಣಗಳನ್ನು ಭೇದಿಸುವಲ್ಲಿ ಹಾಗೂ ಜನರ ಸುರಕ್ಷತೆ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳು ಕಾರ್ಯಪ್ರವೃತ್ತರಾಗುವುದು ಸಾಮಾನ್ಯ. ಆದರೆ ರೋಣ ಪೋಲಿಸ್ ಠಾಣೆಯ ಪಿ.ಎಸ್.ಐ ಎಲ್.ಕೆ. ಜೂಲಕಟ್ಟಿಯವರು ಕರ್ತವ್ಯದ ಜೊತೆಗೆ ಪರಿಸರ ಪ್ರೇಮವನ್ನು ಮೈಗೂಡಿಸಿಕೊಂಡು, ಪರಿಸರ ಉಳಿಸಿ ಬೆಳೆಸುವ ಕಾರ್ಯ ಮಾಡುತ್ತಿದ್ದಾರೆ. ಮಳೆಗಾಲ ಪ್ರಾರಂಭವಾಗುತ್ತಿದ್ದು, ಠಾಣೆಯ ವ್ಯಾಪ್ತಿಯಲ್ಲಿ ಗಿಡಗಳ ಸುತ್ತ ಬೆಳೆದಿರುವ ಕಸ ಹಾಗೂ ಕಳೆಗಳನ್ನು ಟ್ರ್ಯಾಕ್ಟರ್ ಮೂಲಕ ಸ್ವಚ್ಛಗೊಳಿಸಿ ಭೂಮಿಯನ್ನು ಹದಗೊಳಿಸಿ ಅಲ್ಲಿರುವ ಗಿಡಗಳಿಗೆ ನೀರು, ಗೊಬ್ಬರ ಹಾಕಿ ಪಾಲನೆ ಮಾಡುತ್ತಿದ್ದಾರೆ. ಗಿಡಗಳಿಗೆ ಸಮರ್ಪಕ ನೀರು ದೊರೆಯಬೇಕು ಎಂಬ ನಿಟ್ಟಿನಲ್ಲಿ ಪೈಪ್ ಮೂಲಕ ನೀರು ಸಹ ಹರಿಸಲಾಗುತ್ತಿದೆ. ಇವರ ಕಾರ್ಯಕ್ಕೆ ಸಾರ್ವಜನಿಕರು ಸಂತಸವನ್ನು ವ್ಯಕ್ತಪಡಿಸಿದ್ದಾರೆ.

ನಾಲ್ಕು ಎಕರೆ ವಿಸ್ತಾರವಾದ ಭೂಮಿಯಲ್ಲಿ ಪೊಲೀಸ್ ಠಾಣೆ ಇದ್ದು, ಠಾಣೆಯ ಸುತ್ತಲೂ ತೆಂಗು, ಬೇವು, ಮಾವು, ಅರಳಿ, ಶ್ರೀಗಂಧ, ಆಲದ ಮರ, ಹೆಬ್ಬೇವು, ನೀರಲ ಸೇರಿದಂತೆ ಅನೇಕ ಗಿಡಗಳನ್ನು ಬೆಳೆಸಲಾಗಿದೆ. ಬೇಸಿಗೆಯಲ್ಲೂ ಠಾಣೆ ಅಚ್ಚ ಹಸಿರಿನಿಂದ ಕಂಗೊಳಿಸುತ್ತಿದೆ. ಠಾಣೆಯ ಮುಂಭಾಗದಲ್ಲಿ ಸಣ್ಣ ಉದ್ಯಾನ ನಿರ್ಮಿಸಲಾಗಿದೆ. ಜೂಲಕಟ್ಟಿಯವರ ಪರಿಸರ ಪ್ರೇಮ ಹಾಗೂ ಸಿಬ್ಬಂದಿ ಸಹಕಾರದಿಂದಾಗಿ ರೋಣ ಪೊಲೀಸ್ ಠಾಣೆಯು ಜನರ ಕಣ್ಮನ ಸೆಳೆಯುತ್ತಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಮ್ಮ ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿ ರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ.

**ವೃಷಭ** ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು.

**ಮಿಥುನ** ನೀವು ಯಾರನ್ನಾದರೂ ಮರಳಿ ಎರವಲು ಕೇಳುತ್ತಿದ್ದರೆ ಮತ್ತು ಇಲ್ಲಿಯವರೆಗೆ ಅವರು ನಿಮ್ಮ ಮಾತನ್ನು ತಪ್ಪಿಸುತ್ತಿದ್ದರೆ, ಇಂದು ಅವರು ಮಾತನಾಡದೆ ಹಣವನ್ನು ನಿಮಗೆ ಹಿಂದಿರುಗಿಸಬಹುದು.

**ಕರ್ಕಾಟಕ** ಆರೋಗ್ಯ ಚೆನ್ನಾಗಿರುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ.

**ಸಿಂಹ** ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

**ಕನ್ಯಾ** ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಿಕೆ ನಿಮ್ಮ ಪೋಷಕರಿಗೆ ಕೋಪ ಬರಿಸಬಹುದು. ವೃತ್ತಿ ಯೋಜನೆ ಆಟಗಳಷ್ಟೇ ಮುಖ್ಯ. ನಿಮ್ಮ ಪೋಷಕರನ್ನು ಸಂತೋಷಗೊಳಿಸಲು ಎರಡನ್ನೂ ಸಂಭಾಳಿಸಬೇಕು.

**ತುಲಾ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಬಹಳ ಪ್ರಯೋಜನಕಾರಿ ದಿವಸವಲ್ಲ- ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ.

**ವೃಶ್ಚಿಕ** ಕಲೆ ಮತ್ತು ರಂಗಭೂಮಿಯ ಜೊತೆ ಸಂಪರ್ಕ ಹೊಂದಿರುವವರು ಸೃಜನಶೀಲವಾಗಿ ಅತ್ಯುತ್ತಮವಾದದ್ದನ್ನು ನೀಡಲು ಹೊಸ ಅವಕಾಶಗಳನ್ನು ಪಡೆಯುತ್ತಾರೆ. ಈ ರಾಶಿಚಕ್ರದ ಜನರು ಬಹಳ ಆಸಕ್ತಿದಾಯಕರು.

**ಧನಸ್ಸು** ಸಂಬಂಧಗಳೊಂದಿಗಿನ ಸಂಬಂಧಗಳನ್ನು ಹಾಗೂ ಬಂಧಗಳ ನವೀಕರಣದ ಒಂದು ದಿನ. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು. ಕಛೇರಿಯಲ್ಲಿ ಇಂದು ನೀವು ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ವರ್ತಿಸಬೇಕು.

**ಮಕರ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಕುಂಭ** ಇವತ್ತು ಡೇಟ್‌ಗೆ ಹೋದಲ್ಲಿ ವಿವಾದಾತ್ಮಕ ವಿಷಯಗಳನ್ನು ಕೆದಕುವುದನ್ನು ತಪ್ಪಿಸಿ. ನಿಮ್ಮ ಸಹಕಾರದ ಮನೋಭಾವ ಮತ್ತು ವಿಶ್ಲೇಷಣಾ ಕುಶಲತೆ ನಿಮಗೆ ಬರುತ್ತದೆ.

**ಮೀನ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ-ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.

# ನಿಟ್ಟೆ ಸಂಸ್ಥೆಗಳಿಂದ ದೇಶ ಕಟ್ಟುವ ಕಾಯಕ: ಖಾದರ್

## ಗುಣಮಟ್ಟದ ಶಿಕ್ಷಣದ ಮೂಲಕ ಲಕ್ಷಾಂತರ ಉನ್ನತ ಶಿಕ್ಷಣ ಪಡೆದ ವಿದ್ಯಾರ್ಥಿಗಳನ್ನು ರಾಷ್ಟ್ರ ಕಟ್ಟುವ ಕಾಯಕಕ್ಕೆ ನೀಡುತ್ತಿದೆ

• ಉದಯವಾಹಿನಿ ಉಳ್ಳಾಲ

ನಿಟ್ಟೆ ವಿಶ್ವವಿದ್ಯಾನಿಲಯದಂತಹ ಅತ್ಯುನ್ನತ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸುವ ಮೂಲಕ ದೇಶದ ವಿದ್ಯಾರ್ಥಿಗಳು ಮಾತ್ರವಲ್ಲದೆ ವಿದೇಶದ ವಿದ್ಯಾರ್ಥಿಗಳಿಗೂ ಗುಣಮಟ್ಟದ ಉನ್ನತ ಶಿಕ್ಷಣ ಕಲ್ಪಿಸಿರುವ ನಿಟ್ಟೆ ವಿ.ವಿ.ಯ ಸ್ಥಾಪಕ ಎನ್. ವಿನಯ ಹೆಗ್ಡೆ ನಿಜವಾದ ದೇಶ ಕಟ್ಟುವ ಕಾರ್ಯ ನಡೆಸುತ್ತಿದ್ದಾರೆ.

ಅವರ ಶೈಕ್ಷಣಿಕ ದೂರದರ್ಶಿತ್ವ ಎಲ್ಲರಿಗೂ ಮಾದರಿ ಎಂದು ರಾಜ್ಯ ವಿಧಾನಸಭೆಯ ಸ್ಪೀಕರ್ ಶಾಸಕ ಯು.ಟಿ. ಖಾದರ್ ಹೇಳಿದರು .ಅವರು ದೇರಳಕಟ್ಟೆ ಕೆ.ಎಸ್. ಹೆಗ್ಡೆ ವೈದ್ಯಕೀಯ ಕಾಲೇಜಿನ ಬೆಳ್ಳಿಹಬ್ಬದ ಅಂಗವಾಗಿ ಜಸ್ಟಿಸ್ ಕೆ.ಎಸ್. ಹೆಗ್ಡೆ ಚಾರಿಟೆಬಲ್ ಆಸ್ಪತ್ರೆ(ಕ್ಷೇಮ)ಯಲ್ಲಿ ಹಲವು ಸೌಲಭ್ಯಗಳನ್ನೊಳಗೊಂಡ ನೂತನ ಕಟ್ಟಡ ಹಾಗೂ ಅತ್ಯಾಧುನಿಕ ಅಣು ಔಷಧ ಸೌಲಭ್ಯ (ಸುಧಾರಿತ ಪಿಇಟಿ / ಸಿಟಿ ಸ್ಕ್ಯಾನ್ ಇತ್ಯಾದಿ) ಸೇರಿದಂತೆ ವಿವಿಧ ವೈದ್ಯಕೀಯ ಸೌಲಭ್ಯ)ಗಳನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ದೇಶ ಕಟ್ಟುವ ಕಾರ್ಯ

ಈ ದೇಶ ಬಲಿಷ್ಠವಾಗಲು ಶಿಕ್ಷಣದಿಂದ ಮಾತ್ರ ಸಾಧ್ಯ. ಅಂತಹ ಗುಣಮಟ್ಟದ ಶಿಕ್ಷಣದ ಮೂಲಕ ನಿಟ್ಟೆ ಶಿಕ್ಷಣ ಸಂಸ್ಥೆ ಲಕ್ಷಾಂತರ ಉನ್ನತ ಶಿಕ್ಷಣ ಪಡೆದ ವಿದ್ಯಾರ್ಥಿಗಳನ್ನು ರಾಷ್ಟ್ರ ಕಟ್ಟುವ ಕಾಯಕಕ್ಕೆ ನೀಡುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ನಿಟ್ಟೆ ಪರಿಗಣಿತ ವಿ.ವಿ. ಕುಲಾಧಿಪತಿ ಎನ್. ವಿನಯ ಹೆಗ್ಡೆ ಮಾತನಾಡಿ, ಆರ್ಥಿಕವಾಗಿ ಹಿಂದುಳಿದ ಕುಟುಂಬದ ಸದಸ್ಯರಿಗೆ ವಾರ್ಷಿಕವಾಗಿ ಕೋಟ್ಯಂತರ ರೂ. ಮೌಲ್ಯದ ಚಿಕಿತ್ಸೆಯನ್ನು ಉಚಿತವಾಗಿ ನೀಡುತ್ತಿದ್ದು ಶೈಕ್ಷಣಿಕವಾಗಿ ನಿಟ್ಟೆ ಸಂಸ್ಥೆ ಶುಲ್ಕದಲ್ಲಿಯೂ ರಿಯಾಯಿತಿ ಕೊಡುತ್ತಾ



ಉದಯವಾಹಿನಿ ಚಿತ್ರ

ಬಂದಿದೆ. ಶುಲ್ಕ ರಿಯಾಯಿತಿ, ಉಚಿತ ಸೇವೆ ಬಗ್ಗೆ ನಮಗೆ ಸಂತೃಪ್ತಿ ಇದೆ ಎಂದರು.

ನಿಟ್ಟೆ ವಿ.ವಿ.ಯ ಆಡಳಿತ ಸಹ ಕುಲಾಧಿಪತಿ ವಿಶಾಲ್ ಹೆಗ್ಡೆ, ಕುಲಸಚಿವ ಹರ್ಷ ಹಾಲಹಳ್ಳಿ, ಡೀನ್ ಡಾ.ಜಯಪ್ರಕಾಶ್ ಶೆಟ್ಟಿ, ವೈದ್ಯಕೀಯ ಅಧೀಕ್ಷಕಿ ಡಾ. ಸುಮಲತಾ ಆರ್. ಉಪಸ್ಥಿತರಿದ್ದರು.

ನಿಟ್ಟೆ ವಿ.ವಿ. ಸಹ ಕುಲಾಧಿಪತಿ ಡಾ. ಎಂ. ಶಾಂತಾರಾಮ ಶೆಟ್ಟಿ ಸ್ವಾಗತಿಸಿ, ಕುಲಪತಿ ಪ್ರೊ. ಡಾ. ಎಂ.ಎಸ್. ಮೂಡಿತ್ತಾಯ ವಂದಿಸಿದರು. ನ್ಯೂರೋಲಜಿ ಪ್ರೊಫೆಸರ್ ಡಾ. ಸುಹಾನ್ ಆಳ್ವ ಕಾರ್ಯಕ್ರಮ ನಿರೂಪಿಸಿದರು.

### 1,200 ಹಾಸಿಗೆಗಳ ಸಾಮರ್ಥ್ಯ

ನೂತನ ಕಟ್ಟಡದಲ್ಲಿ ಸುಧಾರಿತ ಪರೀಕ್ಷಾ ಕ್ರಮ ಹಾಗೂ ಚಿಕಿತ್ಸೆಗಾಗಿ ಪಿಇಟಿ / ಸಿಟಿ ಸ್ಕ್ಯಾನಿಂಗ್ ಮತ್ತು ಗಾಮಾ ನೈಫ್ ಹೊಸದಾಗಿ ಪರಿಚಯಿಸಲಾಗಿದೆ. ತೀವ್ರನಿಗಾ ಘಟಕ, ಶಸ್ತ್ರಚಿಕಿತ್ಸಾ ಘಟಕಗಳು, ಹೃದಯ ರೋಗಗಳು, ಕ್ಯಾನ್ಸರ್, ಜೀರ್ಣಾಂಗ ಸಮಸ್ಯೆಗಳು, ನರಶಸ್ತ್ರಚಿಕಿತ್ಸೆ, ಮಕ್ಕಳ ಆರೋಗ್ಯ, ಪ್ರಸೂತಿ ಹಾಗೂ ಬಾಣಂತಿ ಆರೈಕೆ ವಿಭಾಗಗಳಿಗೆ ಸ್ಥಳಾವಕಾಶ ಕಲ್ಪಿಸಿಕೊಡಲಾಗಿದೆ. ಹೊರರೋಗಿ ಘಟಕ ಹಾಗೂ ವಾರ್ಡ್‌ಗಳಿಗೆ ಹೆಚ್ಚಿನ ಸ್ಥಳಾವಕಾಶವನ್ನೂ ಈ ಹೊಸ ಕಟ್ಟಡ ನೀಡಲಿದೆ. ಆಸ್ಪತ್ರೆಗೆ 1,200 ಹಾಸಿಗೆಗಳ ಸಾಮರ್ಥ್ಯ ಲಭಿಸುತ್ತಿದೆ.

ವಿವಿಧ ಸೌಲಭ್ಯಗಳನ್ನು ಉದ್ಘಾಟಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣದಲ್ಲಿ ಮೊದಲ ಆಯ್ಕೆಯಾಗಿ ಪರಿಗಣಿಸುವ ಶಿಕ್ಷಣ ಸಂಸ್ಥೆಗಳಲ್ಲಿ ನಿಟ್ಟೆ ಪರಿಗಣಿತ ವಿ.ವಿ.ಯೂ ಒಂದಾಗಿದ್ದು ಈ ಭಾಗ ಉನ್ನತ ಶೈಕ್ಷಣಿಕ ಹಬ್ ಆಗಿದೆ. ಅಭಿವೃದ್ಧಿಯ ನಿಟ್ಟಿನಲ್ಲಿ ಖಾಸಗಿ ಸಂಸ್ಥೆಗಳದ್ದೂ ದೊಡ್ಡ ಪಾತ್ರವಿದೆ ಎಂದರು. ರಕ್ತದೊತ್ತಡ, ಮಧುಮೇಹ ರೋಗಿಗಳ ಮನೆ ಬಾಗಿಲಿಗೆ ಔಷಧ ಒದಗಿಸುವ ಯೋಜನೆಯನ್ನು ಸರಕಾರ ಹಾಕಿಕೊಂಡಿದೆ -ಸಚಿವ ದಿನೇಶ್ ಗುಂಡೂರಾವ್

## ಕಬ್ಬಿನ ಬಾಕಿ ಹಣ ಬಡ್ಡಿ ಸಮೇತ ರೈತರಿಗೆ ಪಾವತಿಸಲು ಕ್ರಮ ಕೈಗೊಳ್ಳಿ

• ಉದಯವಾಹಿನಿ ಬೆಳಗಾವಿ

ಪ್ರಸಕ್ತ ಸಾಲಿನ ಕಬ್ಬಿನ ಎಫ್ ಆರ್ ಪಿ ದರ 10.25 ಇಳುವರಿಗೆ 3400 ನ್ಯಾಯ ಸಮ್ಮತವಲ್ಲ. ಬೆಳಗಾವಿಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ ಆರೋಪ. ಕಬ್ಬಿನ ಬಾಕಿ ಬಡ್ಡಿ ಹಣ ಸಮೇತ ರೈತರಿಗೆ ಕೂಡಲೇ ಪಾವತಿಸಲು ಕ್ರಮಕ್ಕೈಗೊಳ್ಳಬೇಕು ಎಂದು ಒತ್ತಾಯ.

ಬರಗಾಲದಿಂದ ಕಬ್ಬಿನ ಇಳುವರಿ ಶೇಕಡ. 30 ರಷ್ಟು ಕಡಿಮೆಯಾಗಿರುವಾಗಲೇ ಉತ್ಪಾದನಾ ವೆಚ್ಚಕ್ಕಿಂತ ಕಡಿಮೆಯಾಗಿ ಕಬ್ಬಿನ ಎಪ್‌ಆರ್‌ಪಿ ಬೆಲೆ ನಿಗದಿ ಮಾಡಿರುವುದು ನ್ಯಾಯ ಸಮ್ಮತವಲ್ಲ. ಸಕ್ಕರೆ ಕಾರ್ಖಾನೆಗಳು ಇಳುವರಿ ಕಡಿಮೆ ತೋರಿಸುವ ಕಾರಣ ಹೆಚ್ಚಿನ ಬೆಲೆ ಸಿಗಲು ಸಾಧ್ಯವಾಗುತ್ತಿಲ್ಲ.

ಕೇಂದ್ರ ಸರ್ಕಾರ ರೈತರ ಗಾಯದ ಮೇಲೆ ತುಪ್ಪ ಸವರಿ ಬರೆ ಎಳೆದಿದೆ.ರಾಜ್ಯ ಸರ್ಕಾರ ರೈತರಿಗೆ ನೀಡುವ ಸವಲತ್ತುಗಳನ್ನು ಆಪ್ ಗಳ ಮೂಲಕ



ಉದಯವಾಹಿನಿ ಚಿತ್ರ

ವಿತರಿಸುತ್ತಿದೆ. ಆದರೆ 25000 ಕೋಟಿ ಹಣಕಾಸಿನ ವೈವಾಟು ನಡೆಸುವ ಸಕ್ಕರೆ ಕಾರ್ಖಾನೆಗಳ ವ್ಯವಹಾರ ಆಪ್ ಮೂಲಕ ಏಕೆ ಮಾಡುತ್ತಿಲ್ಲ ಎಂದು ಪ್ರಶ್ನೆ. ಸಕ್ಕರೆ ಇಳುವರಿ ಸಂದೇಶ ನೀಡುವ ಆಪ್ ನ್ನು ಸಿದ್ದಗೊಳಿಸ ಲಾಗಿದ್ದರೂ. ರಾಜ್ಯ ಸರ್ಕಾರ ಯಾಕೆ ಜಾರಿ ಮಾಡಿಲ್ಲ. ಸಕ್ಕರೆ ಕಾರ್ಖಾನೆಗಳ ಒತ್ತಡಕ್ಕೆ ಮಣಿದು ರೈತರಿಗೆ ವ್ಯವಸ್ಥಿತ ವಂಚನೆ ನಡೆಸಲು ಸಹಕಾರ ನೀಡುತ್ತಿದೆ ಎಂದು ಆರೋಪ.ಕಳೆದ ಎಂಟು ತಿಂಗಳಿಂದ ಸಕ್ಕರೆ ಕಾರ್ಖಾನೆಗಳು ಸುಮಾರು 700 ಕೋಟಿ ರೂ ಕಬ್ಬಿನ ಹಣ ರೈತರಿಗೆ ಪಾವತಿಸಿಲ್ಲ. ರಾಜ್ಯ ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇದ್ದರೆ ಇಂಥ ಕಾರ್ಖಾನೆಗಳನ್ನು ಸರ್ಕಾರ ಮುಟ್ಟುಗೋಲು ಹಾಕಿಕೊಳ್ಳಲಿ.

### ಮಾನದಂಡ ತಿದ್ದುಪಡಿ ಮಾಡಿ

ಕೇಂದ್ರ ಸರ್ಕಾರ ಬರ. ಮಳೆಹಾನಿ. ಅತಿವೃಷ್ಟಿ ಹಾನಿ ಮಳೆ ವಿಪತ್ತು ನಷ್ಟ ಪರಿಹಾರದ. ಎನ್ ಡಿಆರ್‌ಎಫ್ ಮಾನದಂಡ ತಿದ್ದುಪಡಿ ಮಾಡಿ ಬೆಳೆ ನಷ್ಟದ ಸಂಪೂರ್ಣ ಹಣ ನೀಡಬೇಕು. ಇಲ್ಲದಿದ್ದರೆ ಬರ. ಅತಿವೃಷ್ಟಿ ಮಳೆ ಹಾನಿ. ಒಳಗಾದ ರೈತರ ಬೆಳೆ ಸಾಲ ಸಂಪೂರ್ಣ ಮನ್ನ ಮಾಡುವ ನೀತಿ ಜಾರಿಗೆ ತರಬೇಕು ಎಂದು ಒತ್ತಾಯ ಮಾಡಿದ್ದಾರೆ.

## ಸಮುದ್ರಪಾಲಾಗುತ್ತಿದ್ದ ಮೂವರು ಮಹಿಳೆಯರ ರಕ್ಷಣೆ

• ಉದಯವಾಹಿನಿ ಉಳ್ಳಾಲ

ಇಲ್ಲಿನ ಸಮುದ್ರತೀರಕ್ಕೆ ವಿಹಾರಕ್ಕೆ ಬಂದಿದ್ದ ಆಂದ್ರಪ್ರದೇಶ ಮೂಲದ ನಾಲ್ವರು ಮಹಿಳೆಯರಲ್ಲಿ ಒಬ್ಬಾಕೆ ಸಮುದ್ರಪಾಲಾಗಿದ್ದು, ಉಳಿದ ಮೂವರನ್ನು ಸ್ಥಳೀಯರು ರಕ್ಷಿಸಿದ್ದಾರೆ.

ಆಂದ್ರಪ್ರದೇಶದ ಕೊಂಡಾಪುರದ ಸಿರಿಲಿಂಗಪಲ್ಲಿ ನಿವಾಸಿ ಪಿ.ಎಲ್ ಪ್ರಸನ್ನ ಎಂಬವರ ಪತ್ನಿ ಪರಿಮೀ ರತ್ನ ಕುಮಾರಿ (57) ಸಾವನ್ನಪ್ಪಿದವರು. ಉಳ್ಳಾಲ ಬೀಚ್ ಸಮುದ್ರದಲ್ಲಿ ವಿಹರಿಸುತ್ತಿದ್ದ ಸಂದರ್ಭ ಬೃಹತ್ ಗಾತ್ರದ ಅಲೆಯೊಂದು ಅಪ್ಪಳಿಸಿ ನಾಲ್ವರು ಮಹಿಳೆಯರನ್ನು ಎಳೆದೊಯ್ದಿತ್ತು. ಸ್ಥಳೀಯರು ತಕ್ಷಣ ನಾಲ್ವರನ್ನು ಸಮುದ್ರದಿಂದ ಹೊರಗೆಳೆದು ರಕ್ಷಿಸಿದ್ದಾರೆ. ಈ ಪೈಕಿ ಪರಿಮೀ ರತ್ನ ಕುಮಾರಿ ಪ್ರಜ್ಞೆ ತಪ್ಪಿದ್ದ ಹಿನ್ನೆಲೆಯಲ್ಲಿ ದೇರಳಕಟ್ಟೆ ಆಸ್ಪತ್ರೆಗೆ ಕೊಂಡೊಯ್ಯಲಾಗಿ



ಉದಯವಾಹಿನಿ ಚಿತ್ರ

ದ್ದು, ಅಲ್ಲಿ ಸಾವನ್ನಪ್ಪಿದ್ದಾರೆ.

ಹೈದರಾಬಾದ್ ನಿಂದ 5 ಮಂದಿ ಮಹಿಳೆಯರ ತಂಡ ಜೂ.6 ಕ್ಕೆ ಮೈಸೂರಿಗೆ ವಿಮಾನದ ಮೂಲಕ ಬಂದಿಳಿದಿದ್ದರು.

ಅಲ್ಲಿ ಪ್ರವಾಸ ಮುಗಿಸಿದ ತಂಡ ಇನೋವಾ ಕಾರಿನ ಮೂಲಕ ಜೂ.7 ಕ್ಕೆ ಕೊಡಗಿಗೆ ತಲುಪಿತ್ತು. ಅಲ್ಲಿಂದ ಸುಬ್ರಹ್ಮಣ್ಯ ಕ್ಷೇತ್ರ ಸಂದರ್ಶನ ನಡೆಸಿ, ನಿನ್ನೆಯಷ್ಟೇ ಧರ್ಮಸ್ಥಳ ಸಂದರ್ಶನ ನಡೆಸಿ ಉಳ್ಳಾಲ ಸಮುದ್ರ ತೀರ ವಿಹಾರಕ್ಕೆ ಬಂದಿದ್ದರು ಎನ್ನಲಾಗಿದೆ.

## ಲೀಡ್ ಕೊಡಿಸದಿರುವ ಸಚಿವರ ರಾಜೀನಾಮೆಗೆ ಒತ್ತಾಯ



ಉದಯವಾಹಿನಿ ಚಿತ್ರ

• ಉದಯವಾಹಿನಿ ದಾವಣಗೆರೆ

ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿಗೆ ಲೀಡ್ ಕೊಡಿಸದಿರುವ ಸಚಿವರ ರಾಜೀನಾಮೆಗೆ ಚನ್ನಗಿರಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಸವರಾಜ್ ವಿ. ಶಿವಗಂಗಾ ಒತ್ತಾಯಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ಯಾವ ಸಚಿವರು ತಮ್ಮ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಲೀಡ್ ಕಡಿಮೆ ಕೊಡಿಸಿದ್ದಾರೋ ಅಂತವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಿ ಹೊಸಬರಿಗೆ ಅವಕಾಶ ಮಾಡಿಕೊಡುವಂತಾಗಬೇಕು ಎಂದರು.

ತಮ್ಮ ಕ್ಷೇತ್ರದಲ್ಲಿ ಯಾರು ಲೀಡ್ ಕೊಡಿಸಲು ಸಾಧ್ಯವಾಗಲಿಲ್ಲವೋ ಅಂತ ಸಚಿವರನ್ನು ತೆಗೆಯಬೇಕು. ಶಾಸಕರು, ಕಾರ್ಯಕರ್ತರು ಹಗಲು ಇರುಳು ಕೆಲಸ ಮಾಡಿ ಅಯಾ ಕ್ಷೇತ್ರಗಳಲ್ಲಿ ಲೀಡ್ ಕೊಡಿಸಿದ್ದೇವೆ. ಆದರೆ, ಕೆಲವಾರು ಸಚಿವರು ಅಭ್ಯರ್ಥಿಗಳನ್ನು ಗೆಲ್ಲಿಸುವುದು ಇರಲಿ ಅವರ ಕ್ಷೇತ್ರಗಳಲ್ಲಿ ಲೀಡ್ ಕೊಡಿಸಿಲ್ಲ. ನಮ್ಮ ಸಚಿವರು ಅವರ ಕ್ಷೇತ್ರದಲ್ಲಿ ಲೀಡ್ ಕೊಡಿಸದಿದ್ದರೂ ನಮ್ಮ ಅಭ್ಯರ್ಥಿಯನ್ನು ಗೆಲ್ಲಿಸಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ರಾಹುಲ್ ಗಾಂಧಿಯವರು ಹಾಗೂ ಹಿರಿಯ ನಾಯಕರು ಲೀಡ್ ಕೊಡಸದ ಸಚಿವರ ವಿರುದ್ದ ಕ್ರಮ ಕೈಗೊಳ್ಳಬೇಕು. ನಮಗೆ ಪಕ್ಷ ಮುಖ್ಯ ಹೊರತು. ವ್ಯಕ್ತಿ ಮುಖ್ಯವಲ್ಲ. ಹಾಗಾಗಿ ಕ್ರಮ ಕೈಗೊಳ್ಳಬೇಕು. ಇಷ್ಟೊಂದು ಗ್ಯಾರೆಂಟಿ ಯೋಜನೆ ನೀಡಿದರೂ ಕೂಡ ರಾಜ್ಯದಲ್ಲಿ ಹೆಚ್ಚು ಸೀಟ್ ಬಂದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

## ಮಾಧ್ಯಮದ ಅಲೆಯಲ್ಲಿ ಮೋದಿ ಗೆಲುವು: ಸಂತೋಷ್ ಲಾಡ್ ವ್ಯಂಗ್ಯ

• ಉದಯವಾಹಿನಿ ಧಾರವಾಡ



ಕಳೆದ ಬಾರಿಯ ಲೋಕಸಭಾ ಚುನಾವಣೆಗೆ ಹೋಲಿಸಿದರೆ ಈ ಬಾರಿ ಬದಲಾಗಿದೆ. ಮೋದಿ ಅವರು ತಮ್ಮ ಅಲೆಗಿಂತ ಮಾಧ್ಯಮದ ಅಲೆಯಲ್ಲಿ ಗೆದ್ದಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ವ್ಯಂಗ್ಯವಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಸ್ತುತ ಚುನಾವಣೆಯಲ್ಲಿ ನಮ್ಮ ಗ್ಯಾರಂಟಿ ಯೋಜನೆಗಳು ಕೈಹಿಡಿದಿವೆ.

ಈ ಬಾರಿಯ ಚುನಾವಣೆಯಲ್ಲಿ ಮೋದಿ ಅವರ ಗೆಲುವು ಕೇವಲ 1.50 ಲಕ್ಷದಿಂದ ಆಗಿದೆ. ಅದನ್ನು ಗಮನಿಸಬೇಕು ಎಂದರು. ಈ ಚುನಾವಣೆಯಲ್ಲಿ ಜೋಶಿ ವರ್ಸಸ್ ಲಾಡ್ ಅಂತ ಅಲ್ಲ ಬದಲಿಗೆ ಜೋಶಿ ವರ್ಸಸ್ ಕಾಂಗ್ರೆಸ್ ಅಂತ ಫೈಟ್ ಕೊಟ್ಟಿದ್ದೆವು. ಲೋಕಸಭಾ ಚುನಾವಣೆಯಲ್ಲಿ ಕಲಘಟಗಿ ಕ್ಷೇತ್ರದಲ್ಲಿ ಬಿಜೆಪಿಗೆ ಲೀಡ್ ಆಗಿದೆ. ಆದರೆ ಕಳೆದ ಬಾರಿಯೂ ಲೀಡ್ ಆಗಿತ್ತು. ನಾವು ಮಾತ್ರ ಪ್ರಾಮಾಣಿಕವಾಗಿ ಫೈಟ್ ಕೊಟ್ಟಿದ್ದೇವೆ ಎಂದರು.

## ತಾತ್ಕಾಲಿಕ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

• ಉದಯವಾಹಿನಿ ಬಳ್ಳಾರಿ

ಸಮಗ್ರ ಶಿಕ್ಷಣ ಅಭಿಯಾನದ ವತಿಯಿಂದ 2024-25ನೇ ಶೈಕ್ಷಣಿಕ ಸಾಲಿಗೆ ಬಳ್ಳಾರಿ ಸಮನ್ವಯ ಶಿಕ್ಷಣ ವಿಭಾಗದಡಿ ಖಾಲಿ ಇರುವ ಬಿಐಆರ್‌ಟಿ ಪ್ರಾಥಮಿಕ, ಪ್ರೌಢ ಹುದ್ದೆಗಳಿಗೆ ತಾತ್ಕಾಲಿಕವಾಗಿ ನೇರಗುತ್ತಿಗೆ ಅಡಿ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಸಮಗ್ರ ಶಿಕ್ಷಣ ಅಭಿಯಾನದ ಉಪನಿರ್ದೇಶಕರು ತಿಳಿಸಿದ್ದಾರೆ.

ಪ್ರಾಥಮಿಕ 1-5 (ಡಿ.ಇಡಿ ವಿಶೇಷ ಶಿಕ್ಷಣದೊಂದಿಗೆ ಆರ್‌ಸಿಐ ಸಿಆರ್‌ಆರ್ ಸಂಖ್ಯೆ ಮಾನ್ಯತೆ ಹೊಂದಿರಬೇಕು), ಪ್ರಾಥಮಿಕ 6-8 (ಬಿ.ಇಡಿ ವಿಶೇಷ ಶಿಕ್ಷಣದೊಂದಿಗೆ ಆರ್‌ಸಿಐ ಸಿಆರ್‌ಆರ್ ಸಂಖ್ಯೆ ಮಾನ್ಯತೆ ಹೊಂದಿರಬೇಕು) ಮತ್ತು ಪ್ರೌಢ 9-12 (ಬಿ.ಇಡಿ ವಿಶೇಷ





ಉದಯವಾಹಿನಿ ಚಿತ್ರ

ಶಿಕ್ಷಣದೊಂದಿಗೆ ಆರ್‌ಸಿಐ ಸಿಆರ್‌ಆರ್ ಸಂಖ್ಯೆ ಮಾನ್ಯತೆ ಹೊಂದಿರಬೇಕು). ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ. ಈ ಹಿಂದೆ ಈ ಇಲಾಖೆಯಲ್ಲಿ ಬಿಐಆರ್‌ಟಿಯಾಗಿ ಕಾರ್ಯನಿರ್ವಹಿಸಿರುವ ಅಭ್ಯರ್ಥಿಗಳಿಗೆ ಸೇವಾ ಜೇಷ್ಠತೆಯನ್ನು ಪರಿಗಣಿಸಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ನಗರದ ಕೋಟೆ ಪ್ರದೇಶದ ಸಮಗ್ರ ಶಿಕ್ಷಣ ಇಲಾಖೆಯ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿ ಮತ್ತು ಉಪನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಮಾಣಿ ವಿದ್ಯಾರ್ಥಿ ವಸತಿ ಗೃಹದಲ್ಲಿ ದಾಖಲಾತಿಗಳು ಪ್ರಾರಂಭ: ರಾಜು ಪವ್ಹಾರ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಚಂದಾಪೂರದ ಗಂಗೂನಾಯಕ ತಾಂಡದ ಮುಖ್ಯ ರಸ್ತೆಯಲ್ಲಿರುವ ಲಮಾಣಿ ವಿದ್ಯಾರ್ಥಿ ವಸತಿ ಗೃಹದಲ್ಲಿ ವಿವಿಧ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ



5-ರಿಂದ 10ನೇ ತರಗತಿಯ ವಿದ್ಯಾರ್ಥಿಗಳು ವಸತಿ ಗೃಹದಲ್ಲಿ ಪ್ರವೇಶ ಪಡೆ ಯುವ ವಿದ್ಯಾರ್ಥಿಗಳು ವಸತಿ ಗೃಹದಲ್ಲಿ ದಾಖಲಾತಿಗಳು ಪ್ರಾರಂಭವಾಗಿದ್ದು ಸದುಪಯೋಗ ಪಡೆದುಕೊಳ್ಳಬೇಕು ಎಂದು ಲಮಾಣಿ ವಿದ್ಯಾರ್ಥಿ ವಸತಿ ಗೃಹದ ಅಧ್ಯಕ್ಷ ರಾಜು ಪವ್ಹಾರ ತಿಳಿಸಿದ್ದಾರೆ. ಪರಿಶೀಷ್ಟ ಜಾತಿಯ ಪ್ರತಿಶತಃ 75ರಷ್ಟು ವಿದ್ಯಾರ್ಥಿಗಳು ಹಾಗೂ ಸಾಮಾನ್ಯ ವರ್ಗದವರರ ವಿದ್ಯಾರ್ಥಿಗಳಿಗೆ ಪ್ರತಿಶತಃ 25ರಷ್ಟು ದಾಖಲಾತಿಗಳು ಪಡೆಯಬಹುದು ವಿದ್ಯಾರ್ಥಿಗಳು ಲಮಾಣಿ ವಸತಿ ಗೃಹದಲ್ಲಿ ಆಸಕ್ತಿವುಳ್ಳವರು ಸದುಪಯೋಗ ಪಡೆದುಕೊಂಡು ಉತ್ತಮ ಗುಣಮಟ್ಟದ ಶಿಕ್ಷಣ ಪಡೆದುಕೊಂಡು ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

## ಡಿ.ಕೆ.ಸುರೇಶ್ ಸೋಲಿನಿಂದ ನೋವಾಗಿದ್ದು ಹೆಬ್ಬಾರರಿಗೇ: ಸದಾನಂದ ಭಟ್ಟ ವ್ಯಂಗ್ಯ

• ಉದಯವಾಹಿನಿ ಶಿರಸಿ



ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ್ ತಾಂತ್ರಿಕವಾಗಿ ಬಿಜೆಪಿ ಜೊತೆ ಇದ್ದಾರೆ. ಅವರಿಗೆ ಡಿ.ಕೆ.ಸುರೇಶ್ ಅವರ ಸೋಲಿಗೆ ಅತಿ ಹೆಚ್ಚು ನೋವಾಗುತ್ತದೆ ಎಂದು ಬಿಜೆಪಿ ವಕ್ತಾರ ಸದಾನಂದ ಭಟ್ಟ ಟಾಂಗ್ ನೀಡಿದರು.

ಬಿಜೆಪಿಗೆ ಲೆಕ್ಕಕ್ಕೆ ಮೂರು ಶಾಸಕರಾದರೂ ಯಲ್ಲಾಪುರದವರು ಯಾವ ಸಹಕಾರ ನೀಡಿಲ್ಲ. ಕ್ಷೇತ್ರದ ವಿಠಲ ಹಲಗೇಕರ ಹಾಗೂ ದಿನಕರ ಶೆಟ್ಟಿ ಮಾತ್ರ ಶಾಸಕರು. ಹೆಬ್ಬಾರರು ತಾಂತ್ರಿಕವಾಗಿ ಇದ್ದಾರೆ ಎಂದರು. ಲೋಕಸಭಾ ಚುನಾವಣೆಯಲ್ಲಿ ಮಾಜಿ ಸಂಸದ ಅನಂತಕುಮಾರ ಹೆಗಡೆ, ಶಾಸಕ ಶಿವರಾಮ ಹೆಬ್ಬಾರ್ ಅವರು ಸೇರಿದಂತೆ ಯಾರು ಕೆಲಸ ಮಾಡಿಲ್ಲ ಎಂಬ ವರದಿ ಪಕ್ಷದ ವರಿಷ್ಠರಿಗೆ ಜಿಲ್ಲಾ ಘಟಕ ನೀಡಲಿದೆ ಎಂದೂ ಹೇಳಿದರು.

## 1 ವರ್ಷದ ಹಿಂದೆ ಮದುವೆಯಾಗಿದ್ದ ರೇಣುಕಾಸ್ವಾಮಿ ಪತ್ನಿ 5 ತಿಂಗಳ ಗರ್ಭಿಣಿ



ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ನಗರದ ತುರುವನೂರು ರಸ್ತೆಯಲ್ಲಿತುವ ಬ್ಯಾಂಕ್ ಕಾಲೋನಿಯ ನಿವಾಸಿಗಳಾದ ಕೆಇಬಿ ನಿವೃತ್ತ ನೌಕರರಾದ ಶಿವಾನಂದ ಗೌಡ್ರು, ಹಾಗೂ ರತ್ನಪ್ರಭ ಪುತ್ರ, ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಬಂಧನಕ್ಕೆ ಒಳಗಾಗಿದ್ದಾರೆ. ಕಳೆದ ಎರಡು ದಿನಗಳಿಂದ ಮಗ ಮನೆಗೆ ಬಂದಿರಲಿಲ್ಲ. ರಾತ್ರಿ ಊಟಕ್ಕೆ ಬರುವುದಿಲ್ಲ ಎಂದು ತಾಯಿ ಬಳಿ ಹೇಳಿ ಹೋಗಿದ್ದ ರೇಣುಕಾಸ್ವಾಮಿ ಕೊಲೆಯಾಗಿದ್ದಾನೆ. ಕೊಲೆಯಾದ ರೇಣುಕಾಸ್ವಾಮಿ ಒಂದು ವರ್ಷದ ಹಿಂದಷ್ಟೇ ಮದುವೆ ಆಗಿದ್ದರು. ಪತ್ನಿ ಐದು ತಿಂಗಳ ಗರ್ಭಿಣಿ. ಪತಿಯ ಕೊಲೆ ಮಾಹಿತಿ ಆಕೆಗೆ ತಿಳಿಸಿಲ್ಲ. ಬೆಳಗ್ಗೆ ಚಿತ್ರದುರ್ಗದ ಮನೆಯಿಂದ ತೆರಳಿದ್ದರು. ಮೂರ್ನಾಲ್ಕು ವರ್ಷದಿಂದ ಅಪೊಲೊ ಮೆಡಿಕಲ್ ಶಾಪ್ ನಲ್ಲಿ ಕೆಲಸ ಮಾಡಿಕೊಂಡಿದ್ದರು. ಚಳ್ಳಕೆರೆ ಗೇಟ್ ಬಳಿಯಿರುವ ಬಾಲಾಜಿ ಬಾರ್ ಬಳಿ ರೇಣುಕಾಸ್ವಾಮಿ ಬೈಕ್ ಪತ್ತೆಯಾಗಿತ್ತು. ನಿನ್ನೆ ಮಧ್ಯಾಹ್ನ ಬೆಂಗಳೂರಿನ ಕಾಮಾಕ್ಷಿ ಪಾಳ್ಯ ಪೊಲೀಸರು ಪೋಷಕರಿಗೆ ಫೋನ್ ಮಾಡಿ ಕರೆಸಿಕೊಂಡಿದ್ದಾರೆ.

## ಅಕ್ರಮ ಆರೋಪ: ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ತನಿಖೆಗೆ ರಮಾನಾಥ ರೈ ಆಗ್ರಹ

• ಉದಯವಾಹಿನಿ ಮಂಗಳೂರು

ಈ ಬಾರಿಯ ನೀಟ್ ಪರೀಕ್ಷೆಯ ಫಲಿತಾಂಶದಲ್ಲಿ ಅಕ್ರಮ ನಡೆದಿರುವುದು ಮೇಲ್ನೋಟಕ್ಕೆ ಸಾಬೀತಾಗಿದೆ. ಈಗಾಗಲೇ 13 ಮಂದಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದ್ದು, ಪ್ರಕರಣವನ್ನು ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಕೆಪಿಸಿಸಿ ಉಪಾಧ್ಯಕ್ಷ, ಮಾಜಿ ಸಚಿವ ರಮಾನಾಥ ರೈ ಆಗ್ರಹಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶ ದಲ್ಲೇ ಅತೀ ಹೆಚ್ಚು ಮೆಡಿಕಲ್ ಕಾಲೇಜು ಹೊಂದಿರುವ ಜಿಲ್ಲೆ ನಮ್ಮದು. ಹಾಗಾಗಿ ವಿದ್ಯಾರ್ಥಿಗಳ ಪರ ನಿಲ್ಲುವುದು ನಮ್ಮ ಕರ್ತವ್ಯ. ಈಗಾಗಲೇ ಕೇಂದ್ರ ಮಟ್ಟದಲ್ಲಿ ರಾಹುಲ್ ಗಾಂಧಿಯವರು ವಿದ್ಯಾರ್ಥಿಗಳ ಹೆತ್ತವರಿಗೆ ಬೆಂಬಲ ಸೂಚಿಸಿದ್ದು, ಸಂಸತ್ತಿನಲ್ಲಿ ಪ್ರಸ್ತಾಪಿಸುವುದಾಗಿ ಹೇಳಿದ್ದಾರೆ. ಲೋಕಸಭಾ ಚುನಾವಣೆ ಫಲಿತಾಂಶದ ದಿನವೇ ನೀಟ್ ಫಲಿತಾಂಶವನ್ನೂ ಪ್ರಕಟಿಸಿರುವ ಹಿಂದೆಯೂ ಹುನ್ನಾರ ಅಡಗಿದೆ. ಫಲಿತಾಂಶದ ಬಳಿಕ ಹಲವು ಮಂದಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ವಿದ್ಯಾರ್ಥಿಗಳ ಪರ ನಿಲ್ಲುವುದು ನಮ್ಮ ಕರ್ತವ್ಯ

ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಈ ಪ್ರಕರಣದ ಕುರಿಂತೆ ಪಾರದರ್ಶಕ ತನಿಖೆ ಆಗಬೇಕು ಎಂದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಪದ್ಮರಾಜ್ ಆರ್. ಪೂಜಾರಿ ಮಾತನಾಡಿ, ನೀಟ್ ಫಲಿತಾಂಶ ವಿಷಯವಾಗಿ ಎನ್‌ಎಸ್‌ಯುಐ ಹೊರತುಪಡಿಸಿ ಉಳಿದ ವಿದ್ಯಾರ್ಥಿ ಸಂಘಟನೆಗಳು ಇನ್ನೂ ಧ್ವನಿ ಎತ್ತದಿರುವುದು ಖೇದಕರ. ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದರು.

## ಜೂ. 13ರಂದು ವಿದ್ಯುತ್ ವ್ಯತ್ಯಯ

• ಉದಯವಾಹಿನಿ ಶಿವಮೊಗ್ಗ

ಶಿವಮೊಗ್ಗ ನ.ಉ.ವಿ-2ರ ಮಂಡ್ಲಿ ವಿ.ವಿ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಇರುವುದರಿಂದ ಜೂನ್ 13 ರಂದು ಬೆಳಗ್ಗೆ 10.00 ರಿಂದ ಮಧ್ಯಾಹ್ನ 2.00ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ. ಪೇಪರ್ ಪ್ಯಾಕೇಜ್, ಹರಕೆರೆ, ನ್ಯೂಮಂಡ್ಲಿ, ಗಂಧರ್ವನಗರ, ಶಂಕರ ಕಣ್ಣಿನ ಆಸ್ಪತ್ರೆ, ನಾರಾಯಣ ಹೃದಯಾಲಯ, ಗಜಾನನ ಗ್ಯಾರೇಜ್, ಮಂಜುನಾಥ ರೈಸ್ಮಿಲ್, ಬೆನಕೇಶ್ವರ ರೈಸ್ಮಿಲ್, ಸವಾಯಿಪಾಳ್ಯ, ಕುರುಬರಪಾಳ್ಯ, ಇಲಿಯಾಜ್ನಗರ 1 ರಿಂದ 4ನೇ ಕ್ರಾಸ್, 100 ಅಡಿರಸ್ತೆ, ಎಫ್-05 ಗಾಜನೂರು ಗ್ರಾಮಾಂತರ ಪ್ರದೇಶ, ಎಫ್-8, ರಾಮಿನಕೊಪ್ಪ ಗ್ರಾಮಾಂತರ ಪ್ರದೇಶ, ಎಫ್-18 ಹೊಸಳ್ಳಿ, ಎಫ್-6 ಕಲ್ಲೂರು ಮಂಡ್ಲಿ ಗ್ರಾಮಾಂತರ ಪ್ರದೇಶ, ಎಫ್-17 ಐಹೊಳೆ, ಅಗಸವಳ್ಳಿ, ಕಲ್ಲೂರು, ಗೋವಿಂದಪುರ, ಆನುಪಿಕಟ್ಟೆ, ಪುರದಾಳು, ರಾಮಿಕೊಪ್ಪ, ಮೈಲಾರಪ್ಪಪನ ಕ್ಯಾಂಪ್, ಹನುಮಂತಾಪುರ, ಶರಾವತಿನಗರ, ಶಾರದ ಕಾಲೋನಿ ಹಾಗೂ ಸುತ್ತಮುತ್ತಲಿನ ಐಪಿ ಲಿಮಿಟ್ನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

## ಕಂಗೊಳಿಸುತ್ತಿದೆ ವರವಿಕೊಳ್ಳ ಜಲಪಾತ

• ಉದಯವಾಹಿನಿ ಮುನವಳ್ಳಿ

ನಿಸರ್ಗದ ಮಡಿಲಲ್ಲಿರುವ ವರವಿಕೊಳ್ಳ ಜಲಪಾತ ಮಳೆಗಾಲದಲ್ಲಿ ಮೈತುಂಬಿ ಸುಮಾರು 200 ಅಡಿ ಎತ್ತರದಿಂದ ಎತ್ತರದಿಂದ ಧುಮ್ಮಿಕ್ಕುವ ನಯನ ಮನೋಹರ ದೃಶ್ಯ ಅದ್ಭುತವಾಗಿದೆ. ಜಲಪಾತದ ಅಡಿಯ ಗವಿಯಲ್ಲಿ ಶ್ರೀಸಿದ್ದೇಶ್ವರ ದೇವಸ್ಥಾನವಿದೆ. ತಿಂಡಿ, ಊಟ, ವಸತಿಗಾಗಿ ಮುನವಳ್ಳಿಯಲ್ಲಿ ಉತ್ತಮವಾದ ಹೋಟೇಲ್, ಲಾಡ್ಜ್‌ಗಳ ಅನುಕೂಲತೆ ಇದೆ.

**ಜಲಪಾತಕ್ಕೆ ಹೋಗುವ ದಾರಿ :** ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುನವಳ್ಳಿಯಿಂದ ನರಗುಂದ ಮಾರ್ಗವಾಗಿ 4 ಕಿಮೀ ಕ್ರಮಿಸಬೇಕು, ನಂತರ ವರವಿಕೊಳ್ಳ ಜಲಪಾತದ ಮಾರ್ಗಸೂಚಿ ಫಲಕದಿಂದ 2 ಕಿಮೀ



ಉದಯವಾಹಿನಿ ಚಿತ್ರ

ಕ್ರಮಿಸಬೇಕು. ಪ್ರಸಿದ್ಧ ಪುಣ್ಯಕ್ಷೇತ್ರ ಯಕ್ಕೇರಿ ಕರೆಮ್ಮ ದೇವಸ್ಥಾನಕ್ಕಿಂತ 1 ಕಿ.ಮೀ. ಮೊದಲೇ ವರವಿಕೊಳ್ಳ ಜಲಪಾತ ತಿರುವು ರಸ್ತೆ ಇದೆ. ಕಚ್ಚಾ ರಸ್ತೆ ಇದ್ದರೂ ಜಲಪಾತದ ವರೆಗೆ ವಾಹನ ಸಂಚಾರಕ್ಕೆ ಅನುಕೂಲಕರವಿದೆ ಗುಡ್ಡದ ಮೇಲೆ ಅಡ್ಡಾಡಲು ಬಹಳ ಮಜವೆನಿಸುತ್ತದೆ. ಪ್ರವಾಸಿಗರಿಗೆ ಅನುಕೂಲವಾಗಲೆಂದು ಮಾರ್ಗಸೂಚಿ ಫಲಕವನ್ನು ಅಳವಡಿಸಲಾಗಿದೆ. ಸವದತ್ತಿಯಿಂದ ಮುನವಳ್ಳಿ ಮಾರ್ಗವಾಗಿ 20 ಕಿಮೀ ಕ್ರಮಿಸಬೇಕು.

# 25 ವಸತಿ ನಿಲಯಗಳಿಗಿಲ್ಲ ಸ್ವಂತ ಕಟ್ಟಡ: ಬಾಡಿಗೆ ಕಟ್ಟಡದಲ್ಲಿ ಆಶ್ರಯ

## • ಬಾಡಿಗೆ ಕಟ್ಟಡಗಳಾಗಿದ್ದರಿಂದ ಭದ್ರತೆಯ ಅಭಾವ ವಿದ್ಯಾರ್ಥಿನಿಯರನ್ನು ಕಾಡುತ್ತಿರುವುದು ಮಾತ್ರ ಸುಳ್ಳಲ್ಲ

• ಉದಯವಾಹಿನಿ ಗದಗ

ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಹಾಗೂ ನಂತರದ 62 ವಸತಿ ನಿಲಯಗಳ ಪೈಕಿ ಕೇವಲ 36 ವಸತಿ ನಿಲಯಗಳಿಗೆ ಸ್ವಂತ ಕಟ್ಟಡಗಳಿದ್ದರೆ 25 ವಸತಿ ನಿಲಯಗಳು ಬಾಡಿಗೆ ಕಟ್ಟಡದ ಆಶ್ರಯ ಪಡೆದಿವೆ.

ಜಿಲ್ಲೆಯಲ್ಲಿ ಮೆಟ್ರಿಕ್ ಪೂರ್ವ 33 ನಿಲಯಗಳ ಪೈಕಿ 8 ವಸತಿ ನಿಲಯಗಳು ಹಾಗೂ ಮೆಟ್ರಿಕ್ ನಂತರದ 31 ವಸತಿ ನಿಲಯಗಳ ಪೈಕಿ 13 ವಸತಿ ನಿಲಯಗಳು ಸ್ವಂತ ಕಟ್ಟಡವಿಲ್ಲದೇ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಬಾಡಿಗೆ ಕಟ್ಟಡದಲ್ಲಿರುವ 25 ವಸತಿ ನಿಲಯಗಳ ಪೈಕಿ 14 ವಸತಿ ನಿಲಯಗಳು ವಿದ್ಯಾರ್ಥಿನಿಯರ ವಸತಿ ನಿಲಯಗಳಾಗಿವೆ. ಮೆಟಿಕ್ ನಂತರದ ಬಾಲಕಿಯರ ವಸತಿ ನಿಲಯಗಳ ಪೈಕಿ ಗದಗ 2, ನರಗುಂದ, ಲಕ್ಷ್ಮೇಶ್ವರ,ಗಜೇಂದ್ರಗಡ, ರೋಣ, ಬೆಳ್ಳಟ್ಟಿ ಹಾಗೂ ಹೊಂಬಳ ತಲಾ ಒಂದು ಸೇರಿ 8,

### ಕಾವಲುಗಾರರ ಕೊರತೆ

**ಮುಖ್ಯವಾಗಿ ಜಿಲ್ಲೆಯಲ್ಲಿ ಮೆಟ್ರಿಕ್ ನಂತರ, ಮೆಟ್ರಿಕ್ ಪೂರ್ವ ವಸತಿ ನಿಲಯಗಳ ಬಾಡಿಗೆ ಹಾಗೂ ಸ್ವಂತ ಕಟ್ಟಡಗಳ ಪೈಕಿ 33 ನಿಲಯ ಮೇಲ್ವಿಚಾರಕರು, ಕಿರಿಯ ಮೇಲ್ವಿಚಾರಕರು, 25 ಅಡುಗೆಯವರು, 99 ಅಡುಗೆ ಸಹಾಯಕರು, 25 ರಾತ್ರಿ ಕಾವಲುಗಾರರ ಕೊರತೆ ಎದ್ದು ಕಾಣುತ್ತಿದೆ. ಈ ಹಿನ್ನೆಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆದಷ್ಟು ಬೇಗ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳನ್ನು ಸ್ವಂತ ಕಟ್ಟಡಗಳಿಗೆ ವರ್ಗಾಯಿಸುವುದು ಸೇರಿದಂತೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕಿದೆ.**



ಉದಯವಾಹಿನಿ ಚಿತ್ರ

ಮೆಟ್ರಿಕ್ ನಂತರದ ಬಾಲಕಿಯರ ಸ್ನಾತಕೋತ್ತರ ವಸತಿ ನಿಲಯ ಗದಗ ಮತ್ತು ನರಗುಂದ ಸೇರಿ 2, ಮೆಟ್ರಿಕ್ ನಂತರದ ವೃತ್ತಿಪರ ಬಾಲಕಿಯರ ವಸತಿ ನಿಲಯ 1 ಹಾಗೂ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಗದಗ, ಮುಂಡರಗಿ, ಶಿರಹಟ್ಟಿ ತಲಾ 3 ಸೇರಿ ಒಟ್ಟಾರೆ 14 ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ.

ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ 10 ವಸತಿ ನಿಲಯಗಳ 1,325 ಬಾಲಕಿಯರು, ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ 4 ವಸತಿ ನಿಲಯಗಳ ಪೈಕಿ 285 ವಿದ್ಯಾರ್ಥಿನಿಯರಿಗೆ ಇಲ್ಲಿ ಸೌಲಭ್ಯ ಕಲ್ಪಿಸಲಾಗಿದೆ.


ಬಾಡಿಗೆ ಕಟ್ಟಡಗಳಾಗಿದ್ದರಿಂದ ಭದ್ರತೆಯ ಅಭಾವ ವಿದ್ಯಾರ್ಥಿನಿಯರನ್ನು ಕಾಡುತ್ತಿರುವುದು ಮಾತ್ರ ಸುಳ್ಳಲ್ಲ. ಬಾಡಿಗೆ ಕಟ್ಟಡದಲ್ಲಿರುವ ವಸತಿ ನಿಲಯಗಳಿಗೆ ಕೆಲ ಕಡೆ ಕಾಂಪೌಂಡ್ ಇಲ್ಲದಿರುವುದು, ವಸತಿ ನಿಲಯಕ್ಕೆ ಅಂಟಿಕೊಂಡೇ ರಸ್ತೆ ಇದೆ. ಇಲಾಖೆಯಿಂದ ನೇಮಿಸಲ್ಪಟ್ಟ ರಾತ್ರಿ ಕಾವಲುಗಾರರು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬಂದಿವೆ. ಭದ್ರತೆ ಮುಂಜಾಗ್ರತೆ ಕ್ರಮ ಕೈಗೊಳ್ಳುವ ಜತೆಗೆ ವಿದ್ಯಾರ್ಥಿನಿಯರ ವಸತಿ ನಿಲಯಗಳಿಗೆ ಆದ್ಯತೆ ನೀಡಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಇಲಾಖೆ ಮುಂದಾಗಬೇಕಿದೆ.

ವಸತಿ ನಿಲಯಗಳಿಗೆ ಕೆಲ ಕಡೆ ಕಾಂಪೌಂಡ್ ಇಲ್ಲ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲಾದ್ಯಂತ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ 62 ವಸತಿ ನಿಲಯಗಳಿದ್ದು, ಆ ಪೈಕಿ 25 ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವುದು ಗಮನಕ್ಕಿದೆ. ಈ ಹಿನ್ನೆಲೆಯಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಕಲ್ಪಿಸುವಂತೆ ಇಲಾಖೆಗೆ ಪತ್ರ ಬರೆದು ಪ್ರಸ್ತಾವನೆ ಸಲ್ಲಿಸಲಾಗಿದೆ. ಇದ್ದ ಸಿಬ್ಬಂದಿ ಜತೆಗೆ ವಸತಿ ನಿಲಯಗಳನ್ನು ಶಿಸ್ತುಬದ್ಧವಾಗಿ ನಡೆಸಿಕೊಂಡು ಹೋಗಲಾಗುತ್ತಿದೆ. -ರವೀ ಗುಂಜೀಕರ್, ಜಿಲ್ಲಾ ಹಿಂದುಳಿದ ವರ್ಗಗಳ ಇಲಾಖೆ ಜಿಲ್ಲಾ ಅಧಿಕಾರಿ

# ಬಾಹ್ಯಾಕಾಶ ನಿಲ್ದಾಣದಲ್ಲಿ ಸುನೀತಾ ವಿಲಿಯಮ್ಸ್‌ಗೆ ಅಪಾಯ

● ಉಸಿರಾಟ ವ್ಯವಸ್ಥೆ ಮೇಲೆ ದಾಳಿ ನಡೆಸುವ ಬಹು ಔಷಧ ಪ್ರತಿರೋಧಕ ಎಂಟರ್‌ಬ್ಯಾಕ್ಟರ್ ಬುಗಂಡೆನ್ಸಿಸ್



**ಐಎಸ್‌ಎಸ್ ನಲ್ಲಿ ಮಾರಕ ಬ್ಯಾಕ್ಟೀರಿಯಾ ಪತ್ತೆ**

**ವಾಷಿಂಗ್ಟನ್:** ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿರುವ (ಐಎಸ್‌ಎಸ್) ಭಾರತ ಮೂಲದ ಗಗನಯಾನಿ ಸುನೀತಾ ವಿಲಿಯಮ್ಸ್ ಸೇರಿದಂತೆ 9 ಮಂದಿಯ ತಂಡಕ್ಕೆ ಅಪಾಯ ಎದುರಾಗಿದೆ. ನಾಸಾದ ಗಗನಯಾತ್ರಿಕರಾದ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್ ಅವರು ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಇತ್ತೀಚೆಗೆ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದ್ದರು. ಆದರೆ ಅಲ್ಲಿ 'ಸ್ಪೇಸ್ ಬಗ್' (ಬಾಹ್ಯಾಕಾಶ ಕ್ರಿಮಿ) ಕಾಟ ಶುರುವಾಗಿದೆ. ಇದು ಬಾಹ್ಯಾಕಾಶದಲ್ಲಿ ವಾಸ್ತವ್ಯ ಹೂಡಿರುವ 9 ಜನ ಸಿಬ್ಬಂದಿ ಸದಸ್ಯರಲ್ಲಿ ಉಸಿರಾಟ ಸೋಂಕು ತಗುಲಿ ಆರೋಗ್ಯ ಸಮಸ್ಯೆ ಉಂಟಾಗುವ ಭೀತಿ ಮೂಡಿಸಿದೆ. ಐಎಸ್‌ಎಸ್‌ನಲ್ಲಿ ಎಂಟರ್‌ಬ್ಯಾಕ್ಟರ್ ಬುಗಂಡೆನ್ಸಿಸ್ ಎಂದು ಗುರುತಿಸಲಾಗಿರುವ ಬಹು ಔಷಧ ಪ್ರತಿರೋಧಕ ಬ್ಯಾಕ್ಟೀರಿಯಾವನ್ನು ವಿಜ್ಞಾನಿಗಳು ಪತ್ತೆ ಹಚ್ಚಿದ್ದಾರೆ. ಮುಚ್ಚಿದ ಪರಿಸರದಲ್ಲಿ ಹುಟ್ಟುವ ಹಾಗೂ ಹೆಚ್ಚು ಶಕ್ತಿಶಾಲಿಯಾಗುವ ಸಾಮರ್ಥ್ಯ ಇದಕ್ಕಿದೆ. ಸೂಪರ್‌ಬಗ್ ಎಂದು ಸಾಮಾನ್ಯವಾಗಿ ಕರೆಯುವ ಬ್ಯಾಕ್ಟೀರಿಯಾ, ಮನುಷ್ಯನ ಉಸಿರಾಟ ವ್ಯವಸ್ಥೆ ಮೇಲೆ ದಾಳಿ ನಡೆಸುತ್ತದೆ. ಈ ಬ್ಯಾಕ್ಟೀರಿಯಾಗಳು ಆಂಟಿಬಯೊಟಿಕ್‌ಗಳಿಗೆ ಬಗ್ಗುವುದಿಲ್ಲ.

ನಾಸಾದ ಜೆಟ್ ಪ್ರೊಪುಲ್ಷನ್ ಲ್ಯಾಬೊರೇಟರಿಯ ಪ್ರಧಾನ ತನಿಖಾಧಿಕಾರಿ ಡಾ. ಕಸ್ತೂರಿ ವೆಂಕಟೇಶ್ವರನ್ ಅವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಪ್ರತ್ಯೇಕಿಸಿದ ಎಂಟರ್‌ಬ್ಯಾಕ್ಟರ್ ಬುಗಂಡೆನ್ಸಿಸ್ ತಳಿಗಳನ್ನು ಅಧ್ಯಯನ ನಡೆಸಿ ಹೊಸ ವೈಜ್ಞಾನಿಕ ವರದಿ ಪ್ರಕಟಿಸಿದ್ದಾರೆ. ಬಹು ಔಷಧ ನಿರೋಧಕ ಸಾಮರ್ಥ್ಯ ಹೊಂದಿರುವ ಅಪಾಯಕಾರಿ ಇ. ಬುಗಂಡೆನ್ಸಿಸ್‌ನ 13 ತಳಿಗಳನ್ನು ಐಎಸ್‌ಎಸ್‌ನಿಂದ ಪ್ರತ್ಯೇಕಿಸಲಾಗಿತ್ತು ಎಂದು ನಾಸಾ ತಿಳಿಸಿದೆ.

ಇವು ಭೂಮಿಯಿಂದ ಆಚೆಗಿರುವ ಬ್ಯಾಕ್ಟೀರಿಯಾಗಳಲ್ಲ, ಆದರೆ ಭೂಮಿಯಿಂದಲೇ ಗಗನಯಾತ್ರಿಕರ ಜತೆ ಬಾಹ್ಯಾಕಾಶಕ್ಕೆ ತೆರಳಿ, ಮುಚ್ಚಿದ ಪರಿಸರದಲ್ಲಿ ಮತ್ತಷ್ಟು ಅಪಾಯಕಾರಿಯಾಗಿವೆ. ಸೂಕ್ಷ್ಮ ಗುರುತ್ವದ ಹಾಗೂ ಐಎಸ್‌ಎಸ್‌ನ ಮುಚ್ಚಿದ ವ್ಯವಸ್ಥೆಯು ಬ್ಯಾಕ್ಟೀರಿಯಾ ವಿಕಸನ ಹೊಂದಲು ಹಾಗೂ ಹೆಚ್ಚು ಪ್ರಬಲಗೊಳ್ಳಲು ನೆರವಾಗಿದೆ ಎಂದು ಅವರು ಹೇಳಿದ್ದಾರೆ.

ಸುನೀತಾ ವಿಲಿಯಮ್ಸ್ ಅವರು ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಜೂನ್ 5ರಂದು ಭೂಮಿಯಿಂದ ಪಯಣಿಸಿ, ಜೂನ್ 6ರಂದು 25 ಗಂಟೆಗಳ ಪ್ರಯಾಣದ ಬಳಿಕ ಐಎಸ್‌ಎಸ್ ತಲುಪಿದ್ದರು. ಇದು ಬಾಹ್ಯಾಕಾಶಕ್ಕೆ ಅವರ ಮೂರನೇ ಪ್ರಯಾಣವಾಗಿದೆ. ಹೊಸ ಬೋಯಿಂಗ್ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯನ್ನು ಪರೀಕ್ಷಿಸಿದ ಮೊದಲ ಮಹಿಳೆ ಎಂಬ ಹಿರಿಮೆಗೆ ಅವರು ಪಾತ್ರರಾಗಿದ್ದಾರೆ. ಅಂದುಕೊಂಡಂತೆ ಆಗಿದ್ದರೆ ಇದು 10 ದಿನಗಳ ಯೋಜನೆಯಾಗಿತ್ತು. ಆದರೆ ಜೂನ್ 18ಕ್ಕೂ ಮುಂಚೆ ಸುನೀತಾ, ಇತರೆ ಸಿಬ್ಬಂದಿ ಭೂಮಿಗೆ ವಾಪಸಾಗುವುದಿಲ್ಲ ಎಂದು ನಾಸಾ ಇತ್ತೀಚೆಗೆ ತಿಳಿಸಿತ್ತು.

**ನಾಸಾ ವಿಜ್ಞಾನಿಗಳಲ್ಲಿ ಆತಂಕ**

**ಭಾರತ ಮೂಲದ ಗಗನಯಾನಿ ಸುನೀತಾ ವಿಲಿಯಮ್ಸ್ ಅವರು ಇತ್ತೀಚೆಗೆ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಿದ್ದರು. ಅಲ್ಲಿ ಒಟ್ಟು 9 ಸದಸ್ಯರ ತಂಡವಿದೆ. ಬಾಹ್ಯಾಕಾಶ ನಿಲ್ದಾಣಕ್ಕೆ ಭೂಮಿಯಿಂದ ತೆರಳಿದ ಬ್ಯಾಕ್ಟೀರಿಯಾವೊಂದು ಅಪಾಯಕಾರಿ ಸ್ವರೂಪದಲ್ಲಿ ವಿಕಸನ ಹೊಂದಿರುವುದು ಬೆಳಕಿಗೆ ಬಂದಿದೆ. ಇದು ನಾಸಾ ವಿಜ್ಞಾನಿಗಳಲ್ಲಿ ಆತಂಕ ಮೂಡಿಸಿದೆ.**

- **ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಅಪಾಯಕಾರಿ ಸ್ವರೂಪದ ಬ್ಯಾಕ್ಟೀರಿಯಾ ಇರುವುದು ಪತ್ತೆ**
- **ಜೂನ್ 5ರಂದು ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಐಎಸ್‌ಎಸ್‌ಗೆ ತೆರಳಿದ್ದ ಸುನೀತಾ ವಿಲಿಯಮ್ಸ್**

# ಜೂನ್ ತಿಂಗಳ ತೆರಿಗೆ ಆದಾಯದ ಪಾಲು ಹಂಚಿಕೆ



**ನವದೆಹಲಿ:** ಜೂನ್ ತಿಂಗಳ ತೆರಿಗೆ ಆದಾಯದ ಪಾಲನ್ನು ಕೇಂದ್ರ ಸರ್ಕಾರ ಆಯಾ ರಾಜ್ಯಗಳಿಗೆ ಹಂಚಿಕೆ ಮಾಡಿದೆ. ಈ ಒಂದು ತಿಂಗಳಲ್ಲೇ ಒಟ್ಟು 1.39 ಲಕ್ಷ ಕೋಟಿ ರೂ.ಗಳನ್ನು ಹಣಕಾಸು ಇಲಾಖೆ ಬಿಡುಗಡೆ ಮಾಡಿದೆ.

ಎಂದಿನಂತೆ ಈ ಬಾರಿಯೂ ಉತ್ತರಪ್ರದೇಶಕ್ಕೆ ಅತಿಹೆಚ್ಚು ಪಾಲು ಸಿಕ್ಕಿದೆ. ಆ ಅತಿದೊಡ್ಡ ರಾಜ್ಯಕ್ಕೆ 25 ಸಾವಿರ ಕೋಟಿ ರೂ.ಗೂ ಹೆಚ್ಚು ತೆರಿಗೆ ಪಾಲು ಸಿಕ್ಕಿದೆ. ಮಹಾರಾಷ್ಟ್ರ ಬಳಿಕ ಅತಿಹೆಚ್ಚು ತೆರಿಗೆ ಸಂಗ್ರಹಿಸಿಕೊಡುವ ಕರ್ನಾಟಕ ರಾಜ್ಯಕ್ಕೆ ಜೂನ್ ತಿಂಗಳಲ್ಲಿ ಸಿಕ್ಕಿರುವುದು 5,096 ಕೋಟಿ ರೂ ಮಾತ್ರವೇ. ವಿವಿಧ ರಾಜ್ಯಗಳಿಂದ ಸಂಗ್ರಹವಾಗುವ ಜಿಎಸ್‌ಟಿ ತೆರಿಗೆ ಹಣವನ್ನು ಮಾಸಿಕವಾಗಿ ರಾಜ್ಯಗಳಿಗೆ ಹಂಚಿಕೆ ಮಾಡಲಾಗುತ್ತದೆ. ಒಟ್ಟು ತೆರಿಗೆ ಸಂಗ್ರಹದಲ್ಲಿ ರಾಜ್ಯಗಳಿಗೆ ಶೇ.41ರಷ್ಟು ಪಾಲು ನೀಡಲಾಗುತ್ತದೆ.

2024ರ ಜೂನ್‌ನಲ್ಲಿ ಕೇಂದ್ರದಿಂದ ರಾಜ್ಯಗಳಿಗೆ ಹಂಚಿಕೆಯಾದ ತೆರಿಗೆ ಒಟ್ಟು ತೆರಿಗೆ: 1,39,750.92 ಕೋಟಿ ರೂ. ಉತ್ತರಪ್ರದೇಶ 25,069.88 ಕೋಟಿ, ಬಿಹಾರ 14,056.12 ಕೋಟಿ, ಮಧ್ಯಪ್ರದೇಶ 10,970.44 ಕೋಟಿ, ಪಶ್ಚಿಮ ಬಂಗಾಳ 10,513 ಕೋಟಿ, ಮಹಾರಾಷ್ಟ್ರ 8,828.08 ಕೋಟಿ ರೂ. ರಾಜಸ್ಥಾನ 8,421.38 ಕೋಟಿ, ಒಡಿಶಾ 6,327.92 ಕೋಟಿ, ತಮಿಳುನಾಡು 5,700.44 ಕೋಟಿ, ಆಂಧ್ರಪ್ರದೇಶ 5,655.72 ಕೋಟಿ ಕರ್ನಾಟಕ 5,096.72 ಕೋಟಿ ರೂ.

ಗುಜರಾತ್ 4,860.56 ಕೋಟಿ, ಛತ್ತೀಸ್‌ಗಡ್ 4,761.30 ಕೋಟಿ, ಜಾರ್ಖಂಡ್ 4,621.58 ಕೋಟಿ, ಅಸ್ಸಾಮ್ 4,371.38 ಕೋಟಿ, ತೆಲಂಗಾಣ 2,937.58 ಕೋಟಿ, ಕೇರಳ 2,690.20 ಕೋಟಿ, ಪಂಜಾಬ್ 2,525.32 ಕೋಟಿ, ಅರುಣಾಚಲಪ್ರದೇಶ 2,455.44 ಕೋಟಿ, ಉತ್ತರಾಖಂಡ್ 1,562.44 ಕೋಟಿ, ಹರ್ಯಾಣ 1,527.48 ಕೋಟಿ, ಹಿಮಾಚಲಪ್ರದೇಶ 1,159.92 ಕೋಟಿ, ರೂಮೇಘಾಲಯ, 1,071.90 ಕೋಟಿ ರೂಮಣಿಪುರ 1,000.60 ಕೋಟಿ, ರೂತ್ರಿಪುರ 989.44 ಕೋಟಿ ರೂನಾಗಾಲ್ಯಾಂಡ್ 795.20 ಕೋಟಿ, ಮಿಝೋರಾಂ 698.78 ಕೋಟಿ, ಸಿಕ್ಕಿಂ: 542.22 ಕೋಟಿ ಹಾಗೂ ಗೋವಾ: 539.42 ಕೋಟಿ ರೂ. ಹಂಚಿಕೆಯಾಗಿದೆ.

**ಜೂನ್ ತಿಂಗಳಲ್ಲಿ ಮಾಸಿಕ ಬಾಬ್ತಿನ ಜೊತೆಗೆ ಒಂದು ಹೆಚ್ಚುವರಿ ಕಂತನ್ನೂ ಸೇರಿಸಲಾಗಿದೆ. ಎಲ್ಲವೂ ಸೇರಿ ಒಟ್ಟು 1,39,750 ಕೋಟಿ ರೂ ಆಗಿದೆ. ಫೆಬ್ರುವರಿಯಲ್ಲಿ ನಡೆದ ಮಧ್ಯಂತರ ಬಜೆಟ್‌ನಲ್ಲಿ 2024-25ರ ಹಣಕಾಸು ವರ್ಷಕ್ಕೆ ರಾಜ್ಯಗಳಿಗೆ 12.19 ಲಕ್ಷ ಕೋಟಿ ರೂ ತೆರಿಗೆ ಹಂಚಿಕೆ ಮಾಡಲು ಯೋಜಿಸಲಾಗಿದೆ. ಇಲ್ಲಿಯವರೆಗೆ 2.8 ಲಕ್ಷ ಕೋಟಿ ರೂ ಹಂಚಿಕೆ ಮಾಡಲಾಗಿದೆ. ಅಂದರೆ ಏಪ್ರಿಲ್ 1ರಿಂದ ಆರಂಭವಾಗಿ ಜೂನ್ 10ರವರೆಗೆ 2.8 ಲಕ್ಷ ಕೋಟಿ ರೂ ತೆರಿಗೆ ಹಣವನ್ನು ರಾಜ್ಯಗಳಿಗೆ ಕೊಡಲಾಗಿದೆ.**

# ಸಂಪುಟ ರಚನೆಯತ್ತ ನಾಯ್ಡು ಚಿತ್ತ ಡಿಸಿಎಂ ಆಗಿ ಪವನ್ ಕಲ್ಯಾಣ್?

**ಹೈದರಾಬಾದ್:** ರಾಷ್ಟ್ರ ರಾಜಧಾನಿ ನವದೆಹಲಿಯ ಪ್ರವಾಸದಿಂದ ಮರಳಿರುವ ತೆಲುಗುದೇಶಂ ಪಕ್ಷದ ಮುಖ್ಯಸ್ಥ ಎನ್. ಚಂದ್ರಬಾಬು ನಾಯ್ಡು ಈಗ ರಾಜ್ಯ ಸಚಿವ ಸಂಪುಟ ರಚನೆಯತ್ತ ಚಿತ್ತ ಹರಿಸಿದ್ದಾರೆ. ತೆಲುಗುದೇಶಂ ಪಕ್ಷ ಸ್ಪಷ್ಟ ಬಹುಮತ ಪಡೆದು ರಾಜ್ಯದಲ್ಲಿ ಅಧಿಕಾರಕ್ಕೆ ಮರಳಿದೆ. ಮುಖ್ಯಮಂತ್ರಿಯಾಗಿ ನಾಯ್ಡು ಅವರು ಇದೇ 12ರಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಪ್ರಮಾಣವಚನಕ್ಕೂ ಮೊದಲೇ ಸಂಪುಟ ರಚನೆಯ ಕಸರತ್ತು ಪೂರ್ಣಗೊಳಿಸಲು ಅವರು ತೀರ್ಮಾನಿಸಿದ್ದಾರೆ. ನಿಯಮಾನುಸಾರ ಸಂಪುಟಕ್ಕೆ 25 ಶಾಸಕರ ಸೇರ್ಪಡೆಗೆ ಅವಕಾಶವಿದೆ.

ಆದರೆ, ಆಕಾಂಕ್ಷಿಗಳ ಪಟ್ಟಿ ದೊಡ್ಡದಿದೆ. ಆಕಾಂಕ್ಷಿಗಳ ನಡುವೆ ಅನುಭವ, ಜಾತಿ, ಪ್ರಾದೇಶಿಕ ನಿರೀಕ್ಷೆಗೆ ಮನ್ನಣೆ ನೀಡುವ ಸವಾಲಿನ ಜೊತೆಗೆ ಮೈತ್ರಿ ಪಕ್ಷ ಜನಸೇನಾ ಪಕ್ಷದ ಅಭ್ಯರ್ಥಿಗಳಿಗೂ ಸ್ಥಾನ ಕಲ್ಪಿಸಬೇಕಾಗಿದೆ.

ಟಿಡಿಪಿ ಪಕ್ಷದ ಮೂಲಗಳ ಪ್ರಕಾರ, 21 ಸ್ಥಾನ ಗೆದ್ದಿರುವ ಮೈತ್ರಿಪಕ್ಷ ಜನಸೇನಾವು ಸಂಪುಟದಲ್ಲಿ ಸೂಕ್ತ ಪ್ರಾತಿನಿಧ್ಯ ಪಡೆಯುವ ಸಾಧ್ಯತೆಗಳಿವೆ. ಜೊತೆಗೆ, ಮತ್ತೊಂದು ಮೈತ್ರಿಪಕ್ಷ 8 ಸ್ಥಾನ ಗೆದ್ದಿರುವ ಬಿಜೆಪಿ ಕೂಡಾ ಆದ್ಯತೆ ಪಡೆಯಲಿದೆ. ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಸಂಪುಟ ಸೇರುವುದು ಖಚಿತ. ಉಪ ಮುಖ್ಯಮಂತ್ರಿ ಜೊತೆಗೆ ಗೃಹ ಖಾತೆ ಹೊಂದಬಹುದು. ನಾಯ್ಡು ಸಂಪುಟದಲ್ಲಿ ಪವನ್ ಕಲ್ಯಾಣ್ ಅಷ್ಟೇ ಡಿಸಿಎಂ ಆಗಿರುವರು ಎಂದು ಮೂಲಗಳು ತಿಳಿಸಿವೆ. ಹಿಂದಿನ ವೈ.ಎಸ್.ಜಗನ್ ಮೋಹನ್ ರೆಡ್ಡಿ ನೇತೃತ್ವದ ಸರ್ಕಾರದಲ್ಲಿ ಐವರು ಡಿಸಿಎಂಗಳಿದ್ದರು. ರಾಜ್ಯ ಸಚಿವ ಸಂಪುಟದಲ್ಲಿ ಪಕ್ಷದ ಪ್ರಾತಿನಿಧ್ಯ ಹೆಚ್ಚಿಸುವ ಕ್ರಮವಾಗಿ ಪವನ್ ಕಲ್ಯಾಣ್ ಕೇಂದ್ರ ಸಂಪುಟ ಸೇರುವ ಆಹ್ವಾನವನ್ನು ನಿರಾಕರಿಸಿದ್ದರು ಎಂದು ಹೇಳಲಾಗಿದೆ. ಬಿಜೆಪಿಯು ಮೂರು ಸಚಿವ ಸ್ಥಾನ ಪಡೆಯುವ ಸಾಧ್ಯತೆಯಿದೆ. ನಾಯ್ಡು ಅವರ ಪುತ್ರ ನಾರಾ ಲೋಕೇಶ್ ಅವರೂ ಸಂಪುಟ ಸೇರಲಿದ್ದಾರೆಯೇ, ಇಲ್ಲವೇ ಎಂಬುದು ಖಚಿತವಾಗಿಲ್ಲ. ನಾಯ್ಡು ನೇತೃತ್ವದ ಹಿಂದಿನ ಸರ್ಕಾರದಲ್ಲಿ ಲೋಕೇಶ್ ಅವರು ಐ.ಟಿ. ಖಾತೆ ಸಚಿವರಾಗಿದ್ದರು.

ಮೈತ್ರಿಕೂಟ ರಾಜ್ಯದಲ್ಲಿ ಬಹುಮತ ಗಳಿಸುತ್ತಿದ್ದಂತೆ ನಾರಾ ಲೋಕೇಶ್ ಅವರ ಆಸುಪಾಸಿನಲ್ಲಿ ಮಂತ್ರಿ ಸ್ಥಾನದ ಆಕಾಂಕ್ಷಿಗಳ ಸಂಖ್ಯೆ ಹೆಚ್ಚಿದೆ. ಅವರು ಪಕ್ಷದಲ್ಲಿ ಅಧಿಕಾರದ ಕೇಂದ್ರ ಸ್ಥಾನವಾಗುವ ಸಾಧ್ಯತೆಗಳು ಕಂಡುಬರುತ್ತಿವೆ.

# ಯೋಗವನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿಸಿಕೊಳ್ಳಿ: ಮೋದಿ ಕರೆ




**ನವದೆಹಲಿ:** ದೇಶದ ಜನರು ಯೋಗವನ್ನು ತಮ್ಮ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಜೂನ್ 21 ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಮುನ್ನ ಮೋದಿ ಅವರು ಈ ಕರೆ ನೀಡಿದ್ದು, ಜನರು ಇತರರನ್ನು ಅದೇ ರೀತಿ ಮಾಡಲು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಇನ್ನು 10 ದಿನಗಳಲ್ಲಿ ವಿಶ್ವವು 10ನೇ ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಿದ್ದು, ಏಕತೆ ಮತ್ತು ಸಾಮರಸ್ಯವನ್ನು ಆಚರಿಸುವ ಟೈಮ್‌ಲೆಸ್ ಅಭ್ಯಾಸವನ್ನು ಆಚರಿಸುತ್ತದೆ ಎಂದು ಅವರು ಎಕ್ಸ್ ಮಾಡಿದ್ದಾರೆ. ಯೋಗವು ಸಾಂಸ್ಕೃತಿಕ ಮತ್ತು ಭೌಗೋಳಿಕ ಗಡಿಗಳನ್ನು ಮೀರಿದೆ, ಸಮಗ್ರ ಯೋಗಕ್ಷೇಮದ ಅನ್ವೇಷಣೆಯಲ್ಲಿ ಜಗತ್ತಿನಾದ್ಯಂತ ಲಕ್ಷಾಂತರ ಜನರನ್ನು ಒಂದುಗೂಡಿಸಿದೆ ಎಂದು ಪ್ರಧಾನಿ ಹೇಳಿದರು. ಈ ವರ್ಷದ ಯೋಗ ದಿನವನ್ನು ನಾವು ಸಮೀಪಿಸುತ್ತಿರುವಾಗ, ಯೋಗವನ್ನು ನಮ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡುವ ನಮ ಬದ್ಧತೆಯನ್ನು ಪುನರುಚ್ಚರಿಸುವುದು ಅತ್ಯಗತ್ಯ ಎಂದು ಮೋದಿ ಹೇಳಿದರು.

ಇತರರನ್ನು ಅವರ ಭಾಗವಾಗಿ ಮಾಡಲು ಪ್ರೋತ್ಸಾಹಿಸುತ್ತೇವೆ. ಯೋಗವು ಶಾಂತತೆಯ ಅಭಯಾರಣ್ಯವನ್ನು ನೀಡುತ್ತದೆ, ಜೀವನದ ಸವಾಲುಗಳನ್ನು ಶಾಂತ ಮತ್ತು ಧೈರ್ಯದಿಂದ ನ್ಯಾವಿಗೇಟ್ ಮಾಡಲು ನಮಗೆ ಅನುವು ಮಾಡಿಕೊಡುತ್ತದೆ ಎಂದು ಪ್ರಧಾನಿ ಹೇಳಿದರು ಮತ್ತು ಯೋಗದ ವಿವಿಧ ರೂಪಗಳು ಮತ್ತು ಅವುಗಳ ಪ್ರಯೋಜನಗಳನ್ನು ತೋರಿಸುವ ವಿಡಿಯೋಗಳ ಸೆಟ್ ಅನ್ನು ಹಂಚಿಕೊಂಡಿದ್ದಾರೆ.

# ಯುವ ಮತದಾರರ ಓಲೈಕೆಗೆ ಮುಂದಾದ ತಮಿಳು ನಟ ವಿಜಯ್



**ಚೆನ್ನೈ:** ಮುಂಬರುವ 2026ರ ತಮಿಳುನಾಡು ವಿಧಾನಸಭಾ ಚುನಾವಣೆ ಮೇಲೆ ಕಣ್ಣಿಟ್ಟಿರುವ ತಮಿಳು ನಟ ತಲಪತಿ ವಿಜಯ್ ಅವರು ಈಗಿನಿಂದಲೇ ಯುವ ಮತದಾರರನ್ನು ಸೆಳೆಯುವ ಕಾರ್ಯಕ್ಕೆ ಕೈ ಹಾಕಿದ್ದಾರೆ. ಚುನಾವಣೆಗೆ ಮುನ್ನ ಯುವ ಮತ್ತು ಮೊದಲ ಬಾರಿಗೆ ಮತದಾರರನ್ನು ಸೆಳೆಯುವ ಪ್ರಯತ್ನದಲ್ಲಿ ವಿಜಯ್ ಅವರು ತಮ ತವರು ರಾಜ್ಯದಲ್ಲಿ 10 ಮತ್ತು 12 ನೇ ಟಾಪರ್‌ಗಳನ್ನು ಭೇಟಿ ಮಾಡಿ ಗೌರವಿಸಲು ನಿರ್ಧರಿಸಿದ್ದಾರೆ. ಅವರು ಹೊಸದಾಗಿ ಪ್ರಾರಂಭಿಸಲಾದ ಪಕ್ಷ ತಮಿಳಗ ವೆಟ್ರಿ ಕಳಗಂ ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ತಲಪತಿ ವಿಜಯ್ ಅವರು ತಮ ಪೋಷಕರ ಸಮುಖದಲ್ಲಿ ಟಾಪರ್‌ಗಳಿಗೆ ಪ್ರಮಾಣಪತ್ರ ಮತ್ತು ನಗದು ನೀಡಲಿದ್ದಾರೆ ಎಂದು ತಿಳಿದುಬಂದಿದೆ.

ಜೂನ್ 28 ಮತ್ತು ಜುಲೈ 3 ರಂದು ಚೆನ್ನೈನ ಶ್ರೀ ರಾಮಚಂದ್ರ ಕನ್ವೆನ್ಷನ್ ಸೆಂಟರ್‌ನಲ್ಲಿ ನಟ ಎರಡು ಬ್ಯಾಚ್‌ಗಳಲ್ಲಿ ರಾಜ್ಯದ ಟಾಪರ್‌ಗಳನ್ನು ಭೇಟಿಯಾಗಲಿದ್ದಾರೆ.

ಇತ್ತೀಚೆಗಷ್ಟೇ ಮುಗಿದ ಲೋಕಸಭೆ ಚುನಾವಣೆಗೂ ಮುನ್ನ ಅವರು ಮುಂಬರುವ 2026ರ ವಿಧಾನಸಭೆ ಚುನಾವಣೆಯಲ್ಲಿ ರಾಜಕೀಯಕ್ಕೆ ಧುಮುಕುವುದಾಗಿ ಘೋಷಿಸಿದ್ದರು.


ಸುಮಾರು ಒಂದು ದಶಕದಿಂದ ರಾಜಕೀಯ ಮಹತ್ವಾಕಾಂಕ್ಷೆಗಳನ್ನು ಪೋಷಿಸುತ್ತಿರುವ ವಿಜಯ್ ಅವರು ಈಗಾಗಲೇ ತಮ ಅಭಿಮಾನಿಗಳ ಸಂಘಗಳ ಮೂಲಕ ಉಚಿತ ಆಹಾರ ವಿತರಣೆ, ಶೈಕ್ಷಣಿಕ ವಿದ್ಯಾರ್ಥಿವೇತನ, ಗ್ರಂಥಾಲಯಗಳು, ಕಾನೂನು ಸಹಾಯದ ಜೊತೆಗೆ ಸಂಜೆಯ ಬೋಧನೆ ಸೇರಿದಂತೆ ಕಲ್ಯಾಣ ಕಾರ್ಯಕ್ರಮಗಳ ಸರಣಿಯನ್ನು ಸ್ಥಾಪಿಸಿದ್ದಾರೆ.

ಈ ಹಿಂದೆ ವಿಜಯ್ ಅವರ ಚಿತ್ರಗಳು ಸೂಕ್ಷ್ಮ ರಾಜಕೀಯ ಅಂಶಗಳನ್ನು ಸ್ಪರ್ಶಿಸಿ ವಿವಾದವನ್ನು ಹುಟ್ಟುಹಾಕಿದ್ದವು. ವಿಜಯ್ ಅವರು ಹೋದಲ್ಲೆಲ್ಲಾ ದೊಡ್ಡ ಜನಸಮೂಹವನ್ನು ಸೆಳೆಯುತ್ತಾರೆ ಮತ್ತು ಈ ಜನಸಮೂಹವು ಮತಗಳಾಗಿ ಭಾಷಾಂತರಿಸುತ್ತದೆ ಎಂದು ಅವರು ಭಾವಿಸುತ್ತಾರೆ. ತಮಿಳುನಾಡು ಈ ಹಿಂದೆ ಮುಖ್ಯಮಂತ್ರಿಗಳಾಗಿ ನಟರು ಮತ್ತು ರಂಗಕರ್ಮಿಗಳನ್ನು ಹೊಂದಿದ್ದು, ಅಣ್ಣಾದೊರೈ, ಎಂ.ಜಿ. ರಾಮಚಂದ್ರನ್, ಕರುಣಾನಿಧಿ ಮತ್ತು ಜಯಲಲಿತಾ ಮುಖ್ಯಮಂತ್ರಿಗಳಾಗಿ ಮಿಂಚಿದ್ದರು.

**2024 ರ ಸಾರ್ವತ್ರಿಕ ಚುನಾವಣೆಯಲ್ಲಿ ಯಾವುದೇ ಪಕ್ಷವನ್ನು ಬೆಂಬಲಿಸುವುದನ್ನು ತಪ್ಪಿಸಿದ್ದ ವಿಜಯ್, ತಮ ಸಕ್ರಿಯ ರಾಜಕೀಯ ಪಾತ್ರಕ್ಕೆ ದಾರಿ ಮಾಡಿಕೊಡಲು ನಟನೆಯನ್ನು ತ್ಯಜಿಸುವುದಾಗಿ ಘೋಷಿಸಿದ್ದಾರೆ. ಕಳೆದ ವರ್ಷ, 10 ನೇ ಮತ್ತು 12 ನೇ ತರಗತಿಯ ರಾಜ್ಯದ ಟಾಪರ್‌ಗಳೊಂದಿಗೆ ಸಂವಾದದ ಸಂದರ್ಭದಲ್ಲಿ, ನಟ-ರಾಜಕಾರಣಿಗಳು ರಾಷ್ಟ್ರೀಯ ನಾಯಕರಾದ ಡಾ ಬಿಆರ್ ಅಂಬೇಡ್ಕರ್, ಪೆರಿಯಾರ್ ಮತ್ತು ಕಾಮರಾಜ್ ಅವರ ಬಗ್ಗೆ ವ್ಯಾಪಕವಾಗಿ ಓದುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದರು.**

# ವಿದೇಶಾಂಗ ಸಚಿವರಾಗಿ ಅಧಿಕಾರ ವಹಿಸಿಕೊಂಡ ಜೈಶಂಕರ್

**ನವದೆಹಲಿ:** ರಾಜತಾಂತ್ರಿಕ-ರಾಜಕಾರಣಿಯಾಗಿರುವ ಎಸ್ ಜೈಶಂಕರ್ ಅವರು ಮಂಗಳವಾರ ಸತತ ಎರಡನೇ ಅವಧಿಗೆ ವಿದೇಶಾಂಗ ವ್ಯವಹಾರಗಳ ಸಚಿವರಾಗಿ ಅಧಿಕಾರ ವಹಿಸಿಕೊಂಡರು. ರಾಜನಾಥ್ ಸಿಂಗ್, ಅಮಿತ್ ಶಾ, ನಿತಿನ್ ಗಡ್ಕರಿ ಮತ್ತು ನಿರ್ಮಲಾ ಸೀತಾರಾಮನ್ ಸೇರಿ ದಂತೆ ಬಿಜೆಪಿಯ ಹಿರಿಯ ನಾಯಕರಲ್ಲಿ 69 ವರ್ಷ ವಯಸ್ಸಿನ ಜೈಶಂಕರ್ ಅವರು ಹಿಂದಿನ ಸರ್ಕಾರದಲ್ಲಿ ನಿರ್ವಹಿಸಿದ ಸಚಿವಾಲಯಗಳನ್ನು ಉಳಿಸಿಕೊಂಡಿದ್ದಾರೆ. ಈ ಜವಾಬ್ದಾರಿಯನ್ನು ನನಗೆ ವಹಿಸಿದ್ದಕ್ಕಾಗಿ ಪಿಎಂ ನರೇಂದ್ರ ಮೋದಿಜಿ ಅವರಿಗೆ ಧನ್ಯವಾದಗಳು ಎಂದು ಅವರು ಎಕ್ಸ್ ನಲ್ಲಿ ಹೇಳಿದ್ದಾರೆ. 2019 ರಿಂದ ವಿದೇಶಾಂಗ ವ್ಯವಹಾರಗಳ ಸಚಿವರಾಗಿ, ಜೈಶಂಕರ್ ಅವರು ಜಾಗತಿಕ ಹಂತದಲ್ಲಿ ಸಂಕೀರ್ಣ ಸಮಸ್ಯೆಗಳ ಶ್ರೇಣಿಯಲ್ಲಿ ಭಾರತದ ನಿಲುವುಗಳನ್ನು ಸ್ಪಷ್ಟವಾಗಿ ವ್ಯಕ್ತಪಡಿಸುವ ತಮ ಸಾಮರ್ಥ್ಯವನ್ನು ವಿಶ್ವಾಸದಿಂದ ಪ್ರದರ್ಶಿಸಿ ದೇಶದ ಕೀರ್ತಿಯನ್ನು ಹೆಚ್ಚಿಸಿದ್ದರು. ಉಕ್ರೇನ್‌ನಲ್ಲಿನ ಯುದ್ಧದ ಹಿನ್ನೆಲೆಯಲ್ಲಿ ಮಾಸ್ಕೋದಿಂದ ಹೊಸದಿಲ್ಲಿಯ ಕಚ್ಚಾ ತೈಲದ ಖರೀದಿಯ ಬಗ್ಗೆ ಪಾಶ್ಚಿಮಾತ್ಯರ ಟೀಕೆಗಳನ್ನು ಮಂದಗೊಳಿಸುವುದರಿಂದ ಹಿಡಿದು ದಢವಾದ ಚೀನಾವನ್ನು ಎದುರಿಸಲು ದಢವಾದ ನೀತಿಯನ್ನು ರೂಪಿಸುವವರೆಗೆ, ಜೈಶಂಕರ್ ಅವರು ಪ್ರಧಾನ ಮಂತ್ರಿಗಳಲ್ಲಿ ಪ್ರಭಾವಶಾಲಿ ಸಾಧನೆಯೊಂದಿಗೆ ಪ್ರಮುಖ ಮಂತ್ರಿಗಳಲ್ಲಿ ಒಬ್ಬರಾಗಿ ಹೊರ ಹೊಮಿದರು. ವಿದೇಶಾಂಗ ನೀತಿಯ ವಿಷಯಗಳನ್ನು ದೇಶೀಯ ಚರ್ಚೆಗೆ ತರಲು ಅವರು ನಿರ್ವಹಿಸಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ, ವಿಶೇಷವಾಗಿ ಭಾರತವು ಜಿ20 ಅಧ್ಯಕ್ಷರಾಗಿದ್ದಾಗ.



**ಪ್ರಸ್ತುತ, ಅವರು ಗುಜರಾತ್‌ನಿಂದ ರಾಜ್ಯಸಭಾ ಸದಸ್ಯರಾಗಿದ್ದಾರೆ. ಜೈಶಂಕರ್ ಭಾರತದ ವಿದೇಶಾಂಗ ಕಾರ್ಯದರ್ಶಿಯಾಗಿ (2015-18), ಯುನೈಟೆಡ್ ಸ್ಟೇಟ್ಸ್ (2013-15), ಚೀನಾ (2009-2013), ಜೆಕ್ ರಿಪಬ್ಲಿಕ್ (2000-2004) ಗೆ ರಾಯಭಾರಿಯಾಗಿ ಸೇವೆ ಸಲ್ಲಿಸಿದ್ದರು. ಅವರು 2007ರಿಂದ 20 09 ರವರೆಗೆ ಸಿಂಗಾಪುರಕ್ಕೆ ಭಾರತದ ಹೈಕಮಿಷನರ್ ಆಗಿದ್ದರು. ಜೈಶಂಕರ್ ಅವರು ಮಾಸ್ಕೋ, ಕೊಲಂಬೊ, ಬುಡಾಪೆಸ್ಟ್, ಟೋಕಿಯೊದಲ್ಲಿನ ರಾಯಭಾರ ಕಚೇರಿಗಳಲ್ಲಿ, ವಿದೇಶಾಂಗ ವ್ಯವಹಾರಗಳ ಸಚಿವಾಲಯ, ಅಧ್ಯಕ್ಷರ ಸಚಿವಾಲಯದಲ್ಲಿ ಇತರ ರಾಜತಾಂತ್ರಿಕ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ.**

# ವಿಮಾನ ದುರಂತ; ಮಲಾವಿ ಉಪಾಧ್ಯಕ್ಷ ಸೇರಿ 10 ಮಂದಿ ಸಾವು

**ಬ್ಲಾಂಟೈರ್:** ಮಲಾವಿಯ ಉಪಾಧ್ಯಕ್ಷ ಸೌಲೋಸ್ ಚಿಲಿಮಾ ಮತ್ತು ಇತರ ಒಂಬತ್ತು ಜನರು ವಿಮಾನ ಅಪಘಾತದಲ್ಲಿ ಮೃತಪಟ್ಟಿರುವುದಾಗಿ ವರದಿಯಾಗಿದೆ. ಉಪಾಧ್ಯಕ್ಷ ಸೌಲೋಸ್ ಚಿಲಿಮಾ ಅವರು ಪ್ರಯಾಣಿಸುತ್ತಿದ್ದ ಸೇನಾ ವಿಮಾನದ ಅವಶೇಷಗಳು, ಒಂದು ದಿನಕ್ಕೂ ಹೆಚ್ಚು ಕಾಲ ನಡೆದ ಶೋಧದ ನಂತರ ದೇಶದ ಉತ್ತರದ ಪರ್ವತ ಪ್ರದೇಶದಲ್ಲಿ ಪತ್ತೆಯಾಗಿವೆ. ಅಪಘಾತದಲ್ಲಿ ಯಾರೂ ಬದುಕುಳಿದಿಲ್ಲ ಎಂದು ಮಲಾವಿ ಅಧ್ಯಕ್ಷ ಲಾಜರಸ್ ಚಕ್ವೆರಾ ಅವರು ತಿಳಿಸಿದ್ದಾರೆ.

ಆಫ್ರಿಕಾದ ಆಗ್ನೇಯ ಭಾಗದ ರಾಷ್ಟ್ರ ಮಲಾವಿ ರಾಜಧಾನಿ ಲಿಲೋಂಗ್ವೆಯಿಂದ ಮುಜು ನಗರಕ್ಕೆ ವಿಮಾನವು ಸೋಮವಾರ ಬೆಳಿಗ್ಗೆ ಹೊರಟಿತ್ತು. 45 ನಿಮಿಷಗಳಲ್ಲಿ ನಿಗದಿತ ಸ್ಥಳ ತಲುಪಬೇಕಿದ್ದ ಈ ವಿಮಾನ ಪ್ರಯಾಣ ಆರಂಭಿಸಿದ ಕೆಲವೇ ಕ್ಷಣಗಳಲ್ಲಿ ಕಣ್ಮರೆಯಾಗಿತ್ತು. ಚಿಲಿಮಾ ಅವರು ಈ ವಿಮಾನದಲ್ಲಿದ್ದರು. ಕಣ್ಮರೆಯಾದ ವಿಮಾನದ ಪತ್ತೆಗೆ ನೂರಾರು ಸೈನಿಕರು, ಪೊಲೀಸ್ ಅಧಿಕಾರಿಗಳು ಮತ್ತು ವಲಯ ಅರಣ್ಯಾಧಿಕಾರಿಗಳು ಶೋಧ ನಡೆಸಿದ್ದರು. ಪ್ರತಿಕೂಲ ಹವಾಮಾನದಿಂದಾಗಿ ಮುಜು ವಿಮಾನ ನಿಲ್ದಾಣದಲ್ಲಿ ವಿಮಾನವನ್ನು ಇಳಿಸದಂತೆ ಪೈಲಟ್‌ಗಳಿಗೆ ಏರ್ ಟ್ರಾಫಿಕ್ ಕಂಟ್ರೋಲರ್‌ಗಳು ಮಾಹಿತಿ ನೀಡಿದರು. ಲಿಲೋಂಗ್ವೆಗೆ ಹಿಂತಿರುಗುವಂತೆ ಸೂಚಿಸಿದರು. ವಿಮಾನದ ಮಾಹಿತಿ ಟ್ರ್ಯಾಕ್ ಮಾಡುವ ಸಿಎಚ್-ಏವಿಯೇಷನ್ ವೆಬ್‌ಸೈಟ್ ಪ್ರಕಾರ, ವಿಮಾನದ ಟೈಲ್ ಸಂಖ್ಯೆಯು ಇದು ಡಾರ್ನಿಯರ್ 228-ಮಾದರಿಯ ಅವಳಿ ಪ್ರೊಪೆಲ್ಲರ್ ವಿಮಾನ.

**ನಂತರ ಏರ್ ಟ್ರಾಫಿಕ್ ಕಂಟ್ರೋಲ್ ವಿಮಾನದ ಸಂಪರ್ಕ ಕಳೆದುಕೊಂಡಿತು. ಅದು ರೇಡಾರ್ ಸಂಪರ್ಕಕ್ಕೆ ಸಿಗದೆ ಕಣ್ಮರೆಯಾಯಿತು ಎಂದು ಚಕ್ವೆರಾ ಹೇಳಿದ್ದಾರೆ. ವಿಮಾನದಲ್ಲಿ ಏಳು ಪ್ರಯಾಣಿಕರು ಮತ್ತು ಮೂವರು ಸೇನಾ ಸಿಬ್ಬಂದಿಯೂ ಇದ್ದರು. ದೇಶದ ಸಶಸ್ತ್ರ ಪಡೆಗಳಿಂದ ನಿರ್ವಹಿಸುವ ಸಣ್ಣ, ಪ್ರೊಪೆಲ್ಲರ್ ಚಾಲಿತ ವಿಮಾನ ಇದಾಗಿತ್ತು ಎಂದು ಚಕ್ವೆರಾ ಹೇಳಿದ್ದಾರೆ.**


ಇದನ್ನು 1988ರಲ್ಲಿ ಮಲಾವಿಯ ಸೇನೆಗೆ ನೀಡಲಾಗಿತ್ತು.

**ಎರಡನೇ ಅವಧಿಗೆ ಉಪಾಧ್ಯಕ್ಷರಾಗಿದ್ದ ಚಿಲಿಮಾ:** ಚಿಲಿಮಾ ಅವರು ಎರಡನೇ ಅವಧಿಗೆ ಮಲಾವಿಯ ಉಪಾಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. 2014-2019 ರವರೆಗೆ ಪೀಟರ್ ಮುತಾರಿಕಾ ಅವರು ಅಧ್ಯಕ್ಷರಾಗಿದ್ದಾಗಲೂ ಚಿಲಿಮಾ ಉಪಾಧ್ಯಕ್ಷರಾಗಿದ್ದರು. 2019ರಲ್ಲಿ ಅಧ್ಯಕ್ಷೀಯ ಚುನಾವಣೆಗೆ ಅಭ್ಯರ್ಥಿಯಾಗಿ ಕಣಕ್ಕಿಳಿದು ಮೂರನೇ ಸ್ಥಾನ ಪಡೆದಿದ್ದರು. ಈ ಚುನಾವಣೆಯಲ್ಲಿ ಮುತಾರಿಕ ಮೊದಲ ಸ್ಥಾನ ಮತ್ತು ಚಕ್ಕೇರಾ ಎರಡನೇ ಸ್ಥಾನ ಪಡೆದಿದ್ದರು. ಅಕ್ರಮಗಳ ಕಾರಣದಿಂದಾಗಿ ಮಲಾವಿಯ ನ್ಯಾಯಾಲಯವು ಈ ಚುನಾವಣಾ ಫಲಿತಾಂಶವನ್ನು ರದ್ದುಗೊಳಿಸಿತು. ಆಗ ಚಿಲಿಮಾ ಅವರು ಚಕ್ಕೇರಾ ಅವರ ಜತೆ ಗುರುತಿಸಿಕೊಂಡರು. ಚಕ್ಕೇರಾ 2020ರ ಚುನಾವಣೆಯಲ್ಲಿ ಮರು ಆಯ್ಕೆಯಾದರು.

# ಮೂರರ ಆಟ ಇಲ್ಲ, ಆಂಧ್ರಪ್ರದೇಶಕ್ಕೆ ಅಮರಾವತಿಯೇ ರಾಜಧಾನಿ

## ಆಂಧ್ರಪ್ರದೇಶಕ್ಕೆ ಅಮರಾವತಿ ನಗರ ಏಕೈಕ ರಾಜಧಾನಿಯಾಗಿರಲಿದೆ ಎಂದ ಚಂದ್ರಬಾಬು ನಾಯ್ಡು

**ಚಂದ್ರಬಾಬು ನಾಯ್ಡು ಘೋಷಣೆ**



**ಅಮರಾವತಿ:** ಆಂಧ್ರಪ್ರದೇಶಕ್ಕೆ ಅಮರಾವತಿಯೇ ರಾಜಧಾನಿಯಾಗಲಿದೆ ಎಂದು ತೆಲುಗು ದೇಶಂ ಪಕ್ಷದ ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು ಮಂಗಳವಾರ ಪ್ರಕಟಿಸಿದ್ದಾರೆ. ಬುಧವಾರ ಬೆಳಿಗ್ಗೆ ಆಂಧ್ರಪ್ರದೇಶ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸಲಿರುವ ನಾಯ್ಡು ಅವರು, ಅದಕ್ಕೂ ಒಂದು ದಿನ ಮುನ್ನ ಗೊಂದಲಗಳಿಗೆ ತೆರೆ ಎಳೆದಿದ್ದಾರೆ.

ಅಮರಾವತಿಯು ಆಂಧ್ರ ಪ್ರದೇಶದ ಏಕೈಕ ರಾಜಧಾನಿಯಾಗಲಿದೆ ಎಂದಿರುವ ಅವರು, ಪೋಲಾವರಂ ಯೋಜನೆಯನ್ನು ಪೂರ್ಣಗೊಳಿಸುವುದಾಗಿ ಭರವಸೆ ನೀಡಿದ್ದಾರೆ. ವಿಶಾಖಪಟ್ಟಣವನ್ನು ಆರ್ಥಿಕ ರಾಜಧಾನಿಯಂತೆ, ಮುಂದುವರಿದ ವಿಶೇಷ ನಗರವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ನಾಯ್ಡು ಘೋಷಣೆ ಮಾಡಿದ್ದಾರೆ.

ಅಮರಾವತಿ ನಮ್ಮ ರಾಜಧಾನಿ ಯಾಗಲಿದೆ. ನಾವು ರಚನಾತ್ಮಕ ರಾಜಕಾರಣ ಮಾಡುತ್ತೇವೆಯೇ ವಿನಾ, ಹಗೆತನದ ರಾಜಕೀಯವನ್ನಲ್ಲ. ವಿಶಾಖಪಟ್ಟಣವು ರಾಜ್ಯದ ವಾಣಿಜ್ಯ ರಾಜಧಾನಿಯಾಗಲಿದೆ. ಮೂರು ರಾಜಧಾನಿಗಳನ್ನು ಸ್ಥಾಪಿಸುವ ಪ್ರಯತ್ನ ಹಾಗೂ ಅಂತಹ ವಂಚಕ ಚಟುವಟಿಕೆಗಳ ಮೂಲಕ ಜನರ ಜತೆ ನಾವು ಆಟ ವಾಡುವುದಿಲ್ಲ. ವಿಶಾಖಪಟ್ಟಣವು ನಮಗೆ ಪೂರ್ಣ ಪ್ರಮಾಣದ ಜನಾದೇಶ ನೀಡಿದೆ. ಈ ಜನಾದೇಶ ಪ್ರತಿಧ್ವನಿಸುವಂತೆ ನಾವು ರಾಯಲಸೀಮೆಯನ್ನು ಅಭಿವೃದ್ಧಿ ಮಾಡುತ್ತೇವೆ ಎಂದು ಅವರು ಹಿಂದಿನ ಜಗನ್ ಸರ್ಕಾರಕ್ಕೆ ಟಾಂಗ್ ನೀಡಿದ್ದಾರೆ.

**ಮೈತ್ರಿಕೂಟದ ನಾಯಕರಾಗಿ ಆಯ್ಕೆ:** ವಿಜಯವಾಡದಲ್ಲಿ ನಡೆದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯಲ್ಲಿ ಚಂದ್ರಬಾಬು ನಾಯ್ಡು ಈ ಘೋಷಣೆ ಮಾಡಿದ್ದಾರೆ. ಸಭೆಯಲ್ಲಿ ಅವರನ್ನು ವಿಧಾನಸಭೆಯಲ್ಲಿ ಮೈತ್ರಿಕೂಟದ ನಾಯಕರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಜನಸೇನಾ ಪಕ್ಷದ ಮುಖ್ಯಸ್ಥ ಕೆ ಪವನ್ ಕಲ್ಯಾಣ್ ಅವರು ನಾಯ್ಡು ಅವರ ಹೆಸರು ಸೂಚಿಸಿದರು.

ಇದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷೆಯೂ ಆಗಿರುವ ನೂತನ ಸಂಸದೆ ಡಿ ಪುರಂದೇಶ್ವರಿ ಬೆಂಬಲ ನೀಡಿದರು.

ನಾಯ್ಡು ಅವರ ನೇತೃತ್ವದಲ್ಲಿ ಟಿಡಿಪಿ- ಬಿಜೆಪಿ- ಜನಸೇನಾ ಪಕ್ಷಗಳ ಮೈತ್ರಿಕೂಟವು ಆಂಧ್ರಪ್ರದೇಶದಲ್ಲಿ 164 ವಿಧಾನಸಭೆ ಸ್ಥಾನಗಳು ಹಾಗೂ 21 ಲೋಕಸಭೆ ಕ್ಷೇತ್ರಗಳಲ್ಲಿ ಅಮೋಘ ಗೆಲುವು ಸಾಧಿಸುತ್ತಿದ್ದಂತೆ ಅಮರಾವತಿ ನಗರವು ಮತ್ತೆ ಮಹತ್ವ ಪಡೆದುಕೊಂಡಿದೆ. 2019ರ ಡಿಸೆಂಬರ್‌ನಲ್ಲಿ ಜಗನ್ ಸರ್ಕಾರವು ಮೂರು ರಾಜಧಾನಿಗಳ ಪ್ರಸ್ತಾವ ಮುಂದಿಟ್ಟಿತ್ತು. ವಿಶಾಖಪಟ್ಟಣವು ಕಾರ್ಯನಿರ್ವಹಣಾ ರಾಜಧಾನಿ, ಅಮರಾವತಿ ಶಾಸಕಾಂಗ ರಾಜಧಾನಿ ಹಾಗೂ ಕರ್ನೂಲು ನ್ಯಾಯಾಂಗ ರಾಜಧಾನಿಯನ್ನಾಗಿ ಮಾಡುವ ಪರಿಕಲ್ಪನೆ ಪ್ರಕಟಿಸಿತ್ತು.

ಆದರೆ 2022ರ ಮಾರ್ಚ್‌ನಲ್ಲಿ ಆಂಧ್ರ ಪ್ರದೇಶ ಹೈಕೋರ್ಟ್, ಅಮರಾವತಿಯನ್ನು ರಾಜ್ಯ ರಾಜಧಾನಿಯನ್ನಾಗಿ ಅಭಿವೃದ್ಧಿಪಡಿಸುವಂತೆ ಜಗನ್ ಸರ್ಕಾರಕ್ಕೆ ಆದೇಶಿಸಿತ್ತು. ಇದನ್ನು ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿತ್ತು. ಈ ಪ್ರಕರಣ ಇನ್ನೂ ಅಲ್ಲಿ ಬಾಕಿ ಇದೆ. ಟಿಡಿಪಿ ಗೆದ್ದರೆ ಆಂಧ್ರಪ್ರದೇಶದ ರಾಜಧಾನಿಯನ್ನಾಗಿ ಅಮರಾವತಿಯನ್ನು ಅಭಿವೃದ್ಧಿಪಡಿಲಾಗುವುದು ಎಂದು ನಾಯ್ಡು ಪ್ರಚಾರದ ವೇಳೆ ಭರವಸೆ ನೀಡಿದ್ದರು.

**ಮೂರು ರಾಜಧಾನಿ ಸೂತ್ರ**

**ಅವಿಭಜಿತ ಆಂಧ್ರ ಪ್ರದೇಶದಿಂದ ತೆಲಂಗಾಣ ಪ್ರತ್ಯೇಕ ರಾಜ್ಯವಾಗಿ ಬೇರ್ಪಟ್ಟಾಗ ಮುಖ್ಯಮಂತ್ರಿಯಾಗಿದ್ದ ಚಂದ್ರಬಾಬು ನಾಯ್ಡು ಅವರು ಅಮರಾವತಿಯನ್ನೇ ರಾಜಧಾನಿಯನ್ನಾಗಿ ಅಭಿವೃದ್ಧಿಪಡಿಸುವುದಾಗಿ ಘೋಷಿಸಿದ್ದರು. ಆದರೆ 2019ರಲ್ಲಿ ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್ ಕಾಂಗ್ರೆಸ್ ಪಕ್ಷವು ಭಾರಿ ಬಹುಮತದೊಂದಿಗೆ ಗೆಲುವು ಸಾಧಿಸಿದಾಗ, ಅಧಿಕಾರ ವಿಕೇಂದ್ರೀಕರಣದ ಮಂತ್ರ ಜಪಿಸಿತ್ತು. ವಿಶಾಖಪಟ್ಟಣವನ್ನು ಆಡಳಿತ ರಾಜಧಾನಿಯನ್ನಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಅಲ್ಲಿ ಪ್ರಮಾಣವಚನ ಸ್ವೀಕರಿಸಿದ್ದರು.**

**ಜಗನ್ ಮೋಹನ್ ರೆಡ್ಡಿ ಅವರ ವೈಎಸ್ ಆರ್ ಕಾಂಗ್ರೆಸ್ ಪಕ್ಷದ ಸರ್ಕಾರದ ಮೂರು ರಾಜಧಾನಿಗಳ ಘೋಷಣೆಯನ್ನು ಸಾರಾಸಗಟಾಗಿ ತಳ್ಳಿಹಾಕಿರುವ ಟಿಡಿಪಿ ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು, ಅಮರಾವತಿಯೇ ಆಂಧ್ರ ಪ್ರದೇಶದ ಏಕೈಕ ರಾಜಧಾನಿಯಾಗಲಿದೆ ಎಂದು ಪ್ರಕಟಿಸಿದ್ದಾರೆ. ಬುಧವಾರ ಸಿಎಂ ಆಗಿ ಪ್ರ ಮಾಣ ವಚನ ಸ್ವೀಕರಿಸುವುದಕ್ಕೂ ಮುನ್ನ ಅವರು ಈ ಮಹತ್ವದ ಘೋಷಣೆ ಮಾಡಿದ್ದಾರೆ.**

## ಮಿನಿ ನ್ಯೂಸ್

### ಎಸ್‌ಯು -34 ಬಾಂಬರ್ ಯುದ್ಧ ವಿಮಾನ ಪತನ, ಪೈಲಟ್ ಸಾವು

**ಮಾಸ್ಕೋ:** ರಷ್ಯಾದ ಎಸ್‌ಯು -34 ಬಾಂಬರ್ ವಿಮಾನ ಕಾಕಸಸ್ ಪರ್ವತಗಳಲ್ಲಿ ವಾಡಿಕೆಯ ತರಬೇತಿ ಹಾರಾಟದ ಸಮಯದಲ್ಲಿ ತಾಂತ್ರಿಕ ದೋಷದಿಂದಾಗಿ ಅಪಘಾತಕ್ಕೀಡಾಗಿದ್ದು, ಹಡಗಿನಲ್ಲಿದ್ದ ಸಿಬ್ಬಂದಿ ಸಾವನ್ನಪ್ಪಿದ್ದಾರೆ. ಉತ್ತರ ಒಸ್ಸೆಟಿಯಾ-ಅಲಾನಿಯಾ ಗಣರಾಜ್ಯದಲ್ಲಿ, ಪರ್ವತ ಪ್ರದೇಶದಲ್ಲಿ, ರಷ್ಯಾದ ಏರೋಸ್ಪೇಸ್ ಫೋರ್ಸ್‌ನ ಎಸ್‌ಯು -34 ವಿಮಾನವು ನಿಗದಿತ ತರಬೇತಿ ಹಾರಾಟದ ಸಮಯದಲ್ಲಿ ಅಪಘಾತಕ್ಕೀಡಾಯಿತು ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ. ವಿಮಾನವು ನಿರ್ಜನ ಪ್ರದೇಶದಲ್ಲಿ ಪತನಗೊಂಡಿದೆ.

ಹೀಗಾಗಿ ಯಾವುದೇ ಹೆಚ್ಚಿನ ಸಾವು-ನೋವು ಸಂಭವಿಸಿಲ್ಲ ಎಂದು ತಿಳಿದುಬಂದಿದೆ. ಸುಖೋಯ್ ಸು-34 ಸೋವಿಯತ್ ಮೂಲದ ರಷ್ಯಾದ ಆಲ್-ವೆದರ್ ಸೂಪರ್‌ಸಾನಿಕ್ ಮಧ್ಯಮ-ಶ್ರೇಣಿಯ ಯುದ್ಧ-ಬಾಂಬರ್ ವಿಮಾನವಾಗಿದೆ.

### ಜೂ.18ಕ್ಕೆ ವಾರಣಾಸಿಯಲ್ಲಿ ರೈತ ಸಮಾವೇಶ ಉದ್ಘಾಟನೆ

**ವಾರಣಾಸಿ:** ಪ್ರಧಾನಿ ನರೇಂದ್ರ ಮೋದಿ ಅವರು ಜೂನ್ 18 ರಂದು ವಾರಣಾಸಿಗೆ ಭೇಟಿ ನೀಡಲಿದ್ದು, ಅಲ್ಲಿ ರೈತರ ಸಮಾವೇಶವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.ಕೇಂದ್ರದಲ್ಲಿ ಮೂರನೇ ಬಾರಿಗೆ ಪ್ರಧಾನಿ ನರೇಂದ್ರ ಮೋದಿ ನೇತತ್ವದ ಎನ್‌ಡಿಎ ಸರ್ಕಾರ ರಚನೆಯಾದ ನಂತರ ಪ್ರಧಾನಿ ಮೋದಿ ವಾರಣಾಸಿಗೆ ಇದು ಮೊದಲ ಭೇಟಿಯಾಗಿದೆ ಎಂದು ಬಿಜೆಪಿ ಕಾಶಿ ವಲಯ ಅಧ್ಯಕ್ಷ ದಿಲೀಪ್ ಪಟೇಲ್ ಹೇಳಿದರು.

ಕಾಶಿ ಪ್ರದೇಶ ಬಿಜೆಪಿ ಮಾಧ್ಯಮ ಪ್ರಭಾರಿ ನವರತನ್ ರಾಠಿ ಮಾತನಾಡಿ, ರೊಹಾನಿಯಾ, ಸೇವಾಪುರಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯಬಹುದಾದ ರೈತ ಸಮಾವೇಶಕ್ಕೆ ಸ್ಥಳ ಆಯ್ಕೆ ಮಾಡಲು ಕಾಶಿ ಪ್ರದೇಶ ಬಿಜೆಪಿ ಶ್ರಮಿಸುತ್ತಿದೆ. ವಾರಣಾಸಿಯ ಬಿಜೆಪಿ ಪದಾಧಿಕಾರಿಗಳ ಸಭೆಯು ಗುಲಾಬ್ ಬಾಗ್‌ನಲ್ಲಿರುವ ಪಕ್ಷದ ಕಚೇರಿಯಲ್ಲಿ ಪ್ರಧಾನ ಮಂತ್ರಿಗಳ ಭೇಟಿಯ ಸಿದ್ಧತೆಗಳ ಕುರಿತು ಚರ್ಚಿಸಲು ನಡೆಯಿತು. ಕಿಸಾನ್ ಸಮೇಳನವನ್ನು ಉದ್ದೇಶಿಸಿ ಮಾತ ನಾಡಿದ ನಂತರ, ಪ್ರಧಾನಿ ಮೋದಿ ಅವರು ಬಾಬಾ ಕಾಶಿ ವಿಶ್ವನಾಥ್‌ಗೆ ಪ್ರಾರ್ಥನೆ ಸಲ್ಲಿಸುತ್ತಾರೆ ಮತ್ತು ದಶಾಶ್ವಮೇಧ ಘಾಟ್‌ನಲ್ಲಿ ಗಂಗಾ ಆರತಿಯಲ್ಲಿ ಪಾಲ್ಗೊಳ್ಳುತ್ತಾರೆ ಎಂದು ಪಟೇಲ್ ಹೇಳಿದರು.

### ಜನಸೇನಾ ಶಾಸಕಾಂಗ ಪಕ್ಷದ ನಾಯಕರಾಗಿ ಪವನ್ ಕಲ್ಯಾಣ್ ಆಯ್ಕೆ

**ಅಮರಾವತಿ:** ಆಂಧ್ರಪ್ರದೇಶ ವಿಧಾನಸಭೆಯಲ್ಲಿ ಪಕ್ಷದ ಮುಖ್ಯಸ್ಥ ಪವನ್ ಕಲ್ಯಾಣ್ ಅವರನ್ನು ಜನಸೇನಾ ಪಕ್ಷದ ಶಾಸಕರು ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಿದ್ದಾರೆ. ಟಿಡಿಪಿ ಮುಖ್ಯಸ್ಥ ಎನ್ ಚಂದ್ರ ಬಾಬು ನಾಯ್ಡು ಅವರನ್ನು ಸದನದಲ್ಲಿ ತಮ ನಾಯಕನನ್ನಾಗಿ ಆಯ್ಕೆ ಮಾಡಲು ಎನ್‌ಡಿಎ ಶಾಸಕರ ಸಭೆಗೆ ಮುನ್ನ ಈ ಕ್ರಮ ಕೈಗೊಳ್ಳಲಾಗಿದೆ. ಜನಸೇನಾ ತೆನಾಲಿ ಶಾಸಕ ಎನ್ ಮನೋಹರ್ ಅವರು ಪವನ್ ಕಲ್ಯಾಣ್ ಅವರ ಹೆಸರನ್ನು ವಿಧಾನಸಭೆಯಲ್ಲಿ ನೆಲದ ನಾಯಕರಾಗಿ ಪ್ರಸ್ತಾಪಿಸಿದರು, ಇದನ್ನು ಇತರ ಸದಸ್ಯರು ಸರ್ವಾನುಮತದಿಂದ ಬೆಂಬಲಿಸಿದರು ಎಂದು ಪಕ್ಷದ ಮೂಲಗಳು ತಿಳಿಸಿವೆ.175 ಸದಸ್ಯ ಬಲದ ಸದನದಲ್ಲಿ ಜನಸೇನಾ 21 ಶಾಸಕರನ್ನು ಹೊಂದಿದೆ. ಆಂಧ್ರಪ್ರದೇಶದಲ್ಲಿ ಎನ್‌ಡಿಎ 164 ಅಸೆಂಬ್ಲಿ ಸ್ಥಾನಗಳಲ್ಲಿ (ಟಿಡಿಪಿ-135, ಜನಸೇನಾ-21 ಮತ್ತು ಬಿಜೆಪಿ-8) ಬಹುಮತದೊಂದಿಗೆ ಭರ್ಜರಿ ಜಯ ಸಾಧಿಸಿದೆ.

### ಮಹಿಳೆಯರು ಒಳ ಉಡುಪಿನಲ್ಲಿ ಬಚ್ಚಿಟ್ಟುಕೊಂಡಿದ್ದ 33 ಕೆಜಿ ಚಿನ್ನ ಜಪ್ತಿ



**ಮುಂಬೈ:** ಇಬ್ಬರು ವಿದೇಶಿ ಮಹಿಳೆಯರು ಒಳ ಉಡುಪು ಮತ್ತು ಲಗೇಜ್‌ಗಳಲ್ಲಿ ಬಚ್ಚಿಟ್ಟಿದ್ದ 33 ಕೆಜಿ ಚಿನ್ನವನ್ನು ಮುಂಬೈ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ಮುಂಬೈ ಏರ್‌ಪೋರ್ಟ್ ಕಸ್ಟಮ್ಸ್ ಅಧಿಕಾರಿಗಳು ಇಬ್ಬರು ವಿದೇಶಿ ಮಹಿಳೆಯರಿಂದ 19.15 ಕೋಟಿ ಮೌಲ್ಯದ 32.79 ಕಿಲೋಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ. ಮುಂಬೈ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಬ್ಬರು ವಿದೇಶಿ ಪ್ರಜೆಗಳ ಒಳ ಉಡುಪು ಮತ್ತು ಲಗೇಜುಗಳಲ್ಲಿ ಬಚ್ಚಿಟ್ಟಿದ್ದ 19.15 ಕೋಟಿ ಮೌಲ್ಯದ 32.79 ಕೆಜಿ ಚಿನ್ನವನ್ನು ಕಸ್ಟಮ್ಸ್ ಪ್ರತ್ಯೇಕ ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.

ಛತ್ರಪತಿ ಶಿವಾಜಿ ಮಹಾರಾಜ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನಂತರ ಆಫ್ರಿಕನ್ ದೇಶಗಳ ಇಬ್ಬರು ಪ್ರಯಾಣಿಕರನ್ನು ಅನುಮಾನದ ಮೇಲೆ ಶೋಧ ನಡೆಸಿದಾಗ 33 ಕೆಜಿ ಚಿನ್ನ ಪತ್ತೆಯಾಗಿದೆ. ಎರಡೂ ಪ್ರಕರಣಗಳಲ್ಲಿ ಚಿನ್ನವನ್ನು ಒಳ ಉಡುಪು ಮತ್ತು ಸಾಮಾನು ಸರಂಜಾಮುಗಳಲ್ಲಿ ಬಚ್ಚಿಟ್ಟಿರುವುದು ಪತ್ತೆಯಾಗಿದ್ದು, ಮಹಿಳೆಯರನ್ನು ಬಂಧಿಸಿ ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ.


### ಉಕ್ರೇನ್: ಅಮೆರಿಕದ ಶಸ್ತ್ರಾಸ್ತ್ರ ಪೂರೈಕೆ ನಿಷೇಧ ತೆರವು

**ಕೀವ್:** ಉಕ್ರೇನ್‌ನ ವಿವಾದಿತ ಮಿಲಿಟರಿ ಘಟಕ ಅಜೊವ್ ಬ್ರಿಗೇಡ್‌ಗೆ ಅಮೆರಿಕದ ಶಸ್ತ್ರಾಸ್ತ್ರಗಳನ್ನು ಪೂರೈಸುವುದಕ್ಕೆ ಹಾಗೂ ಅದಕ್ಕೆ ತರಬೇತಿ ನೀಡುವುದಕ್ಕೆ ಇದ್ದ ನಿಷೇಧವನ್ನು ಅಮೆರಿಕವು ತೆರವುಗೊಳಿಸಿದೆ. ಮರಿಯುಪೊಲ್ ಬಂದರು ನಗರವನ್ನು ರಕ್ಷಿಸಿಕೊಳ್ಳುವಲ್ಲಿ ಈ ಘಟಕವು ಪ್ರಮುಖ ಪಾತ್ರ ವಹಿಸಿತ್ತು.

ಉಕ್ರೇನ್‌ನ ಅತ್ಯಂತ ಜನಪ್ರಿಯ ಹಾಗೂ ಪರಿಣಾಮಕಾರಿ ಮಿಲಿಟರಿ ಘಟಕಗಳ ಪೈಕಿ ಅಜೊವ್ ಬ್ರಿಗೇಡ್ ಕೂಡ ಒಂದು. ಆದರೆ, ತೀವ್ರ ಬಲಪಂಥೀಯ ಗುಂಪುಗಳಿಂದ ಹೋರಾಟಗಾರರನ್ನು ಸೇರಿಸಿಕೊಂಡ ಕಾರಣಕ್ಕೆ ಹಾಗೂ ಈ ಘಟಕವು ಅನುಸರಿಸುವ ಕೆಲವು ಯುದ್ಧ ತಂತ್ರಗಳ ಕಾರಣಕ್ಕೆ ಅದರ ಬಗ್ಗೆ ಟೀಕೆಗಳು ಇವೆ. ಈ ಘಟಕವು ತನ್ನ ಶಸ್ತ್ರಾಸ್ತ್ರಗಳನ್ನು ಬಳಸುವುದಕ್ಕೆ ಅಮೆರಿಕವು ನಿಷೇಧ ಹೇರಿತ್ತು.

ಅಮೆರಿಕದ ಕಾನೂನುಗಳ ಪ್ರಕಾರ, ಮಾನವ ಹಕ್ಕುಗಳ ಉಲ್ಲಂಘನೆ ನಡೆಸಿದ ವಿದೇಶಿ ವ್ಯಕ್ತಿಗಳಿಗೆ ಅಥವಾ ಮಿಲಿಟರಿ ಘಟಕಗಳಿಗೆ ಉಪಕರಣಗಳನ್ನು ಪೂರೈಸುವುದರ ಮೇಲೆ, ತರಬೇತಿ ನೀಡುವುದರ ಮೇಲೆ ನಿಷೇಧ ಇದೆ. ಆದರೆ ಈ ಘಟಕವು ಅಂತಹ ಕೃತ್ಯ ನಡೆಸಿದ್ದಕ್ಕೆ ಆಧಾರ ಇಲ್ಲ ಎಂದು ಅಮೆರಿಕ ಹೇಳಿದೆ.

www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail. com
ಉದಯ UV ವಾಹಿನಿ






# ರೋಚಕ ಪಂದ್ಯದಲ್ಲಿ ಬಾಂಗ್ಲಾ ತಂಡವನ್ನು ಮಣಿಸಿದ ಆಫ್ರಿಕಾ

## 21ನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ಕರಾರುವಕ್ಕಾದ ದಾಳಿಗೆ ತಲೆಬಾಗಿದ ಬಾಂಗ್ಲಾದೇಶ ತಂಡ

ಐಸಿಸಿ ಟಿ20 ವಿಶ್ವಕಪ್ 2024ರ 21ನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ಕರಾರುವಕ್ಕಾದ ದಾಳಿಗೆ ಬಾಂಗ್ಲಾದೇಶ ತಂಡ ತಲೆಬಾಗಿದೆ. ನಸ್ಸೌ ಕೌಂಟಿ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಮತ್ತೊಂದು ಕಡಿಮೆ ಸ್ಕೋರಿಂಗ್ ಪಂದ್ಯದಲ್ಲಿ ಆಫ್ರಿಕಾ ತಂಡ, ಬಾಂಗ್ಲಾ ತಂಡವನ್ನು 4 ರನ್‌ಗಳಿಂದ ಮಣಿಸಿದೆ.

ಐಸಿಸಿ ಟಿ20 ವಿಶ್ವಕಪ್ 2024ರ 21ನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾದ ಕರಾರುವಕ್ಕಾದ ದಾಳಿಗೆ ಬಾಂಗ್ಲಾದೇಶ ತಂಡ ತಲೆಬಾಗಿದೆ. ನಸ್ಸೌ ಕೌಂಟಿ ಅಂತರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಮತ್ತೊಂದು ಕಡಿಮೆ ಸ್ಕೋರಿಂಗ್ ಪಂದ್ಯದಲ್ಲಿ ಆಫ್ರಿಕಾ ತಂಡ, ಬಾಂಗ್ಲಾ ತಂಡವನ್ನು 4 ರನ್‌ಗಳಿಂದ ಮಣಿಸಿದೆ. ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ದಕ್ಷಿಣ ಆಫ್ರಿಕಾ ತಂಡ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 113 ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಮೂಲಕ ಟಿ20 ವಿಶ್ವಕಪ್ ಇತಿಹಾಸದಲ್ಲಿ ಅತಿ ಕಡಿಮೆ ಸ್ಕೋರ್ ದಾಖಲಿಸಿದ ಬೇಡದ ದಾಖಲೆಯನ್ನು ದಕ್ಷಿಣ ಆಫ್ರಿಕಾ ಬರೆಯಿತು. ಗೆಲುವಿಗೆ ಅಲ್ಪ ಗುರಿ ಪಡೆದ ಬಾಂಗ್ಲಾದೇಶ ತಂಡ ಕೊನೆಯಲ್ಲಿ ಮಾಡಿಕೊಂಡ ತನ್ನದೇ ತಪ್ಪುಗಳಿಂದ ಗೆಲ್ಲುವ ಪಂದ್ಯವನ್ನು ಕೈಚೆಲ್ಲಿತು.



**ಕ್ಲಾಸೆನ್ ಏಕಾಂಗಿ ಹೋರಾಟ**

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆಫ್ರಿಕಾ ಪರ ಕೇವಲ ಮೂರು ಬ್ಯಾಟ್ಸ್‌ಮನ್‌ಗಳಿಗೆ ಮಾತ್ರ ಎರಡಂಕಿ ತಲುಪಲು ಸಾಧ್ಯವಾಯಿತು. ಉಳಿದವರಲ್ಲಿ ಇಬ್ಬರು ಖಾತೆ ತೆರೆಯದೆ ನಿರ್ಗಮಿಸಿದರೆ. ಮೂವರೂ ಒಂದೇ ರನ್‌ಗೆ ತೃಪ್ತಿಪಟ್ಟರು. ದಕ್ಷಿಣ ಆಫ್ರಿಕಾ ಪರ ಹೆನ್ರಿಕ್ ಕ್ಲಾಸೆನ್ ಅತ್ಯಧಿಕ 46 ರನ್ ಗಳಿಸಿದರು. ಕ್ಲಾಸೆನ್ ಅವರ ಇನ್ನಿಂಗ್ಸ್ 3 ಸಿಕ್ಸರ್ ಮತ್ತು 2 ಬೌಂಡರಿಗಳನ್ನು ಒಳಗೊಂಡಿತ್ತು. ಡೇವಿಡ್ ಮಿಲ್ಲರ್ 29 ರನ್ ಕೊಡುಗೆ ನೀಡಿದರು. ಕ್ಲಾಸೆನ್ ಮತ್ತು ಮಿಲ್ಲರ್ ಇಬ್ಬರೂ ಐದನೇ ವಿಕೆಟ್‌ಗೆ 80 ಎಸೆತಗಳಲ್ಲಿ 79 ರನ್‌ಗಳ ಜೊತೆಯಾಟ ನೀಡಿದರು. ಹಾಗಾಗಿ ದಕ್ಷಿಣ ಆಫ್ರಿಕಾ 100 ರನ್‌ಗಳ ಗಡಿ ದಾಟಲು ಸಾಧ್ಯವಾಯಿತು.

**ಕ್ಲಾಸೆನ್ ಏಕಾಂಗಿ ಹೋರಾಟ**

ಅಗ್ರಕ್ರಮಾಂಕದ ವೈಫಲ್ಯ ಉಳಿದಂತೆ ತಂಡದ ಪರ ಕ್ವಿಂಟನ್ ಡಿ ಕಾಕ್ 11 ಎಸೆತಗಳಲ್ಲಿ 18 ರನ್ ಗಳಿಸಿದರು. ರಿಜಾ ಹೆಂಡ್ರಿಕ್ಸ್ ಮತ್ತು ಟ್ರಿಸ್ಟಾನ್ ಸ್ಟಬ್ಸ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ನಾಯಕ ಏಡನ್ ಮಾರ್ಕ್ರಾಮ್ 4 ರನ್ ಗಳಿಸಿದರೆ, ಮಾರ್ಕೊ ಯಾನ್ಸೆನ್ 5 ರನ್ ಮತ್ತು ಕೇಶವ್ ಮಹಾರಾಜ್ 4 ರನ್ ಬಾರಿಸಿ ಅಜೇಯರಾಗಿ ಮರಳಿದರು. ಬಾಂಗ್ಲಾದೇಶ ಪರ ತಂಜಿಮ್ ಹಸನ್ ಸಾಕಿಬ್ ಅತಿ ಹೆಚ್ಚು 3 ವಿಕೆಟ್ ಕಬಳಿಸಿದರೆ, ತಸ್ಕಿಮ್ ಅಹ್ಮದ್ 2 ವಿಕೆಟ್, ರಿಶಾದ್ ಹೌಸ್ಸೈನ್ 1 ವಿಕೆಟ್ ಪಡೆದರು.

### ಬಾಂಗ್ಲಾ ತಂಡಕ್ಕೂ ಕಳಪೆ ಆರಂಭ

**ಗುರಿ ಬೆನ್ನಟ್ಟಿದ ಬಾಂಗ್ಲಾದೇಶ ತಂಡಕ್ಕೂ ಉತ್ತಮ ಆರಂಭ ಸಿಗಲಿಲ್ಲ. ತಂಡ 50 ರನ್ ಕಲೆಹಾಕುವುದರೊಳಗೆ ಪ್ರಮುಖ 4 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಆ ಬಳಿಕ ಒಂದಾದ ತೌಹಿದ್ ಹೃದಯೊಯ್ ಹಾಗೂ ಮಹಮ್ಮದುಲ್ಲಾ ಉತ್ತಮ ಜೊತೆಯಾಟವಾಡುವ ಮೂಲಕ ತಂಡವನ್ನು ನೂರರ ಸನಿಹಕ್ಕೆ ತಂದರು. ಈ ವೇಳೆ ಹೃದಯೊಯ್ 37 ರನ್ ಬಾರಿಸಿ ವಿಕೆಟ್ ಕೈಚೆಲ್ಲುವುದರೊಂದಿಗೆ ಬಾಂಗ್ಲಾ ತಂಡವನ್ನು ಸಂಕಷ್ಟಕ್ಕೆ ತಳ್ಳಿದರು. ಈ ಜೋಡಿಯ ಜೊತೆಯಾಟ ಮುರಿದು ಬೀಳುವುದರೊಂದಿಗೆ ಬಾಂಗ್ಲಾ ತಂಡದ ಗೆಲುವಿನ ಆಸೆಯೂ ಕಮರಿತು. ಕೊನೆಯಲ್ಲಿ ಮಹಮ್ಮದುಲ್ಲಾ ಸಿಕ್ಸರ್ ಬಾರಿಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಲು ಪ್ರಯತ್ನಿಸಿದರಾದರೂ ಅದು ಸಾಧ್ಯವಾಗಲಿಲ್ಲ. ಅಂತಿಮವಾಗಿ ತಂಡ 4 ರನ್‌ಗಳಿಂದ ಸೋಲೊಪ್ಪಿಕೊಳ್ಳಬೇಕಾಯಿತು.**

# ಮುಂದಿನ ಹಂತಕ್ಕೇರಲು ಟೀಮ್ ಇಂಡಿಯಾಗೆ ಒಂದೆಜ್ಜೆ ದೂರ




ಟಿ20 ವಿಶ್ವಕಪ್ 2024 ರಲ್ಲಿ ಈವರೆಗೆ 21 ಪಂದ್ಯಗಳು ಮುಗಿದಿವೆ. ಈ ಪಂದ್ಯಗಳ ಮೂಲಕ ಸೂಪರ್-8 ಹಂತಕ್ಕೇರಿರುವುದು ಸೌತ್ ಆಫ್ರಿಕಾ ತಂಡ ಮಾತ್ರ. ಅಂದರೆ ಗ್ರೂಪ್-ಡಿ ನಲ್ಲಿ ಕಣಕ್ಕಿಳಿದಿರುವ ಸೌತ್ ಆಫ್ರಿಕಾ ಮೂರು ಪಂದ್ಯಗಳಲ್ಲಿ ಜಯ ಸಾಧಿಸಿ ಮುಂದಿನ ಹಂತಕ್ಕೇರಿದೆ. ಇನ್ನು ಟೀಮ್ ಇಂಡಿಯಾ ಯುಎಸ್‌ಎ ವಿರುದ್ಧ ಜಯ ಸಾಧಿಸಿದರೆ ಸೂಪರ್-8 ಹಂತಕ್ಕೇರಲಿದೆ. ಟಿ20 ವಿಶ್ವಕಪ್‌ನಲ್ಲಿ ಉತ್ತಮ ಪ್ರದರ್ಶನ ಮುಂದುವರೆಸಿರುವ ಸೌತ್ ಆಫ್ರಿಕಾ ತಂಡ ಸೂಪರ್-8 ಹಂತಕ್ಕೇರಿದೆ. ಆಡಿರುವ ಮೂರು ಪಂದ್ಯಗಳಲ್ಲೂ ಗೆಲುವು ದಾಖಲಿಸಿರುವ ಸೌತ್ ಆಫ್ರಿಕಾ ಒಟ್ಟು 6 ಅಂಕಗಳೊಂದಿಗೆ ಮುಂದಿನ ಹಂತಕ್ಕೆ ಅರ್ಹತೆ ಗಿಟ್ಟಿಸಿಕೊಂಡಿದೆ. ಇನ್ನು ಭಾರತ ತಂಡ ಸೂಪರ್-8 ಹಂತಕ್ಕೇರಲು ಒಂದೆಜ್ಜೆ ದೂರದಲ್ಲಿದೆ. ಅಂದರೆ ಬುಧವಾರ ಯುಎಸ್‌ಎ ವಿರುದ್ಧ ನಡೆಯಲಿರುವ ಪಂದ್ಯದಲ್ಲಿ ಟೀಮ್ ಇಂಡಿಯಾ ಜಯ ಸಾಧಿಸಿದರೆ, ಸೂಪರ್-8 ಹಂತಕ್ಕೇರಲಿದೆ. ಏಕೆಂದರೆ ಟೀಮ್ ಇಂಡಿಯಾ ಈಗಾಗಲೇ 2 ಪಂದ್ಯಗಳಲ್ಲಿ ಜಯ ಸಾಧಿಸಿದ್ದು, ಒಟ್ಟು 4 ಅಂಕಗಳೊಂದಿಗೆ ಗ್ರೂಪ್-ಎ ಅಂಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಇದೀಗ ಮೂರನೇ ಗೆಲುವು ದಾಖಲಿಸಿದರೆ ಸೂಪರ್-8 ಹಂತಕ್ಕೇರುವುದು ಖಚಿತವಾಗಲಿದೆ. ಹೀಗಾಗಿ ಬುಧವಾರ (ಜೂ.12) ನಡೆಯಲಿರುವ ಪಂದ್ಯದ ಮೂಲಕ ಭಾರತ ತಂಡವು ಮುಂದಿನ ಹಂತಕ್ಕೇರುವುದನ್ನು ಎದುರು ನೋಡಬಹುದು.

**ಸೂಪರ್-8 ಎಂದರೇನು:** ಈ ಬಾರಿಯ ಟಿ20 ವಿಶ್ವಕಪ್‌ನಲ್ಲಿ 20 ತಂಡಗಳನ್ನು 4 ಗುಂಪುಗಳಲ್ಲಿ ವಿಂಗಡಿಸಲಾಗಿದೆ. ಇಲ್ಲಿ ಪ್ರತಿ ಗ್ರೂಪ್‌ನಲ್ಲಿ 5 ತಂಡಗಳಿವೆ. ಅಲ್ಲದೆ ಆಯಾ ಗ್ರೂಪ್‌ನಲ್ಲಿ ಪಂದ್ಯಗಳನ್ನಾಡಲಾಗುತ್ತದೆ. ಅಂದರೆ, ಭಾರತ, ಪಾಕಿಸ್ತಾನ್, ಯುಎಸ್‌ಎ, ಕೆನಡಾ ಮತ್ತು ಐರ್ಲೆಂಡ್ ತಂಡಗಳು ಗ್ರೂಪ್ ಎ ನಲ್ಲಿದೆ. ಈ ಗ್ರೂಪ್‌ನಲ್ಲಿ 4 ತಂಡಗಳ ವಿರುದ್ಧ ಭಾರತ ಲೀಗ್ ಪಂದ್ಯಗಳನ್ನಾಡುತ್ತಿದೆ. ಇಲ್ಲಿ ಆಯಾ ಗ್ರೂಪ್‌ಗೆ ಅಂಕ ಪಟ್ಟಿಯನ್ನು ಕೂಡ ನೀಡಲಾಗುತ್ತದೆ. ಲೀಗ್ ಹಂತದ ಪಂದ್ಯಗಳ ಮುಕ್ತಾಯದ ವೇಳೆಗೆ ಈ ಅಂಕ ಪಟ್ಟಿಯಲ್ಲಿ ಮೊದಲೆರಡು ಸ್ಥಾನಗಳನ್ನು ಅಲಂಕರಿಸುವ ತಂಡ ಮುಂದಿನ ಹಂತಕ್ಕೇರಲಿದೆ.

**ಸೂಪರ್-8 ಹಂತ:** ಲೀಗ್ ಹಂತದ 4 ಗುಂಪುಗಳಿಂದ ಒಟ್ಟು 8 ತಂಡಗಳು ಮುಂದಿನ ಹಂತಕ್ಕೆ ಅರ್ಹತೆ ಪಡೆಯಲಿದೆ. ಇದನ್ನೇ ಇಲ್ಲಿ ಸೂಪರ್-8 ಹಂತ ಎನ್ನಲಾಗಿದೆ. ಇನ್ನು ಸೂಪರ್-8 ಹಂತದಲ್ಲಿ ಮೇಲೆ ಹೇಳಿದಂತೆ ಒಟ್ಟು 8 ತಂಡಗಳು ಕಣಕ್ಕಿಳಿಯಲಿದೆ. ಇಲ್ಲಿ ಈ ತಂಡಗಳನ್ನು 2 ಗ್ರೂಪ್‌ಗಳಾಗಿ ವಿಂಗಡಿಸಲಾಗುತ್ತದೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶ ಎಂದರೆ ಲೀಗ್ ಹಂತದಲ್ಲಿ ಒಂದೇ ಗ್ರೂಪ್‌ನಲ್ಲಿ ಕಾಣಿಸಿಕೊಂಡ ತಂಡಗಳು ಇಲ್ಲಿ ಪರಸ್ಪರ ಮುಖಾಮುಖಿಯಾಗುವುದಿಲ್ಲ ಎಂಬುದು. ಬದಲಾಗಿ ಉಳಿದ ತಂಡಗಳ ವಿರುದ್ಧ ಆಡಲಿದೆ. ಹಾಗೆಯೇ ಸೂಪರ್-8 ಹಂತದಲ್ಲೂ ಎರಡು ಗ್ರೂಪ್‌ಗಳಿಗೂ ಅಂಕ ಪಟ್ಟಿ ಇರಲಿದೆ. ಈ ಅಂಕ ಪಟ್ಟಿಯಲ್ಲಿ ಮೊದಲೆರಡು ಸ್ಥಾನಗಳನ್ನು ಅಲಂಕರಿಸುವ 4 ತಂಡಗಳು ಸೆಮಿಫೈನಲ್ ಹಂತಕ್ಕೇರಲಿದೆ.

ಸೆಮಿಫೈನಲ್‌ನಲ್ಲಿ ಗೆಲ್ಲುವ 2 ತಂಡಗಳು ಫೈನಲ್‌ಗೆ ಅರ್ಹತೆ ಪಡೆಯಲಿದೆ. ಅದರಂತೆ ಜೂನ್ 29 ರಂದು ನಡೆಯುವ ಫೈನಲ್ ಪಂದ್ಯದಲ್ಲಿ ಈ ತಂಡಗಳು ಮುಖಾಮುಖಿಯಾಗಲಿದೆ.

# ಭಾರತ-ಪಾಕ್ ಪಂದ್ಯಕ್ಕೂ ಮುನ್ನ ಯುಟ್ಯೂಬರ್ ಹತ್ಯೆ



ನ್ಯೂಯಾರ್ಕ್‌ನ ನಸ್ಸೌ ಕೌಂಟಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯವು ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿತ್ತು. ಈ ಪಂದ್ಯಕ್ಕೂ ಮುನ್ನ ಪಾಕಿಸ್ತಾನದ ಯುಟ್ಯೂಬರ್ ಒಬ್ಬರನ್ನು ಅಲ್ಲಿನ ಭದ್ರತಾ ಸಿಬ್ಬಂದಿ ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ಇದೀಗ ಬೆಳಕಿಗೆ ಬಂದಿದೆ. ಅಮೆರಿಕದಲ್ಲಿ ಕ್ರಿಕೆಟ್ ಜನಪ್ರಿಯತೆ ಹೆಚ್ಚಿಸಲು ಐಸಿಸಿ ಈ ಬಾರಿಯ ಟಿ20 ವಿಶ್ವಕಪ್ ಅನ್ನು ಯುಎಸ್‌ಎ-ವೆಸ್ಟ್ ಇಂಡೀಸ್‌ನಲ್ಲಿ ಆಯೋಜಿಸುತ್ತಿದೆ. ಅದರಲ್ಲೂ ವಿಶ್ವದ ಹೈವೋಲ್ಟೇಜ್ ಮುಖಾಮುಖಿ ಎನಿಸಿಕೊಂಡಿರುವ ಭಾರತ ಮತ್ತು ಪಾಕಿಸ್ತಾನ್ ನಡುವಣ ಕದನವನ್ನು ಈ ಬಾರಿ ನ್ಯೂಯಾರ್ಕ್‌ನಲ್ಲಿ ಆಯೋಜಿಸಲಾಗಿತ್ತು.

ಈ ಮಹತ್ವದ ಪಂದ್ಯಕ್ಕೂ ಮುನ್ನ ಜನರ ಅಭಿಪ್ರಾಯವನ್ನು ಸಂಗ್ರಹಿಸುತ್ತಿದ್ದ ಯುಟ್ಯೂಬರ್‌ನನ್ನು ಕರಾಚಿ ಭದ್ರತಾ ಸಿಬ್ಬಂದಿ ಹತ್ಯೆ ಮಾಡಿದ್ದಾನೆ.

ಭಾನುವಾರ ನಡೆದ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯಕ್ಕೂ ಮುನ್ನ ಜನರ ಅಭಿಪ್ರಾಯದ ವ್ಲಾಗ್ ಚಿತ್ರೀಕರಿಸಲು ಸಾದ್ ಅಹ್ಮದ್ ಕರಾಚಿ ನಗರದ ಪ್ರಮುಖ ಮೊಬೈಲ್ ಮಾರುಕಟ್ಟೆಗೆ ಹೋಗಿದ್ದಾರೆ. ಹೀಗೆ ಎಲ್ಲಾರೊಂದಿಗೆ ಮಾತನಾಡುತ್ತಾ, ಕ್ರಿಕೆಟ್ ವಿಡಿಯೋ ಮಾಡುತ್ತಿದ್ದ ಸಾದ್‌ಗೆ ಅಲ್ಲಿನ ಭದ್ರತಾ ಸಿಬ್ಬಂದಿ ಎದುರಾಗಿದ್ದಾರೆ.

ಇದೇ ವೇಳೆ ಭದ್ರತಾ ಸಿಬ್ಬಂದಿ ಜೊತೆ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯದ ಬಗ್ಗೆ ಪ್ರಶ್ನಿಸಿದ್ದಾರೆ. ಆದರೆ ಈ ವೇಳೆ ವ್ಲಾಗ್‌ನಲ್ಲಿ ಕಾಣಿಸಿಕೊಳ್ಳಲು ಅವರು ನಿರಾಕರಿಸಿದ್ದಾರೆ. ಇದಾಗ್ಯೂ ಪದೇ ಪದೇ ಪ್ರಶ್ನಿಸಿದಾಗ ಕೋಪಗೊಂಡ ಭದ್ರತಾ ಸಿಬ್ಬಂದಿ ಸಾದ್ ಅಹ್ಮದ್ ಜೊತೆ ವಾಗ್ವಾದಕ್ಕಿಳಿದಿದ್ದರು. ಈ ವಾಗ್ವಾದ ತಾರಕ್ಕೇರುತ್ತಿದ್ದಂತೆ ಭದ್ರತಾ ಸಿಬ್ಬಂದಿ ತನ್ನ ಗನ್‌ನಿಂದ ಸಾದ್ ಅಹ್ಮದ್ ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ ಎಂದು ವರದಿಯಾಗಿದೆ. ಶೂಟ್ ಮಾಡಿದ ತಕ್ಷಣವೇ ಪಾಕ್ ಯುಟ್ಯೂಬರ್‌ನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಆದರೆ ಆತನನ್ನು ಉಳಿಸಿಕೊಳ್ಳಲು ಸಾಧ್ಯವಾಗಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ.

# ಎಟಿಪಿ ಶ್ರೇಯಾಂಕದಲ್ಲಿ 77ನೇ ಸ್ಥಾನ ಪ್ಯಾರಿಸ್ ಒಲಿಂಪಿಕ್ಸ್‌ಗೆ ಸುಮಿತ್ ನಾಗಲ್



ಭಾನುವಾರ ನಡೆದ ಮೂರು ಸೆಟ್‌ಗಳ ಫೈನಲ್‌ನಲ್ಲಿ ನಾಗಲ್ ಅವರು ಸ್ವಿಟ್ಜರ್ಲೆಂಡ್‌ನ ಅಲೆಕ್ಸಾಂಡರ್ ರಿಚರ್ಡ್ ಅವರನ್ನು 6-1 6(5)-7 6-3 ರಿಂದ ಸೋಲಿಸಿದರು. ಪ್ಯಾರಿಸ್ ಒಲಿಂಪಿಕ್ಸ್ ಅರ್ಹತಾ ಮಾನದಂಡದ ಪ್ರಕಾರ, ಪುರುಷರ ಮತ್ತು ಮಹಿಳೆಯರ ವಿಭಾಗಗಳಲ್ಲಿ ಅಗ್ರ 56 ಆಟಗಾರರು ಸ್ವಯಂಚಾಲಿತವಾಗಿ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯುತ್ತಾರೆ. ಆದರೆ, ಪ್ರತಿ ದೇಶದಿಂದ ಗರಿಷ್ಠ 4 ಆಟಗಾರರು ಮಾತ್ರ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯಲು ಸಾಧ್ಯವಾಗುತ್ತದೆ.

ಭಾರತದ ಟೆನಿಸ್ ಆಟಗಾರ ಸುಮಿತ್ ನಗಾಲ್ ಸೋಮವಾರ ಬಿಡುಗಡೆ ಮಾಡಿರುವ ಎಟಿಪಿ ಶ್ರೇಯಾಂಕದಲ್ಲಿ 18 ಸ್ಥಾನಗಳ ಜಿಗಿದು 77ನೇ ಸ್ಥಾನಕ್ಕೆ ತಲುಪಿದ್ದು, ಪ್ಯಾರಿಸ್ ಒಲಿಂಪಿಕ್ಸ್ ಪುರುಷರ ಸಿಂಗಲ್ಸ್ ಡ್ರಾದಲ್ಲಿ ತಮ್ಮ ಸ್ಥಾನವನ್ನು ಖಚಿತಪಡಿಸಿಕೊಂಡಿದ್ದಾರೆ. ನಾಗಲ್ ಇದೀಗ 713 ಎಟಿಪಿ ಪಾಯಿಂಟ್ಸ್ ಹೊಂದಿದ್ದಾರೆ. ಭಾನುವಾರ ಜರ್ಮನಿಯಲ್ಲಿ ನಡೆದ ಹೀಲ್‌ಬ್ರಾನ್ ನೆಕರ್‌ಕಪ್ 2024 ಚಾಲೆಂಜರ್ ಪಂದ್ಯಾವಳಿಯಲ್ಲಿ ನಾಗಲ್ ಅವರು ಪುರುಷರ ಸಿಂಗಲ್ಸ್ ಪ್ರಶಸ್ತಿಯನ್ನು ಗೆದ್ದ ಕಾರಣ ಶ್ರೇಯಾಂಕದಲ್ಲಿ ಭರ್ಜರಿ ಜಿಗಿತ ಕಂಡರು. ಇದರೊಂದಿಗೆ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಗಿಟ್ಟಿಸಿಕೊಂಡಿದ್ದಾರೆ.

ಭಾನುವಾರ ನಡೆದ ಮೂರು ಸೆಟ್‌ಗಳ ಫೈನಲ್‌ನಲ್ಲಿ ನಾಗಲ್ ಅವರು ಸ್ವಿಟ್ಜರ್ಲೆಂಡ್‌ನ ಅಲೆಕ್ಸಾಂಡರ್ ರಿಚರ್ಡ್ ಅವರನ್ನು 6-1 6(5)-7 6-3 ರಿಂದ ಸೋಲಿಸಿದರು. ಪ್ಯಾರಿಸ್ ಒಲಿಂಪಿಕ್ಸ್ ಅರ್ಹತಾ ಮಾನದಂಡದ ಪ್ರಕಾರ, ಪುರುಷರ ಮತ್ತು ಮಹಿಳೆಯರ ವಿಭಾಗಗಳಲ್ಲಿ ಅಗ್ರ 56 ಆಟಗಾರರು ಸ್ವಯಂಚಾಲಿತವಾಗಿ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯುತ್ತಾರೆ. ಆದರೆ, ಪ್ರತಿ ದೇಶದಿಂದ ಗರಿಷ್ಠ 4 ಆಟಗಾರರು ಮಾತ್ರ ಒಲಿಂಪಿಕ್ಸ್‌ಗೆ ಅರ್ಹತೆ ಪಡೆಯಲು ಸಾಧ್ಯವಾಗುತ್ತದೆ. ಮತ್ತು ಈ ನಿಯಮದೊಂದಿಗೆ, ಕಡಿಮೆ ಶ್ರೇಯಾಂಕದ ಆಟಗಾರರು ಡ್ರಾಗೆ ಪ್ರವೇಶಿಸಲು ಅವಕಾಶವನ್ನು ಪಡೆಯುತ್ತಾರೆ.

# ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟ ನಟಿ ಮಯೂರಿ



ಸ್ಯಾಂಡಲ್‌ವುಡ್ ನಟಿ ಮಯೂರಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಮತ್ತೆ ಕಿರುತೆರೆಗೆ 'ಕೃಷ್ಣಲೀಲಾ' ಖ್ಯಾತಿಯ ನಟಿ ಎಂಟ್ರಿ ಕೊಟ್ಟಿದ್ದಾರೆ. 'ನನ್ನ ದೇವ್ರು' ಎಂಬ ಸೀರಿಯಲ್‌ಗೆ ನಾಯಕಿಯಾಗಿ ನಟಿ ಸದ್ದು ಮಾಡುತ್ತಿದ್ದಾರೆ.

ಮದುವೆಯಾಗಿ ಮಗುವಾದ್ಮೇಲೆ ವೈಯಕ್ತಿಕ ಬದುಕಿನಲ್ಲಿ ನಟಿ ಬ್ಯುಸಿಯಾಗಿದ್ದ ನಟಿ ಮತ್ತೆ ಫಿಟ್ ಆಗಿ ಕ್ಯಾಮೆರಾ ಮುಂದೆ ಬರಲು ಸಜ್ಜಾಗಿದ್ದಾರೆ.

ಇದೀಗ ನನ್ನ ದೇವ್ರು ಎಂಬ ಸೀರಿಯಲ್‌ನಲ್ಲಿ ಲೀಡ್ ರೋಲ್‌ನಲ್ಲಿ ಕಾಣಿಸಿಕೊಳ್ತಿದ್ದಾರೆ.

ನಟ ಅವಿನಾಶ್‌ಗೆ ನಾಯಕಿಯಾಗಿ ಮಯೂರಿ ತೆರೆಹಂಚಿಕೊಳ್ತಿದ್ದಾರೆ. ಸೀರಿಯಲ್ ಪ್ರೋಮೋ ಕೂಡ ರಿವೀಲ್ ಆಗಿದ್ದು, ಹಳ್ಳಿ ಹುಡುಗಿಯ ಲುಕ್‌ನಲ್ಲಿ ನಟಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಶೀಘ್ರದಲ್ಲೇ ಸೀರಿಯಲ್ ಪ್ರಸಾರದ ಬಗ್ಗೆ ಮಾಹಿತಿ ಸಿಗಲಿದೆ.

ಇನ್ನೂ ಮಯೂರಿಗೆ ಕಿರುತೆರೆಯೇನು ಹೊಸದಲ್ಲ. 'ಅಶ್ವಿನಿ ನಕ್ಷತ್ರ' ಸೀರಿಯಲ್ ಮೂಲಕನೇ ಬಣ್ಣದ ಲೋಕಕ್ಕೆ ಎಂಟ್ರಿ ಕೊಟ್ಟವರು. ಬಳಿಕ ಸಿನಿಮಾಗಳಲ್ಲಿ ನಟಿಸಲು ಚಾನ್ಸ್ ಸಿಕ್ತು. ಕೃಷ್ಣಲೀಲಾ, ಇಷ್ಟಕಾಮ್ಯ, ನನ್ನ ಪ್ರಕಾರ, ಮೌನಂ, ಪೊಗರು ಸೇರಿದಂತೆ ಹಲವು ಸಿನಿಮಾಗಳಲ್ಲಿ ಅವರು ನಟಿಸಿದ್ದಾರೆ.

# 'ಅಕ್ಯುಪಂಕ್ಚರ್' ತನ್ನಿಷ್ಟದ ಚಿಕಿತ್ಸೆ ಎಂದ ನಟಿ ಮಲ್ಲಿಕಾ ಶೆರಾವತ್



ಈ ಚಿಕಿತ್ಸೆ ಪಡೆಯುತ್ತಿರುವ ಕುರಿತು ಸಾಮಾಜಿಕ ಜಾಲತಾಣದಲ್ಲಿ ಫೋಟೋ ಹಂಚಿಕೊಂಡಿರುವ ನಟಿ, ನನ್ನ ಅಚ್ಚುಮೆಚ್ಚಿನ ಚಿಕಿತ್ಸೆ ಅಂಕ್ಯುಪಂಕ್ಚರ್ ಎಂದಿದ್ದಾರೆ.

ಬಾಲಿವುಡ್ ಬೆಡಗಿ ಮಲ್ಲಿಕಾ ಶರವಾತ್ ಅಕ್ಯುಪಂಕ್ಚರ್ ತಮ್ಮ ಮೆಚ್ಚಿನ ಚಿಕಿತ್ಸೆಯಾಗಿದ್ದು, ಇದನ್ನು ಇಷ್ಟಪಡುವುದಾಗಿ ತಿಳಿಸಿದ್ದಾರೆ. ಈ ಕುರಿತು ತಮ್ಮ ಇನ್‌ಸ್ಟಾಗ್ರಾಂ ಸ್ಟೇಟಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ನಟಿ, ಬೆಡ್ ಮೇಲೆ ಮಲಗಿ, ಸೂಜಿಗಳಿಂದ ತಮ್ಮ ಮುಖಕ್ಕೆ ಚುಚ್ಚಿಸಿಕೊಂಡಿರುವುದನ್ನು ಕಾಣಬಹುದಾಗಿದೆ.

**ಇನ್‌ಸ್ಟಾಗ್ರಾಂ ಸ್ಟೇಟಸ್‌ನಲ್ಲಿ ಮಾಹಿತಿ**

ಅಕ್ಯುಪಂಕ್ಚರ್ ಚಿಕಿತ್ಸೆಯಲ್ಲಿ ದೇಹದ ನಿರ್ದಿಷ್ಟ ಪಾಯಿಂಟ್‌ನಲ್ಲಿ ಉತ್ತೇಜಿಸಲು ಸಣ್ಣ ಸೂಜಿಗಳನ್ನು ತ್ವಚೆಯ ಮೇಲೆ ಚುಚ್ಚಲಾಗುವುದು. ಈ ಚಿಕಿತ್ಸೆಯು ನೋವು ಸೇರಿದಂತೆ ಹಲವು ಆರೋಗ್ಯ ಪರಿಸ್ಥಿತಿಗಳನ್ನು ಸುಧಾರಣೆಗೆ ಸಹಾಯ ಮಾಡುತ್ತದೆ. ಇದು ಸಾಂಪ್ರದಾಯಿಕ ಚೀನಿ ಚಿಕಿತ್ಸೆಯಾಗಿದೆ. ಒಟ್ಟಾರೆ ಯೋಗಕ್ಷೇಮ ಮತ್ತು ಒತ್ತಡ ನಿವಾರಣೆ ಸೇರಿದಂತೆ ಹಲವು ಆರೋಗ್ಯ ಸಂಬಂಧಿತ ಪ್ರಯೋಜನವನ್ನು ಈ ಚಿಕಿತ್ಸೆ ಹೊಂದಿದೆ.

ಈ ಚಿಕಿತ್ಸೆ ಪಡೆಯುತ್ತಿರುವ ಕುರಿತು ಸಾಮಾಜಿಕ ಜಾಲತಾಣದಲ್ಲಿ ಫೋಟೋವನ್ನು ಹಂಚಿಕೊಂಡಿರುವ ನಟಿ. ನನ್ನ ಅಚ್ಚುಮೆಚ್ಚಿನ ಚಿಕಿತ್ಸೆ ಅಂಕ್ಯುಪಂಕ್ಚರ್ ಎಂದಿದ್ದಾರೆ. ಇದಕ್ಕೆ ಮೊದಲು ಅವರು, ಶನಿವಾರ ಹಂಚಿಕೊಂಡ ಪೋಸ್ಟ್‌ನಲ್ಲಿ ಬಿಸಿಲಿನ ಬೇಗೆ ನಿವಾರಿಸಲು ಈಜುಕೊಳದಲ್ಲಿ ಇಳಿದಿರುವುದಾಗಿ ತಿಳಿಸಿದ್ದಾರೆ. ಬೇಸಿಗೆಯ ಬಿರು ಬಿಸಿಲನ್ನು ಕಡಿಮೆ ಮಾಡುವಲ್ಲಿ ಪೂಲ್‌ಗಿಂತ ತಾಜಾತನ ನೀಡುವುದು ಮತ್ತೊಂದಿಲ್ಲ. ಈ ಬಿಸಿಲನ್ನು ನೀವು ಹೇಗೆ ನಿವಾರಿಸುತ್ತೀರಾ ಎಂದು ಅಭಿಮಾನಿಗಳಿಗೆ ಪ್ರಶ್ನಿಸಿದ್ದರು. ಅಷ್ಟೇ ಅಲ್ಲದೇ, ಫಿಟ್ನೆಸ್ ಬಗ್ಗೆ ಅತ್ಯುತ್ಸಾಹವನ್ನು ಹೊಂದಿರುವ ನಟಿ ಮಲ್ಲಿಕಾ, ಆಗ್ಗಿಂದಾಗೆ ತಮ್ಮ ವರ್ಕ್‌ಔಟ್ ವಿಡಿಯೋಗಳನ್ನು ಕೂಡ ಹಂಚಿಕೊಳ್ಳುತ್ತಿರುತ್ತಾರೆ.

ವೃತ್ತಿ ಜೀವನದೆಡೆಗೆ ಗಮನಿಸುವುದಾದರೆ ನಟಿ, ಕಡೆಯ ಬಾರಿ ಕಾಮಿಡಿ ಡ್ರಾಮಾವಾಗಿದ್ದ, 'ಆರ್‌ಕೆ'. ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ರಜತ್ ಕಪೂರ್ ನಿರ್ದೇಶನದ ಈ ಸಿನಿಮಾದಲ್ಲಿ ರಣವೀರ್ ಶೋರೆಯ್, ಮನು ರಿಷಿ ಚಧಾ, ಕುಬ್ರಾ ಶೇಠ್ ಕಾಣಿಸಿಕೊಂಡಿದ್ದರು. 2002ರಲ್ಲಿ ಜೀನಾ ಸಿರ್ಫ್ ಮೆರೆ ಲಿಯಾ ಚಿತ್ರದ ಮೂಲಕ ನಟಿ ಬಾಲಿವುಡ್ ಪ್ರವೇಶಿಸಿದ್ದರು. ಇತ್ತೀಚಿಗೆ ಖ್ವಾಹಿಶ್ ಮತ್ತು 'ಕಿಸ್ ಕಿಸ್ ಕಿ ಕಿಸ್ಮತ್' ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. 2004ರಲ್ಲಿ ನಟ ಇಮ್ರಾನ್ ಹಶ್ಮಿ ಜೊತೆಗೆ ಮರ್ಡರ್ ಸಿನಿಮಾದಲ್ಲಿ ಸಿಕ್ಕಾಪಟ್ಟೆ ಬೋಲ್ಡ್ ಆಗಿ ನಟಿಸಿದ ಬಳಿಕ ಇವರು ಚಿತ್ರರಂಗದಲ್ಲಿ ಮುನ್ನಲೆಗೆ ಬಂದಿದ್ದರು. ಬಾಲಿವುಡ್ ಮಾತ್ರವಲ್ಲದೇ, ಹಾಲಿವುಡ್‌ನಲ್ಲೂ ಮಲ್ಲಿಕಾ ಶೆರಾವತ್ ಮಿಂಚಿದ್ದಾರೆ.

# ದಾಂಪತ್ಯ ಜೀವನಕ್ಕೆ ಕಾಲಿಟ್ಟ ಐಶ್ವರ್ಯಾ!



ನಟ ಅರ್ಜುನ್ ಸರ್ಜಾ ಪುತ್ರಿ ಐಶ್ವರ್ಯಾ ಅರ್ಜುನ್ ಮತ್ತು ನಟ ತಂಬಿ ರಾಮಯ್ಯ ಅವರ ಪುತ್ರ ಉಮಾಪತಿ ರಾಮಯ್ಯ ಜೂನ್ 10ರಂದು ಚೆನ್ನೈನ ಗೇರುಗಂಬಾಕ್ಕಂನಲ್ಲಿರುವ ಶ್ರೀ ಯೋಗಾ ಆಂಜನೇಯ ದೇವಸ್ಥಾನದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಸಂಬಂಧಿಕರು ಮತ್ತು ಚಿತ್ರರಂಗದ ಗಣ್ಯರ ಸಮ್ಮುಖದಲ್ಲಿ ವಿವಾಹ ನೆರವೇರಿತು. ವಿವಾಹ ಸಮಾರಂಭದಲ್ಲಿ ಐಶ್ವರ್ಯಾ ಅವರೊಂದಿಗೆ ಪಟ್ಟತ್ತು ಯಾನೈ ಚಿತ್ರದಲ್ಲಿ ಕೆಲಸ ಮಾಡಿದ ನಟ ವಿಶಾಲ್ ಸೇರಿದಂತೆ ನಟರಾದ ಕಾರ್ತಿ, ಧ್ರುವ ಸರ್ಜಾ, ಜಗಪತಿ ಬಾಬು, ಸಮುದ್ರಕನಿ, ವಿಜಯಕುಮಾರ್ ಮತ್ತು ಸೆಂಥಿಲ್ ಭಾಗವಹಿಸಿದ್ದರು. ಇದರೊಂದಿಗೆ ಕೆಎಸ್ ರವಿಕುಮಾರ್, ಜಿಕೆ ರೆಡ್ಡಿ, ಎಸ್‌ಆರ್ ಪ್ರಭು ಮತ್ತು ಕೆಇ ಜ್ಞಾನವೇಲ್ ರಾಜಾ ಕೂಡ ಭಾಗವಹಿಸಿದ್ದರು. ನಟಿ ಐಶ್ವರ್ಯಾ ಅವರು ತಮ್ಮ ವಿವಾಹದ ಫೋಟೊಗಳನ್ನು ಇನ್‌ಸ್ಟಾಗ್ರಾಂ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಕಳೆದ ವರ್ಷವಷ್ಟೇ ಇಬ್ಬರ ಡೇಟಿಂಗ್ ಸುದ್ದಿ ಹೊರಬಿದ್ದಿತ್ತು. ಬಳಿಕ ಕಳೆದ ವರ್ಷ ಅಕ್ಟೋಬರ್‌ನಲ್ಲಿ ಈ ಯುವ ಜೋಡಿ ಕುಟುಂಬಸ್ಥರ ಒಪ್ಪಿಗೆ ಪಡೆದು ಅದ್ದೂರಿಯಾಗಿ ನಿಶ್ಚಿತಾರ್ಥ ಮಾಡಿಕೊಂಡಿತ್ತು.

ದಂಪತಿಯ ಆರತಕ್ಷತೆ ಜೂನ್ 14 ರಂದು ಜನಪ್ರಿಯ ಹೋಟೆಲ್‌ನಲ್ಲಿ ನಡೆಯಲಿದೆ ಎಂದು ಹೇಳಲಾಗುತ್ತಿದ್ದು, ದಕ್ಷಿಣದ ಚಲನಚಿತ್ರೋದ್ಯಮದ ಸೆಲೆಬ್ರಿಟಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ.

# ರವಿತೇಜಗೆ ಶ್ರೀಲೀಲಾ ಹೀರೋಯಿನ್




ಕನ್ನಡದ ನಟಿ ಶ್ರೀಲೀಲಾ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಗ್ಯಾಪ್‌ನ ನಂತರ ಮತ್ತೆ ನಟಿಸಲು 'ಕಿಸ್' ನಟಿ ಸಜ್ಜಾಗಿದ್ದಾರೆ. ಇದೀಗ ರವಿತೇಜ ನಟನೆಯ ಹೊಸ ಸಿನಿಮಾಗೆ ನಾಯಕಿಯಾಗಿದ್ದಾರೆ. ಈಗ ಹೈದರಾಬಾದ್‌ನಲ್ಲಿ ಅದ್ದೂರಿಯಾಗಿ ಮುಹೂರ್ತ ಕಾರ್ಯಕ್ರಮ ಜರುಗಿದೆ.

'ಧಮಾಕ' ನಂತರ ಮತ್ತೆ ಸ್ಟಾರ್ ನಟ ರವಿತೇಜಗೆ ಶ್ರೀಲೀಲಾ ಜೋಡಿಯಾಗಿದ್ದಾರೆ. ಮತ್ತೊಂದು ಹೊಸ ಪ್ರೇಮಕಥೆಯಲ್ಲಿ ಜೊತೆಯಾಗಿ ನಟಿಸುತ್ತಿದ್ದಾರೆ. ಸ್ಕ್ರಿಪ್ಟ್ ಪೂಜೆ ಮಾಡುವ ಮೂಲಕ ಸಿನಿಮಾಗೆ ರವಿತೇಜ ಟೀಮ್ ಚಾಲನೆ ನೀಡಿದೆ. ಮುಹೂರ್ತ ಕಾರ್ಯಕ್ರಮದಲ್ಲಿ ರವಿತೇಜ ಜೊತೆ ಶ್ರೀಲೀಲಾ ಕೂಡ ಭಾಗಿಯಾಗಿದ್ದಾರೆ. ಜೂನ್ 11ರಿಂದಲೇ ರವಿತೇಜ 75ನೇ ಸಿನಿಮಾದ ಶೂಟಿಂಗ್ ಶುರುವಾಗಿದ್ದು, ಮುಂದಿನ ವರ್ಷ ಸಂಕ್ರಾಂತಿಗೆ ಸಿನಿಮಾ ರಿಲೀಸ್ ಆಗಲಿದೆ.

ಅಂದಹಾಗೆ, ತೆಲುಗಿನ ರವಿತೇಜ ಪ್ರಾಜೆಕ್ಟ್ ಜೊತೆಗೆ ಬಾಲಿವುಡ್‌ಗೂ ನಟಿ ಎಂಟ್ರಿ ಕೊಡ್ತಿದ್ದಾರೆ. ಸೈಫ್ ಅಲಿ ಖಾನ್ ಪುತ್ರನಿಗೆ ಶ್ರೀಲೀಲಾ ನಾಯಕಿಯಾಗಿದ್ದಾರೆ.

# ಸೋನಾಕ್ಷಿ ಮದುವೆ ಶತ್ರುಘ್ನ ಸಿನ್ಹಾ ಪ್ರತಿಕ್ರಿಯೆ



ಬಾಲಿವುಡ್‌ನಲ್ಲಿ ಮತ್ತೊಂದು ಜೋಡಿಯ ಮದುವೆ ಸಂಭ್ರಮ ಮನೆ ಮಾಡಿದೆ. ಝುಹೀರ್ ಇಖ್ಬಾಲ್ ಜೊತೆ ಸೋನಾಕ್ಷಿ ಸಿನ್ಹಾ ಇದೇ ಜೂನ್ 23ರಂದು ಮದುವೆಯಾಗಲಿದ್ದಾರೆ. ಇದೀಗ ಮಗಳ ಮದುವೆ ಬಗ್ಗೆ ಬಾಲಿವುಡ್ ನಟ ಶತ್ರುಘ್ನ ಸಿನ್ಹಾ ಪ್ರತಿಕ್ರಿಯೆ ನೀಡಿದ್ದಾರೆ. ಮದುವೆ ಬಗ್ಗೆ ನಮ್ಮ ಬಳಿ ಮಗಳು ಏನು ಹೇಳಿಲ್ಲ. ಆದರೆ ಇಂದಿನ ಕಾಲದ ಮಕ್ಕಳು ಮದುವೆಗೆ ಒಪ್ಪಿಗೆ ಕೇಳುವುದಿಲ್ಲ. ಬದಲಿಗೆ ತಮ್ಮ ನಿರ್ಧಾರವನ್ನು ಪೋಷಕರಿಗೆ ತಿಳಿಸುತ್ತಾರೆ ಎಂದು ಶತ್ರುಘ್ನ ಸಿನ್ಹಾ ಮಾತನಾಡಿದ್ದಾರೆ. ಮಗಳ ಮದುವೆ ಬಗ್ಗೆ ಮಾಧ್ಯಮಕ್ಕೆ ಪ್ರತಿಕ್ರಿಯಿಸಿ, ಚುನಾವಣೆ ಫಲಿತಾಂಶದ ನಂತರ ನಾನೀಗ ದೆಹಲಿಯಲ್ಲಿದ್ದೇನೆ. ಮಗಳ ಮದುವೆ ಬಗ್ಗೆ ನನಗೆ ಏನನ್ನೂ ಹೇಳಿಲ್ಲ. ಮಾಧ್ಯಮದಲ್ಲಿ ಏನು ವರದಿ ಆಗಿದೆಯೋ ನನಗೂ ಅಷ್ಟೇ ತಿಳಿದಿದೆ. ಅವಳು ನಮಗೆ ಆಮಂತ್ರಣ ನೀಡಿದರೆ ನಾನು ಮತ್ತು ನನ್ನ ಪತ್ನಿ ಇಬ್ಬರೂ ಹೋಗಿ ಹಾರೈಸಿ ಬರುತ್ತೇವೆ. ಅವಳ ಸಂತೋಷವನ್ನು ಎಂದಿಗೂ ನಾವು ಬಯಸುತ್ತೇವೆ ಎಂದು ಪ್ರತಿಕ್ರಿಯಿಸಿದ್ದಾರೆ. ಮಗಳು ಸರಿಯಾದ ನಿರ್ಧಾರ ತೆಗೆದುಕೊಳ್ಳುತ್ತಾರೆ ಎನ್ನುವ ವಿಶ್ವಾಸವಿದೆ ಎಂದು ಶತ್ರುಘ್ನ ಸಿನ್ಹಾ ಮಾತನಾಡಿದ್ದಾರೆ. ನಮ್ಮ ಮಗಳ ನಿರ್ಧಾರ ಯಾವತ್ತೂ ಸರಿಯಾಗಿರುತ್ತದೆ ಎನ್ನುವ ವಿಶ್ವಾಸವಿದೆ. ಅವಳು ಎಂದಿಗೂ ಕಾನೂನುಬಾಹಿರ ನಿರ್ಧಾರವನ್ನು ತೆಗೆದುಕೊಳ್ಳುವುದಿಲ್ಲ. ಮಗಳು ಸ್ವಂತ ನಿರ್ಧಾರಗಳನ್ನು ತೆಗೆದುಕೊಳ್ಳುವ ಹಕ್ಕನ್ನು ಹೊಂದಿದ್ದಾಳೆ ಎಂದಿದ್ದಾರೆ. ನನ್ನ ಮಗಳ ಮದುವೆಯಲ್ಲಿ ಡ್ಯಾನ್ಸ್ ಮಾಡಲು ಇಷ್ಟಪಡುತ್ತೇನೆ ಎಂದು ಅವರು ತಿಳಿಸಿದ್ದಾರೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**